ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಜೂನ್ 24 ಮಂಗಳವಾರ 2025

₹4

ಸಂಪುಟ: 46 | ಸಂಚಿಕೆ: 68 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23

ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com

ಜಾಹೀರಾತು: ad@mysurumithra.com, website: www.mysurumithra.com




ಮೈಸೂರು ಮಿತ್ರ

ನನಗೆ ಚರಂಡಿ, ರಸ್ತೆ ಮಾಡಿಸೋಕು ಆಗ್ತಿಲ್ಲ

ಮೊಳಕಾಲ್ಮೂರು ಶಾಸಕ ಗೋಪಾಲಕೃಷ್ಣ ಅಸಹಾಯಕತೆ

ಚಿತ್ರದುರ್ಗ: ನಾನು ಶಾಸಕನಾಗಿ ಒಂದು ಚರಂಡಿ, ರಸ್ತೆ ಹಾಗೂ ಶಾಲೆ ನಿರ್ಮಿಸಲಾಗುತ್ತಿಲ್ಲ ಎಂದು ಮೊಳಕಾಲ್ಮೂರು ಶಾಸಕ ಎನ್‌ವೈ ಗೋಪಾಲಕೃಷ್ಣ ಅಸಮಾಧಾನ ಹೊರಹಾಕಿದ್ದಾರೆ.



ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲೂಕಿನ ಕಣಕುಪ್ಪೆ ಗ್ರಾಮದಲ್ಲಿ ಖಾಸಗಿ ಕಂಪನಿ ಉದ್ಘಾಟನೆ ಸಮಾರಂಭದಲ್ಲಿ ಮಾತನಾಡಿದ ಅವರು, ನಾನು ಶಾಸಕನಾಗಿ ಒಂದು ಚರಂಡಿ, ರಸ್ತೆ ಶಾಲೆ ನಿರ್ಮಿಸಲಾಗುತ್ತಿಲ್ಲ ಎನ್ನುವ ಮೂಲಕ ಸರ್ಕಾರದಲ್ಲಿ ಏನೂ ಕೆಲಸ ಆಗುತ್ತಿಲ್ಲ ಎಂದು ಪರೋಕ್ಷವಾಗಿ ಅಸಹಾಯಕತೆ ಹೊರಹಾಕಿದರು.

ಇನ್ನು ಈ ಗಡಿಭಾಗದಲ್ಲಿ ಆರಂಭಿಸುತ್ತಿರುವ ಖಾಸಗಿ ಕಂಪನಿಯವರಿಗೇನು ಮೂರ್ಖತನವೊ ತಿಳಿಯದು. ನಾನು ಶಾಸಕನಾಗಿ ಒಂದು ಚರಂಡಿ, ರಸ್ತೆ ಸೇರಿದಂತೆ ಶಾಲೆ ಸಹ ನಿರ್ಮಾಣ ಮಾಡಲಾಗುತ್ತಿಲ್ಲ. ಇಂತಹ ಸಮಯದಲ್ಲಿ ಈ ಭಾಗದಲ್ಲಿ ಬಂದು ಖಾಸಗಿ ಕಂಪನಿಯವರೇನು ಮಾಡುತ್ತಾರೆಂದು ವ್ಯಂಗ್ಯವಾಡಿದರು. ಇನ್ನು ಈ ಖಾಸಗಿ ಕಂಪನಿಗೆ ನಾನು ಸಹ ಕುಟುಂಬ ಸದಸ್ಯ ಎಂದುಕೊಳ್ಳಿ. ಹೀಗೆ ಹೇಳಿದ ಮಾತ್ರಕ್ಕೆ ಶೇರ್ ಹೋಲ್ಡರ್ ಎಂದುಕೊಳ್ಳಬೇಡಿ. ನಾನು ಉಚಿತ ಸೇವೆ ಮಾಡುವವನು ಎಂದು ಶಾಸಕ ಮಾತನಾಡಿರುವ ವೀಡಿಯೋ ಎಲ್ಲೆಡೆ ವೈರಲ್ ಆಗಿದೆ.

ಮೈಸೂರಲ್ಲಿ ಮತ್ತೆರಡು ಅಗ್ನಿಶಾಮಕ ಠಾಣೆ

ಮೈಸೂರು, ಜೂ.23(ಜಿಎ)–ಮೈಸೂರಿನಲ್ಲಿ ಶೀಘ್ರದಲ್ಲಿಯೇ ಇನ್ನು ಎರಡು ನೂತನ ಅಗ್ನಿಶಾಮಕ ಠಾಣೆ ಸ್ಥಾಪನೆಯಾಗಲಿವೆ. ಈ ಸಂಬಂಧ ಅಗ್ನಿಶಾಮಕ ಅಧಿಕಾರಿಗಳು ಸೂಕ್ತ ಜಾಗ ಕಲ್ಪಿಸುವಂತೆ ಮುಡಾ ಮತ್ತು ಜಿಲ್ಲಾಡಳಿತಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸದ್ಯವೇ ಭೂಮಿ ಹಸ್ತಾಂತರದ ನಿರೀಕ್ಷೆಯಲ್ಲಿದ್ದಾರೆ.



ಸಾಂದರ್ಭಿಕ ಚಿತ್ರ

ರಾಜ್ಯದಲ್ಲಿ ಹಲವೆಡೆ ಹೊಸ ಅಗ್ನಿಶಾಮಕ ಠಾಣೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಕಳೆದ ಬಜೆಟ್‌ನಲ್ಲಿ ಘೋಷಿಸಿದ್ದು, ಇದಕ್ಕಾಗಿ ಅನುದಾನ ಮೀಸಲಿಡಲಾಗಿದೆ. ಈ ಹಿನ್ನೆಲೆಯಲ್ಲಿ ಮೈಸೂರಿಗೆ ಮಂಜೂರಾಗಿರುವ 2 ಅಗ್ನಿಶಾಮಕ ಠಾಣೆ ಸ್ಥಾಪನೆಗೆ ಚಾಮುಂಡಿ ಬೆಟ್ಟದ ತಪ್ಪಲು ಹಾಗೂ ತಿ.ನರಸೀಪುರ ರಸ್ತೆಯಲ್ಲಿ ಸೂಕ್ತ ಜಾಗವನ್ನು ಅಧಿಕಾರಿಗಳು ಗುರುತಿಸಿದ್ದಾರೆ.

ಮೈಸೂರಿನಲ್ಲಿ ಈಗಾಗಲೇ ಸರಸ್ವತಿಪುರಂ, ಬನ್ನಿಮಂಟಪ, ಹೆಬ್ಬಾಳು ಮೂರು ಅಗ್ನಿಶಾಮಕ ಠಾಣೆಗಳಿವೆ. ಜೊತೆಗೆ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿಯೂ ಒಂದೊಂದು ಅಗ್ನಿಶಾಮಕ ಠಾಣೆ ಇವೆ. ಮೈಸೂರಿನಲ್ಲಿ ಇನ್ನೂ ಎರಡು ಅಗ್ನಿಶಾಮಕ ಠಾಣೆ ನಿರ್ಮಾಣವಾದರೆ, ಮೈಸೂರು ನಗರಕ್ಕೆ ಐದು ಅಗ್ನಿಶಾಮಕ ಠಾಣೆಗಳಾಗುತ್ತವೆ. ದಶಕದ ಹಿಂದೆ ಹೆಬ್ಬಾಳ ಕೈಗಾರಿಕಾ ಪ್ರದೇಶದಲ್ಲಿ ಅಗ್ನಿಶಾಮಕ ಠಾಣೆ ಸ್ಥಾಪಿಸಲಾಗಿತ್ತು. ಅದನ್ನು ಹೊರತುಪಡಿಸಿ ಇದುವರೆಗೆ ಯಾವುದೇ ಅಗ್ನಿಶಾಮಕ ಠಾಣೆ ಸ್ಥಾಪನೆಗೊಂಡಿಲ್ಲ.

ಬೆಂಗಳೂರಿನ ನಂತರ ಮೈಸೂರು ವೇಗವಾಗಿ ಬೆಳೆಯುತ್ತಿದ್ದು, ಅದಕ್ಕೆ ತಕ್ಕಂತೆ ಇಲ್ಲಿನ ಎತ್ತರದ ವಾಣಿಜ್ಯ, ಕೈಗಾರಿಕಾ ಕಟ್ಟಡಗಳು, ಅಪಾರ್ಟ್‌ಮೆಂಟ್ ಸೇರಿದಂತೆ ನಾನಾ ಬಹುಮಹಡಿ ಕಟ್ಟಡಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿವೆ. ಈ ಹಿನ್ನೆಲೆಯಲ್ಲಿ ಈಗಿರುವ ಅಗ್ನಿಶಾಮಕ ಠಾಣೆಯಿಂದ ತಕ್ಷಣ ಸ್ಪಂದಿಸಲು ವಾಹನ ದಟ್ಟಣೆ ಹಾಗೂ ನಾನಾ ಕಾರಣಕ್ಕೆ ತಡವಾಗುತ್ತಿದೆ. ಆದರೂ ಅಗ್ನಿಶಾಮಕ ಸಿಬ್ಬಂದಿ ಕ್ಷಿಪ್ರ ಕಾರ್ಯಾಚರಣೆ ನಡೆಸುತ್ತಿದ್ದು, ಅನೇಕ ಅವಘಡಗಳನ್ನು ತಪ್ಪಿಸಿದ್ದಾರೆ.

ಈಗ ಎರಡು ಹೊಸ ಅಗ್ನಿಶಾಮಕ ಠಾಣೆ ಸ್ಥಾಪಿಸಲು ಚಾಮುಂಡಿಬೆಟ್ಟದ ತಪ್ಪಲು, ರಿಂಗ್ ರಸ್ತೆ, ತಿ.ನರಸೀಪುರ ರಸ್ತೆ, ಲಲಿತಾದ್ರಿಪುರ, ಬಂಡಿಪಾಳ್ಯ ಮುಂತಾದ ಸ್ಥಳಗಳಲ್ಲಿ ಸರ್ಕಾರಿ ಭೂಮಿಯ ಲಭ್ಯತೆಯನ್ನು ಪರಿಶೀಲಿಸಿರುವ ಅಗ್ನಿಶಾಮಕ ಅಧಿಕಾರಿಗಳು ಮೈಸೂರು ತಿ.ನರಸೀಪುರ ರಸ್ತೆಯಲ್ಲಿರುವ ಡಾ.ರಾಜಶೇಖರ್ ಆಸ್ಪತ್ರೆ ಬಳಿ ಒಂದು ಅಗ್ನಿಶಾಮಕ ಠಾಣೆ ಸ್ಥಾಪಿಸಲು ನಿರ್ಧರಿಸಿದ್ದಾರೆ. ಈ ಸಂಬಂಧ ತಹಸೀಲ್ದಾರ್ ಅವರೊಟ್ಟಿಗೆ ಚರ್ಚಿಸಿದ್ದಾರೆ. ಸದ್ಯದಲ್ಲಿಯೇ ಭೂಮಿಯನ್ನು ಅಗ್ನಿಶಾಮಕ ಇಲಾಖೆಗೆ ಹಸ್ತಾಂತರಿಸುವ ಸಾಧ್ಯತೆ ಇದೆ.

ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ಸ್ಥಳ ಗುರುತಿಸಿ, ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಗಮನಕ್ಕೆ ತಂದಿದ್ದು, ಪ್ರಾಧಿಕಾರದ ಅಧಿಕಾರಿಗಳು ಪರಿಶೀಲನೆ ನಡೆಸಲು ಮುಂದಾಗಿದ್ದಾರೆ. ಇತ್ತೀಚೆಗೆ ಚಾಮುಂಡಿ ಬೆಟ್ಟದಲ್ಲಿ ದೊಡ್ಡ ಅಗ್ನಿ ಅವಘಡ ಸಂಭವಿಸಿದ್ದು, ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸಲು ಪ್ರಯಾಸ ಪಡಬೇಕಾಯಿತು. ಬೆಂಕಿಯಿಂದಾಗಿ ಅಪಾರ ಪ್ರಮಾಣದ ಅರಣ್ಯ ಪ್ರದೇಶ ನಾಶವಾಯಿತು. ಈ ಹಿನ್ನೆಲೆಯಲ್ಲಿ ಬೆಟ್ಟದ ಬಳಿ ಅಗ್ನಿಶಾಮಕ ಠಾಣೆ ಸ್ಥಾಪನೆಗೆ ಸರ್ಕಾರಿ ಭೂಮಿಯ ಲಭ್ಯತೆಯ ಬಗ್ಗೆ ಇಲಾಖೆಯ ಅಧಿಕಾರಿಗಳು ಮುಡಾ ಹಾಗೂ ಜಿಲ್ಲಾಡಳಿತದ ಅಧಿಕಾರಿಗಳೊಂದಿಗೆ ಚರ್ಚಿಸುತ್ತಿದ್ದಾರೆ.

ಸೂಕ್ತ ಜಾಗಕ್ಕಾಗಿ ಮುಡಾ, ಜಿಲ್ಲಾಡಳಿತದ ಅಧಿಕಾರಿಗಳೊಂದಿಗೆ ಚರ್ಚೆ

“ ಚಾಮುಂಡಿಬೆಟ್ಟದ ಬಳಿ ಯಾವುದೇ ಸಿಎ ನಿವೇಶನವಿಲ್ಲ. ಬದಲಾಗಿ ನಾಚನಹಳ್ಳಿ ಪಾಳ್ಯದ ಬಳಿ ಸ್ಥಳ ಗುರುತಿಸಲಾಗಿದ್ದು, ಸದ್ಯದಲ್ಲಿಯೇ ಉಪ ಸಮಿತಿ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ. **–ಕೆ.ಆರ್.ರಕ್ಷಿತ್,** ಆಯುಕ್ತ, ಮೈಸೂರು ಅಭಿವೃದ್ಧಿ ಪ್ರಾಧಿಕಾರ

“ ಮೈಸೂರಿನ ಚಾಮುಂಡಿಬೆಟ್ಟ ಹಾಗೂ ನರಸೀಪುರದ ರಸ್ತೆಯಲ್ಲಿ ನೂತನ ಅಗ್ನಿಶಾಮಕ ಠಾಣೆ ಸ್ಥಾಪಿಸಲು ಈಗಾಗಲೇ ಸ್ಥಳ ಗುರುತಿಸಲಾಗಿದೆ. ಭೂಮಿ ಹಸ್ತಾಂತರವಾದ ತಕ್ಷಣ ಕಾಮಗಾರಿ ಆರಂಭವಾಗಲಿದೆ. **–ಚಂದನ್,** (ಪ್ರಭಾರ) ಮುಖ್ಯ ಅಗ್ನಿಶಾಮಕ ಅಧಿಕಾರಿ

ಸಂಗೀತ ದಿನಾಚರಣೆ ಅಂಗವಾಗಿ ಮಕ್ಕಳಿಗೆ ಸ್ಪರ್ಧೆ

ಯೋಗ ದೇಹಕ್ಕೆ, ಸಂಗೀತ ಮನಸ್ಸಿಗೆ



ಸಂಗೀತ ಸ್ಪರ್ಧೆಯಲ್ಲಿ ವಿಜೇತರಾದ ಅನುಷಾ, ಅನನ್ಯ, ಗಾಯಿತ್ರಿ, ವಿಶಾಲ್, ಶಿವಯ್ಯ ಹಾಗೂ ಮಕ್ಕಳಿಗೆ ಬಹುಮಾನ, ಪ್ರಮಾಣ ಪತ್ರ ವಿತರಿಸಲಾಯಿತು.

ಮೈಸೂರು, ಜೂ. 23– ಮೈಸೂರಿನಲ್ಲಿ ವಿಶ್ವ ಸಂಗೀತ ದಿನಾಚರಣೆ ಅಂಗವಾಗಿ ತ್ಯಾಗರಾಜ ರಸ್ತೆಯಲ್ಲಿರುವ ಅಕ್ಕನ ಬಳಗ ಶಾಲೆಯಲ್ಲಿ ಶ್ರೀ ದುರ್ಗಾ ಫೌಂಡೇಶನ್ ವತಿಯಿಂದ 'ಸಂಗೀತದಿಂದ ಆರೋಗ್ಯ' ವಿಚಾರ ಮಂಥನ ಹಾಗೂ ಮಕ್ಕಳಿಗೆ ಸಂಗೀತ ಸ್ಪರ್ಧೆ ಆಯೋಜಿಸಲಾಗಿತ್ತು.

ನೂರಕ್ಕೂ ಹೆಚ್ಚು ಮಕ್ಕಳು ಸಂಗೀತ ಸ್ಪರ್ಧೆಯಲ್ಲಿ ಭಾಗವಹಿಸಿದ್ದು, ಸಂಗೀತ ಸ್ಪರ್ಧೆಯಲ್ಲಿ ವಿಜೇತರಾದ ಅನುಷಾ, ಅನನ್ಯ, ಗಾಯಿತ್ರಿ, ವಿಶಾಲ್, ಶಿವಯ್ಯ ಮಕ್ಕಳಿಗೆ ಬಹುಮಾನ ಹಾಗೂ ಸ್ಪರ್ಧಿಸಿದ ಸ್ಪರ್ಧಾಳುಗಳಿಗೆ ನೆನಪಿನ ಕಾಣಿಕೆ ಹಾಗೂ ಪ್ರಮಾಣ ಪತ್ರ ವಿತರಿಸಲಾಯಿತು.

ಬಳಿಕ ಮಾತನಾಡಿದ ಸಂಗೀತ ವಿದುಷಿ ಅನಸೂಯ ಸುದರ್ಶನ್, ಯೋಗ ದೇಹದ ಆರೋಗ್ಯಕ್ಕೆ ಸಂಗೀತ ಮನಸಿನ ಆರೋಗ್ಯಕ್ಕೆ ಚೈತನ್ಯ ನೀಡುವಂತದ್ದು. ಹಾಗಾಗಿ ಯೋಗ ಮತ್ತು ಸಂಗೀತ ಅಭ್ಯಾಸ ಮನುಷ್ಯನ ವಿಕಾಸ ಬಯಸುವಂತವು. ಇವುಗಳಿಂದ ಜೀವನದ ಒತ್ತಡದಿಂದ ಹೊರಬರಲು ಸಾಧ್ಯವಾಗುತ್ತದೆ ಎಂದರು.

ಸಂಗೀತಕ್ಕಿರುವ ಇಂತಹ ಅಗಾಧ ವ್ಯಾಪ್ತಿ ಮತ್ತು ಪ್ರಭಾವಗಳ ನೆಲೆ ಹಿನ್ನೆಲೆಯಲ್ಲಿ ಸರ್ಕಾರ ವಿಶ್ವ ಸಂಗೀತ ದಿನ ಆಚರಿಸಬೇಕು. ಆ ಮೂಲಕ ಯುವಕರಲ್ಲಿ ಸಾಂಸ್ಕೃತಿಕ ಅಭಿರುಚಿಗೆ ಒತ್ತಾಸೆಯಾಗಿ ನಿಲ್ಲಬೇಕು ಎಂದು ಅರ್ಥೈಸಿದರು.

ಸಂಗೀತ ವಿದುಷಿ ಶ್ರೀವಾಣಿ, ವಿದುಷಿ ರಾಧಾ ನಾಗರಾಜ್, ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷೆ ರೇಖಾ ಶ್ರೀನಿವಾಸ್, ಶಾಲೆ ಮುಖ್ಯ ಶಿಕ್ಷಕಿ ಸುಗುಣಾವತಿ, ಸಮಾಜ ಸೇವಕರಾದ ಸರಸ್ವತಿ ಹಲಸಗಿ, ಸುಶೀಲ, ಮಹಿಳಾ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಸುಶೀಲರಾವ್, ಸಮಾಜ ಸೇವಕಿ ಕೋಮಲ, ಸಂಗೀತ ಶಿಕ್ಷಕಿ ಶ್ರಾವ್ಯ, ರೂಪದರ್ಶಿ ಶೋಭಾ, ಶಾರದಾ, ಶಾಲೆಯ ಶಿಕ್ಷಕ ವೃಂದ ಹಾಜರಿದ್ದರು.

ಚಾಮುಂಡಿಬೆಟ್ಟದಲ್ಲಿ ಆಷಾಢ ಪೂಜೆ: ಭಕ್ತಿಭಾವದ ನಡುವೆ ಅಶುಚಿತ್ವ ಬೇಡ

● ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ಕಿವಿಮಾತು ● ಧರ್ಮಾಚರಣೆ ಜತೆಗೆ ಪರಿಸರ ರಕ್ಷಣೆಯೂ ಆಗಲಿ

ಮೈಸೂರು,ಜೂ.23–ಆಷಾಢ ಶುಕ್ರವಾರಗಳಲ್ಲಿ ನಡೆಯುವ ತಾಯಿ ಚಾಮುಂಡೇಶ್ವರಿಯ ಆರಾಧನೆ ಮತ್ತು ಪ್ರಸಾದ ವಿತರಣೆಯನ್ನು ಸ್ವಚ್ಛತೆಯೊಂದಿಗೆ ನಡೆಸುವ ಮೂಲಕ ಸಾರ್ವಜನಿಕರು ನಗರದ ಸ್ವಚ್ಛತೆಗೆ ಸಹಕರಿಸಬೇಕು.

ಇತ್ತೀಚಿನ ವರ್ಷಗಳಲ್ಲಿ ಚಾಮುಂಡಿ ಬೆಟ್ಟ ಮತ್ತು ಮೈಸೂರು ನಗರದಲ್ಲಿ ಆಷಾಢ ಶುಕ್ರವಾರ ಮತ್ತು ಭಾನುವಾರಗಳಲ್ಲಿ ಪ್ರಸಾದ ವಿತರಣೆ ಕಾರ್ಯಕ್ರಮಗಳು ಹೆಚ್ಚುತ್ತಿವೆ. ಸಾಕಷ್ಟು ಸಂಖ್ಯೆಯಲ್ಲಿ ಭಕ್ತರು, ಸಂಘ–ಸಂಸ್ಥೆಗಳು ಪ್ರಸಾದ ವಿತರಣೆ ಮಾಡುತ್ತಿವೆ. ನಂತರ ಪ್ಲಾಸ್ಟಿಕ್ ಪ್ಲೇಟ್‌ಗಳು, ನೀರಿನ ಲೋಟಗಳನ್ನು ಬೆಟ್ಟದ ತಪ್ಪಲು ಹಾಗೂ ಎಲ್ಲೆಂದರಲ್ಲಿ ಬಿಸಾಡಿ ಹೋಗುವುದು ಸಾಮಾನ್ಯವಾಗಿದೆ. ಇದು ನಗರದ ಸ್ವಚ್ಛತೆಗೆ ಸವಾಲಾಗಿದೆ. ಅಲ್ಲದೆ, ಪೌರಕಾರ್ಮಿಕರ ಮೇಲೂ ಅನಗತ್ಯ ಹೊರೆ ಹಾಕಿದಂತಾಗುತ್ತಿದೆ. ಆದ್ದರಿಂದ ಈ ಬಗ್ಗೆ ಆಯೋಜಕರು ಸೂಕ್ತ ಗಮನಹರಿಸಿ ಪ್ಲೇಟು, ಲೋಟಗಳ ಸಮರ್ಪಕ ವಿಲೇವಾರಿಗೆ ಗಮನಹರಿಸಿ ಧಾರ್ಮಿಕ ಆಚರಣೆಯ ಜತೆಗೆ ಪರಿಸರ ರಕ್ಷಣೆ ಮಾಡುವ ಹೊಣೆಗಾರಿಕೆಯನ್ನು ನಿರ್ವಹಿಸಬೇಕಿದೆ. ಕೊರೊನಾ ಮತ್ತು ಡೆಂಗ್ಯೂ ಪ್ರಕರಣಗಳು ಸಾಕಷ್ಟು ಸಂಖ್ಯೆಯಲ್ಲಿ ಹೆಚ್ಚುತ್ತಿರುವುದರಿಂದ ಸ್ವಚ್ಛತೆಗೆ ಆದ್ಯತೆ ಅಗತ್ಯ. ಇದನ್ನು ಮನಗಂಡು ಆರೋಗ್ಯ ಇಲಾಖೆ ಕೂಡ ನಗರದ ಶುಚಿತ್ವಕ್ಕೆ, ಆಹಾರದ ಶುಚಿಗೆ ಗಮನಹರಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕಿದೆ.

ಪ್ಲಾಸ್ಟಿಕ್ ಬಿಟ್ಟಾಕಿ, ಪರಿಸರ ಸ್ನೇಹಿ ವಸ್ತು ಬಳಸಿ

“ ಪ್ರಸಾದ ವಿತರಣೆಗೆ ಬಳಸುವ ಪ್ಲಾಸ್ಟಿಕ್ ಪ್ಲೇಟ್ ಮತ್ತು ನೀರಿನ ಲೋಟಗಳಿಗೆ ಬದಲಾಗಿ ಅಡಕೆ ತಟ್ಟೆ ಮತ್ತು ಪೇಪರ್ ಲೋಟಗಳನ್ನು ಬಳಸುವ ಮೂಲಕ ಪರಿಸರ ರಕ್ಷಣೆಗೆ ಗಮನಕೊಡಬೇಕಿದೆ. ಪ್ಲಾಸ್ಟಿಕ್ ಪ್ಲೇಟ್ ಮತ್ತು ಲೋಟಗಳು ಮಣ್ಣಿನಲ್ಲಿ ಸುಲಭವಾಗಿ ಕರಗದೆ ಮಣ್ಣು ಕಲುಷಿತವಾಗುವುದಕ್ಕೆ ಕಾರಣವಾಗುತ್ತವೆ. ಅದರ ಬದಲು ಮಣ್ಣಿನಲ್ಲಿ ಸುಲಭವಾಗಿ ಕರಗುವ ಅಡಕೆ ತಟ್ಟೆ ಮತ್ತು ಪೇಪರ್ ಲೋಟಗಳ ಬಳಕೆಗೆ ಮುಂದಾಗುವುದರಿಂದ ನಮ್ಮ ಪರಿಸರವನ್ನು ಕಾಪಾಡಿದಂತಾಗುತ್ತದೆ. ಅಲ್ಲದೆ, ಪ್ರಸಾದ ತಯಾರಿಕೆಗೆ ಬಳಸುವ ತರಕಾರಿ, ಸೊಪ್ಪುಗಳ ತ್ಯಾಜ್ಯದ ವಿಲೇವಾರಿ ಜತೆಗೆ ಮಾಂಸದೂಟಕ್ಕೆ ಬಳಸುವ ವಸ್ತುಗಳ ಸಮರ್ಪಕ ವಿಲೇವಾರಿಗೆ ಆದ್ಯತೆ ನೀಡಬೇಕಿದೆ. **–ಕೆ.ವಿ.ಮಲ್ಲೇಶ್, ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯ**



ಪರಿಸರ ರಕ್ಷಿತೋ ರಕ್ಷಿತಃ

ಧರ್ಮೋ ರಕ್ಷಿತೋ ರಕ್ಷತಃ ಎಂಬುದು ಎಲ್ಲರಿಗೂ ತಿಳಿದಿರುವ ವಿಚಾರ. ಧರ್ಮವನ್ನು ರಕ್ಷಿಸಿದರೆ ಧರ್ಮ ನಮ್ಮನ್ನು ರಕ್ಷಿಸುತ್ತದೆ ಎಂಬುದು ಅದರ ಅರ್ಥ. ಅದರಂತೆ ಪರಿಸರ ರಕ್ಷಿತೋ ರಕ್ಷಿತಃ ಎಂಬುದನ್ನು ಅರಿಯಬೇಕಿದೆ. ಪರಿಸರವನ್ನು ರಕ್ಷಿಸಿದರೆ ಪರಿಸರ ನಮ್ಮನ್ನು ರಕ್ಷಿಸುತ್ತದೆ ಎಂಬುದು ಸೂರ್ಯ–ಚಂದ್ರರಷ್ಟೇ ಸತ್ಯವಾದ ಮಾತು. ಧರ್ಮದ ಆಚರಣೆಯಿಂದ ಪರಿಸರಕ್ಕೆ ಧಕ್ಕೆಯಾಗುವುದು ಬೇಡ. ಧಾರ್ಮಿಕ ಆಚರಣೆಯ ಜತೆಗೆ ಪರಿಸರ ಸಂರಕ್ಷಣೆಯೂ ನಮ್ಮ ಕರ್ತವ್ಯವಾಗಲಿ.

ಇದಕ್ಕೆ ಜಿಲ್ಲಾಡಳಿತ, ನಗರಪಾಲಿಕೆ ಹೆಚ್ಚು ಗಮನಹರಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಜತೆಗೆ ಸ್ವಚ್ಛ ಮೈಸೂರಿಗೆ ಸಮರೋಪಾದಿಯಲ್ಲಿ ಕೆಲಸ ಮಾಡಬೇಕು. ಸಾರ್ವಜನಿಕರೂ ಈ ಬಗ್ಗೆ ಗಮನಹರಿಸಿದಾಗ ಮಾತ್ರ ಮೈಸೂರಿನ ಹಿರಿಮೆ, ಗರಿಮೆ ಹೆಚ್ಚುತ್ತದೆ. ಸ್ವಚ್ಛ ಮೈಸೂರು ನಮ್ಮದಾಗುತ್ತದೆ ಎಂದು ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ತಿಳಿಸಿದ್ದಾರೆ.

ಚಾಮುಂಡಿಬೆಟ್ಟದಲ್ಲಿ ಆಷಾಢ ಶುಕ್ರವಾರ: ಪ್ಲಾಸ್ಟಿಕ್ ಬಳಕೆ ನಿಷೇಧ

ಮೈಸೂರು: ಶ್ರೀ ಚಾಮುಂಡೇಶ್ವರಿ ದೇವಸ್ಥಾನದಲ್ಲಿ 2025ನೇ ಸಾಲಿನಲ್ಲಿ ಜರುಗುವ ನಾಲ್ಕು ಆಷಾಢ ಶುಕ್ರವಾರಗಳು ಮತ್ತು ಅಮ್ಮನವರ ಜನ್ಮೋತ್ಸವದ ಪ್ರಯುಕ್ತ ಜೂನ್ 27 ಮೊದಲನೇ ಆಷಾಢ ಶುಕ್ರವಾರ ಜುಲೈ 4 ಎರಡನೇ ಆಷಾಢ ಶುಕ್ರವಾರ ಜುಲೈ 11 ಮೂರನೇ ಆಷಾಢ ಶುಕ್ರವಾರ, ಜುಲೈ 17 ಅಮ್ಮನವರ ಜನ್ಮೋತ್ಸವ, ಜುಲೈ 18 ನಾಲ್ಕನೇ ಆಷಾಢ ಶುಕ್ರವಾರಗಳಂದು ದೇವಸ್ಥಾನಕ್ಕೆ ಲಕ್ಷಾಂತರ ಭಕ್ತಾದಿಗಳು ಆಗಮಿಸುವುದರಿಂದ ಭಕ್ತಾದಿಗಳಿಗೆ ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗಿದೆ ಎಂದು ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ



ಮೈಸೂರಿನ ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ಪ್ರೌಢಶಾಲೆ ಹಿರಿಯ ವಿದ್ಯಾರ್ಥಿಗಳ ವೇದಿಕೆಯಿಂದ ವಿದ್ಯಾರ್ಥಿಗಳಿಗೆ ಉಚಿತವಾಗಿ ನೋಟ್‌ಬುಕ್, ಸಮವಸ್ತ್ರ ವಿತರಿಸಲಾಯಿತು. ಈ ವೇಳೆ ಶಾಲೆಯ ಹಿರಿಯ ವಿದ್ಯಾರ್ಥಿ ಅಮೃತ್ ರಾಜ್ ಅರಸು, ಮುನಿಗೋಪಾಲ್‌ರಾಜ್, ಬಸವರಾಜು, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಸುವರ್ಣ ಬೆಳಕು ಫೌಂಡೇಷನ್ ಅಧ್ಯಕ್ಷ ಮಹೇಶ್ ನಾಯಕ್, ಶರತ್‌ಕುಮಾರ್, ಸ್ನೇಹ ಬಳಗದ ಗೌರವ ಅಧ್ಯಕ್ಷ ರವಿ ಮತ್ತಿತರರಿದ್ದರು.

ರಾಷ್ಟ್ರ ಮಟ್ಟದ ಯೋಗ ಸ್ಪರ್ಧೆಗೆ ಸಂತೋಷ್ ಆಯ್ಕೆ

ಮೈಸೂರು, ಜೂ. 23– ಕರ್ನಾಟಕ ಸ್ಟೇಟ್ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಷನ್ ವತಿಯಿಂದ ಶಿವಮೊಗ್ಗ ಜಿಲ್ಲೆಯ ಸಾಗರದಲ್ಲಿ ನಡೆದ ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ 30–35 ವಯೋಮಿತಿಯ ಪುರುಷರ ವಿಭಾಗದ ಸ್ಪರ್ಧೆಯಲ್ಲಿ ಸಂತೋಷ್ ಚಿನ್ನದ ಪದಕ ಮುಡಿಗೇರಿಸಿಕೊಂಡಿದ್ದಾರೆ.




ಈ ಮೂಲಕ ಯೋಗ ಫೆಡರೇಷನ್ ಆಫ್ ಇಂಡಿಯಾ ನಡೆಸುವ ರಾಷ್ಟ್ರ ಮಟ್ಟದ ಯೋಗ ಸ್ಪರ್ಧೆಗೆ ಆಯ್ಕೆಯಾಗಿ ಕರ್ನಾಟಕವನ್ನು ಪ್ರತಿನಿಧಿಸಲಿದ್ದಾರೆ. ಇವರು ಮೈಸೂರಿನ ಜಿಎಸ್‌ಎಸ್ ವಿವೇಕಾನಂದ ಯೋಗ ಶಿಕ್ಷಣ ಸಂಸ್ಥೆ ವಿದ್ಯಾರ್ಥಿ. ಮೂಲತಃ ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲೂಕು ಕುಂತೂರು ನಿವಾಸಿ.

ಮಹಿಳೆಯರಿಗೆ ಉಚಿತ ನರ್ಸರಿ ಟೀಚರ್ ಟ್ರೈನಿಂಗ್

ಮೈಸೂರು, ಜೂ.23–18ರಿಂದ 45 ವಯೋಮಾನದ ಪರಿಶಿಷ್ಟ ಜಾತಿ, ಪಂಗಡ ಮತ್ತು ಯಾವುದೇ ಜಾತಿಯ ವಿಧವೆಯರು, ಸೈನಿಕರ ಪತ್ನಿಯರು, ಅಲ್ಪ ಅಂಗವಿಕಲ ಹೊಂದಿರುವ ಮಹಿಳಾ ಅಭ್ಯರ್ಥಿಗಳಿಗೆ 6 ತಿಂಗಳ ಅವಧಿಯ ನರ್ಸರಿ ಟೀಚರ್ ಟ್ರೈನಿಂಗ್ ಉಚಿತವಾಗಿ ಮೈಸೂರಿನ ಸಿದ್ದಾರ್ಥನಗರದಲ್ಲಿರುವ ಸಿದ್ದಾರ್ಥ ಗುರುಕುಲದಲ್ಲಿ ನೀಡಲಾಗುವುದು. ಆಸಕ್ತರು ಸಂಸ್ಥೆಯ ಟ್ರಸ್ಟಿ, ಶ್ರೀಮತಿ ಭಾರತಿಯವರನ್ನು ದೂ.ಸಂ.: 9036822577 ಸಂಪರ್ಕಿಸಿ, ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ.

ಕುಂಬ್ರಳ್ಳಿ ಸುಬ್ಬಣ್ಣಗೆ ಅಭಿನಂದನೆ...



ಮೈಸೂರು ಬಿಜೆಪಿ ನೂತನ ಜಿಲ್ಲಾಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ ಅವರನ್ನು ಮೈಸೂರು ತಾಲೂಕು ನಾಯಕರ ಸಂಘದ ವತಿಯಿಂದ ಅಭಿನಂದಿಸಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ಉದ್ಬೂರು ಎನ್.ಮಹದೇವಸ್ವಾಮಿ, ಪ್ರಧಾನ ಕಾರ್ಯದರ್ಶಿ ಕಡಕೊಳ ಕುಮಾರಸ್ವಾಮಿ, ಉಪಾಧ್ಯಕ್ಷರಾದ ರಮ್ಮನಹಳ್ಳಿ ವೆಂಕಟಯ್ಯ, ಖಜಾಂಚಿ ಮರಿಸ್ವಾಮಿನಾಯಕ್, ಮುಖಂಡರಾದ ಟೆನ್ನಿಸ್ ಗೋಪಿ, ಕಳಲೆ ಡಿ.ಪ್ರಕಾಶ ನಾಯಕ್, ಹಾಡ್ಯ ಶ್ರೀಕಂಠನಾಯ್ಕ, ಸಂಘಟನಾ ಕಾರ್ಯದರ್ಶಿ ಇಲವಾಲ ಕೃಷ್ಣಪ್ಪ, ನಿರ್ದೇಶಕರಾದ ಕೇಶವಮೂರ್ತಿ, ಚಿಕ್ಕಣ್ಣ (ಫೋಟೋ), ಅಂಕಪ್ಪ ಸುಂದರ್, ಮರಂಕಯ್ಯ, ಸಿದ್ದರಾಜು (ಕುಯಪ್ಪ), ಡಿಪೋ ಶಂಕರ್ ಉಪಸ್ಥಿತರಿದ್ದರು.

ಸಸಿ ನೆಡುವ ಕಾರ್ಯಕ್ರಮ



ಮೈಸೂರು ವಿಜಯನಗರ 4ನೇ ಹಂತ ಸ್ಪೋರ್ಟ್ಸ್‌ಕ್ಲಬ್ ವತಿಯಿಂದ ಸಸಿ ನೆಡಲಾಯಿತು. ಈ ವೇಳೆ ಕ್ಲಬ್ ಅಧ್ಯಕ್ಷ ಮಹದೇವ, ಉಪಾಧ್ಯಕ್ಷ ಬಿ.ರಮೇಶ್, ಕಾರ್ಯದರ್ಶಿ ಬಿ.ಆರ್.ರಮೇಶ್, ಸಹ ಕಾರ್ಯದರ್ಶಿ ನವೀನ್, ಖಜಾಂಚಿ ಎಸ್.ಎಂ.ತುಳಸಿದಾಸ್, ನಿರ್ದೇಶಕರಾದ ಮಂಚೇಗೌಡ, ಬಿ.ಕುಮಾರ್, ಕೀರ್ತಿ, ಪ್ರಕಾಶ್ ಭೋಜೇಗೌಡ, ಸದಸ್ಯರಾದ ನಾಗೇಶ್, ಕ್ಲಬ್ ನೌಕರರಾದ ಶಂಕರ್, ಭೂಸಿಯ ಭಾಗವಹಿಸಿದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಜೂ.23–ವಿ.ವಿ.ಮೊಹಲ್ಲಾ ವಿಭಾಗ ವ್ಯಾಪ್ತಿಯಲ್ಲಿ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ಜೂ.24ರಂದು ಬೆಳಗ್ಗೆ 10ರಿಂದ ಸಂಜೆ 6 ಗಂಟೆವರೆಗೆ ಶ್ರೀರಾಂಪುರ 2ನೇ ಹಂತ, ರಮಾಭಾಯಿನಗರ, ಮಹದೇವಪುರ, ಜಯನಗರ 1ರಿಂದ 20ನೇ ಕ್ರಾಸ್, ಪರಸಯ್ಯನಹುಂಡಿ, ಶಿವಪುರ, ಕುವೆಂಪುನಗರ ಕೆ ಬ್ಲಾಕ್, ಅಪೋಲೊ ಆಸ್ಪತ್ರೆ ಸುತ್ತಮುತ್ತ, ಚಿಕ್ಕಹರದನಹಳ್ಳಿ, ಗೊರೂರು ಗ್ರಾಮ, ಕಳಲವಾಡಿ, ಕೋಟೆಹುಂಡಿ, ಯಡಹಳ್ಳಿ, ರಾಯನಕೆರೆ, ಸರಸ್ವತಿಪುರಂ 1ನೇ ಮುಖ್ಯರಸ್ತೆಯಿಂದ 6ನೇ ಮುಖ್ಯರಸ್ತೆ, ಭಾಗಶಃ ಕೆ.ಜಿ.ಕೊಪ್ಪಲು ಹಾಗೂ ಸುತ್ತಮುತ್ತವಿದ್ಯುತ್ ವ್ಯತ್ಯಯವಾಗಲಿದೆ.

ನಿಧನ



ಉಮಾ ಶಿವರಾಜ್

ಮೈಸೂರು,ಜೂ.23–ಮೈಸೂರಿನ ವಿಜಯನಗರ 4ನೇ ಹಂತದ ವಿನಾಯಕ ಬಡಾವಣೆ ನಿವಾಸಿ ಉಮಾ ಶಿವರಾಜ್ (65) ಸೋಮವಾರ ನಿಧನರಾದರು. ಮೃತರು ಪುತ್ರಿ, ಅಳಿಯ, ಪುತ್ರ, ಸೊಸೆ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ವಿಜಯನಗರ 4ನೇ ಹಂತದಲ್ಲಿರುವ ಮುಕ್ತಿಧಾಮದಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಿ.ಪದ್ಮಾ



ಮೈಸೂರಿನ ಸರಸ್ವತಿಪುರಂ ಬಡಾವಣೆಯ ನಿವಾಸಿ ನಿವೃತ್ತ ಡಿವೈಎಸ್ಪಿ ದಿವಂಗತ ಎಂ.ನಂಜೇಗೌಡರ ಪತ್ನಿ ಸಿ.ಪದ್ಮಾ (71) ಭಾನುವಾರ ನಿಧನರಾದರು. ಮೃತರು ಪುತ್ರಿ ಸವಿತಾ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ಸೋಮವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

24.06.2025 ಮಂಗಳವಾರ, ಮಳೆ ನಕ್ಷತ್ರ: ಆರ್ದ್ರಾ, 22.06.2025 ರಿಂದ 05.07.2025 ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಕೃಷ್ಣ ಪಕ್ಷ, ತಿಥಿ: ಚತುರ್ದಶಿ, ನಕ್ಷತ್ರ: ರೋಹಿಣಿ, ರಾಹುಕಾಲ: ಮಧ್ಯಾಹ್ನ 3 ರಿಂದ 4.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9ರಿಂದ ಬೊಜ್ಜು ನಿವಾರಣ ಚಿಕಿತ್ಸಾ ಶಿಬಿರ, ಗರ್ಭಾಶಯ ಮುಖದಲ್ಲಿ ಹುಣ್ಣು (ಸರ್ವೈಕಲ್ ಎರೋಷನ್) ಶಿಬಿರ, ಕಾರ್ನಿಯಲ್ ಒಪೇಸಿಟಿ (ಕಾರ್ನಿಯಾದ ಅಪಾರದರ್ಶಕತೆ/ಕಣ್ಣಿನ ಹೂ)ಗೆ ಚಿಕಿತ್ಸಾ ಶಿಬಿರ, ಕುತ್ತಿಗೆ ಹಾಗೂ ಬೆನ್ನು ನೋವಿಗೆ ಆಕ್ಯೂಪಂಕ್ಚರ್ ಮತ್ತು ಯೋಗ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಉತ್ತಮ ನಿದ್ರೆ ಅಭ್ಯಾಸ ಮತ್ತು ನಿದ್ರೆ ಸಮಸ್ಯೆ ನಿವಾರಣೆಯ ಶಿಬಿರ, ಮುಟ್ಟಿನ ಸಮಯದಲ್ಲಿ ಅತಿಯಾದ ರಕ್ತಸ್ರಾವ, ಮುಖದಲ್ಲಿ ಮೊಡವೆಗಳಿಗೆ ಚಿಕಿತ್ಸೆ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10ರಿಂದ.

■ **ಜೆಎಸ್‌ಎಸ್ ಮಹಾವಿದ್ಯಾಪೀಠ, ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್:** ಗುಜರಾತ್ ಕರಕುಶಲ ಉತ್ಸವ–2025, ಗುಜರಾತ್ ಕರಕುಶಲ ವಸ್ತುಗಳ ಮಾರಾಟ ಮತ್ತು ಪ್ರದರ್ಶನ, ಸ್ಥಳ: ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್, ವರ್ತುಲ ರಸ್ತೆ, ಹೆಬ್ಬಾಳು ಕೈಗಾರಿಕಾ ಪ್ರದೇಶ, ಬೆಳಗ್ಗೆ 10ರಿಂದ.

■ **ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ, ಮೈಸೂರು ಜಿಲ್ಲಾ ಪತ್ರಕರ್ತರ ಸಂಘ** : ಶಾಲಾ ಕಾಲೇಜುಗಳಿಗೆ ಉಚಿತ ಪುಸ್ತಕ ವಿತರಣೆ ಹಾಗೂ ಗ್ರಂಥಾಲಯ ಜಾಗೃತ ಸಮಿತಿ ಸದಸ್ಯರಿಗೆ ಅರ್ಹತಾ ಪತ್ರ ವಿತರಣಾ ಸಮಾರಂಭ, ಉದ್ಘಾಟನೆ : ಹಿರಿಯ ಸಾಹಿತಿ ಡಾ. ಸಿ.ಪಿ. ಕೃಷ್ಣಕುಮಾರ್, ಪುಸ್ತಕ ವಿತರಣೆ : ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್, ಅರ್ಹತಾ ಪತ್ರ ವಿತರಣೆ : ಪ್ರಾಧಿಕಾರದ ಆಡಳಿತಾಧಿಕಾರಿ ಎನ್. ಕರಿಯಪ್ಪ, ಉಪಸ್ಥಿತರು : ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ್, ಅಧ್ಯಕ್ಷತೆ : ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ, ಸ್ಥಳ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಆವರಣ, ಬೆಳಗ್ಗೆ 10.30ಕ್ಕೆ.

■ **ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್:** ಆಕ್ಯೂಪ್ರೆಷರ್ ಹಾಗೂ ಸು–ಜೋಕ್ ಮತ್ತು ಆಕ್ಯೂ ಡಿಜಿಟಲ್ ಫಿಶೀಯೋ ಥೆರಪಿ ಚಿಕಿತ್ಸಾ ಶಿಬಿರ, ಸ್ಥಳ: ಇನ್ನರ್ ವ್ಹೀಲ್ ರೋಟರಿ ಭವನ, ವಿಜಯನಗರ, ರೈಲ್ವೇ ಬಡಾವಣೆ, ಬೆಳಗ್ಗೆ 10.30 ರಿಂದ.

■ **ಮೈಸೂರು ವಿಶ್ವವಿದ್ಯಾನಿಲಯ, ದಲಿತ ವಿದ್ಯಾರ್ಥಿ ಒಕ್ಕೂಟ :** ಸ್ವಾವಲಂಬನೆಯತ್ತ ಯುವ ಸಮುದಾಯ ಕುರಿತು ಕಾರ್ಯಾಗಾರ, ಉದ್ಘಾಟನೆ : ಹುಣಸೂರು ಉಪವಿಭಾಗದ ಉಪವಿಭಾಗಾಧಿಕಾರಿ ಹೆಚ್.ಬಿ. ವಿಜಯ್‌ಕುಮಾರ್, ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ ನಿರ್ದೇಶಕ ಪ್ರೊ. ಸಿ.ಗುರುಸಿದ್ದಯ್ಯ, ಪ್ರಾಧ್ಯಾಪಕ ಡಾ.ಕೆ.ಎನ್.ಅಮೃತೇಶ್, ಸ್ಥಳ: ಮಾನವಿಕ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್.ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ರೋಹಿಣಿ ಸುಧಾಂ ಹಾಗೂ ಜಿ. ಪುಷ್ಪಲತಾ, ವ್ಯಾಖ್ಯಾನ–ಡಾ.ಕಬ್ಬಿನಾಲೆ ವಸಂತ ಭಾರಧ್ವಾಜ್, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಎಂ.ಆರ್.ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್. ಎಸ್., 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ–ಮಲ್ಲಾಡಿ ಸಹೋದರರು–ಹಾಡುಗಾರಿಕೆ, 10.30 ಹಿಂದಿ ಚಿತ್ರಗೀತೆಗಳು, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.05 ವನಿತಾ ವಿಹಾರ, 12.35 ದೇವರನಾಮ, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು–ವೀಣಾ ಶ್ರೀನಿವಾಸ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಎನ್. ಚಂದ್ರಶೇಖರ್ ಮತ್ತು ಕುಮಾರಿ ಭಾರತಿ–ದ್ವಂದ್ವ ವೈಯೋಲಿನ್ ವಾದನ, 4.00 ಕಥಾಕಾಲಕ್ಷೇಪ –ಭಕ್ತ ಕುಂಬಾರ, ಪ್ರಸ್ತುತಿ–ಗುರುರಾಜಲು ನಾಯ್ಡು, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ –ಕಿಸಾನ್ ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಮತ್ಸ ತರಂಗ–ಮೀನು ಸಾಕಾಣಿಕೆ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ–ಖಾಸಗಿ ಕೊಳದಲ್ಲಿ ಮೀನುಮರಿ ಪಾಲನೆ ಈ ಕುರಿತು ಮೈಸೂರಿನ ಮೀನುಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿ.ಎನ್. ಭವಾನಿ ಅವರೊಂದಿಗೆ ಸಂದರ್ಶನ, ಸಂದರ್ಶಕರು –ಎನ್.ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ: ಬಿ.ದಿಗ್ವಿಜಯ್, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ–ಕೆ. ವಿ. ನಾರಾಯಣಸ್ವಾಮಿ– ಹಾಡುಗಾರಿಕೆ, 10.00 ಚೈತ್ರವನ–ಲಕ್ಷೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ–ಡಾ.ಎ.ಎಸ್.ಶಂಕರನಾರಾಯಣ, 10.30 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

■ **ಮೈಸೂರು ವಿಶ್ವವಿದ್ಯಾನಿಲಯ, ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರ :** ಬೋಧಕ ವರ್ಗ ಸ್ಥಾಪನಾ ಕಾರ್ಯಕ್ರಮ, ಉದ್ಘಾಟನೆ : ಮೈಸೂರು ವಿವಿ ಕುಲಸಚಿವೆ ಶ್ರೀಮತಿ ಎಂ.ಕೆ. ಸವಿತಾ, ಅಧ್ಯಕ್ಷತೆ : ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ನಿರ್ದೇಶಕರಾದ ಪ್ರೊ. ಹೆಚ್.ಪಿ. ಜ್ಯೋತಿ, ಸ್ಥಳ: ಎಂಎಂಟಿಟಿಸಿ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 11.30ಕ್ಕೆ.

■ **ಪಾವನ ಮೆಲೋಡಿಸ್ :** ಲಘು ಸಂಗೀತ, ಚಿತ್ರಗೀತೆ ಕರೋಕೆ ಕಾರ್ಯಕ್ರಮ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ ಆವರಣ, ಜೆಎಲ್‌ಬಿ ರಸ್ತೆ, ಸಂಜೆ 4 ರಿಂದ.

■ **ಆಸ್ತಾನಾ–ಇ–ಸಲ್ಮಾನಿಯಾ ದರ್ಗಾ ಕಮಿಟಿ :** 21ನೇ ವರ್ಷದ ಗಂಧದ ಉರುಸ್ –ಸಲ್ಮಾನಿಯಾ ಆಚರಣೆ, ಸ್ಥಳ: ಅಜೀಜಿಯಾ ಕಚೇರಿ, ಕೆ.ಆರ್. ಪಾರ್ಕ್ ರಸ್ತೆ, ಲಷ್ಕರ್ ಮೊಹಲ್ಲಾ, ಸಂಜೆ 5 ರಿಂದ.

ಹೆಚ್.ಡಿ.ಕೋಟೆಯಲ್ಲಿಂದು

■ **ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಮಹಿಳಾ–ಮಕ್ಕಳ ಅಭಿವೃದ್ಧಿ ಇಲಾಖೆ:** ಜಿಲ್ಲಾ ಮಟ್ಟದ ರಾಷ್ಟ್ರೀಯ ಸಿಕಲ್ ಸೆಲ್ ಅನೀಮಿಯಾ ನಿರ್ಮೂಲನಾ ದಿನ ಆಚರಣೆ, ಉಪಸ್ಥಿತರು: ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಉದ್ಘಾಟನೆ: ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಚಿವರಾದ ಕೆ.ವೆಂಕಟೇಶ್, ದಿನೇಶ್ ಗುಂಡೂರಾವ್, ಸ್ಥಳ: ಅಂಬೇಡ್ಕರ್ ಭವನ, ಹೆಚ್.ಡಿ.ಕೋಟೆ, ಬೆಳಗ್ಗೆ 10ಕ್ಕೆ

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 24 ಮಂಗಳವಾರ 2025

ಸಂಪುಟ: 46 | ಸಂಚಿಕೆ: 68 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಬಿ.ಆರ್.ಪಾಟೀಲ್ ಹೇಳಿದ್ದಕ್ಕಿಂತ ಅದರಪ್ಪನ ಸ್ಥಿತಿ ನನ್ನದು...!

ಈಗ ಶಾಸಕ ರಾಜುಕಾಗೆ ರಾಜೀನಾಮೆ ಬಾಂಬ್!



● ವಸತಿ ಯೋಜನೆ ಭ್ರಷ್ಟಾಚಾರ; ಜಮೀರ್ ರಾಜೀನಾಮೆಗೆ ಬೇಳೂರು ಗೋಪಾಲಕೃಷ್ಣ ಆಗ್ರಹ ● ಬಿ.ಆರ್.ಪಾಟೀಲ್ ವಸತಿ ಇಲಾಖೆ ಭ್ರಷ್ಟಾಚಾರ ಬಯಲು ಮಾಡುತ್ತಿದ್ದಂತೆ ಎಚ್ಚೆತ್ತ ಕೈ ಶಾಸಕರಿಂದ ತಮ್ಮದೇ ಸರ್ಕಾರದ ವಿರುದ್ಧ ಪುಂಖಾನುಪುಂಖ ಅಪಸ್ವರ

ಬೆಂಗಳೂರು, ಜೂ.23(ಕೆಎಂಶಿ)– ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದಿದೆ. ಅಧಿಕಾರಿಗಳು ನಮ್ಮ ಮಾತು ಕೇಳುತ್ತಿಲ್ಲ. ನಾನು ಹಣ ನೀಡದೇ ಯಾವ ಕೆಲಸವೂ ಆಗುತ್ತಿಲ್ಲ. ವಿಧಾನಸಭಾ ಸದಸ್ಯತ್ವಕ್ಕೆ ರಾಜೀನಾಮೆ ನೀಡುವುದಾಗಿ ಕಾಂಗ್ರೆಸ್‌ನ ಹಿರಿಯ ಶಾಸಕ ಹಾಗೂ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ರಾಜುಕಾಗೆ ಬಾಂಬ್ ಸಿಡಿಸಿದ್ದಾರೆ.

ಹಣ ನೀಡದೆ ಸರ್ಕಾರದಲ್ಲಿ ಯಾವುದೇ ಕೆಲಸಗಳು ಆಗುತ್ತಿಲ್ಲ ಎಂದು ತಮ್ಮದೇ ಸರ್ಕಾರದ ಆಡಳಿತದ ವಿರುದ್ಧ ಕಿಡಿಕಾರಿದ್ದಾರೆ. ಮತ್ತೊಂದೆಡೆ ಶಾಸಕ ಹಾಗೂ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬೇಳೂರು ಗೋಪಾಲಕೃಷ್ಣ, ವಸತಿ ಸಚಿವ ಜಮೀರ್ ಅಹಮದ್ ಖಾನ್ ರಾಜೀನಾಮೆ ಕೇಳಿದ್ದಾರೆ. ಬಿ.ಆರ್.ಪಾಟೀಲ್ ಭ್ರಷ್ಟಾಚಾರದ ಬಗ್ಗೆ ಬಹಿರಂಗ ಹೇಳಿಕೆ ನೀಡುತ್ತಿದ್ದಂತೆ ಆಡಳಿತ ಪಕ್ಷದ ಶಾಸಕರು, ಸಚಿವರು ಒಬ್ಬೊಬ್ಬರೇ ಆಡಳಿತ ವೈಫಲ್ಯಕ್ಕೆ ಸಂಬಂಧಿಸಿದಂತೆ ಸರ್ಕಾರದ ವಿರುದ್ಧವೇ ತಿರುಗಿ ಬಿದ್ದಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ರಾಜು ಕಾಗೆ, ಪಕ್ಷದ ಹಿರಿಯ ಶಾಸಕ ಬಿ.ಆರ್.ಪಾಟೀಲ್ ಹೇಳಿಕೆಯನ್ನು ಸಂಪೂರ್ಣ ಸಮರ್ಥಿಸಿ, ತಾವು ಒಂದು ಹೆಜ್ಜೆ ಮುಂದೆ ಹೋಗಿ ನನ್ನ ಎಲ್ಲಾ ಪದವಿಗಳಿಗೆ ರಾಜೀನಾಮೆ ನೀಡಲು ನಿರ್ಧರಿಸಿದ್ದೇನೆ ಎಂದಿದ್ದಾರೆ. ಬಿ.ಆರ್.ಪಾಟೀಲ್ ಹೇಳಿದ್ದಾರಲ್ಲ, ಅದರಪ್ಪನ ಸ್ಥಿತಿ ನನ್ನದಾಗಿದೆ, ನಾನು ಪ್ರತಿನಿಧಿಸುವ ಕ್ಷೇತ್ರದಲ್ಲಿ ಅಭಿವೃದ್ಧಿಯೇ ಇಲ್ಲ, ಅಧಿಕಾರಿಗಳು ಮಾತು ಕೇಳುತ್ತಿಲ್ಲ. ಮುಖ್ಯಮಂತ್ರಿ ಅವರು ಕ್ಷೇತ್ರಕ್ಕೆ 25 ಕೋಟಿ ರೂ. ಅನುದಾನ ಬಿಡುಗಡೆ ಮಾಡಿರುವ ಪತ್ರವೊಂದೇ ಅಭಿವೃದ್ಧಿ ಆಗಿರುವುದು. ಬಿಡುಗಡೆ ಆಗಿರುವ ಈ ಹಣಕ್ಕೆ ಅಧಿಕಾರಿಗಳು ಕ್ರಿಯಾ ಯೋಜನೆ ರೂಪಿಸುತ್ತಿಲ್ಲ, ಅವರು ನಮ್ಮ ಮಾತು ಕೇಳುತ್ತಿಲ್ಲ, ಒಟ್ಟಾರೆ ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದಿದೆ.

ಇದರಿಂದ ನನ್ನ ಮನಸ್ಸಿಗೆ ಘಾಸಿಯಾಗಿದ್ದು ಕ್ಷೇತ್ರದ ಜನರಿಗೆ ಮುಖ ಕೊಟ್ಟು ಮಾತನಾಡಲಾಗದೆ ರಾಜೀನಾಮೆ ನೀಡುವ ಸ್ಥಿತಿ ಎದುರಾಗಿದೆ. ಎರಡು ವರ್ಷ ಕಳೆದರೂ ಕಾಮಗಾರಿಗಳಿಗೆ ಕಾರ್ಯಾದೇಶಗಳ ನೀಡುತ್ತಿಲ್ಲ ಎಂದರೆ ಏನರ್ಥ. ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿ ಪ್ರವಾಸದಿಂದ ಹಿಂತಿರುಗುತ್ತಿದ್ದಂತೆ ಅವರನ್ನು ಭೇಟಿ ಮಾಡಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ, ವಿಧಾನಸಭಾ ಅಧ್ಯಕ್ಷರನ್ನು ಭೇಟಿ ಮಾಡಿ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತೇನೆ ಎಂದಿದ್ದಾರೆ.

ಬೆಳಗಾವಿ ಜಿಲ್ಲೆ ಕಾಗವಾಡ ಕ್ಷೇತ್ರ ಪ್ರತಿನಿಧಿಸುವ ರಾಜು ಕಾಗೆ ಮೂಲತಃ ಜನತಾ ಪರಿವಾರದವರು, ದಿವಂಗತ ಉಮೇಶ್ ಕತ್ತಿ ಆಪ್ತರಾಗಿದ್ದ ಅವರು ಬಿಜೆಪಿ ಸೇರಿ ನಂತರ ಕಾಂಗ್ರೆಸ್‌ನಿಂದ ವಿಧಾನಸಭೆಗೆ ಆಯ್ಕೆಯಾಗಿದ್ದರು.

ಜಮೀರ್ ರಾಜೀನಾಮೆ ನೀಡಲಿ: ಪ್ರತ್ಯೇಕವಾಗಿ ಸುದ್ದಿಗಾರರೊಂದಿಗೆ ಮಾತನಾಡಿದ ಬೇಳೂರು ಗೋಪಾಲಕೃಷ್ಣ, ವಸತಿ ಸಚಿವರ ಮೇಲೆ ಗಂಭೀರ ಆರೋಪ ಬಂದಿದೆ. ಈ ಆರೋಪ ಮಾಡಿರುವುದು ಅನ್ಯರಲ್ಲ, ನಮ್ಮ ಪಕ್ಷದ ಹಿರಿಯ ಶಾಸಕರೊಬ್ಬರು. ಹೀಗಾಗಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ತನಿಖೆ ಎದುರಿಸಲಿ. ಆರೋಪದಿಂದ ಮುಕ್ತಗೊಂಡು ಮತ್ತೆ ಮಂತ್ರಿಯಾಗಲಿ, ಈ ಹಿಂದೆ ರಾಜ್ಯದಲ್ಲಿ ಇಂತಹ ಹಲವಷ್ಟು ಘಟನೆಗಳು ನಡೆದಿವೆ ಎಂದರು. ಸಚಿವರಾದ ಕೃಷ್ಣಬೈರೇಗೌಡ, ಎಚ್.ಕೆ.ಪಾಟೀಲ್, ಮುಖ್ಯಮಂತ್ರಿ ಸಲಹೆಗಾರ ಬಿ.ಆರ್. ಪಾಟೀಲ್ ಆಡಳಿತಶಾಹಿ ವಿರುದ್ಧ ಗುಡುಗಿದ ಬೆನ್ನಲ್ಲೇ ಶಾಸಕ ರಾಜುಕಾಗೆ ವ್ಯವಸ್ಥೆ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ ರಾಜೀನಾಮೆಗೆ ಮುಂದಾಗಿದ್ದಾರೆ. ಆಡಳಿತ ವ್ಯವಸ್ಥೆ ಬಗ್ಗೆ ತಮ್ಮ ಆಪ್ತ ಬಳಗವೇ ತಿರುಗಿಬಿದ್ದಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತ್ರ ತುಟಿ ಬಿಚ್ಚದೆ ಮೌನ ವಹಿಸಿರುವುದು ಕಾಂಗ್ರೆಸ್ ನಾಯಕರಲ್ಲಿ ಗೊಂದಲಕ್ಕೆ ಎಡೆ ಮಾಡಿದೆ.

ಅಸಮಾಧಾನಿತ ರಾಜುಕಾಗೆಯೊಂದಿಗೆ ಚರ್ಚೆ; ಜಮೀರ್ ರಾಜೀನಾಮೆಗೆ ಬೇಳೂರು ಆಗ್ರಹದ ಬಗ್ಗೆಯೂ ಮಾಹಿತಿ ಪಡಿತೇನೆ

● ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಕ್ರಿಯೆ
● ನಾಳೆ ಬಿ.ಆರ್.ಪಾಟೀಲ್ ಭೇಟಿ

ಬೆಂಗಳೂರು, ಜೂ. 23(ಕೆಎಂಶಿ)– ಕಾಂಗ್ರೆಸ್ ಶಾಸಕ ರಾಜುಕಾಗೆ, ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳು ಆರಂಭವಾಗದಿರುವ ಬಗ್ಗೆ ಅಸಮಾಧಾನ ಹೊಂದಿದ್ದು ಅವರೊಂದಿಗೆ ಚರ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜುಕಾಗೆ ಅಸಮಾಧಾನದಿಂದ ರಾಜೀನಾಮೆ ಇಂಗಿತ ವ್ಯಕ್ತಪಡಿಸಿದ್ದು, ಅವರೊಂದಿಗೆ ಚರ್ಚಿಸಲಾಗುವುದು, ಕೆಲ ವಿಧಾನಸಭಾ ಕ್ಷೇತ್ರಗಳಿಗೆ ವಿಶೇಷ ಅನುದಾನ ನೀಡಲಾಗುತ್ತದೆ ಎಂದರು.

ನಾಳೆ ಬಿ.ಆರ್.ಪಾಟೀಲ್ ಭೇಟಿ: ವಸತಿ ಇಲಾಖೆಯಲ್ಲಿನ ಭ್ರಷ್ಟಾಚಾರ ವಿಷಯ ಕುರಿತು ಚರ್ಚಿಸಲು ಶಾಸಕ ಬಿ.ಆರ್.ಪಾಟೀಲ್ ಈ ತಿಂಗಳ 25 ರಂದು ಭೇಟಿಯಾಗುವುದಾಗಿ ತಿಳಿಸಿದ್ದಾರೆ. ಭ್ರಷ್ಟಾಚಾರ ಆರೋಪದ ಹಿನ್ನೆಲೆಯಲ್ಲಿ ವಸತಿ ಸಚಿವ ಜಮೀರ್ ಅಹಮದ್ ಖಾನ್ ರಾಜೀನಾಮೆ ▶ 6ನೇ ಪುಟಕ್ಕೆ

ಟ್ರಂಪ್ ವಿರುದ್ಧ ಇರಾನ್ ಪ್ರತೀಕಾರ

ಕತಾರ್, ಇರಾಕ್‌ನಲ್ಲಿರುವ ಅಮೆರಿಕ ಸೇನಾ ನೆಲೆಗಳ ಮೇಲೆ ಕ್ಷಿಪಣಿ ದಾಳಿ



ಕತಾರ್‌ನ ಅಮೆರಿಕಾ ಸೇನಾ ನೆಲೆ ಮೇಲೆ ಇರಾನ್ ಕ್ಷಿಪಣಿ ದಾಳಿ.

ನವದೆಹಲಿ, ಜೂ.23– ಮಧ್ಯ ಪ್ರಾಚ್ಯದಲ್ಲಿ ಉದ್ವಿಗ್ನತೆಯ ನಡುವೆ ಇಸ್ರೇಲ್ ಮತ್ತು ಇರಾನ್ ಮಧ್ಯೆ ಅಮೆರಿಕ ಎಂಟ್ರಿಯಾಗಿದೆ. ಇರಾನ್ ಮೇಲೆ ಬಾಂಬ್ ದಾಳಿ ನಡೆಸಿದ್ದ ಅಮೆರಿಕದ ವಿರುದ್ಧ ಸೇಡು ತೀರಿಸಿಕೊಂಡಿರುವ ಇರಾನ್, ಅಮೆರಿಕದ ಸೇನಾ ಸಿಬ್ಬಂದಿಯನ್ನು ಹೊಂದಿರುವ ಕತಾರ್‌ನಲ್ಲಿರುವ ಅಲ್ ಉದೈದ್ ವಾಯುನೆಲೆಯನ್ನು ಗುರಿಯಾಗಿಸಿಕೊಂಡು 6 ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಹಾರಿಸಿದೆ. ಅಮೆರಿಕದ ವಿರುದ್ಧ ಪ್ರತಿದಾಳಿ ಆರಂಭಿಸಿದ ಇರಾನ್, ಅಮೆರಿಕದ ವಾಯುನೆಲೆಗಳ ಮೇಲೆ ಕ್ಷಿಪಣಿ ದಾಳಿ ನಡೆಸಿದೆ. ಕತಾರ್–ಇರಾಕ್‌ನಲ್ಲಿರುವ ವಾಯುನೆಲೆಗಳ ಮೇಲೆ ಕ್ಷಿಪಣಿ ದಾಳಿ ನಡೆಸಲಾಗಿದೆ. ಕತಾರ್‌ನ ದೋಹಾದಲ್ಲಿರುವ ಅಮೆರಿಕ ವಾಯುನೆಲೆ ಮೇಲೆ ದಾಳಿಯಾಗಿದ್ದು, ಈ ವಾಯುನೆಲೆ ಮೇಲೆ 6 ಖಂಡಾಂತರ ಕ್ಷಿಪಣಿ ಹಾರಿಸಲಾಗಿದೆ. ಈ ದಾಳಿ ಬಳಿಕ ಕತಾರ್ ತನ್ನ ವಾಯುಪ್ರದೇಶವನ್ನು ಬಂದ್ ಮಾಡಿದೆ. ಹೀಗಾಗಿ, ದೋಹಾಗೆ ತೆರಳುತ್ತಿದ್ದ ವಿಮಾನಗಳ ಮಾರ್ಗ ಬದಲಾವಣೆ ಮಾಡಲಾಗಿದೆ.

ಇರಾನಿನ ಪರಮಾಣು ಪರೀಕ್ಷಾ ನೆಲೆಗಳ ಮೇಲಿನ ಅಮೆರಿಕದ ದಾಳಿಗೆ ಶೀಘ್ರದಲ್ಲೇ ಪ್ರತೀಕಾರ ತೀರಿಸಿಕೊಳ್ಳಲಾಗುವುದು ಎಂಬ ಇರಾನಿನ ಎಚ್ಚರಿಕೆಗಳ ನಡುವೆ ಕತಾರ್ ತನ್ನ ವಾಯುಪ್ರದೇಶವನ್ನು ತಾತ್ಕಾಲಿಕವಾಗಿ ಮುಚ್ಚಿದ ಸ್ವಲ್ಪ ಸಮಯದ ನಂತರ ಈ ದಾಳಿ ನಡೆದಿದೆ. ಇಂದು ರಾತ್ರಿ ▶ 6ನೇ ಪುಟಕ್ಕೆ

ಇರಾನ್ ಆಡಳಿತ ಬದಲಾವಣೆ ಸುಳಿವು

ವಾಷಿಂಗ್ಟನ್: ಇಸ್ರೇಲ್–ಇರಾನ್ ನಡುವೆ ನಡೆಯುತ್ತಿರುವ ಯುದ್ಧ ಮಹಾತಿರುವು ಪಡೆದುಕೊಂಡಿದ್ದು, ಇರಾನ್ ರಾಷ್ಟ್ರದ 3 ಅಣುಸ್ಥಾವರಗಳ ಮೇಲೆ ದಾಳಿ ನಡೆಸಿ ಸಂಘರ್ಷಕ್ಕೆ ಅಧಿಕೃತ ಎಂಟ್ರಿ ಕೊಟ್ಟಿದ್ದ



ವಿಶ್ವದ ದೊಡ್ಡಣ್ಣ ಅಮೆರಿಕಾ, ಇದೀಗ ಇಸ್ಲಾಮಿಕ್ ರಿಪಬ್ಲಿಕ್ ರಾಷ್ಟ್ರದಲ್ಲಿ ಅಧಿಕಾರ ಬದಲಾವಣೆ ಮಾಡುವ ಕುರಿತು ಚಿಂತನೆ ನಡೆಸುತ್ತಿದೆ ಎಂದು ತಿಳಿದುಬಂದಿದೆ.

ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇರಾನ್ ಅಧಿಕಾರ ಬದಲಾವಣೆ ಕುರಿತು ಸುಳಿವು ನೀಡಿದ್ದಾರೆ.

ಇರಾನ್‌ನಲ್ಲಿ ಆಡಳಿತ ಬದಲಾವಣೆ ಮೂಲಕ ಮಧ್ಯಪ್ರಾಚ್ಯದಲ್ಲಿ ಶಾಶ್ವತ ಶಾಂತಿ ನೆಲೆಸುವಂತೆ ಮಾಡುವ ಸಾಧ್ಯತೆ ಕುರಿತು ನಾವು ಚಿಂತಿಸುತ್ತಿದ್ದೇವೆ. ಆಡಳಿತ ಬದಲಾವಣೆ ಎಂಬ ಪದವನ್ನು ಬಳಸುವುದು ರಾಜಕೀಯವಾಗಿ ಸರಿಯಲ್ಲ, ಆದರೆ, ಪ್ರಸ್ತುತ ಆಯತೊಲ್ಲಾ ಅಲಿ ಖಮೇನಿ ಆಡಳಿತ ಇರಾನ್ ಅನ್ನು ಮತ್ತೆ ಶ್ರೇಷ್ಠಗೊಳಿಸಲು ಸಾಧ್ಯವಾಗದಿದ್ದರೆ, ಆಡಳಿತ ಬದಲಾವಣೆ ಬಗ್ಗೆ ಏಕೆ ಚಿಂತಿಸಬಾರದು ಎಂದು ಹೇಳಿದ್ದಾರೆ. ಇದೇ ವೇಳೆ ಇರಾನ್ ಮೇಲೆ 'ಆಪರೇಷನ್ ಮಿಡ್‌ನೈಟ್ ಹ್ಯಾಮರ್' ಯಶಸ್ವಿ ▶ 6ನೇ ಪುಟಕ್ಕೆ

ಕಾಂಗ್ರೆಸ್ ಶಾಸಕರದ್ದು 'ತಬರನ' ಸ್ಥಿತಿ

▶ ಕೇಂದ್ರ ಸಚಿವ ಕುಮಾರಸ್ವಾಮಿ ಗಂಭೀರ ಟೀಕೆ ▶ ಸಚಿವರು, ಮಧ್ಯವರ್ತಿಗಳು ಮಜಾ ಮಾಡುತ್ತಿದ್ದಾರೆ; ಶಾಸಕರು ಮಾತ್ರ ಅನುದಾನಕ್ಕೆ ಅಲೆಯುತ್ತಿದ್ದಾರೆ ▶ ರಾಜ್ಯದಲ್ಲಿ ಮುಖ್ಯಮಂತ್ರಿ ಇದ್ದಾರಾ; ಇವರಿಗೆ ಅರಸು ದಾಖಲೆ ಮುರಿಯುವ ಬಯಕೆ ಅಷ್ಟೇ

ಬೆಂಗಳೂರು, ಜೂ.23(ಕೆಎಂಶಿ)– ವಸತಿ ಇಲಾಖೆಯಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ, ರಾಜ್ಯ ಕಾಂಗ್ರೆಸ್ ಸರ್ಕಾರದ ದರ್ಬಾರಿನಲ್ಲಿ ಶಾಸಕರ ಪರಿಸ್ಥಿತಿ ತಬರನ ಕಥೆಯಂತಾಗಿದೆ ಎಂದಿದ್ದಾರೆ.




ನವದೆಹಲಿಯ ತಮ್ಮ ಅಧಿಕೃತ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೇಂದ್ರ ಸಚಿವರು, ಶಾಸಕರು ಅನುದಾನಕ್ಕಾಗಿ, ಸರ್ಕಾರದ ಯೋಜನೆಗಳಿಗಾಗಿ ಕಚೇರಿಗಳ ಸುತ್ತ, ಮಂತ್ರಿಮಹೋದಯರ ಸುತ್ತ ತಬರನಂತೆ ಸುತ್ತುತ್ತಿದ್ದಾರೆ. ಆಡಳಿತ ಪಕ್ಷದ ಸದಸ್ಯರಿಗೇ ಇಂಥ ದುರ್ಗತಿ ಬಂದರೆ, ಇತರೆ ಪಕ್ಷಗಳ ಶಾಸಕರ ಪರಿಸ್ಥಿತಿ ಏನು ಎಂದು ಪ್ರಶ್ನಿಸಿದರು.

ಹಿಂದೆ ಸಾಹಿತಿ ಕೆ.ಪಿ.ಪೂರ್ಣಚಂದ್ರ ತೇಜಸ್ವಿ ಅವರು ಬರೆದಿದ್ದ 'ತಬರನ ಕಥೆ' ಎಂಬ ಕಥೆಯನ್ನು ಗಿರೀಶ್ ಕಾಸರವಳ್ಳಿ ಅವರು ಸಿನಿಮಾ ಮಾಡಿದ್ದರು. ವಾಚ್‌ಮನ್ ಒಬ್ಬ ತನ್ನ ಪಿಂಚಣಿಗಾಗಿ ಸರ್ಕಾರಿ ಕಚೇರಿಗಳಿಗೆ ಅಲೆ ಅಲೆದು ಬಸವಳಿಯುವ ಕಥೆ ಅದು. ಅಂಥದ್ದೇ ಪರಿಸ್ಥಿತಿ ರಾಜ್ಯದ ಶಾಸಕರಿಗೂ ಬಂದಿರುವುದು ದುರದೃಷ್ಟಕರ. ಶಾಸಕರು ಯೋಜನೆಗಳಾಗಿ ಮಂತ್ರಿಗಳು, ಎಂಜಿಯರ್‌ಗಳ ಕಚೇರಿಗಳ ಸುತ್ತ ತಬರನಂತೆ ಸುತ್ತುತ್ತಿದ್ದಾರೆ. ರಾಜ್ಯದಲ್ಲಿ ಇಂಥ ದುಸ್ಥಿತಿ ಹಿಂದೆಂದೂ ಇರಲಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಆಲಿಬಾಬಾ ಮೂವತ್ತನಾಲ್ಕು ಕಳ್ಳರು: ರಾಜ್ಯದ ಪರಿಸ್ಥಿತಿ ಹೇಗಾಗಿದೆ ಎಂದರೆ ಆಲಿಬಾಬಾ ಮೂವತ್ತನಾಲ್ಕು ಕಳ್ಳರು ಎನ್ನುವಂಥ ರೀತಿ ಆಗಿದೆ. ಮುಖ್ಯಮಂತ್ರಿ, ಮಂತ್ರಿಗಳು ಕಮಿಷನ್ ಉಡಾಯಿಸಿ ಮೋಜು ಮಾಡುತ್ತಿದ್ದರೆ, ಶಾಸಕರು ತಮ್ಮ ಕ್ಷೇತ್ರಗಳಿಗೆ ಮುಖ ಹಾಕಲಾರದ ದುಸ್ಥಿತಿಯಲ್ಲಿ ಇದ್ದಾರೆ. ಇದಕ್ಕಿಂತ ನಾಚಿಕೆಗೇಡಿನ ವಿಷಯ ಬೇರೆನಿದೆ. ಇದನ್ನು ▶ 6ನೇ ಪುಟಕ್ಕೆ

ಕೆಆರ್‌ಎಸ್‌ನಿಂದ 15 ಸಾವಿರ ಕ್ಯುಸೆಕ್ ನೀರು ಬಿಡುಗಡೆ



ಶ್ರೀರಂಗಪಟ್ಟಣ, ಜೂ.23– ಕಾವೇರಿ ಜಲಾನಯನ ಪ್ರದೇಶದಲ್ಲಿ ವ್ಯಾಪಕವಾಗಿ ಸುರಿಯುತ್ತಿರುವ ಮಳೆಯಿಂದಾಗಿ ತಾಲೂಕಿನ ಪ್ರಸಿದ್ಧ ಕೆಆರ್‌ಎಸ್ ಅಣೆಕಟ್ಟೆ ಬಹುತೇಕ ಭರ್ತಿಯಾಗಿದ್ದು, ಒಳಹರಿವು ಇನ್ನಷ್ಟು ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಜಲಾಶಯದಿಂದ ಸೋಮವಾರ ನೀರು ಬಿಡಲಾಗಿದೆ.

ಸೋಮವಾರ ಸಂಜೆ ಕೆ.ಆರ್. ಸಾಗರ ಅಣೆಕಟ್ಟೆ ನೀರಿನ ಮಟ್ಟ 121.80 ಅಡಿ ತಲುಪಿದ್ದು, 13,856 ಕ್ಯುಸೆಕ್ ಒಳಹರಿವು ಇದ್ದು, ಹೆಚ್ಚಿನ ಒಳಹರಿವು ನಿರೀಕ್ಷೆಯಿಂದ ಅಣೆಕಟ್ಟೆಯಿಂದ 5 ಗೇಟುಗಳ ಮೂಲಕ 5 ರಿಂದ 15 ಸಾವಿರ ಕ್ಯುಸೆಕ್ ನೀರನ್ನು ನದಿಗೆ ಹರಿಸಲಾಗುತ್ತಿದೆ. ಕಾವೇರಿ ಜಲಾನಯನ ಪ್ರದೇಶಗಳಲ್ಲಿ ಭಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಅಣೆಕಟ್ಟೆಯ ಸುರಕ್ಷತಾ ದೃಷ್ಟಿಯಿಂದ ಕೆ.ಆರ್.ಸಾಗರ ಅಣೆಕಟ್ಟೆಯ ಒಳಹರಿವಿನ ಪ್ರಮಾಣ ಗಣನೀಯವಾಗಿ ಏರಿಕೆಯಾಗಿದ್ದು, ಸುರಕ್ಷತೆ ದೃಷ್ಟಿಯಿಂದ ಅಣೆಕಟ್ಟೆಯಿಂದ 5 ರಿಂದ 15 ಸಾವಿರ ಕ್ಯುಸೆಕ್ ನೀರು ಹೊರಬಿಡಲಾಗಿದೆ.

ಪ್ರಸ್ತುತ ಅಣೆಕಟ್ಟೆಯಿಂದ ನದಿ ಮತ್ತು ನಾಲೆ ಸೇರಿ ಹೊರಹರಿವು ಸಾವಿರಾರು ಕ್ಯುಸೆಕ್ ಇದ್ದು, 43.298 ಟಿಎಂಸಿ ನೀರಿನ ಸಂಗ್ರಹವಿದೆ. ಕಳೆದ ವರ್ಷ ಇದೇ ದಿನ ಅಣೆಕಟ್ಟೆಯಲ್ಲಿ ನೀರಿನ ಮಟ್ಟ 87.62 ಅಡಿ, ಒಳಹರಿವು 1214 ಕ್ಯುಸೆಕ್, ಹೊರ ಹರಿವು 983 ಕ್ಯುಸೆಕ್ ದಾಖಲಾಗಿತ್ತು. ನದಿಗೆ ನೀರು ಬಿಟ್ಟಿರುವ ಹಿನ್ನೆಲೆಯಲ್ಲಿ ನದಿಪಾತ್ರದ ಜನತೆ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚನೆ ನೀಡಿದ್ದು, ತಮ್ಮ ಬೆಲೆ ಬಾಳುವ ವಸ್ತುಗಳು ಹಾಗೂ ಜಾನುವಾರುಗಳನ್ನು ರಕ್ಷಿಸಿಕೊಳ್ಳುವಂತೆ ಶ್ರೀರಂಗಪಟ್ಟಣ ತಾಲೂಕು ಆಡಳಿತ ಸೂಚನೆ ನೀಡಿದೆ.

ವಿಜಯನಗರ 4ನೇ ಹಂತದಲ್ಲಿ 150 ಕೋಟಿ ಮೌಲ್ಯದ 8.28 ಎಕರೆ ಎಂಡಿಎ ಭೂಮಿ ರಕ್ಷಣೆ

ಮೈಸೂರು, ಜೂ. 23(ಆರ್‌ಕೆ)– ಮೈಸೂರಿನ ವಿಜಯನಗರ 4ನೇ ಹಂತ, ಬಸವನಹಳ್ಳಿ ಸರ್ವೆ ನಂಬರ್‌ನಲ್ಲಿ ಈ ಹಿಂದೆ ಮುಡಾ ಸ್ವಾಧೀನಪಡಿಸಿಕೊಂಡಿದ್ದರೂ, ಅದನ್ನು ಪ್ರಶ್ನಿಸಿ ಭೂ ಮಾಲೀಕರು ಕೋರ್ಟ್ ಮೊರೆ ಹೋಗಿದ್ದು, ಈಗ ಕೋರ್ಟ್ ಆದೇಶದ ಮೇರೆಗೆ 150 ಕೋಟಿ ಬೆಲೆ ಬಾಳುವ 8.28 ಎಕರೆ ಭೂಮಿಯನ್ನು ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ) ಅಧಿಕಾರಿಗಳು ಇಂದು ವಶಕ್ಕೆ ಪಡೆದುಕೊಂಡರು.

ಇಂದು ಬೆಳಗ್ಗೆ 6ರಿಂದ 10 ಗಂಟೆವರೆಗೆ ಕಾರ್ಯಾಚರಣೆ ನಡೆಸಿದ ಎಂಡಿಎ ಅಧಿಕಾರಿಗಳು ಪ್ರಾಧಿಕಾರಕ್ಕೆ ಸೇರಿದ ಭೂಮಿಯಲ್ಲಿ ನಿರ್ಮಿಸಿದ್ದ ಮನೆಗಳನ್ನು ನೆಲಸಮಗೊಳಿಸಿದರು.

ಎಂಡಿಎ ಕಾರ್ಯದರ್ಶಿ ಹಾಗೂ ತೆರವು ಅಧಿಕಾರಿ ಪ್ರಸನ್ನಕುಮಾರ್ ಅಧಿಕೃತ ಜ್ಞಾಪನ ಹೊರಡಿಸಿದ್ದು, ಪೊಲೀಸ್ ಭದ್ರತೆಯೊಂದಿಗೆ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು, ಜೆಸಿಬಿ ಮೂಲಕ ಸದರಿ ಭೂಮಿಯಲ್ಲಿ ನಿರ್ಮಿಸಿದ್ದ ಕೆಲ ಕಟ್ಟಡಗಳನ್ನು ನೆಲಸಮಗೊಳಿಸಿದರು.

ಮೈಸೂರು ತಾಲೂಕು ಬಸವನಹಳ್ಳಿ ಸರ್ವೆ ನಂಬರ್ 108ರಲ್ಲಿ 4.36 ಎಕರೆ ಮತ್ತು ಸರ್ವೆ ನಂಬರ್ 109ರಲ್ಲಿ 3.92 ಎಕರೆ ಸೇರಿ ಒಟ್ಟು 8.28 ಎಕರೆ ಪ್ರದೇಶವನ್ನು 1991ರಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ವು ವಿಜಯನಗರ 4ನೇ ಹಂತ ವಸತಿ ಬಡಾವಣೆಗಾಗಿ ಭೂ ಸ್ವಾಧೀನ ಪಡಿಸಿಕೊಂಡಿತ್ತು. 1991ರ ಡಿಸೆಂಬರ್ 23ರಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದ ಪ್ರಾಧಿಕಾರವು, 1992ರ ಡಿಸೆಂಬರ್ 10ರಂದು ಅಂತಿಮ ಅಧಿಸೂಚನೆ ಹೊರಡಿಸಿ ಭೂಮಿಯನ್ನು ಸ್ವಾಧೀನಕ್ಕೆ ಪಡೆದಿತ್ತು. 1994ರ ಆಗಸ್ಟ್ ▶ 6ನೇ ಪುಟಕ್ಕೆ



ಮೈಸೂರಿನ ವಿಜಯನಗರ 4ನೇ ಹಂತದಲ್ಲಿ ಎಂಡಿಎಗೆ ಸೇರಿದ ಜಾಗದಲ್ಲಿ ಅನಧಿಕೃತವಾಗಿ ನಿರ್ಮಿಸಿದ್ದ ಮನೆಗಳನ್ನು ಸೋಮವಾರ ಎಂಡಿಎ ಅಧಿಕಾರಿಗಳು ನೆಲಸಮಗೊಳಿಸಿದರು.

ಬಡಾವಣೆ ಅಭಿವೃದ್ಧಿಪಡಿಸಿ ನಿವೇಶನ ಹರಾಜು: ರಕ್ಷಿತ್

ಮೈಸೂರು, ಜೂ. 23(ಆರ್‌ಕೆ)– ಹೈಕೋರ್ಟ್ ಆದೇಶದಂತೆ ಈಗ ವಶಪಡಿಸಿಕೊಂಡಿರುವ ವಿಜಯನಗರ 4ನೇ ಹಂತದ 8.28 ಎಕರೆ ಭೂಮಿಯಲ್ಲಿ ವಸತಿ ಬಡಾವಣೆ ಅಭಿವೃದ್ಧಿಪಡಿಸಿ ಹರಾಜು ಮೂಲಕ ಇಲ್ಲಿನ ನಿವೇಶನ ಮಾರಾಟ ಮಾಡಲಾಗುವುದು ಎಂದು ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ)ದ ಆಯುಕ್ತ ಕೆ.ಆರ್. ರಕ್ಷಿತ್ ತಿಳಿಸಿದ್ದಾರೆ.

ವಶಕ್ಕೆ ಪಡೆದಿರುವ ಈ ಭೂಮಿಯ ಮೌಲ್ಯ ಸುಮಾರು 150 ಕೋಟಿ ರೂ.ಗಳಾಗಿದ್ದು, ಸ್ಥಳದಲ್ಲಿ ಸೂಚನಾ ಫಲಕ ಅಳವಡಿಸಿ, ಸುತ್ತ ತಂತಿ ಬೇಲಿ ಅಳವಡಿಸುವ ಕಾರ್ಯ ಪ್ರಗತಿಯಲ್ಲಿದೆ. ವಸತಿ ಬಡಾವಣೆ ನಿರ್ಮಿಸಿ, ಹರಾಜು ಮೂಲಕ ನಿವೇಶನ ಮಾರಾಟ ಮಾಡಿ ಪ್ರಾಧಿಕಾರಕ್ಕೆ 250ರಿಂದ 300 ಕೋಟಿ ಸಂಪನ್ಮೂಲ ಕ್ರೋಢೀಕರಿಸುವುದು ನಮ್ಮ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು. ಪ್ರಾಧಿಕಾರದ ಆಸ್ತಿಗಳ ಬಗ್ಗೆ ಆಡಿಟ್ ಮಾಡಿಸಲಾಗುತ್ತಿದ್ದು, ಒತ್ತುವರಿಯಾಗಿರುವುದು ಕಂಡುಬಂದಲ್ಲಿ ನೋಟಿಸ್ ನೀಡಿ ತೆರವು ಕಾರ್ಯಾಚರಣೆ ಮುಂದುವರೆಸಲಾಗುವುದು ಎಂದು ರಕ್ಷಿತ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಎಂಡಿಎ 11 ಕ್ವಾರ್ಟರ್ಸ್ ಪೈಕಿ 3ರಲ್ಲಿ ಅಧಿಕೃತ ವಾಸ!; ಉಳಿದವುಗಳು ಲೆಕ್ಕಕ್ಕಿಲ್ಲ!?

ಮೈಸೂರು, ಜೂ.23(ಆರ್‌ಕೆ)– ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ)ಕ್ಕೆ ಸೇರಿದ ಒಟ್ಟು 11 ಕ್ವಾರ್ಟರ್ಸ್ (ವಸತಿ ಗೃಹ)ಗಳ ಪೈಕಿ ಕೇವಲ 3ರಲ್ಲಿ ಮಾತ್ರ ಅಧಿಕಾರಿಗಳು ಮತ್ತು ಸಿಬ್ಬಂದಿ ವಾಸವಾಗಿದ್ದಾರೆ!

ಈ ಹಿಂದೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಿಂದ ಅಧಿಕಾರಿಗಳು ಮತ್ತು ಸಿಬ್ಬಂದಿಗಾಗಿ ಮೈಸೂರಿನ ವಿಜಯನಗರ 1ನೇ ಹಂತ, ರಾಮಕೃಷ್ಣನಗರ, ಕುವೆಂಪುನಗರದಲ್ಲಿ ಒಟ್ಟು 11 ಕ್ವಾರ್ಟರ್ಸ್‌ಗಳನ್ನು ನಿರ್ಮಿಸಲಾಗಿತ್ತು.

ಸ್ವಂತ ಮನೆಗಳಿಲ್ಲದವರು, ಆಯುಕ್ತರಿಂದ ಆದೇಶ ಪಡೆದು ಸಂಬಳದಲ್ಲಿ ಮನೆ ಬಾಡಿಗೆ ಕಡಿತಗೊಳಿಸುವ (ಹೆಚ್‌ಆರ್‌ಎ) ಕರಾರಿನನ್ವಯ ಮಂಜೂರು ಮಾಡಲಾಗುತ್ತಿತ್ತು ಅವರು ಬೇರೆಡೆಗೆ ವರ್ಗವಾದಲ್ಲಿ ಖಾಲಿಯಾದ ಮನೆಗಳನ್ನು ಮತ್ತೆ ಆದೇಶ ಹೊರಡಿಸಿ ಬೇರೆಯವರಿಗೆ ಹಂಚಿಕೆ ಮಾಡುವ ಪರಿಪಾಠವಿತ್ತು.

ಆದರೆ ಈಗ ಇಬ್ಬರು ವಾಹನ ಚಾಲಕರು ಮತ್ತು ಓರ್ವ ಅಸಿಸ್ಟೆಂಟ್ ಇಂಜಿನಿಯರ್ ಮಾತ್ರ ಅಧಿಕೃತವಾಗಿ ವಾಸ ಮಾಡುತ್ತಿದ್ದು, ಉಳಿದ 8ರ ಪೈಕಿ 3 ಕ್ವಾರ್ಟರ್ಸ್‌ಗಳಲ್ಲಿ ಬೇರೆ ಇಲಾಖೆ ಸಿಬ್ಬಂದಿ ವಾಸ ಮಾಡುತ್ತಿದ್ದಾರೆ. ಎಂಡಿಎ ನೂತನ ಆಯುಕ್ತ ಕೆ.ಆರ್. ರಕ್ಷಿತ್, ಪ್ರಾಧಿಕಾರದ ಕಟ್ಟಡಗಳು, ನಿವೇಶನ, ಭೂಮಿ ಸೇರಿದಂತೆ ಇತರ ಆಸ್ತಿಗಳ ಪತ್ತೆ ಕಾರ್ಯಕ್ಕೆ ಚಾಲನೆ ನೀಡಿದ್ದು, ಅದರ ಫಲವಾಗಿ ಕ್ವಾರ್ಟರ್ಸ್‌ಗಳಲ್ಲಿ ಅನಧಿಕೃತವಾಗಿ ವಾಸವಿರುವುದು ಕಂಡುಬಂದಿದೆ. ಅಂತಹ ಅನಧಿಕೃತವಾಗಿ ವಾಸಿಸುತ್ತಿರುವವರಿಗೆ ನೋಟಿಸ್ ನೀಡಿ ತೆರವುಗೊಳಿಸಿ, ಅಧಿಕೃತವಾಗಿ ಹಂಚಿಕೆ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಎಂಡಿಎ ಮೂಲಗಳು ತಿಳಿಸಿವೆ.

ನಕ್ಕರೆ ಅದೇ ಸ್ವರ್ಗ

ಬೆಳಗ್ಗೆ ಡ್ಯೂಟಿಗೆ ಬಂದ ಜೈಲರ್‌ಗೆ ಪೇದೆಯೊಬ್ಬ ಗಾಬರಿಯಿಂದ ಹೇಳಿದ.

ಪೇದೆ : ಸರ್ ನಿನ್ನೆ ರಾತ್ರಿ ಕೈದಿಗಳೆಲ್ಲ ಸೇರಿ ರಾಮಲೀಲಾ ಉತ್ಸವ ಆಚರಿಸಿದರು.

ಜೈಲರ್ : ಭೇಷ್ ! ಅದಕ್ಕೆ ಯಾಕೆ ಇಷ್ಟು ಗಾಬರಿ ಪಡ್ತೀರಿ?

ಪೇದೆ : ಸರ್, ಹನುಮಂತನ ಪಾತ್ರ ಮಾಡಿದ್ದವನು ಸಂಜೀವಿನಿ ತರ್ತಿನಿ ಅಂತ ಹೇಳಿ ಹೋದವನು ಇನ್ನೂ ವಾಪಸ್ ಬಂದಿಲ್ಲ!

ಮೈಸೂರು ಮಿತ್ರ

ಮಂಗಳವಾರ, 24 ಜೂನ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಬಂದ ಭಾಗ್ಯವ ಕಾಲಲ್ಲಿ ಒದೆಯಬೇಡಿ.
ಹಸಿವಿರದವನಿಗೆ ಒತ್ತಾಯದ ಊಟ ಬಡಿಸಬೇಡಿ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬಡವರ ಮನೆ ಊಟ ಚೆನ್ನ,
ಶ್ರೀಮಂತರ ಮನೆ ನೋಟ ಚೆನ್ನ

ನಿಮ್ಮ ಪತ್ರಗಳು

■ ಆಟದ ಮೈದಾನದಲ್ಲಿ ಬೆಳಗದ ದೀಪ, ಸಾರ್ವಜನಿಕರ ಪರದಾಟ

ಮಾನ್ಯರೆ,

ಮೈಸೂರಿನ ವಿಜಯನಗರದಲ್ಲಿರುವ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಅಭಿವೃದ್ಧಿಪಡಿಸಿರುವ ಆಟದ ಮೈದಾನದಲ್ಲಿ ಸಂಜೆ ವೇಳೆ ಬೀದಿದೀಪಗಳು ಬೆಳಗದೆ ಸಾರ್ವಜನಿಕರು ಪರದಾಡುವಂತಾಗಿದೆ.

ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಪಕ್ಕದಲ್ಲಿರುವ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ ಗ್ರೌಂಡ್) ಆಟದ ಮೈದಾನದಲ್ಲಿ ಪ್ರತಿನಿತ್ಯ ಸಾವಿರಾರು ಮಂದಿ ವಾಯುವಿಹಾರ ಮಾಡುತ್ತಾರೆ. ಸುಮಾರು ಒಂದು ಕಿಲೋಮೀಟರ್ ಸುತ್ತಳತೆ ಹೊಂದಿರುವ ಈ ಮೈದಾನದಲ್ಲಿ ನೂರಕ್ಕೂ ಹೆಚ್ಚು ಬೀದಿದೀಪಗಳಿವೆ. ಸಾರ್ವಜನಿಕರು ರಾತ್ರಿ ಹತ್ತರವರೆಗೂ ವಾಯುವಿಹಾರ ಮಾಡುತ್ತಿರುತ್ತಾರೆ, ಆದರೆ ಕಳೆದ ಹದಿನೈದು ದಿನಗಳಿಂದ ಮೈದಾನದಲ್ಲಿ ಬೀದಿ ದೀಪಗಳು ಬೆಳಗುತ್ತಿಲ್ಲ. ಇಡೀ ಆಟದ ಮೈದಾನ ಕಗ್ಗತ್ತಲ ಗೂಡಾಗಿದೆ. ಆಫೀಸ್ ಕೆಲಸ ಮುಗಿಸಿ ಸಂಜೆ ಏಳರ ನಂತರವೂ ಮಹಿಳೆಯರು, ವಯಸ್ಸಾದವರು ಮತ್ತು ನಾಗರಿಕರು ಈ ಮೈದಾನದಲ್ಲಿ ವಾಯುವಿಹಾರ ಮಾಡುತ್ತಾರೆ.

ಇದೇ ಮೈದಾನದಲ್ಲಿ ಮೂರು ತಿಂಗಳ ಹಿಂದೆ ಬೀದಿದೀಪಗಳು ಇದ್ದರೂ ಸಹ ಯಾರೋ ಅಪರಿಚಿತ ದಂಪತಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಜೊತೆಗೆ ಆಟದ ಮೈದಾನಕ್ಕೆ ಹೊಂದಿಕೊಂಡಂತೆ ಕೇಂದ್ರ ಸರ್ಕಾರದ ಸಿಎಫ್‌ಟಿಆರ್‌ಐಗೆ ಸೇರಿದ ನೂರಾರು ಎಕರೆ ಖಾಲಿ ಜಾಗವಿದೆ. ಆದ್ದರಿಂದ ಮಹಿಳೆಯರು ಮತ್ತು ಮಕ್ಕಳು ಭಯದ ವಾತಾವರಣದಲ್ಲಿಯೇ ಓಡಾಡುವಂತಾಗಿದೆ.

ಇತ್ತೀಚಿನ ದಿನಗಳಲ್ಲಿ ನಗರದಲ್ಲಿ ಕೊಲೆ, ಸುಲಿಗೆ ಮತ್ತು ಅನೈತಿಕ ಚಟುವಟಿಕೆಗಳು ಹೆಚ್ಚಾಗುತ್ತಿವೆ, ಈ ಮೈದಾನವನ್ನು ಸಹ ಬೀದಿದೀಪಗಳಿಲ್ಲದೆ ಹೀಗೆ ಬಿಟ್ಟರೆ ಈ ತರಹದ ಕಾನೂನುಬಾಹಿರ ಚಟುವಟಿಕೆಗಳಿಗೆ ಎಡೆಮಾಡಿಕೊಟ್ಟಂತಾಗುತ್ತದೆ.

ಆಟದ ಮೈದಾನದಲ್ಲಿ ಸಂಬಂಧಪಟ್ಟ ಯಾರೊಬ್ಬರೂ ನಿಗಾ ವಹಿಸದ ಕಾರಣ, ಕೆಲವು ಪುಂಡು ಪೋಕರಿಗಳು ಆಟದ ಮೈದಾನದ ಒಳಗೆ ತಮ್ಮ ದ್ವಿಚಕ್ರ ವಾಹನ ಮತ್ತು ಕಾರುಗಳನ್ನು ತಂದು ಅಡ್ಡಾದಿಡ್ಡಿ ಚಲಾಯಿಸಿ ವಾಕಿಂಗ್ ಮಾಡುವ ಸಾರ್ವಜನಿಕರಿಗೆ ಕಿರಿಕಿರಿ ಉಂಟು ಮಾಡುತ್ತಿದ್ದಾರೆ. ಆದ್ದರಿಂದ ಆದಷ್ಟು ಬೇಗ ಈ ಆಟದ ಮೈದಾನಕ್ಕೆ ಸಂಬಂಧಪಟ್ಟವರು ಬೀದಿದೀಪಗಳು ಉರಿಯುವಂತೆ ಮಾಡಿ ಯಾವುದೇ ಅಚಾತುರ್ಯ ಘಟನೆಗಳು ನಡೆಯದಂತೆ ಎಚ್ಚರವಹಿಸಿ, ಸಾರ್ವಜನಿಕರ ಹಿತ ಕಾಯಬೇಕು ಎಂದು ಒತ್ತಾಯಿಸುತ್ತೇನೆ.

–ಚಂದ್ರು ಮಂಡ್ಯ, ಅಧ್ಯಕ್ಷರು, ಕರ್ನಾಟಕ ಹಿತರಕ್ಷಣಾ ಒಕ್ಕೂಟ, ಮೈಸೂರು.

■ ಸರಳ ಮದುವೆಗೆ ಶಾಸಕ ಜಿ.ಟಿ. ದೇವೇಗೌಡರ ಉತ್ತೇಜನ



ಮಾನ್ಯರೆ,

ಇತ್ತೀಚಿನ ದಿನಮಾನದಲ್ಲಿ ಆರ್ಥಿಕ ಸಂಕಷ್ಟ ಇದ್ದರೂ ಜನರು ಪೈಪೋಟಿಗೆ ಇಳಿದವರಂತೆ ತಮ್ಮ ಮಕ್ಕಳ ವಿವಾಹವನ್ನು ಐಷರಾಮಿಯಾಗಿ ಮಾಡಿ ಇರುವ ಆಸ್ತಿಯನ್ನು ಮಾರಾಟ ಮಾಡಿ ಬರಿಗೈಯಲ್ಲಿ ಕುಳಿತಿರುವುದನ್ನು ಪ್ರತಿನಿತ್ಯ ನೋಡುತ್ತಿದ್ದೇವೆ. ಶಾಸಕ ಜಿ.ಟಿ. ದೇವೇಗೌಡರು ತಮ್ಮ ಮಗಳ ಮದುವೆಯನ್ನು ತಿರುಪತಿಯಲ್ಲಿ ಸರಳವಾಗಿ ಮಾಡಿದ್ದರು. ಇದೀಗ ತಮ್ಮ ಸಹೋದರನ ಮಗನ ಮದುವೆಯನ್ನು ಧರ್ಮಸ್ಥಳದಲ್ಲಿ ಸರಳವಾಗಿ ನೆರವೇರಿಸಿರುವುದು ಮೆಚ್ಚುವಂತದ್ದು.

ಎರಡು ದಶಕಗಳ ಹಿಂದೆ ಕರ್ನಾಟಕ ರಾಜ್ಯ ರೈತ ಸಂಘ ತಮ್ಮ ಮುಂದಾಳತ್ವದಲ್ಲಿ, ಕುವೆಂಪು ಅವರ ಮಂತ್ರ ಮಾಂಗಲ್ಯ ಪಠಣ ಮಾಡಿಸಿ, ಸರಳ ಮದುವೆಗಳು ಅತ್ಯಂತ ಯಶಸ್ವಿಯಾಗಿ ನೆರವೇರಲು ಮಹತ್ವವಾದ ಪಾತ್ರವನ್ನು ವಹಿಸುತ್ತಿದ್ದವು. ಆದರೆ ಇತ್ತೀಚಿನ ದಿನಗಳಲ್ಲಿ ಐಷರಾಮಿ ಮದುವೆಗೆ ಜೋತುಬಿದ್ದ ಸಾಮಾನ್ಯ ಜನತೆ ದುಂದುವೆಚ್ಚ ಮಾಡಿ ತಮ್ಮ ಜೀವನ ಸಾಗಿಸಲು ಹೆಣಗಾಡುತ್ತಿದ್ದಾರೆ. 'ಉಳ್ಳವರು ಶಿವಾಲಯ ಮಾಡುವರು ನಾನೇನ ಮಾಡಲಿ'ಎಂಬ ಮಾತಿದೆ. ಇದರಂತೆ ಇಲ್ಲದವರು ಸರಳ ಮದುವೆಯನ್ನು ಮಾಡುವುದರ ಮೂಲಕ ನೆಮ್ಮದಿಯ ಬದುಕನ್ನು ಕಟ್ಟಿಕೊಳ್ಳುವುದು ಸೂಕ್ತ.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

■ ದಾಸಪ್ಪ ವೃತ್ತದಲ್ಲಿ ಸಂಚಾರ ದಟ್ಟಣೆ ನಿವಾರಿಸಿ


ಮಾನ್ಯರೆ,

ಮೈಸೂರಿನ ದಾಸಪ್ಪ ವೃತ್ತದಲ್ಲಿ, ಕೆಆರ್‌ಎಸ್ ರಸ್ತೆ ಭಾಗ ಟೆಂಪೋಗಳು ಮತ್ತು ಆಟೋಗಳನ್ನು ರಸ್ತೆಯ ಮಧ್ಯದಲ್ಲಿಯೇ ನಿಲ್ಲಿಸುತ್ತಿದ್ದು, ಇದರಿಂದಾಗಿ ನಗರ ಸಾರಿಗೆ ಬಸ್‌ಗಳ ನಿಲುಗಡೆಗೆ ತೀವ್ರ ತೊಂದರೆಯಾಗುತ್ತಿದೆ.

ಹೆಬ್ಬಾಳು, ಜಯದೇವ ಆಸ್ಪತ್ರೆ, ಶ್ರೀರಂಗಪಟ್ಟಣ, ಕೆಆರ್‌ಎಸ್, ಗೋಕುಲಂ, ಇಲವಾಲ, ಹೂಟಗಳ್ಳಿ ಮತ್ತಿತರ ಕಡೆಗೆ ತೆರಳುವ ಪ್ರಯಾಣಿಕರು ಮತ್ತು ರೈಲು ನಿಲ್ದಾಣದಿಂದ ಬಂದು ತಮ್ಮ ಸ್ಥಳಗಳಿಗೆ ತೆರಳಬೇಕಾದ ಪ್ರಯಾಣಿಕರು ಇಲ್ಲಿ ಬಸ್ಸಿಗಾಗಿ ಕಾಯುತ್ತಾರೆ. ಆದರೆ ಟೆಂಪೋಗಳು ಮತ್ತು ಆಟೋಗಳನ್ನು ರಸ್ತೆಯ ಮಧ್ಯದಲ್ಲಿ ನಿಲ್ಲಿಸುತ್ತಿರುವುದರಿಂದ ಪ್ರಯಾಣಿಕರಿಗೆ ಬಸ್ ಹತ್ತಲು ತೊಂದರೆಯಾಗುತ್ತಿದೆ. ಕೆಲವೊಮ್ಮೆ ಸ್ಥಳಾಭಾವದ ಕಾರಣ ನಗರ ಬಸ್‌ಗಳು ಇಲ್ಲಿ ನಿಲುಗಡೆ ನೀಡದೆ ತೆರಳುತ್ತವೆ ಇಲ್ಲವೆ ಇಲ್ಲಿಂದ ಮುಂದೆ ಸ್ವಲ್ಪ ದೂರದಲ್ಲಿ ನಿಲುಗಡೆ ನೀಡುತ್ತಾರೆ. ಆಗ ಪ್ರಯಾಣಿಕರು ಬಸ್ ಹತ್ತಲು ಬಸ್ಸಿನ ಹಿಂದೆ ಓಡಬೇಕಾಗಿದ್ದು, ಈ ಸಂದರ್ಭದಲ್ಲಿ ಅನಾಹುತಗಳು ಸಂಭವಿಸುವ ಸಾಧ್ಯತೆಗಳಿವೆ. ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಈ ವೃತ್ತದಲ್ಲಿ ಟೆಂಪೋ ಮತ್ತು ಆಟೋಗಳ ನಿಲುಗಡೆ ನಿಷೇಧಿಸಬೇಕೆಂದು ಈ ಮೂಲಕ ಮನವಿ.

– ಸರೋಜಮ್ಮ, ನಿವೃತ್ತ ಶಿಕ್ಷಕರು, ಜೆ.ಪಿ.ನಗರ, ಮೈಸೂರು.

ಇಂಗ್ಲಿಷ್ ಮಾತನಾಡುವವರು ನಾಚಿಕೆಪಡಬೇಕೆನ್ನುವ ಅಮಿತ್ ಶಾ ಹೇಳಿಕೆ ಹಿಂದಿನ ಮಹಾ ಲೆಕ್ಕಾಚಾರ!



ಇಂಗ್ಲಿಷ್ ಮಾತನಾಡುವವರು ನಾಚಿಕೆಪಟ್ಟುಕೊಳ್ಳುವ ಕಾಲ ಸಮೀಪಿಸುತ್ತಿದೆ ಎಂದು ಇತ್ತೀಚೆಗೆ ಕೇಂದ್ರ ಸಚಿವ ಅಮಿತ್ ಶಾ ಹೇಳಿರುವುದು ರಾಷ್ಟ್ರೀಯ ಪತ್ರಿಕೆಯೊಂದರಲ್ಲಿ ವರದಿಯಾಗಿದೆ. (ಹಿಂದೂಸ್ತಾನ್ ಟೈಮ್ಸ್ 19 ಜೂನ್ 2025). ಭಾರತೀಯ ಭಾಷೆಗಳ ಮಹತ್ವ ಹೇಳುತ್ತಾ ಅವುಗಳ ಅಭಿವೃದ್ಧಿಯನ್ನು ತ್ವರಿತಗತಿಯಲ್ಲಿ ಮಾಡಿ, ನಾವು ಸಬಲ ರಾಷ್ಟ್ರ ನಿರ್ಮಾಣ ಮಾಡಲಿದ್ದೇವೆ ಎಂದು "ಮೈ ಬೂಂದ್ ಸ್ವಯಂ ಖುದ್ ಸಾಗರ್" ಎಂಬ ಹಿಂದಿ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಈ ಮಾತುಗಳನ್ನು ಆಡಿದ್ದಾರೆ.

ಈ ಹೇಳಿಕೆ ಮುಖ್ಯವಾದ ಪ್ರಶ್ನೆಯೊಂದನ್ನು ಎತ್ತುತ್ತದೆ. ಅದೇನೆಂದರೆ, ಒಂದು ಭಾಷೆಯ ಬಳಕೆ ಮತ್ತು ಕಲಿಕೆ ಏತಕ್ಕಾಗಿ ಎಂಬುದು. ಒಂದು ರಾಷ್ಟ್ರದ ಅಥವಾ ರಾಜ್ಯದ ಸಂಸ್ಕೃತಿ, ಇತಿಹಾಸ, ಸಾಹಿತ್ಯ ಮುಂತಾದವು ಗಳನ್ನು ಕಲಿಯುವುದು ಮತ್ತು ಕಲಿಸುವುದು ಮಾತ್ರ ಭಾಷಾ ಕಲಿಕೆಯ ಉದ್ದೇಶವಲ್ಲ, ಬದಲಾಗಿ ನಾವು ದಿನನಿತ್ಯದ ವ್ಯವಹಾರಗಳಿಗೆ ಭಾಷೆ ಯನ್ನು ಬಳಸುತ್ತೇವೆ. ಅಲ್ಲದೆ ಭಾಷೆಯನ್ನು ಸಂವಹನಕ್ಕಾಗಿ ಮತ್ತು ಬಹಳ ಮುಖ್ಯವಾಗಿ ಶಿಕ್ಷಣದ ಮಾಧ್ಯಮವಾಗಿ ಬಳಸುತ್ತೇವೆ. ಹೀಗೆ ಭಾಷೆ ಸಂವಹನ, ವ್ಯವಹಾರ ಹಾಗೂ ಜ್ಞಾನಾರ್ಜನೆಗಾಗಿ ಬಳಕೆಯಾಗುತ್ತದೆ.

ಈ ಹಿನ್ನೆಲೆಯಲ್ಲಿ ಇಂಗ್ಲಿಷ್ ಭಾಷೆಯನ್ನು ಬಳಸುವ ಜನಸಮೂಹ ನಾಚಿಕೆಪಟ್ಟುಕೊಳ್ಳಬೇಕಾದ ಸಂದರ್ಭ ಬರುತ್ತದೆ ಎಂಬ ಹೇಳಿಕೆಯ ಹಿಂದಿನ ಲೆಕ್ಕಾಚಾರಗಳೇನು ಎಂಬುದಕ್ಕೆ ಹಲವು ಕಾರಣಗಳನ್ನು ನೀಡಬಹುದು. ಮೊದಲನೆಯದು ಐತಿಹಾಸಿಕವಾಗಿ ನಮ್ಮನ್ನು ಆಳಿ, ನಮ್ಮ ಸಂಪತ್ತನ್ನು ಲೂಟಿ ಮಾಡಿದ್ದಲ್ಲದೆ ದೇಶ ಇಬ್ಭಾಗ ಮಾಡಿ ಅದನ್ನು ಕರಾಳ ಸ್ಥಿತಿಗೆ ಒಡ್ಡಿ ಹೋದ ಇಂಗ್ಲಿಷರ ಭಾಷೆ ಇದು ಎಂಬುದು. ಎರಡನೆಯದಾಗಿ ಭಾರತೀಯ ಭಾಷೆಗಳಿಗಿಂತ ಹೆಚ್ಚು ಆದ್ಯತೆ ಈ ಭಾಷೆಗೆ ದೊರಕುತ್ತಿದೆ ಎಂಬ ಆತಂಕ. ಮೂರನೆಯದು ಇದೊಂದು ಭಾಷಿಕ ರಾಷ್ಟ್ರವಾದದ (Linguistic Nationalism) ಚಿಂತನೆಯ ಪೀಠಿಕೆಯಾಗಿರಲೂಬಹುದೇ ಎನ್ನುವಂತಹುದು.

ಮೊದಲನೆಯ ಕಾರಣವನ್ನು ಪರಿಶೀಲಿಸಿ ನೋಡುವುದಾದರೆ ಭಾರತಕ್ಕೆ ಸ್ವಾತಂತ್ರ್ಯ ಬಂದಾಕ್ಷಣದಿಂದಲೇ ಈ ಭಾಷೆಯ ಬಳಕೆಯನ್ನು ನಾವು ನಿಲ್ಲಿಸಬೇಕಾಗಿತ್ತು. ಆದರೆ ಹಾಗಾಗಿಲ್ಲ. ಸ್ವಾತಂತ್ರ್ಯ ನಂತರದಲ್ಲಿ ದೇಶದ ಎಲ್ಲ ರಂಗಗಳಲ್ಲಿ ಈ ಭಾಷೆಯು ಏರುಗತಿಯಲ್ಲಿ ಬಳಕೆಯಾಗುತ್ತಿರುವುದಕ್ಕೆ ನಾವು ಮೂಕ ಸಾಕ್ಷಿಗಳಾಗಿದ್ದೇವೆ. ಅಂದರೆ ದೇಶ ದೋಚಿ ಅದನ್ನು ದುಃಸ್ಥಿತಿಗೆ ತಂದ ಇಂಗ್ಲಿಷರ ಮೇಲೆ ನಮಗೆ ಕೋಪ, ಈರ್ಷೆ ಇಲ್ಲ ಎಂದಾಯ್ತು. ಇದ್ದರೂ ಅದು ಈ ಭಾಷೆಯ ಕಾರಣಕ್ಕಾಗಿ ಅಲ್ಲ ಎಂಬುದು ಸ್ಪಷ್ಟ.

ಎರಡನೆಯದು ಈ ಭಾಷೆಗೆ ಸಲ್ಲುತ್ತಿರುವ ಆದ್ಯತೆ. ಏತಕ್ಕಾಗಿ ಜನ ಈ ಭಾಷೆಗೆ ಮಾರುಹೋಗಿದ್ದಾರೆ? ಇಂಗ್ಲಿಷ್ ಮಾತನಾಡಿದರೆ ಪ್ರಾದೇಶಿಕ ಭಾಷೆಯನ್ನಾಡುವವರ ಮೇಲೆ ಯಾಜಮಾನ್ಯ ಹೇರಬಹುದು ಎಂತಲೋ? ಅಥವಾ ಇಂಗ್ಲಿಷ್‌ನಲ್ಲಿ ಮಾತನಾಡುವುದು ಶ್ರೇಷ್ಠತೆಯ ವ್ಯಸನವೇ? ಹಾಗನಿಸುವುದಿಲ್ಲ. ಬಹು ಭಾಷಿಕ ನಮ್ಮ ದೇಶದಲ್ಲಿ ಭಿನ್ನ ಜನ ಸಮುದಾಯಗಳನ್ನು ಬೆಸೆಯುವ ಸಂಪರ್ಕ ಸೇತುವೆಯಾಗಿ ಇಂಗ್ಲಿಷ್ ಹೊರಹೊಮ್ಮಿದೆ. ಅಲ್ಲದೆ ಯಾವುದೇ ಜನಸಮುದಾಯ ಮಾತೃಭಾಷೆಯನ್ನೂ ಒಳಗೊಂಡಂತೆ ಒಂದು ಭಾಷೆಗೆ ಆದ್ಯತೆ ಕೊಡುವುದು ಅದರ ಉಪಯುಕ್ತತೆಯ ಆಧಾರದ ಮೇಲೆ. ಭಾರತದಂತಹ ಬಹುಭಾಷಿಕ ರಾಷ್ಟ್ರದಲ್ಲಿ ವ್ಯವಹರಿಸುವುದಕ್ಕಾಗಿ ಮತ್ತು ಜ್ಞಾನಾರ್ಜನೆಗಾಗಿ ಇಂಗ್ಲಿಷ್ ಅತ್ಯಂತ ಸೂಕ್ತ ಮತ್ತು ಪ್ರಾಯೋಗಿಕ ಮಾಧ್ಯಮ.

> ಇಂಗ್ಲಿಷ್ ಭಾಷೆಯನ್ನು ಬಳಸುವ ಜನ ಸಮೂಹ ನಾಚಿಕೆಪಟ್ಟುಕೊಳ್ಳಬೇಕಾದ ಸಂದರ್ಭ ಬರುತ್ತದೆ ಎಂಬ ಹೇಳಿಕೆಯ ಹಿಂದಿನ ಲೆಕ್ಕಾಚಾರಗಳೇನು ಎಂಬುದಕ್ಕೆ ಹಲವು ಕಾರಣಗಳನ್ನು ನೀಡಬಹುದು. ಮೊದಲನೆಯದು ಐತಿಹಾಸಿಕವಾಗಿ ನಮ್ಮನ್ನು ಆಳಿ, ನಮ್ಮ ಸಂಪತ್ತನ್ನು ಲೂಟಿ ಮಾಡಿದ್ದ ಲ್ಲದೆ ದೇಶ ಇಬ್ಭಾಗ ಮಾಡಿ ಅದನ್ನು ಕರಾಳ ಸ್ಥಿತಿಗೆ ಒಡ್ಡಿ ಹೋದ ಇಂಗ್ಲಿಷರ ಭಾಷೆ ಇದು ಎಂಬುದು. ಎರಡನೆಯದಾಗಿ ಭಾರತೀಯ ಭಾಷೆಗಳಿಗಿಂತ ಹೆಚ್ಚು ಆದ್ಯತೆ ಈ ಭಾಷೆಗೆ ದೊರಕುತ್ತಿದೆ ಎಂಬ ಆತಂಕ. ಮೂರನೆಯದು ಇದೊಂದು ಭಾಷಿಕ ರಾಷ್ಟ್ರವಾದದ (Linguistic Nationalism) ಚಿಂತನೆಯ ಪೀಠಿಕೆಯಾಗಿರಲೂಬಹುದೇ ಎನ್ನುವಂತಹುದು.



ಡಾ.ನಾಗೇಶ ಡೂಗನವರ
ಆಂಗ್ಲ ಭಾಷಾ ಸಹಾಯಕ ಪ್ರಾಧ್ಯಾಪಕರು
ಮೊ.7022173723

ಅಂದರೆ ಇಂಗ್ಲಿಷ್ ಒಂದು ಜ್ಞಾನದ ಭಾಷೆಯಾಗಿ ಮತ್ತು ಈ ಭಾಷಾ ಕೌಶಲ ಹೊಂದಿರುವವರಿಗೆ ಹಲವು ಸಂದರ್ಭದಲ್ಲಿ ಅನ್ನದ ಭಾಷೆಯಾಗಿ ಹಾಗೂ ಸಂವಹನಕ್ಕಾಗಿ ಅತ್ಯಂತ ಸೂಕ್ತವಾದದ್ದು ಎಂಬ ಕಾರಣಕ್ಕಾಗಿ. ಪ್ರಾದೇಶಿಕ ಭಾಷೆಗಳಿಗೆ ಇದು ಸಾಧ್ಯವಿಲ್ಲವೇ? ಇದೆ. ಆದರೆ ಅದರ ವ್ಯಾಪ್ತಿ ತುಂಬಾ ಸೀಮಿತವಾದದ್ದು. ಉದಾಹರಣೆಗೆ ಕ್ಷಣ ಕ್ಷಣಕ್ಕೂ ಭಿನ್ನ ದೇಶ ಭಾಷೆ ಸಂಸ್ಕೃತಿಗಳಲ್ಲಿ ಉತ್ಪಾದನೆಯಾಗುವ ಜ್ಞಾನವನ್ನು ಆ ಕ್ಷಣದಲ್ಲೇ ಎಲ್ಲ ಪ್ರಾದೇಶಿಕ ಭಾಷೆಗಳಲ್ಲಿ ದಕ್ಕಿಸುವುದು ಹೇಗೆ? ಹಾಗೊಂದು ವೇಳೆ ಮಾಡುವುದಾದರೆ ಅದು ಮೌಲಿಕವಾದ ಸಮಯ ಮತ್ತು ಶಕ್ತಿಯ ಅಪವ್ಯಯವಲ್ಲವೇ? ಬದಲಾಗಿ ಅದನ್ನು ಬಹು ಸಮುದಾಯಗಳು ಅರ್ಥಮಾಡಿಕೊಳ್ಳುವ ಒಂದು ಭಾಷೆಯಲ್ಲಿ ದೊರಕಿಸಿ ದರೆ ಸಾಕಲ್ಲವೇ? ಇನ್ನು ಆಡಳಿತಾತ್ಮಕ ತೊಡಕು ನಿವಾರಿಸಿ ಸುಲಭವಾಗಿ ಆಡಳಿತ ನಡೆಸುವ ದೃಷ್ಟಿಯಿಂದ ಆಯಾ ಪ್ರಾಂತ್ಯಗಳಲ್ಲಿ ಬಹುಪಾಲು ಜನಸಮುದಾಯಗಳು ಮಾತನಾಡುವ ಭಾಷೆಗಳ ಆಧಾರದ ಮೇಲೆ ದೇಶ ವಿಭಜನೆಗೊಂಡು ರಾಜ್ಯಗಳೇನೋ ಉದಯಿಸಿದವು. ಆದರೆ ಯಾವುದೇ ರಾಜ್ಯದಲ್ಲಿ ಆ ರಾಜ್ಯದ ಭಾಷೆಯೇ ಅಲ್ಲಿ ವಾಸಿಸುವ ಎಲ್ಲ ಜನಸಮು ದಾಯಗಳ ಮಾತೃಭಾಷೆಯಾಗಿಲ್ಲ. ಅಲ್ಲದೆ ವ್ಯವಹಾರ, ಶಿಕ್ಷಣ ಹಾಗೂ ಉದ್ಯೋಗಕ್ಕಾಗಿ ಭಿನ್ನ ಭಾಷಿಕರು ಎಲ್ಲಾ ರಾಜ್ಯಗಳಲ್ಲೂ ನೆಲೆಸಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯ ಭಾಷೆಯನ್ನು ಮಾತನಾಡುವ ಹಾಗೂ ಎಲ್ಲ ಭಿನ್ನ ಭಾಷಿಕರಿಗೆ ವ್ಯವಹಾರ, ಶಿಕ್ಷಣ, ಉದ್ಯೋಗ ಇತ್ಯಾದಿ ದೃಷ್ಟಿಯಿಂದ ಇಂಗ್ಲೀಷ್ ಅತ್ಯಂತ ಸಮರ್ಪಕವಾದ ಮಾಧ್ಯಮವಾಗಿ ಕಂಡಿರುವುದು ಸಹಜ. ಹಾಗಾಗಿ ಇಂಗ್ಲಿಷ್ ಬಳಸುವ ಭಿನ್ನ ಭಾಷಿಕ ಸಮುದಾಯ ನಮ್ಮ ದೇಶದಲ್ಲಿ ಬಹುದೊಡ್ಡ ಪ್ರಮಾಣದಲ್ಲಿ ಇದೆ.

ಇನ್ನು ಮೂರನೆಯ ಕಾರಣ ಇದೊಂದು ಭಾಷಿಕ ರಾಷ್ಟ್ರವಾದದ (Linguistic Nationalism) ಭಾಗವಾಗಿರುವುದೇ ಎಂದು ನೋಡಿದರೆ ಹೌದು ಎಂದು ಹೇಳಬಹುದಾದಷ್ಟು ನಿದರ್ಶನಗಳು ಕಣ್ಣಿಗೆ ರಾಚುವಂತೆ ಕಾಣುತ್ತವೆ. ನಿರಂತರವಾಗಿ ದಕ್ಷಿಣ ಭಾರತದ ರಾಜ್ಯಗಳ ಮೇಲೆ ಹಿಂದಿ ಹೇರಿಕೆ ನಡೆಯುತ್ತಲೇ ಇದೆ. ಕರ್ನಾಟಕದಲ್ಲಿ ಹಲವಾರು ಬಾರಿ ಹಿಂದಿ ಹೇರಿಕೆ ವಿರೋಧಿಸಿ ಪ್ರತಿಭಟನೆಗಳು ನಡೆದಿವೆ. ಈಗ ತಮಿಳುನಾಡಿನಲ್ಲಿ ಎನ್‌ಇಪಿ ವಿರೋಧಿಸುವ ದಲ್ಲದೆ ಹಿಂದಿ ಹೇರಿಕೆಗೆ ತೀವ್ರವಾದ ಪ್ರತಿರೋಧಗಳು ವ್ಯಕ್ತವಾಗುತ್ತಿರುವುದು ದಿನಬೆಳಗಾದರೆ ಪತ್ರಿಕೆಗಳಲ್ಲಿ ವರದಿಯಾಗುತ್ತಲೇ ಇವೆ. ಇದು ಸಾಲದೆಂಬಂತೆ ಇದೀಗ ಮಹಾರಾಷ್ಟ್ರದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ಸರ್ಕಾರ ಎನ್‌ಇಪಿಯ ತ್ರಿಭಾಷಾ ಸೂತ್ರದಡಿ ಹಿಂದಿ ಕಲಿಕೆಯನ್ನು ಕಡ್ಡಾಯ ಮಾಡಿದೆ. ಇದಕ್ಕೆ ಮರಾಠಿ ಭಾಷಿಕರು ತೀವ್ರ ವಿರೋಧ ಒಡ್ಡುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಹಿಂದಿ ಕಲಿಕೆ ಕೇವಲ ಐಚ್ಛಿಕವಾಗಿದೆ ಎಂದಿದ್ದಾರಾದರೂ ಹಿಂದಿಯೇತರ ಭಾಷೆ ಕಲಿಯಬಯಸುವ ವಿದ್ಯಾರ್ಥಿಗಳ ಸಂಖ್ಯೆ ಕನಿಷ್ಠ ಇಪ್ಪತ್ತು(20) ಇದ್ದರೆ ಮಾತ್ರ ಅಧ್ಯಾಪಕರ ನೇಮಕ ಮಾಡಲಾಗುವುದು ಎಂಬ ಷರತ್ತು ಹಾಕಿದ್ದಾರೆ.

ಈ ಎಲ್ಲಾ ಕಾರಣಗಳ ಹಿನ್ನೆಲೆಯಲ್ಲಿ ಈ ಹೇಳಿಕೆ ಭಾಷಿಕ ರಾಷ್ಟ್ರವಾದದ ಪೀಠಿಕೆಯಾಗಿ ಹೇಳಲ್ಪಟ್ಟಿರುವುದೇ ಎಂಬ ಊಹೆಯನ್ನು ಗಟ್ಟಿಗೊಳಿಸುತ್ತದೆ. ಇಂಗ್ಲೀಷ್ ಬದಲಾಗಿ, ಕಲಿಕೆ ಮತ್ತು ಸಂವಹನಕ್ಕಾಗಿ ಹಿಂದಿ ಎಲ್ಲ ರಾಜ್ಯಗಳಲ್ಲಿ ಬಳಸುವಂತಾದರೆ ಒಂದು Linguistic Nationalism ಅನ್ನು ಹುಟ್ಟುಹಾಕಿ ಆ ಮೂಲಕ ದೇಶದ ಎಲ್ಲ ರಾಜ್ಯಗಳ ಮೇಲೆ ಕೇಂದ್ರ ಆಡಳಿತಾತ್ಮಕವಾಗಿ ನಿಯಂತ್ರಣ ಹೇರಬಹುದೆಂಬ ಲೆಕ್ಕಾಚಾರವಿದ್ದಿರಬಹುದು. ಇದಕ್ಕೆ ಪ್ರಾದೇಶಿಕವಾಗಿ ವಿರೋಧ ವ್ಯಕ್ತವಾದರೂ ಉದ್ಯೋಗ, ಶಿಕ್ಷಣ ಮುಂತಾದ ಪ್ರಯೋಗಿಕ ಸಮಸ್ಯೆಗಳಿಗೆ ಪರಿಹಾರವಾಗಿ ಇನ್ನೊಂದು ಭಾಷೆ ಲಭ್ಯವಿಲ್ಲದಿದ್ದಲ್ಲಿ ಈ ಪ್ರತಿರೋಧಗಳು ಕ್ಷೀಣಿಸುತ್ತಾ ಹೋಗುತ್ತವೆ. ಆಗ ಕೇಂದ್ರ ರಾಜ್ಯಗಳ ಮೇಲೆ ಸಲೀಸಾಗಿ ಸವಾರಿ ಮಾಡಬಹುದು. ಈ ಭಾಷಿಕ ರಾಷ್ಟ್ರವಾದಕ್ಕೆ ದೊಡ್ಡ ಸವಾಲೆಂದರೆ ಇಂಗ್ಲಿಷ್ ಭಾಷೆಯ ಪ್ರಭಾವ ಮತ್ತು ಜನಪ್ರಿಯತೆ. ಹಾಗಾಗಿ ಇಂಗ್ಲಿಷ್ ಭಾಷೆಯ ಪ್ರಭಾವ, ಜನಪ್ರಿಯತೆ ಮತ್ತು ಬಳಕೆ ಕಡಿಮೆಯಾಗಬೇಕು. ಎಷ್ಟೆಂದರೆ ಇಂಗ್ಲಿಷ್ ಭಾಷೆಯಲ್ಲಿ ಮಾತನಾಡಿದರೆ ನಾಚಿಕೆಯಾಗುವಂತಾಗಬೇಕು. ಆಗ ಮಾತ್ರ ಈ ಭಾಷಿಕ ರಾಷ್ಟ್ರವಾದ ಸಾಧ್ಯ.

ಆದರೆ ಕೃತಕ ಬುದ್ಧಿಮತ್ತೆಯಂತಹ ತಂತ್ರಾಂಶದ ಸೃಷ್ಟಿ ಮಾನವ ನಿರ್ಮಿತ ಭಾಷೆಗಳನ್ನೆಲ್ಲ ಅಳಿವಿನಂಚಿಗೆ ಒಡ್ಡುವ ಎಲ್ಲ ಸಾಧ್ಯತೆಯಿರುವ ಈ ವಿಷಮ ಸಂದರ್ಭದಲ್ಲಿ, ಒಂದು ಭಾಷೆಯನ್ನು ಅವಹೇಳಿಸಿ ಇನ್ನೊಂದು ಭಾಷೆಯ ರಾಷ್ಟ್ರವಾದದ ಮೂಲಕ ದೇಶವನ್ನು ತನ್ನ ತೆಕ್ಕೆಗೆ ತೆಗೆದು ಕೊಳ್ಳಬೇಕೆಂಬ ಕೇಂದ್ರದ ಧೋರಣೆ ಅಪಕ್ವ ಮತ್ತು ಪೂರ್ವಗ್ರಹ ಪೀಡಿತ ಮನಸ್ಥಿತಿಯ ಫಲಶ್ರುತಿಯಾಗಿದೆ. ಒಟ್ಟಾರೆಯಾಗಿ ನಮ್ಮ ದೇಶ ಭಾಷೆಗಳ ಅಭಿವೃದ್ಧಿಯ ಹೆಸರಿನಲ್ಲಿ ಹೊರಜಗತ್ತಿನ ಜ್ಞಾನ ಮತ್ತು ಅರಿವಿಗೆ ಪ್ರವೇಶದ್ವಾರವಾಗಿರುವ ಇಂಗ್ಲಿಷ್ ಭಾಷೆಯ ಬಗ್ಗೆ ನೀಡಿರುವ ಈ ಬೀಸು ಹೇಳಿಕೆ ಒಂದು ಹಿಮ್ಮುಖ ಚಲನೆಯಂತೆ ಭಾಸವಾಗುತ್ತದೆ.

ಬಿಜೆಪಿ ಅಧ್ಯಕ್ಷರ ಆಯ್ಕೆಗೂ ಮುನ್ನ ಆರ್‌ಎಸ್‌ಎಸ್ ಪ್ರಾಂತ ಪ್ರಚಾರಕ್ ವಾರ್ಷಿಕ ಸಭೆ ದಿನಾಂಕ ಘೋಷಣೆ

ನವದೆಹಲಿ: ಬಿಜೆಪಿ ತನ್ನ ಹೊಸ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆಗೆ ಸಜ್ಜಾಗುತ್ತಿರುವಂತೆಯೇ, ರಾಷ್ಟ್ರೀಯ ಸ್ವಯಂ ಸೇವಕ ಸಂಘ(ಆರ್‌ಎಸ್‌ಎಸ್) ಈ ವರ್ಷ ಜುಲೈ 4ರಿಂದ 6ರವರೆಗೆ ದೆಹಲಿಯಲ್ಲಿ ತನ್ನ ವಾರ್ಷಿಕ ರಾಷ್ಟ್ರ ಮಟ್ಟದ ಪ್ರಾಂತ ಪ್ರಚಾರಕ್(ಪ್ರಾಂತೀಯ ಉಸ್ತುವಾರಿ ಪ್ರಚಾರಕ್) ಸಭೆ ನಡೆಸಲು ನಿರ್ಧರಿಸಿದೆ.

ದೆಹಲಿಯಲ್ಲಿರುವ ಆರ್‌ಎಸ್‌ಎಸ್ ಪ್ರಧಾನ ಕಚೇರಿ 'ಕೇಶವ್ ಕುಂಜ್'ದಲ್ಲಿ ವಾರ್ಷಿಕ ಸಭೆ ನಡೆಯಲಿದೆ. ಇದನ್ನು ಅಧಿಕೃತವಾಗಿ ದೃಢಪಡಿಸಿದ ಆರ್‌ಎಸ್‌ಎಸ್ ಅಖಿಲ ಭಾರತೀಯ ಪ್ರಚಾರ ಪ್ರಮುಖ್ (ಅಖಿಲ ಭಾರತ ಪ್ರಚಾರ ಮುಖ್ಯಸ್ಥ) ಸುನಿಲ್ ಅಂಬೇಕರ್ ಅವರು, 'ಎಲ್ಲಾ ಪ್ರಾಂತ-ಪ್ರಚಾರಕರು, ಸಹ-ಪ್ರಾಂತ ಪ್ರಚಾರಕರು ಮತ್ತು ಕ್ಷೇತ್ರ (3-4 ಪ್ರಾಂತ್ಯಗಳ ಪ್ರಾದೇಶಿಕ ಘಟಕ) ಪ್ರಚಾರಕರು ಮತ್ತು ಸಹ-ಕ್ಷೇತ್ರ ಪ್ರಚಾರಕರು ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ' ಎಂದು ಹೇಳಿದ್ದಾರೆ.



ಆರ್‌ಎಸ್‌ಎಸ್‌ನ ಸಾಂಸ್ಥಿಕ ರಚನೆಯು 11 ಪ್ರದೇಶಗಳು ಮತ್ತು 46 ಪ್ರಾಂತಗಳನ್ನು ಒಳಗೊಂಡಿದೆ. 'ಮುಂಬರುವ ವರ್ಷದ ಅನುಷ್ಠಾನ ಯೋಜನೆಯ ಕುರಿತು ಚರ್ಚಿಸಲು ಇದು ಒಂದು ಪ್ರಮುಖ ಸಭೆ ಎಂದು ಪರಿಗಣಿಸಲಾಗಿದೆ' ಎಂದು ಅಂಬೇಕರ್ ತಿಳಿಸಿದ್ದಾರೆ.

ಆರ್‌ಎಸ್‌ಎಸ್ ಶತಮಾನೋತ್ಸವ ವರ್ಷದ(2025-26) ಕಾರ್ಯಕ್ರಮಗಳು ಈ ವರ್ಷದ ಅಕ್ಟೋಬರ್ 2ರಂದು ಬರುವ ವಿಜಯದಶಮಿಯಿಂದ ಪ್ರಾರಂಭವಾಗುತ್ತವೆ ಮತ್ತು ಮುಂದಿನ ವರ್ಷದ 2026ರ ವಿಜಯದಶಮಿಯವರೆಗೆ ಮುಂದುವರಿಯುತ್ತವೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ದೆಹಲಿಯಲ್ಲಿ ನಡೆಯುವ ಆರ್‌ಎಸ್‌ಎಸ್ ಸಭೆಯಲ್ಲಿ ಆರ್‌ಎಸ್‌ಎಸ್ ಮುಖ್ಯಸ್ಥ ಡಾ.ಮೋಹನ್ ಭಾಗವತ್, ಸರ್ಕಾರ್ಯವಾಹ ದತ್ತಾತ್ರೇಯ ಹೊಸಬಾಳೆ ಮತ್ತು ಡಾ.ಕೃಷ್ಣ ಗೋಪಾಲ್, ಸಿಆರ್ ಮುಕುಂದ್, ಅರುಣ್‌ಕುಮಾರ್, ರಾಮದತ್, ಅತುಲ್ ಲಿಮಾಯೆ ಮತ್ತು ಅಲೋಕ್ ಕುಮಾರ್ ಸೇರಿದಂತೆ ಎಲ್ಲಾ ಸಹ-ಸರ್ಕಾರ್ಯವಾಹರು, ಎಲ್ಲಾ ರಾಷ್ಟ್ರೀಯ ಮಟ್ಟದ ಕಾರ್ಯ ವಿಭಾಗ ಪ್ರಮುಖ್‌ಗಳು (ವರ್ಟಿಕಲ್ ಇನ್-ಚಾರ್ಜ್‌ಗಳು) ಮತ್ತು ಇತರ ಕಾರ್ಯಕಾರಿ ಮಂಡಳಿ ಸದಸ್ಯರು ಭಾಗವಹಿಸಲಿದ್ದಾರೆ. ಏತನ್ಮಧ್ಯೆ, ಬಿಜೆಪಿ, ಮೂಲಗಳು ಹೇಳುವಂತೆ ಪಕ್ಷದ ಹೊಸ ರಾಷ್ಟ್ರೀಯ ಅಧ್ಯಕ್ಷರಾಗಿ ಒಮ್ಮತದ ಅಭ್ಯರ್ಥಿಯ ಹೆಸರನ್ನು ಸಹ ಈ ವೇಳೆ ಘೋಷಿಸುವ ಸಾಧ್ಯತೆಯಿದೆ.

ತಾಂತ್ರಿಕ ದೋಷ: ಜಮ್ಮುವಿಗೆ ತೆರಳಿದ್ದ ಏರ್ ಇಂಡಿಯಾ ವಿಮಾನ ಲ್ಯಾಂಡ್ ಆಗದೆ ದೆಹಲಿಗೆ ವಾಪಸ್

ನವದೆಹಲಿ: ದೆಹಲಿಯಿಂದ ಜಮ್ಮು ಮೂಲಕ ಶ್ರೀನಗರಕ್ಕೆ ಹಾರುತ್ತಿದ್ದ ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನ ಸೋಮವಾರ ಮಧ್ಯಾಹ್ನ ಅಲ್ಲಿ ಲ್ಯಾಂಡ್ ಆಗದೆ ವಾಪಸ್ ರಾಷ್ಟ್ರ ರಾಜಧಾನಿ ವಿಮಾನ ನಿಲ್ದಾಣಕ್ಕೆ ಮರಳಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ವಿಮಾನ ದೆಹಲಿಗೆ ಮರಳಲು ತಾಂತ್ರಿಕ ದೋಷ ಕಾರಣ ಎಂದು ತಕ್ಷಣಕ್ಕೆ ತಿಳಿದು ಬಂದಿದೆ ಎಂದು ಅವರು ಹೇಳಿದ್ದಾರೆ.

ವಿಮಾನವು ರಾಷ್ಟ್ರ ರಾಜಧಾನಿಗೆ ಮರಳುವ ಮೊದಲು ವಿಮಾನ ನಿಲ್ದಾಣವನ್ನು ಹಲವು ಬಾರಿ ಸುತ್ತುವರೆದಿದೆ ಎಂದು ವರದಿಯೊಂದು ತಿಳಿಸಿದೆ. ಏರ್ ಇಂಡಿಯಾ ವಿಮಾನ IX-2564 ಇಂದು ಮಧ್ಯಾಹ್ನ ಶ್ರೀನಗರಕ್ಕೆ ಹೊರಡುವ ಮುನ್ನ ಜಮ್ಮುವಿನಲ್ಲಿ ಲ್ಯಾಂಡ್ ಆಗಬೇಕಿತ್ತು. ಆದರೆ ಅದರ ಪೈಲಟ್ ವಿಮಾನ ಇಳಿಸದೆ ದೆಹಲಿಗೆ ಹಿಂತಿರುಗಲು ನಿರ್ಧರಿಸಿದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವರದಿಗಳ ಪ್ರಕಾರ, ಇಳಿಯಲು ರನ್‌ವೇ ಸ್ಪಷ್ಟವಾಗಿತ್ತು. ಆದರೆ ಪೈಲಟ್ ವಿಮಾನ ಲ್ಯಾಂಡ್ ಆಗುವುದಿಲ್ಲ ಮತ್ತು ಬದಲಾಗಿ ದೆಹಲಿಗೆ ಹಿಂತಿರುಗುತ್ತಿದೆ ಎಂದು ಘೋಷಿಸಿದರು. ಹವಾಮಾನ ಮತ್ತು ರನ್‌ವೇ ಸ್ಪಷ್ಟವಾಗಿತ್ತು. ಆದರೆ ಪೈಲಟ್‌ಗೆ ಸೂಕ್ತವಾದ ಲ್ಯಾಂಡಿಂಗ್ ಪ್ರದೇಶ ಕಂಡುಹಿಡಿಯಲು ಸಾಧ್ಯವಾಗಲಿಲ್ಲ ಎಂದು ಪಿಟಿಐ ಮೂಲಗಳನ್ನು ಉಲ್ಲೇಖಿಸಿ ವರದಿ ಮಾಡಿದೆ.

ಕಂಡ ಕಂಡಲ್ಲಿ ಹೊಗೆಬಿಟ್ಟರೆ ದಂಡದ ಬರೆ ಕಾದಿದೆ!

ಮೈಸೂರು,ಜೂ.23(ಎಸ್‌ಪಿಎನ್)–ಸಾರ್ವಜನಿಕ ಸ್ಥಳಗಳಲ್ಲಿ, ಟೀ ಅಂಗಡಿಗಳ ಮುಂಭಾಗ ಗುಂಪು ಗುಂಪಾಗಿ ವಾಹನ ನಿಲ್ಲಿಸಿಕೊಂಡು ಏರುದನಿಯಲ್ಲಿ ಮಾತನಾಡುವುದು, ಅವಾಚ್ಯ ಶಬ್ದ ಪ್ರಯೋಗ, ಸಿಗರೇಟ್ ಸೇದಿ ಬೇಕಾಬಿಟ್ಟಿ ಹೊಗೆ ಬಿಡುವವರು ಹೆಚ್ಚಾಗುತ್ತಿದ್ದಾರೆ. ಸರ್ಕಾರಿ ಕಚೇರಿಗಳ ಬಳಿ ಕಸದ ರಾಶಿ ಬಿದ್ದಿರುವುದನ್ನು ವೀಡಿಯೋ ಮಾಡಿ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಕಳುಹಿಸಲು ಮುಂದಾಗಿದ್ದಾರೆ.

ಮೌಖಿಕ ಆದೇಶವೊಂದು ಪೊಲೀಸ್ ಇಲಾಖೆಯಿಂದ ಹೊರಬಿದ್ದಿದ್ದು, ಮೈಸೂರಲ್ಲಿ ಪೇದೆಗಳು ನಿತ್ಯ ತಾವು ಕರ್ತವ್ಯ ನಿರ್ವಹಿಸುವ ಸ್ಥಳದಲ್ಲಿ ಕಸ-ಕಡ್ಡಿ, ಪ್ಲಾಸ್ಟಿಕ್ ತ್ಯಾಜ್ಯಗಳ ರಾಶಿ ಇದ್ದಲ್ಲಿ ಹಾಗೂ ಫುಟ್‌ಪಾತ್ ಟೀ ಅಂಗಡಿಗಳ ಮುಂದೆ ಜನ ಗುಂಪು ಗುಂಪಾಗಿ ಸೇರಿ ಧೂಮಪಾನ ಮಾಡಿ, ಹೊಗೆ ಬಿಟ್ಟು ಇತರರಿಗೆ ತೊಂದರೆ ಕೊಡುವವರ ವೀಡಿಯೋ ಇಲ್ಲವೇ ಫೋಟೋ ತೆಗೆದು ಆಯಾಯ ಠಾಣಾ ಇನ್ಸ್‌ಪೆಕ್ಟರ್‌ಗಳ ಮೊಬೈಲ್‌ಗೆ ಕಳುಹಿಸಬೇಕು. ಅವರ ಆದೇಶದಂತೆ ಸಂಬಂಧಪಟ್ಟವರಿಗೆ ದಂಡ ವಿಧಿಸಬಹುದಾಗಿದೆ. ಇದರ ಅಂಗವಾಗಿ ಲಕ್ಷ್ಮೀಪುರಂ ಠಾಣೆಯ ಪೇದೆಯೊಬ್ಬರು ಹಳೆ ಡಿಸಿ ಕಚೇರಿ ಸುತ್ತಮುತ್ತ ಸಿಗರೇಟ್ ತುಂಡು, ಪ್ಲಾಸ್ಟಿಕ್ ತ್ಯಾಜ್ಯದ ರಾಶಿಗಳ ಫೋಟೋ ತೆಗೆದು ರವಾನಿಸುತ್ತಿದ್ದರು. ಈ ಬಗ್ಗೆ ಪ್ರಶ್ನಿಸಿದ ಮೈಸೂರು ಮಿತ್ರನಿಗೆ ಪ್ರತಿಕ್ರಿಯೆ ನೀಡಿ, ಮೈಸೂರಿನ ಎಲ್ಲಾ ಠಾಣೆಗಳಿಗೂ ಮೌಖಿಕ ಆದೇಶ ರವಾನೆಯಾಗಿದೆ ಎಂದರು.



ಕಸದ ರಾಶಿಯನ್ನು ಪೊಲೀಸ್ ಪೇದೆಯೊಬ್ಬರು ವೀಡಿಯೋ ಮಾಡುತ್ತಿರುವ ದೃಶ್ಯ.

ಹಳೆ ಜಿಲ್ಲಾಧಿಕಾರಿಗಳ ಕಚೇರಿ ಸುತ್ತಮುತ್ತ ಟೀ ಅಂಗಡಿಗಳ ಮುಂದೆ ಅಡ್ಡಾದಿಡ್ಡಿಯಾಗಿ ವಾಹನ ನಿಲ್ಲಿಸದಂತೆ ದೇವರಾಜ ಸಂಚಾರಿ ಪೊಲೀಸ್ ಠಾಣೆಯ ಎಎಸ್‌ಐಯೊಬ್ಬರು ಎಚ್ಚರಿಕೆ ನೀಡಿ, ದ್ವಿಚಕ್ರ ವಾಹನಗಳನ್ನು ತೆರವುಗೊಳಿಸಿದರು. ಮೈಸೂರಿನ ಪ್ರಮುಖ ಸ್ಥಳಗಳು, ಪ್ರವಾಸಿ ಸ್ಥಳಗಳು, ಸರ್ಕಾರಿ ಕಚೇರಿ ಕಟ್ಟಡಗಳ ಸುತ್ತಮುತ್ತ ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹಣೆ, ಫುಟ್‌ಪಾತ್ ಒತ್ತುವರಿ, ಟೀ ಅಂಗಡಿಗಳ ಮುಂದೆ ಧೂಮಪಾನ ಮಾಡಿ, ಪಾದಚಾರಿಗಳಿಗೆ ತೊಂದರೆ ನೀಡುವವರ ಫೋಟೋ ತೆಗೆದು ರವಾನಿಸುವಂತೆ ಆದೇಶ ನೀಡಲಾಗಿದ್ದು, ಇದರನ್ವಯ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಬಿಜೆಪಿ ನೂತನ ಜಿಲ್ಲಾಧ್ಯಕ್ಷರಾಗಿ ಕುಂಬ್ರಳ್ಳಿ ಸುಬ್ಬಣ್ಣ ಅಧಿಕಾರ ಸ್ವೀಕಾರ

ಪರಿಣಾಮಕಾರಿಯಾಗಿ ಪಕ್ಷ ಸಂಘಟನೆ ಸಂಕಲ್ಪ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಸೋಮವಾರ ಬಿಜೆಪಿ ನೂತನ ಜಿಲ್ಲಾಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಕುಂಬ್ರಳ್ಳಿ ಸುಬ್ಬಣ್ಣ ಅವರಿಗೆ ನಿರ್ಗಮಿತ ಅಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ ಅವರು ಬಿಜೆಪಿ ಬಾವುಟ ನೀಡಿ, ಅಧಿಕಾರ ಹಸ್ತಾಂತರ ಮಾಡಿದರು. ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ನಗರಾಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಶಾಸಕರಾದ ಎನ್.ಮಹೇಶ್, ಸಿ.ರಮೇಶ್, ವಸ್ತುಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹೇಮಂತ್‌ಕುಮಾರ್, ಮಾಜಿ ಉಪ ಮೇಯರ್ ಶೈಲೇಂದ್ರ ಇನ್ನಿತರರಿದ್ದರು.

ಮೈಸೂರು, ಜೂ.23(ಬಿಎಲ್‌ಯು)– ಮೈಸೂರು ಜಿಲ್ಲಾ ಬಿಜೆಪಿ ನೂತನ ಅಧ್ಯಕ್ಷರಾಗಿ ಕುಂಬ್ರಳ್ಳಿ ಸುಬ್ಬಣ್ಣ ಸೋಮವಾರ ಅಧಿಕಾರ ಸ್ವೀಕರಿಸಿದರು.

ನಗರದ ಬಿಜೆಪಿ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನಿರ್ಗಮಿತ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಅವರು ಸುಬ್ಬಣ್ಣ ಅವರಿಗೆ ಬಿಜೆಪಿ ಧ್ವಜವನ್ನು ಹಸ್ತಾಂತರಿಸುವ ಮೂಲಕ ಅಧಿಕಾರ ಹಸ್ತಾಂತರ ಮಾಡಿದರು. ಈ ವೇಳೆ ಮಾತನಾಡಿದ ಸುಬ್ಬಣ್ಣ, ಬಿಜೆಪಿ ವರಿಷ್ಠರು ನನಗೆ ಜವಾಬ್ದಾರಿಯುತ ಸ್ಥಾನ ನೀಡಿದ್ದಾರೆ. ಹಾಗಾಗಿ ಜಿಲ್ಲೆಯಲ್ಲಿ ಪಕ್ಷವನ್ನು ಸಂಘಟನೆ ಮಾಡುತ್ತೇನೆ. ಇದಕ್ಕೆ ಪ್ರತಿಯೊಬ್ಬರು ಸಹಕಾರ ನೀಡುವಂತೆ ಕೋರಿದರು.

ಇದೇ ವೇಳೆ ಮಾತನಾಡಿದ ಎಲ್.ಆರ್. ಮಹದೇವಸ್ವಾಮಿ, ನನ್ನ ಅಧಿಕಾರಾವಧಿಯಲ್ಲಿ ಪಕ್ಷವನ್ನು ಸಂಘಟಿಸಲು ಶಕ್ತಿ ಮೀರಿ ಪ್ರಯತ್ನಿಸಿದ್ದೇನೆ. ಈಗ ನೂತನ ಅಧ್ಯಕ್ಷರಾದ ಸುಬ್ಬಣ್ಣ ಅವರಿಗೆ ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ನಗರಾಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಶಾಸಕರಾದ ಎನ್.ಮಹೇಶ್, ಸಿ.ರಮೇಶ್, ವಸ್ತುಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹೇಮಂತ್ ಕುಮಾರ್, ಮಾಜಿ ಉಪ ಮೇಯರ್ ಶೈಲೇಂದ್ರ ಹಾಗೂ ಇತರರು ಕಾರ್ಯಕ್ರಮದಲ್ಲಿ ಹಾಜರಿದ್ದರು.

ಮಾಜಿ ಶಾಸಕ ಹರ್ಷವರ್ಧನ್ ಗೈರು

ಮೂಲತಃ ನಂಜನಗೂಡಿನವರಾದ ಸುಬ್ಬಣ್ಣ ಅವರು ದಿವಂಗತ ಮಾಜಿ ಕೇಂದ್ರ ಸಚಿವ ವಿ.ಶ್ರೀನಿವಾಸ ಪ್ರಸಾದ್ ಅವರ ಕಟ್ಟಾ ಅಭಿಮಾನಿ. ಆದರೆ ಇಂದಿನ ಕಾರ್ಯಕ್ರಮದಲ್ಲಿ ನಂಜನಗೂಡಿನ ಮಾಜಿ ಶಾಸಕರೂ ಆದ ಶ್ರೀನಿವಾಸ ಪ್ರಸಾದ್ ಅವರ ಅಳಿಯ ಹರ್ಷವರ್ಧನ್ ಗೈರು ಹಾಜರಾಗಿದ್ದರು. ಈ ಬಗ್ಗೆ ಪತ್ರಕರ್ತರಿಗೆ ಸ್ಪಷ್ಟನೆ ನೀಡಿದ ಸುಬ್ಬಣ್ಣ ಅವರು, ಶ್ರೀನಿವಾಸ ಪ್ರಸಾದ್ ಅವರ ಕುಟುಂಬದಲ್ಲಿ ನಾನು ಒಬ್ಬ. ನಮ್ಮ ಅವರ ಸಂಬಂಧ ಚೆನ್ನಾಗಿದೆ. ಹರ್ಷವರ್ಧನ್ ಕಾರ್ಯ ನಿಮಿತ್ತ ಪ್ರವಾಸಕ್ಕೆ ಹೋಗಿದ್ದಾರೆ. ಹಾಗಾಗಿ ಗೈರು ಹಾಜರಾಗಿದ್ದಾರೆ. ಮೊನ್ನೆಯೇ ಹರ್ಷವರ್ಧನ್ ಅವರನ್ನು ಭೇಟಿ ಮಾಡಿದ್ದು, ಶುಭ ಕೋರಿದ್ದರು ಎಂದು ತಿಳಿಸಿದರು. ಬಿಜೆಪಿ ಜಿಲ್ಲಾಧ್ಯಕ್ಷನಾದ ಬಳಿಕ ಜವಾಬ್ದಾರಿ ಹೆಚ್ಚಾಗಿದೆ. ಜಿಲ್ಲೆಯಲ್ಲಿ ಪಕ್ಷ ಸಂಘಟನೆ ಮಾಡಬೇಕಿದೆ. ಈ ಹಿಂದೆ ಕೆಲವು ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಸಾಧಿಸಿದೆ. ಮುಂದಿನ ವಿಧಾನಸಭಾ ಕ್ಷೇತ್ರದ ಚುನಾವಣೆ ವೇಳೆ ಜಿಲ್ಲೆಯ ಐದು ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಸಾಧಿಸಲಿದೆ ಎಂದು ಸುಬ್ಬಣ್ಣ ವಿಶ್ವಾಸ ವ್ಯಕ್ತಪಡಿಸಿದರು.

ಜಮೀರ್ ಅಹಮದ್ ರಾಜೀನಾಮೆ ಪಡೆಯುವ ಧೈರ್ಯ ಇಲ್ಲದಿದ್ದರೆ ಅವರನ್ನೇ ಸಿಎಂ ಮಾಡಲಿ

ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಮಾಜಿ ಸಚಿವ ಎನ್.ಮಹೇಶ್ ಸಲಹೆ

ಮೈಸೂರು, ಜೂ.23(ಬಿಎಲ್‌ಯು) – ವಸತಿ ಯೋಜನೆಯಲ್ಲಿ ಭ್ರಷ್ಟಾಚಾರ ನಡೆದಿರುವ ಹಿನ್ನೆಲೆಯಲ್ಲಿ ವಸತಿ ಸಚಿವ ಜಮೀರ್ ಅಹಮ್ಮದ್ ಅವರಿಂದ ರಾಜೀನಾಮೆ ಪಡೆಯುವ ಧೈರ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಲ್ಲವೆಂದರೆ ಅವರನ್ನೇ ಸಿಎಂ ಮಾಡಲಿ ಎಂದು ಮಾಜಿ ಸಚಿವ ಎನ್.ಮಹೇಶ್ ಸಲಹೆ ನೀಡಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ಬಿ.ಆರ್.ಪಾಟೀಲ್ ಅವರ ಸಮಾಜವಾದಿ ಹಿನ್ನೆಲೆ ಇರುವ ಹಿರಿಯ ಶಾಸಕ. ಆದರೆ ಅವರ ಆರೋಪವನ್ನು ಸಿದ್ದರಾಮಯ್ಯ ಅವರಾಗಲೀ ಅಥವಾ ಡಿ.ಕೆ. ಶಿವಕುಮಾರ್ ಅವರಾಗಲೀ ಗಂಭೀರವಾಗಿ ಪರಿಗಣಿಸಿಲ್ಲ. ಬಹುತೇಕ ಹಿರಿಯ ಶಾಸಕರು ಸರ್ಕಾರದ ವಿರುದ್ಧ ಅಸಮಾಧಾನಗೊಂಡಿದ್ದು, ಈ ಸರ್ಕಾರ ಯಾವಾಗ ಬೀಳುವುದೋ ಗೊತ್ತಿಲ್ಲ ಎಂದರು.

ಹಗರಣದ ಸರಮಾಲೆ ಹೊತ್ತಿರುವ ಇದು ಅರೆಬೆಂದ ಸರ್ಕಾರವಾಗಿದೆ. ದಿನ ಕಳೆದಂತೆ ಒಂದೊಂದೇ ಹಗರಣ ಬಯಲಾಗುತ್ತಿದೆ. ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರಿಂದಲೇ ಭ್ರಷ್ಟಾಚಾರ ಬಯಲಿಗೆ ಬರುತ್ತಿದೆ. ಈ ಸರ್ಕಾರಕ್ಕೆ ಗೌರವ, ನೈತಿಕತೆ ಇದ್ದಿದ್ದರೆ ಇಷ್ಟೊತ್ತಿಗೆ ಜಮೀರ್ ರಾಜೀನಾಮೆ ಪಡೆಯಬೇಕಿತ್ತು ಎಂದು ಮಹೇಶ್ ಅಭಿಪ್ರಾಯಪಟ್ಟರು.

ಕಾಂಗ್ರೆಸ್ ಸರ್ಕಾರದಲ್ಲಿ ಗ್ಯಾರಂಟಿ ಯೋಜನೆ ಬಿಟ್ಟರೆ, ಅಭಿವೃದ್ಧಿ ಶೂನ್ಯವಾಗಿದೆ. ಮುಂದಿನ ಚುನಾವಣೆಯಲ್ಲೂ ಗ್ಯಾರಂಟಿ ಯೋಜನೆಯಿಂದಲೇ ಅಧಿಕಾರ ಸಿಗುತ್ತದೆ ಎಂಬ ಭ್ರಮೆಯಲ್ಲಿದ್ದಾರೆ. ಆದರೆ ಸರ್ಕಾರದ ಅವಧಿಯಲ್ಲಿ ಆಗಿರುವ ಹಗರಣಗಳು ತಮಗೆ ಹುರುಳಾಗಲಿದೆ ಎಂಬ ಕಟುಸತ್ಯ ಅವರಿಗೆ ಗೊತ್ತಿಲ್ಲ ಎಂದರು.

ಬಿಹಾರ ಹಾಗೂ ಉತ್ತರಪ್ರದೇಶದ ಚುನಾವಣಾ ಖರ್ಚಿಗೆ ಕಾಂಗ್ರೆಸ್ ಹೈಕಮಾಂಡ್‌ಗೆ ಹಣ ಬೇಕಿದೆ. ಆದ ಕಾರಣ ಕರ್ನಾಟಕವನ್ನು ಹಣ ಪಡೆಯುವ ಎಟಿಎಂ ಆಗಿ ಮಾಡಿಕೊಂಡಿದ್ದು, ಲೂಟಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಪ್ರಬಲ ಸಮುದಾಯಗಳಿಗೆ ಹೆದರಿ ಸಿದ್ದರಾಮಯ್ಯ ಅಹಿಂದ ವರ್ಗಕ್ಕೆ ಅನ್ಯಾಯ ಮಾಡುತ್ತಿದ್ದಾರೆ. ಕೇಂದ್ರ ಸರ್ಕಾರ ಜನಗಣತಿ ಜೊತೆಗೆ ಜಾತಿ ಗಣತಿ ಮಾಡುತ್ತಿರುವ ಹಿನ್ನೆಲೆ ರಾಜ್ಯ ಸರ್ಕಾರದಿಂದ ಪ್ರತ್ಯೇಕ ಜಾತಿಗಣತಿ ಅಗತ್ಯವಿಲ್ಲ ಎಂದರು.

ಈ ಸರ್ಕಾರಕ್ಕೆ ಪರಿಶಿಷ್ಟ ಜಾತಿ ಒಳ ಮೀಸಲಾತಿ ಜಾರಿ ಮಾಡಲು ಇಷ್ಟವಿಲ್ಲ. ಆದ ಕಾರಣ ಸಮೀಕ್ಷೆಯ ಹೆಸರಿನಲ್ಲಿ ಮೀಸಲಾತಿ ಜಾರಿ ಮುಂದೂಡುತ್ತಿದೆ. ಡಿ.ಕೆ.ಶಿವಕುಮಾರ್ ಅವರಿಗೆ ಸಿದ್ದರಾಮಯ್ಯ ಅಧಿಕಾರ ಹಸ್ತಾಂತರ ಮಾಡುತ್ತಾರೆಂದು ಅವರ ಬೆಂಬಲಿಗರು ಹೇಳುತ್ತಿದ್ದಾರೆ. ಆದರೆ ಈ ಕಚ್ಚಾಟದ ಬೆಳವಣಿಗೆ ನೋಡಿದರೆ ಯಾವ ಕ್ಷಣದಲ್ಲಾದರೂ ಸರ್ಕಾರ ಬೀಳಬಹುದು ಎಂದು ಮಹೇಶ್ ಭವಿಷ್ಯ ನುಡಿದರು.

ಪ.ಜಾತಿ ಒಳ ಮೀಸಲಾತಿ ಗಾಡಿಯ ಮುಂದೆ ಎಳೆಯುವ ಬದಲು ಹಿಂದೆ ತಳ್ಳುತ್ತಿದ್ದಾರೆ!

ಮಾಜಿ ಶಾಸಕ ಸಿ.ರಮೇಶ್ ಆರೋಪ

ಮೈಸೂರು, ಜೂ.23(ಬಿಎಲ್‌ಯು) –ರಾಜ್ಯ ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಜಾರಿ ಗಾಡಿಯನ್ನು ಮುಂದೆ ಎಳೆಯುವ ಬದಲು ಹಿಂದಕ್ಕೆ ತಳ್ಳುತ್ತಿದ್ದಾರೆ ಎಂದು ಮಾಜಿ ಎಂಎಲ್‌ಸಿ ಸಿ.ರಮೇಶ್ ದೂರಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ಸಿದ್ದರಾಮಯ್ಯ ಆಡಳಿತ ಭ್ರಷ್ಟಾಚಾರದಿಂದ ಕೊಳೆತು ನಾರುತ್ತಿದ್ದು, ಸಿದ್ದರಾಮಯ್ಯ ಅವರ ಜನಪ್ರಿಯತೆ ಪಾತಾಳಕ್ಕೆ ಇಳಿದಿದೆ ಎಂದು ಆಪಾದಿಸಿದರು. ಸಮಾಜವಾದಿ ಎಂದು ಹೇಳಿಕೊಳ್ಳುವ ಸಿದ್ದರಾಮಯ್ಯ ಅವರಿಗೆ ನೈತಿಕತೆಯೇ ಇಲ್ಲದಂತಾಗಿದೆ. ಸರ್ಕಾರದಲ್ಲಿ ಸಚಿವರ ಮೇಲಿನ ಹಿಡಿತ ಅವರ ಕೈ ತಪ್ಪಿದೆ. ವಸತಿ ಸಚಿವ ಜಮೀರ್ ಅಹಮ್ಮದ್ ಖಾನ್ ಅವರು ಮೈಸೂರಿನ ಹೆಚ್.ಡಿ.ಕೋಟೆಯಲ್ಲಿ ರೆಸಾರ್ಟ್ ನಿರ್ಮಾಣ ಮಾಡಿದ್ದಾರಂತೆ. ನನ್ನ 50 ವರ್ಷದ ರಾಜಕಾರಣದಲ್ಲಿ ಇಂತಹ ಭ್ರಷ್ಟ ಸರ್ಕಾರ ನಾನು ನೋಡಿಲ್ಲ ಎಂದು ಸಿ.ರಮೇಶ್ ದೂರಿದರು.

ನಾಳೆ ಸ್ವಚ್ಛತಾ ಕಾರ್ಯಕ್ರಮ

ಮೈಸೂರು,ಜೂ.23–ಸರ್ ಎಂ.ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ, ಆಷಾಢ ಮಾಸದ ಪ್ರಯುಕ್ತ ಜೂ.25ರಂದು ಬೆಳಗ್ಗೆ 6.30ಕ್ಕೆ ಚಾಮುಂಡಿ ಬೆಟ್ಟದ ಪಾದದ ಬಳಿಯಿಂದ 1101 ಮೆಟ್ಟಿಲುಗಳ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮಕ್ಕೆ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಕೆ.ಆರ್.ಬ್ಯಾಂಕ್ ಅಧ್ಯಕ್ಷ ಬಸವರಾಜು (ಬಸಪ್ಪ) ಚಾಲನೆ ನೀಡಲಿದ್ದಾರೆ.

ವಿದ್ಯಾರ್ಥಿನಿಲಯಕ್ಕೆ ಅರ್ಜಿ ಆಹ್ವಾನ

ಮೈಸೂರು, ಜೂ.23– ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಟಿ.ನರಸೀಪುರ ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾತಿ, ಪ.ವರ್ಗದ ಪಿಯುಸಿ, ಐ.ಟಿ.ಐ ಮತ್ತು ಡಿಪ್ಲೊಮಾ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004, 8050770005 ಸಂಪರ್ಕಿಸಬಹುದು.

ಸುಳ್ಳು ಸುದ್ದಿ, ದ್ವೇಷ ಭಾಷಣಕ್ಕೆ ಮೂರು ವರ್ಷ ಜೈಲು ಶಿಕ್ಷೆ!

ಹೊಸ ವಿಧೇಯಕ ತರಲು ರಾಜ್ಯ ಸರ್ಕಾರ ನಿರ್ಧಾರ



ಬೆಂಗಳೂರು: ರಾಜ್ಯದಲ್ಲಿ ಡಿಜಿಟಲ್ ವೇದಿಕೆಗಳಲ್ಲಿ ಸುಳ್ಳು ಸುದ್ದಿ, ದ್ವೇಷ ಭಾಷಣ ತಡೆಗೆ ಹೊಸ ಕಾನೂನು ಜಾರಿಗೆ ರಾಜ್ಯ ಸರ್ಕಾರ ಮುಂದಾಗಿದೆ. ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷದ ಅಪರಾಧಗಳ (ತಡೆಗಟ್ಟುವಿಕೆ ನಿಯಂತ್ರಣ) ವಿಧೇಯಕ 2025ರಡಿ ಇಂತಹ ಅಪರಾಧ ಮಾಡಿದವರಿಗೆ ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ರೂ 5,000 ದಂಡವನ್ನು ವಿಧಿಸಲಾಗುತ್ತದೆ. ಉದ್ದೇಶಿತ ಮಸೂದೆಯು ದ್ವೇಷ ಭಾಷಣ ಮತ್ತು ದ್ವೇಷದ ಅಪರಾಧಗಳನ್ನು ಜಾಮೀನುರಹಿತ ಮತ್ತು ಅರಿಯಲಾಗದ ಅಪರಾಧಗಳೆಂದು ವರ್ಗೀಕರಿಸುತ್ತದೆ.

ದ್ವೇಷ ಭಾಷಣ ಧಾರ್ಮಿಕ, ಜನಾಂಗೀಯ, ಜಾತಿ ಅಥವಾ ಸಮುದಾಯ, ಲಿಂಗ, ಲೈಂಗಿಕ ದೃಷ್ಟಿಕೋನ, ಜನ್ಮಸ್ಥಳ, ಭಾಷಣ, ನಿವಾಸ, ಅಂಗವೈಕಲ್ಯ, ಬುಡಕಟ್ಟು ಕುರಿತು ಯಾವುದೇ ವ್ಯಕ್ತಿಗೆ ಹಾನಿ ಮಾಡುವ ಅಥವಾ ದ್ವೇಷವನ್ನು ಉತ್ತೇಜಿಸುವ ಇಲ್ಲವೇ ಪ್ರಚಾರ ಮಾಡುವ ವ್ಯಕ್ತಿ ಅಥವಾ ಗುಂಪಿಗೆ ಮೂರು ವರ್ಷಗಳ ಕಾಲ ಶಿಕ್ಷೆ ವಿಧಿಸಬಹುದು ಅಥವಾ 5 ಸಾವಿರ ದಂಡದ ಜೊತೆಗೆ ಶಿಕ್ಷೆ ವಿಧಿಸಲು ಪ್ರಸ್ತಾಪಿಸಲಾಗಿದೆ.

ಹೊಸ ಮಸೂದೆಯಲ್ಲಿ ಸಾಮಾಜಿಕ ಮಾಧ್ಯಮ ಕಂಪನಿಗಳು, ಸರ್ಚ್ ಇಂಜಿನ್‌ಗಳು, ಟೆಲಿಕಾಂ ಆಪರೇಟರ್‌ಗಳು, ಆನ್‌ಲೈನ್ ಮಾರುಕಟ್ಟೆ ಸ್ಥಳಗಳು ಮತ್ತು ಇಂಟರ್ನೆಟ್ ಸೇವಾ ಪೂರೈಕೆದಾರರಂತಹ ಡಿಜಿಟಲ್ ಮಧ್ಯವರ್ತಿಗಳು ಅವರು ಪೋಸ್ಟ್ ಮಾಡುವ ವಿಷಯಕ್ಕೆ ಜವಾಬ್ದಾರರಾಗಿರುತ್ತಾರೆ.

ಈ ಪ್ಲಾಟ್‌ಫಾರ್ಮ್‌ಗಳು ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ಪಾವತಿಸಬೇಕಾಗುತ್ತದೆ. ದ್ವೇಷ ಭಾಷಣ ಪೋಸ್ಟ್ ಮಾಡಲು ಹಣಕಾಸಿನ ಬೆಂಬಲ ಒದಗಿಸುವವರು, ಅಂತಹ ವೇದಿಕೆಗಳಿಗೆ ಸಹಾಯ ಮಾಡುವ ವ್ಯಕ್ತಿಗಳು ಕೂಡ ಪ್ರಾಥಮಿಕ ಅಪರಾಧಿಗಳಂತೆಯೇ ದಂಡವನ್ನು ಎದುರಿಸಬಹುದು.

ಕೋಮು ಗಲಭೆಯ ಅಪಾಯವಿರುವ ಪ್ರದೇಶಗಳಲ್ಲಿ ಪ್ರಚೋದನಾಕಾರಿ ಹೇಳಿಕೆ ತಡೆಗಟ್ಟುವ ಆದೇಶಗಳನ್ನು ನೀಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗುವುದು. ಈ ಆದೇಶಗಳು ಸಭೆಗಳು, ಮೆರವಣಿಗೆಗಳು, ಧ್ವನಿವರ್ಧಕಗಳ ಬಳಕೆ ಅಥವಾ ಭಯವನ್ನು ಪ್ರಚೋದಿಸುವ ಯಾವುದೇ ಕ್ರಿಯೆಯನ್ನು ನಿಷೇಧಿಸಬಹುದು. ಅಂತಹ ನಿರ್ಬಂಧಗಳನ್ನು ಆರಂಭದಲ್ಲಿ 30 ದಿನಗಳವರೆಗೆ ವಿಧಿಸಬಹುದು, ಅವಶ್ಯಕತೆಯ ಆಧಾರದ ಮೇಲೆ 60 ದಿನಗಳವರೆಗೆ ವಿಸ್ತರಿಸಬಹುದು. ಈ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ, ಮಸೂದೆಯು ಜಾಗೃತಿ ಅಭಿಯಾನಗಳು, ಸರ್ಕಾರಿ ಅಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮಗಳಿಗೆ ಕರೆ ನೀಡಲಾಗಿದೆ. ಇದರ ಹೊಣೆಗಾರಿಕೆಯನ್ನು ಮಾನವ ಹಕ್ಕುಗಳ ಆಯೋಗ ಅಥವಾ ಮಹಿಳಾ ಆಯೋಗದಂತಹ ರಾಜ್ಯ ಆಯೋಗಗಳಿಗೆ ನಿಯೋಜಿಸಬಹುದು. ಮಸೂದೆಯಡಿ ಉತ್ತಮ ನಂಬಿಕೆಯಿಂದ ಕಾರ್ಯನಿರ್ವಹಿಸುವ ಸರ್ಕಾರಿ ಅಧಿಕಾರಿಗಳು ಕಾನೂನು ಕ್ರಮದಿಂದ ರಕ್ಷಿಸಲ್ಪಡುತ್ತಾರೆ. ರಾಜ್ಯ ಶಾಸಕಾಂಗದ ಮೇಲ್ವಿಚಾರಣೆಯೊಂದಿಗೆ ಶಾಸನವನ್ನು ಜಾರಿಗೊಳಿಸಲು ನಿಯಮಗಳು, ನಿಬಂಧನೆಗಳನ್ನು ರೂಪಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವನ್ನು ಈ ವಿಧೇಯಕ ನೀಡುತ್ತದೆ.

ಉಚಿತ ತಪಾಸಣೆ, ಚಿಕಿತ್ಸಾ ಶಿಬಿರ

ಮೈಸೂರು, ಜೂ.23– ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯಲ್ಲಿ ಸ್ವಸ್ಥವೃತ್ತ ಹೊರರೋಗಿ ವಿಭಾಗದಲ್ಲಿ (ರೂಂ ನಂ–12) ಜೂ.24ರಿಂದ ಜು.24ರ ವರೆಗೆ ರುಮಟಾಯ್ಡ್ ಅರ್ಥ್ರೈಟಿಸ್ (ಆಮವಾತ) ಖಾಯಿಲೆಗೆ ತಜ್ಞ ವೈದ್ಯರಿಂದ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರವನ್ನು ಬೆಳಗ್ಗೆ 9 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರಗೆ ನಡೆಸಲಾಗುವುದು ಹಾಗೂ ಈ ಶಿಬಿರದಲ್ಲಿ ಉಚಿತ ಆಯುರ್ವೇದ ಔಷಧಿಗಳನ್ನು ವಿತರಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ರುಮಟಾಯ್ಡ್ ಅರ್ಥ್ರೈಟಿಸ್ (ಆಮವಾತ) ಖಾಯಿಲೆಗೆ ಚಿಕಿತ್ಸೆ ನೀಡುವ ವೈದ್ಯರಾದ ಡಾ. ಶಾಂತಮ್ಮ, ದೂ.ಸಂ: 7259568651 ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ವಿದ್ಯಾರ್ಥಿವೇತನಕ್ಕೆ ಅರ್ಜಿ ಅವಧಿ ವಿಸ್ತರಣೆ

ಮೈಸೂರು,ಜೂ.23– ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಪೋಷಕ ವಾರ್ಷಿಕ ವರಮಾನ 2.5 ಲಕ್ಷದೊಳಗಿರುವ ಮೈಸೂರು ತಾಲೂಕಿನ ವಿವಿಧ ವಿದ್ಯಾಸಂಸ್ಥೆಗಳಲ್ಲಿ ಮೆಟ್ರಿಕ್ ನಂತರದ ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕೆ ssp.postmatric.karnataka.gov.inನಲ್ಲಿ ಅರ್ಜಿ ಸಲ್ಲಿಸುವ ಅವಧಿಯನ್ನು ಜೂ.30ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು ಗ್ರೇಡ್–1 ಸಮಾಜ ಕಲ್ಯಾಣ ಇಲಾಖೆ, ಮೈಸೂರು ತಾಲೂಕು ಡಾ. ಬಾಬು ಜಗಜೀವನ ರಾಮ್ ಭವನ ಕಟ್ಟಡ, ಆದಿಪಂಪ ರಸ್ತೆ ಒಂಟಿಕೊಪ್ಪಲು ಪೂರ್ವ, ಬಡಾವಣೆ ಪಡುವಾರಹಳ್ಳಿ ಮೈಸೂರು–12, ದೂ.ಸಂ: 0821–2520910 ಅನ್ನು ಸಂಪರ್ಕಿಸಬಹುದು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಜೆಎಸ್‌ಎಸ್ ಅರ್ಬನ್ ಹಾತ್‌ನಲ್ಲಿ ಗುಜರಾತ್ ಕ್ರಾಫ್ಟ್ ಉತ್ಸವಕ್ಕೆ ಚಾಲನೆ



ಜೆಎಸ್‌ಎಸ್ ಅರ್ಬನ್ ಹಾತ್‌ನಲ್ಲಿ 'ಗುಜರಾತ್ ಹ್ಯಾಂಡಿಕ್ರಾಫ್ಟ್ ಉತ್ಸವ'ಕ್ಕೆ ಚಾಲನೆ ದೊರೆಯಿತು.

ಮೈಸೂರು, ಜೂ.23 (ಎಸ್‌ಪಿಎನ್)– ಮೈಸೂರಿನ ಹೆಬ್ಬಾಳ ಕೈಗಾರಿಕಾ ಪ್ರದೇಶದ ಜೆಎಸ್‌ಎಸ್ ಅರ್ಬನ್ ಹಾತ್‌ನಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠ, ಗುಜರಾತ್ ರಾಜ್ಯ ಸರ್ಕಾರದ ಕಾಟೇಜ್ ಮತ್ತು ಗ್ರಾಮೀಣ ಕೈಗಾರಿಕೆಗಳು, ಕೈಗಾರಿಕಾ ವಿಸ್ತರಣಾ ಕಾಟೇಜ್ (ಇಂಡೆಕ್ಸ್ಟ್–ಸಿ) ಸಹಯೋಗದೊಂದಿಗೆ ಜೂ.29ರವರೆಗೆ ಸತತವಾಗಿ 10ನೇ ಬಾರಿಗೆ ಏರ್ಪಡಿಸಿದ್ದ ದೇಶದ ಪ್ರಾಂತೀಯ 'ಗುಜರಾತ್ ಹ್ಯಾಂಡಿಕ್ರಾಫ್ಟ್ ಉತ್ಸವ'ಕ್ಕೆ ಚಾಲನೆ ದೊರೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಗುಜರಾತ್ ಇಂಡೆಕ್ಸ್ಟ್–ಸಿ ವ್ಯವಸ್ಥಾಪಕ ನಿರ್ದೇಶಕ ಡಾ.ಸಂಜಯ್ ಜೋಶಿ, ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಪ್ರಶಸ್ತಿ ಪಡೆದಿರುವ ಕುಶಲಕರ್ಮಿಗಳು ಒಂದೇ ಸೂರಿನಡಿಯಲ್ಲಿ ಕರಕುಶಲ ವಸ್ತುಗಳ, ವಿವಿಧ ಬಟ್ಟೆಗಳ ಪ್ರದರ್ಶನ ಮತ್ತು ಮಾರಾಟ ಮಾಡಲಿದ್ದು, ಇವರು, ಗುಜರಾತ್ ರಾಜ್ಯದ ವಿವಿಧ ಭಾಗಗಳ ಪ್ರಸಿದ್ಧ ಹಾಗೂ ಕ್ರಿಯಾಶೀಲರಾಗಿರುವ ಸುಮಾರು 70ಕ್ಕೂ ಹೆಚ್ಚು ಕುಶಲಕರ್ಮಿಗಳು ಮೇಳದಲ್ಲಿ ಭಾಗವಹಿಸಿದ್ದಾರೆ ಎಂದರು.

ಕುಶಲಕರ್ಮಿಗಳು ತಯಾರಿಸಿದ ಆಕರ್ಷಣೀಯ ಕರಕುಶಲ ಹಾಗೂ ಕೈಮಗ್ಗ ಉತ್ಪನ್ನಗಳನ್ನು ಪ್ರದರ್ಶಿಸಿ ಮಾರಾಟ ಮಾಡಲಿದ್ದಾರೆ. ಮೇಳದ ವಿಶೇಷ ಎಂದರೆ ತಯಾರಕರಿಂದಲೇ ನೇರವಾಗಿ ಗ್ರಾಹಕರಿಗೆ ಕೈಗೆಟಕುವ ಬೆಲೆಯಲ್ಲಿ ಒದಗಿಸುವ ಪ್ರಯತ್ನವನ್ನು ಗುಜರಾತ್ ಸರ್ಕಾರ ಮಾಡುತ್ತಿದೆ. ಈ ಕಾರಣದಿಂದಾಗಿ ಕರ್ನಾಟಕದ ಮೈಸೂರು ಹಾಗೂ ಸುತ್ತಮುತ್ತಲಿನ ಗ್ರಾಹಕರಿಗೆ ಗುಜರಾತ್ ಸಂಸ್ಕೃತಿಯ ಉಡುಗೆ–ತೊಡುಗೆಗಳು ಮತ್ತು ಅಲಂಕಾರಿಕ ವಸ್ತುಗಳು ನೇರವಾಗಿ, ಉತ್ತಮ ಗುಣಮಟ್ಟದಲ್ಲಿ, ಕಡಿಮೆ ಬೆಲೆಗೆ ದೊರೆಯಲಿದೆ. ಹಾಗೆಯೇ ಸಂಸ್ಕೃತಿ ವಿನಿಮಯವಾಗಲಿದೆ ಎಂದು ತಿಳಿಸಿದರು.

ಈ ವೇಳೆ ಕೇಂದ್ರ ಸರ್ಕಾರದ ಕರಕುಶಲ ಸೇವಾ ಕೇಂದ್ರ ಸಹಾಯಕ ನಿರ್ದೇಶಕ ವಿನೋದ್ ಕುಮಾರ್, ಗುಜರಾತಿನ ಪ್ರಸಿದ್ಧ ಸಾಂಸ್ಕೃತಿಕ ಕಲಾ ತಂಡಗಳಾದ ಮೀನಾ ಭೇನ್, ಉದಯಭಾಯಿ ಸೇವಕ್ ನೇತೃತ್ವದ ತಂಡದಿಂದ ಗರ್ಭಾ ನೃತ್ಯ, ರಾಜು ಭಾಯಿ ಭೋಕಿರಿಯ ಮತ್ತು ತಂಡದಿಂದ ಧಾಲ್ ತಲ್ವಾರ್‌ರಾಸ್ ಪ್ರದರ್ಶನಗೊಂಡು ಎಲ್ಲರ ಗಮನ ಸೆಳೆಯಿತು. ಮೈಸೂರಿನ ಕಲಾರಸಿಕರು ಉಚಿತವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಇದೊಂದು ಸುವರ್ಣ ಅವಕಾಶ ಎಂದರು. ಈ ವೇಳೆ ಜವಳಿ ಅಭಿವೃದ್ಧಿ ಆಯುಕ್ತೆ ಡಾ.ಕೆ.ಜ್ಯೋತಿ, ಡಾ.ಸ್ನೇಹಲ್ ಮಕ್ವಾನ್, ಅನ್ನಪೂರ್ಣ, ಸಂಯೋಜನಾಧಿಕಾರಿ ಶಿವನಂಜಸ್ವಾಮಿ, ರಾಕೇಶ್ ರೈ ಉಪಸ್ಥಿತರಿದ್ದರು.

ಮೈಸೂರು ಮಿತ್ರ ಮಂಗಳವಾರ 24 ಜೂನ್ 2025

ಅಪಘಾತ ತಡೆಗಟ್ಟಲು ವಿ.ಸಿ.ನಾಲೆ ಸುತ್ತಲಿನ ರಸ್ತೆಯ
35 ಕಿಮೀ ವ್ಯಾಪ್ತಿ ತಡೆಗೋಡೆ ನಿರ್ಮಾಣ

ಜಿಲ್ಲಾಧಿಕಾರಿ ಡಾ.ಕುಮಾರ್ ಮಾಹಿತಿ


ವಿ.ಸಿ.ನಾಲೆ ವ್ಯಾಪ್ತಿ ರಸ್ತೆ ಅಪಘಾತ ತಡೆಗಟ್ಟುವ ಕುರಿತು ನಡೆದ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ್ ಮಾತನಾಡಿದರು.

ಮಂಡ್ಯ, ಜೂ.23– ವಿ.ಸಿ.ನಾಲೆ ಸುತ್ತಲಿನ ರಸ್ತೆಗಳಲ್ಲಿ ಅಪಘಾತಗಳನ್ನು ತಡೆಗಟ್ಟಲು ಹೆಚ್ಚು ಅಪಘಾತವಾಗುವ ವಲಯಗಳನ್ನು ಗುರುತಿಸಿ 35 ಕಿಮೀ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳಿಂದ ತಡೆಗೋಡೆ ನಿರ್ಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ್ ತಿಳಿಸಿದರು.

ಸೋಮವಾರ ವಿ.ಸಿ.ನಾಲೆ ವ್ಯಾಪ್ತಿಯಲ್ಲಿ ರಸ್ತೆ ಅಪಘಾತ ತಡೆಗಟ್ಟುವ ಕುರಿತು ಸಭೆ ನಡೆಸಿ ಮಾತನಾಡಿದ ಅವರು, ವಿ.ಸಿ.ನಾಲೆ ರಸ್ತೆಗಳಲ್ಲಿ ಕಳೆದ 2 ವರ್ಷಗಳಿಂದ ನಡೆದ ರಸ್ತೆ ಅಪಘಾತಗಳಲ್ಲಿ 15 ಜನ ಮೃತಪಟ್ಟಿರುತ್ತಾರೆ. ಇದನ್ನು ತಡೆಗಟ್ಟಲು ತಾಂತ್ರಿಕ ಸಮಿತಿ ರಚಿಸಿ ಈಗಾಗಲೇ 20 ಕೋಟಿ ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ವಿ.ಸಿ.ನಾಲೆ 540 ಕಿಮೀ ವ್ಯಾಪ್ತಿಯಲ್ಲಿದ್ದು, ಸಂಪೂರ್ಣವಾಗಿ ತಡೆಗೋಡೆ ನಿರ್ಮಿಸುವುದು ಕಷ್ಟಕರ. ಅಪಘಾತ ವಲಯಗಳನ್ನು ಗುರುತಿಸಿ ಲೋಕೋಪಯೋಗಿ ಇಲಾಖೆಯಿಂದ 20 ಕಿಮೀ ಹಾಗೂ ನೀರಾವರಿ ಇಲಾಖೆಗಳಿಂದ 13 ಕಿಮೀನಷ್ಟು ಕ್ರ್ಯಾಷ್ ಬ್ಯಾರಿಯರ್ ನಿರ್ಮಿಸಲಾಗಿದೆ ಎಂದರು.

ಅಪಘಾತವಾದ ನಂತರ ಸ್ಥಳಕ್ಕೆ ಭೇಟಿ ನೀಡಿ ಕ್ರಮ ಕೈಗೊಳ್ಳುತ್ತೇವೆ ಎಂದು ತಿಳಿಸುವುದರ ಬದಲು ಇಲಾಖೆ ಅನುದಾನದಲ್ಲಿ ತಡೆಗೋಡೆ ನಿರ್ಮಾಣಕ್ಕೆ ಅನುದಾನ ಮೀಸಲಿಟ್ಟು ಕಾಮಗಾರಿ ಕೈಗೊಳ್ಳುವುದು ಉತ್ತಮ. ಕ್ರ್ಯಾಷ್ ಬ್ಯಾರಿಯರ್ ನಿರ್ಮಾಣದ ಜೊತೆಗೆ, ವೈಜ್ಞಾನಿಕ ರೋಡ್ ಹಂಪ್ ನಿರ್ಮಾಣ, ರಂಬಲ್ ಸ್ಟ್ರಿಪ್ ನಿರ್ಮಾಣ, ಸೂಚನಾ ಫಲಕಗಳನ್ನು ಅಳವಡಿಸುವ ಕೆಲಸಗಳನ್ನು ಕೈಗೊಳ್ಳುವಂತೆ ಈಗಾಗಲೇ ತಿಳಿಸಲಾಗಿತ್ತು ಲೋಕೋಪಯೋಗಿ, ಕಾವೇರಿ ನೀರಾವರಿ ನಿಗಮ, ಹೇಮಾವತಿ ನಾಲಾ ವಿಭಾಗದವರು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡಿ ಎಂದರು.

ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಗೆ ಹೆಚ್ಚಿನ ಭಾಗದ ರಸ್ತೆ ಬರಲಿದ್ದು, ಇಲಾಖೆಗೆ ನೀಡಲಾಗುವ ಅನುದಾನದಲ್ಲಿ ಅಪಘಾತ ತಡೆಗಟ್ಟಲು ಅನುದಾನ ಮೀಸಲಿಡುವಂತೆ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆಯುವಂತೆ ತಿಳಿಸಿದರು. ಸಭೆಯಲ್ಲಿ ಅಪರ ಎಎಸ್ಪಿ ತಿಮ್ಮಯ್ಯ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ಹರ್ಷ, ಪ್ರಾದೇಶಿಕ ಸಾರಿಗೆ ಅಧಿಕಾರಿ ಹೇಮಾವತಿ, ಇಇಎಂಐಡಿ ಅಭಿಯಂತರ ಶಂಕರ್, ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮೈಕ್ರೋ ಫೈನಾನ್ಸ್‌ನವರ ಮುಂದುವರೆದ ಅಟ್ಟಹಾಸ

ಸಾಲ ಕಟ್ಟದವರ ಮಕ್ಕಳನ್ನು ಕರೆದೊಯ್ದು ಕಿರುಕುಳ; ಆರೋಪಿ ಬಂಧನ

ಮಳವಳ್ಳಿ, ಜೂ.23– ಮೈಕ್ರೋ ಫೈನಾನ್ಸ್‌ನವರ ಅಟ್ಟಹಾಸ ಮುಂದುವರೆದಿದ್ದು, ಸಾಲದ ಕಂತು ಕಟ್ಟಿಲ್ಲ ಎಂಬ ಕಾರಣಕ್ಕೆ ಸಾಲ ಪಡೆದವರ ಮಕ್ಕಳನ್ನು ಬಲವಂತವಾಗಿ ಎಳೆದೊಯ್ದು ನಿಮ್ಮ ಪೋಷಕರನ್ನು ತೋರಿಸು ಎಂದು ಕಿರುಕುಳ ನೀಡಿದ್ದ ಆರೋಪಿ ಬಂಧಿಸುವಲ್ಲಿ ತಾಲೂಕಿನ ಬೆಳಕವಾಡಿ ಪೊಲೀಸರು ಯಶಸ್ವಿಯಾಗಿದ್ದಾರೆ.

ವಿವರ: ಮೈಸೂರು ಜಿಲ್ಲೆ ತಿ.ನರಸೀಪುರ ತಾಲೂಕಿನ ತಲಕಾಡು ಹೋಬಳಿ ಜಾಲಹಳ್ಳಿ ಗ್ರಾಮದ ನವೀನ್ ತಮ್ಮ ತಾಯಿ ಮಂಗಳಮ್ಮ ಅವರ ಹೆಸರಿನಲ್ಲಿ ತಿ.ನರಸೀಪುರ ಶಾಖೆಯ ಬಜಾಜ್ ಮೈಕ್ರೋ ಫೈನಾನ್ಸ್‌ನಲ್ಲಿ 40 ಸಾವಿರ ರೂ. ಸಾಲ ಪಡೆದುಕೊಂಡಿದ್ದರು. ಅದರಂತೆ ಪ್ರತಿ ತಿಂಗಳ ಕಂತನ್ನು ಕಟ್ಟಿಕೊಂಡು ಬರುತ್ತಿದ್ದರು. ಜೂ.16 ರಂದು ನವೀನ್ ಸಂಬಂಧಿಯಾದ ಪೂರಿಗಾಲಿ ಗ್ರಾಮದ ಶೋಭಾ ಅವರ ಮನೆಗೆ ನವೀನ್ ಮತ್ತು ಅವರ ಪತ್ನಿ ಪ್ರಮೀಳ ಹಾಗೂ ಮಗಳು ಬಂದಿದ್ದು, ಅದೇ ದಿನ ಬೆಳಗ್ಗೆ 11 ಗಂಟೆಗೆ ಮೈಕ್ರೋ ಫೈನಾನ್ಸ್‌ನ ಅಜಿತ್ ಎಂಬಾತ ಪೂರಿಗಾಲಿ ಗ್ರಾಮದ ಮನೆಯ ಬಳಿಗೆ ಸಾಲ ವಸೂಲಿಗೆ ಬಂದಿದ್ದಾನೆ.

ಆಗ ಮನೆಯಲ್ಲಿದ್ದ ನವೀನ್ ಅವರ ತಾಯಿಗೆ ಅವಾಚ್ಯ ಶಬ್ದಗಳಿಂದ ಬೈದು ನಂತರ ನವೀನ್ ಅವರ ಅಪ್ರಾಪ್ತ ಮಗಳು ಮತ್ತು ಪಕ್ಕದ ಮನೆ ಅಪ್ರಾಪ್ತ ಯುವಕನನ್ನು ಪೋಷಕರ ಅನುಮತಿ ಇಲ್ಲದೇ ಬಲವಂತವಾಗಿ ಕರೆದುಕೊಂಡು ಹೋಗಿ ಸಾಲ ಪಡೆದವರನ್ನು ತೋರಿಸು ಎಂದು ಅಜಿತ್ ಪೀಡಿಸಿದ್ದಾನೆ. ನಂತರ ಮನೆಗೆ ಕರೆದುಕೊಂಡು ಬಂದು ಇಬ್ಬರು ಮಕ್ಕಳನ್ನು ಬಿಟ್ಟಿದ್ದಾನೆ.

ಪೋಷಕರ ಅನುಮತಿ ಇಲ್ಲದೇ ಬಲವಂತವಾಗಿ ಮಕ್ಕಳನ್ನು ಕರೆದೊಯ್ದಿದ್ದ ತಿ.ನರಸೀಪುರದ ಬಜಾಜ್ ಮೈಕ್ರೋ ಫೈನಾನ್ಸ್‌ನ ಮ್ಯಾನೇಜರ್ ಮತ್ತು ಅಜಿತ್ ಎಂಬುವರ ಮೇಲೆ ಕಾನೂನು ಕ್ರಮ ಕೈಗೊಳ್ಳುವಂತೆ ಜೂ.20ರಂದು ನವೀನ್ ಬೆಳಕವಾಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು.


ಈ ಪ್ರಕರಣದ ಆರೋಪಿ ಪತ್ತೆ ಬಗ್ಗೆ ಎಎಸ್ಪಿ ತಿಮ್ಮಯ್ಯ ಮತ್ತು ಮಳವಳ್ಳಿ ಡಿವೈಎಸ್ಪಿ ವಿ.ಕೃಷ್ಣಪ್ಪ ಮಾರ್ಗದರ್ಶನದಲ್ಲಿ ಹಲಗೂರು ಠಾಣೆ ಸಿಪಿಐ ಶ್ರೀಧರ್, ಬೆಳಕವಾಡಿ ಠಾಣೆ ಎಸ್ಐ ಪ್ರಕಾಶ್, ಕಿರುಗಾವಲು ಠಾಣೆ ಎಸ್ಐ ರವಿಕುಮಾರ್ ಮತ್ತು ಸಿಬ್ಬಂದಿಗಳ ನೇತೃತ್ವದಲ್ಲಿ ತಂಡವನ್ನು ರಚಿಸಲಾಗಿತ್ತು. ಜೂ.20ರಂದು ಆರೋಪಿ ತಿ.ನರಸೀಪುರದ ಮೈಕ್ರೋ ಫೈನಾನ್ಸ್‌ನ ಮ್ಯಾನೇಜರ್ ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲೂಕಿನ ಸಿಲ್ಕಲ್‌ಪುರ ಗ್ರಾಮದ 32 ವರ್ಷದ ಪಿ.ಅಜಿತ್‌ನನ್ನು ತಮಿಳುನಾಡಿನ ಬಣ್ಣಾರಿ ಅಮ್ಮನ ದೇಗುಲದ ಬಳಿ ಬಂಧಿಸಲಾಗಿದೆ. ಬಂಧಿತನಿಂದ ಕೃತ್ಯಕ್ಕೆ ಬಳಸಿದ್ದ ಒಂದು ಬೈಕ್‌ನ್ನು ವಶಕ್ಕೆ ಪಡೆಯಲಾಗಿದೆ.

ಅಣ್ಣೂರು ಗ್ರಾಪಂಗೆ ಅಶ್ವಿನಿ ಅಧ್ಯಕ್ಷೆ

ಭಾರತೀನಗರ, ಜೂ.23– ಇಲ್ಲಿಗೆ ಸಮೀಪದ ಅಣ್ಣೂರು ಗ್ರಾಮ ಪಂಚಾಯಿತಿಗೆ ನೂತನ ಅಧ್ಯಕ್ಷೆಯಾಗಿ ಅಶ್ವಿನಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷೆ ಶಿವಮ್ಮ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ ಹಿನ್ನಲೆಯಲ್ಲಿ ಸೋಮವಾರ ನಡೆದ ಚುನಾವಣೆಯಲ್ಲಿ ಅಶ್ವಿನಿ ಅವರನ್ನು ಹೊರತು ಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಇಓ ರಾಮಲಿಂಗಯ್ಯ ಘೋಷಿಸಿದರು.

ಈ ವೇಳೆ ನೂತನ ಅಧ್ಯಕ್ಷೆ ಅಶ್ವಿನಿ ಅವರನ್ನು ಸದಸ್ಯರು ಮತ್ತು ಮುಖಂಡರು ಅಭಿನಂದಿಸಿದರು. ಮುಖಂಡರಾದ ಎ.ಟಿ.ಶಂಕರ್, ಯೋಗೇಂದ್ರ, ಚನ್ನಶೆಟ್ಟಿ, ಸುಂದರ್, ವಿನುಕುಮಾರ್, ಚಿಕ್ಕಸಿದ್ದಯ್ಯ, ದೇವರಾಜು, ಮಹದೇವು, ವಿಜಿ, ಸುಂದರ್, ಸುರೇಶ್, ಅಭಿಷೇಕ್, ಮಂಜುನಾಥ್, ಆನಂದ್, ಉಪಾಧ್ಯಕ್ಷ ನಾಗರಾಜು, ಸದಸ್ಯರಾದ ಸಿದ್ದೇಗೌಡ, ಚಂದ್ರಶೇಖರ್, ತ್ರಿಶೂಲ್, ಅಕ್ಕಿಸ್ವಾಮಿ, ಮಂಜುನಾಥ್, ಮಹೇಶ್, ರವಿ, ನಾಗಮಣಿ, ಶಿವಮ್ಮ, ಅನಿತಾ, ಅಭಿಲಾಷ, ಭಾಗ್ಯಮ್ಮ ಸೇರಿದಂತೆ ಹಲವರಿದ್ದರು.


ಅಣ್ಣೂರು ಗ್ರಾಪಂ ನೂತನ ಅಧ್ಯಕ್ಷೆ ಅಶ್ವಿನಿ ಅವರನ್ನು ಅಭಿನಂದಿಸಲಾಯಿತು.

ಇಂದು ಜನಸಂಪರ್ಕ ಸಭೆ

ಮಂಡ್ಯ, ಜೂ.23– ಮಂಡ್ಯ, ಕೊತ್ತತ್ತಿ ಮತ್ತು ಕೆರಗೋಡು ಉಪ ವಿಭಾಗ ವ್ಯಾಪ್ತಿಯ ವಿದ್ಯುತ್ ಸಮಸ್ಯೆಗಳ ಕುರಿತು ಚರ್ಚಿಸಲು ವಿದ್ಯುತ್ ಗ್ರಾಹಕರ ಕುಂದುಕೊರತೆ ಜನಸಂಪರ್ಕ ಸಭೆ ಮಂಡ್ಯ ವೃತ್ತದ ಇಂಜಿನಿಯರ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಮಂಡ್ಯ ವಿಭಾಗ ಕಚೇರಿ ಆವರಣದಲ್ಲಿ ಜೂ.24 ರಂದು ಬೆಳಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ. ಮಂಡ್ಯ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಗ್ರಾಹಕರು, ಸಾರ್ವಜನಿಕರು ಈ ಸಭೆಯಲ್ಲಿ ಭಾಗವಹಿಸಬಹುದಾಗಿದೆ ಎಂದು ಚಾವಿಸನಿನಿ, ಕಾ ಮತ್ತು ಪಾ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಿರುಮಲಾಪುರ ಡೇರಿ ನಿರ್ದೇಶಕರಿಗೆ ಅಭಿನಂದನೆ


ತಿರುಮಲಾಪುರ ಡೈರಿ ನೂತನ ಜೆಡಿಎಸ್ ಬೆಂಬಲಿತ ನಿರ್ದೇಶಕರನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅಭಿನಂದಿಸಿದರು.

ಪಾಂಡವಪುರ, ಜೂ.23– ತಾಲೂಕಿನ ತಿರುಮಲಾಪುರ(ತಿರ್ಲಾಪುರ) ಗ್ರಾಮದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನಿರ್ದೇಶಕರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ 9 ಸ್ಥಾನಗಳ ಪೈಕಿ 8 ಸ್ಥಾನಗಳಲ್ಲಿ ಆಯ್ಕೆಯಾದ ಜೆಡಿಎಸ್ ಬೆಂಬಲಿತ ನಿರ್ದೇಶಕರನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅಭಿನಂದಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜೆಡಿಎಸ್ ಬೆಂಬಲಿತ ನಿರ್ದೇಶಕರಾದ ಮಂಜುಳ, ಲೀಲಾವತಿ, ಶ್ವೇತ, ರಾಧ, ಜಯಲಕ್ಷ್ಮಿ, ರತ್ನಮ್ಮ, ಭಾಗ್ಯಮ್ಮ, ಸಾವಿತ್ರಮ್ಮ ಅವರನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅಭಿನಂದಿಸಿದರು.

ಬಳಿಕ ಸಿ.ಎಸ್.ಪುಟ್ಟರಾಜು ಮಾತನಾಡಿ, ತಾಲೂಕಿನ ತಿರುಮಲಾಪುರ ಗ್ರಾಮದ ಡೇರಿ ಚುನಾವಣೆಯಲ್ಲಿ 9 ಸ್ಥಾನಗಳ ಪೈಕಿ 8 ಸ್ಥಾನಗಳಲ್ಲಿ ಜೆಡಿಎಸ್ ಬೆಂಬಲಿತ ನಿರ್ದೇಶಕರು ಅಭೂತಪೂರ್ವ ಗೆಲುವು ಸಾಧಿಸುವ ಮೂಲಕ ಪಕ್ಷವನ್ನು ಬಲಪಡಿಸಿದ್ದಾರೆ. ತಾಲೂಕಿನಲ್ಲಿ ನಡೆದ ಬಹುತೇಕ ಸಹಕಾರ ಸಂಘದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಡುವ ಮೂಲಕ ಸಂಘದ ಆಡಳಿತ ಚುಕ್ಕಾಣಿ ಹಿಡಿಯುವಲ್ಲಿ ಸಹಕಾರ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಎದುರಾಗುವ ಸ್ಥಳೀಯ ಸಂಸ್ಥೆ ಚುನಾವಣೆಗೆ ಈ ಚುನಾವಣೆಗಳ ಫಲಿತಾಂಶಗಳು ದಿಕ್ಸೂಚಿಯಾಗಲಿವೆ ಎಂದರು.

ಈ ವೇಳೆ ಮುಖಂಡರಾದ ಪ್ರಭಾಕರ್, ವೇಣುಗೋಪಾಲ್, ಕೆ.ಎನ್.ನಾಗೇಗೌಡ, ಕೆರೆತೊಣ್ಣೂರು ಸೊಸೈಟಿ ಅಧ್ಯಕ್ಷ ಶ್ರೀನಿವಾಸ್, ನಿರ್ದೇಶಕ ವಿಜೇಂದ್ರ ಕೃಷ್ಣಮೂರ್ತಿ, ಗ್ರಾಪಂ ಸದಸ್ಯರಾದ ಲೋಕೇಶ್, ಸೋಮಶೇಖರ್, ಕುಂಟೇಗೌಡ, ನಾಗಣ್ಣ, ಕೃಷ್ಣೇಗೌಡ, ತಿಮ್ಮೇಗೌಡ, ಮಧು, ಹೊನ್ನರಾಜು ಸೇರಿದಂತೆ ಇತರರಿದ್ದರು.

ಅರ್ಜಿ ಆಹ್ವಾನ

ಮಂಡ್ಯ, ಜೂ.23–ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1 2ಎ, 2ಬಿ, 3ಎ, 3ಬಿ, ಪ/ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ಅರ್ಜಿಯನ್ನು https://shp.karnataka.gov.in/bewd ವೆಬ್‌ಸೈಟ್‌ನಲ್ಲಿ ಜೂನ್ 25ರೊಳಗೆ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗೆ ದೂ.ಸಂ 8050770004/8050770005 ಅನ್ನು ಸಂಪರ್ಕಿಸಬಹುದು

ವಿವಿಧ ಪಕ್ಷಗಳ ಮುಖಂಡರು ಬಿಜೆಪಿ ಸೇರ್ಪಡೆ

ಮಂಡ್ಯ, ಜೂ.23– ತಾಲೂಕಿನ ಕೊತ್ತತ್ತಿ ಹೋಬಳಿ ಹಾಗೂ ಶ್ರೀರಂಗಪಟ್ಟಣ ವಿಧಾನ ಸಭಾ ಕ್ಷೇತ್ರದ ಸೂನಗಹಳ್ಳಿಯಲ್ಲಿ ಭಾನುವಾರ ಹಲವು ಮುಖಂಡರು ವಿವಿಧ ಪಕ್ಷಗಳನ್ನು ತೊರೆದು ಬಿಜೆಪಿಗೆ ಸೇರ್ಪಡೆಯಾದರು.

ಪಕ್ಷದ ತತ್ವ ಸಿದ್ಧಾಂತ ಹಾಗೂ ಜನಪರ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಬೆಂಬಲ ಸೂಚಿಸಿ ಬಿಜೆಪಿಗೆ ಬಂದವರನ್ನು ಯುವ ಮುಖಂಡ ಇಂಡುವಾಳು ಸಚ್ಚಿದಾನಂದ ಪಕ್ಷದ ಶಾಲು ಹೊದಿಸಿ, ಸ್ವಾಗತಿಸಿದರು.

ಬಳಿಕ ಮಾತನಾಡಿದ ಅವರು, ಅಧಿಕಾರಕ್ಕೆ ಬಂದ ಎರಡೇ ವರ್ಷದಲ್ಲಿ ರಾಜ್ಯ ಸರ್ಕಾರದ ದುರಾಡಳಿತದಿಂದ ಜನರು ಬೇಸತ್ತಿದ್ದಾರೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಾರಿಗೊಳಿಸಿದ ಜನಪರ ಕಾರ್ಯಕ್ರಮಗಳನ್ನು ನಿಲ್ಲಿಸಿ ಬಡವರು ಹಾಗೂ ರೈತರಿಗೆ ಅನ್ಯಾಯ ಮಾಡಿದ್ದಾರೆ. ಗ್ಯಾರಂಟಿ ಹೆಸರಿನಲ್ಲಿ ಅಭಿವೃದ್ಧಿ ಕಾರ್ಯ ನಿರ್ಲಕ್ಷ್ಯ ಮಾಡಲಾಗುತ್ತಿದೆ. ಗ್ಯಾರಂಟಿ ಯೋಜನೆಗಳಿಗೆ ಹಣ ಒದಗಿಸಲು ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಲಾಗುತ್ತಿದೆ. ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ. ಬಡವರಿಗೆ ಹಂಚಿಕೆಯಾಗಬೇಕಾದ ಮನೆಯನ್ನು ಹಣಕ್ಕೆ ಮಾರಿಕೊಳ್ಳುತ್ತಿದ್ದಾರೆ. ರಾಜ್ಯ ಸರ್ಕಾರದ ಭ್ರಷ್ಟಾಚಾರವನ್ನು ಅವರ ಪಕ್ಷದ ಹಿರಿಯ ಶಾಸಕರು ಬಯಲು ಮಾಡಿದ್ದಾರೆ. ಇದಕ್ಕಿಂತಲೂ ಸಾಕ್ಷಿ ಬೇಕೆ ಎಂದು ಪ್ರಶ್ನಿಸಿದರು.

ಸೂನಗಹಳ್ಳಿ ಗ್ರಾಮದ ಮಾಜಿ ಗ್ರಾಪಂ ಅಧ್ಯಕ್ಷ ಸುರೇಶ್, ಜಗದೀಶ್, ಕುಮಾರ್, ಅಶೋಕ್, ಕಿರಣ್, ದಿನೇಶ್, ಮನು, ಅನಿಲ್, ಯೋಗೇಶ್, ಎಸ್.ಎನ್.ಕೃಷ್ಣ, ಅಣ್ಣಯ್ಯ, ರಘು, ಸೂರ್ಯ, ರಾಮಚಂದ್ರ, ಕೃಷ್ಣ, ನಿಂಗಣ್ಣ, ಶಿವರಾಜು, ವರದೇಗೌಡ, ಲಕ್ಷ್ಮಣ, ವರದ, ರಮೇಶ್, ಸುನೀಲ್, ಮಂಜು, ದೇವರಾಜ್, ಜವರ, ಶಂಕರ್, ಮಲ್ಲೇಶ್, ಮಹದೇವ, ಮಹೇಶ್ ಇತರರಿದ್ದರು.


ವಿವಿಧ ಪಕ್ಷಗಳ ಮುಖಂಡರನ್ನು ಬಿಜೆಪಿ ಮುಖಂಡ ಇಂಡುವಾಳು ಸಚ್ಚಿದಾನಂದ ಬರಮಾಡಿಕೊಂಡರು.

ಮೂರನೇ ಪುಟದಿಂದ

8.28 ಎಕರೆ ಎಂಡಿಎ ಭೂಮಿ ರಕ್ಷಣೆ

6ರಂದು ಜನರಲ್ ಅವಾರ್ಡ್ ನಿರ್ಧರಿಸಿ, 2002ರ ಮೇ 5ರಂದು 4,55,506 ರೂ. ಪರಿಹಾರದ ಹಣವನ್ನು ಮೈಸೂರು ಸಿವಿಲ್ ಕೋರ್ಟ್‌ಗೆ ಪಾವತಿಸಲಾಗಿತ್ತು.

ಈ ನಡುವೆ ಭೂ ಮಾಲೀಕರು ಸದರಿ ಭೂಮಿಯನ್ನು ಸ್ವಾಧೀನದಿಂದ ಕೈಬಿಟ್ಟು, ತಮಗೆ ಒಪ್ಪಿಸಬೇಕು ಎಂದು ಸಿಟಿ ಸಿವಿಲ್ ಕೋರ್ಟ್ ಮೊರೆ ಹೋಗಿದ್ದರು. ಆದರೆ, ಅದಾಗಲೇ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ಹೇಳಿ ಮುಡಾ ಪರವಾಗಿ ಕೋರ್ಟ್ ತೀರ್ಪು ನೀಡಿತ್ತು.

ಆದರೆ, ಭೂ ಮಾಲೀಕರು ರಾಜ್ಯ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿ, ತಮ್ಮ ಭೂಮಿಯನ್ನು ಸ್ವಾಧೀನದಿಂದ ಕೈಬಿಡಿಸಿ, ತಮಗೆ ಕಲ್ಪಿಸುವಂತೆ ಪ್ರಾರ್ಥಿಸಿದ್ದರು. ವಿಚಾರಣೆ ನಡೆಸಿದ ಕೋರ್ಟ್, ಈಗಾಗಲೇ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡು, ಪರಿಹಾರವನ್ನು ಪಾವತಿಸಿರುವುದರಿಂದ ಮೂಲ ಮಾಲೀಕರಿಗೆ ಭೂಮಿ ನೀಡಲು ಬಾರದು ಎಂದು ಇತ್ತೀಚೆಗೆ ತೀರ್ಪು ನೀಡಿತ್ತು

ಹೈಕೋರ್ಟ್ ಆದೇಶ ಹಾಗೂ ಸರ್ಕಾರದ 2016ರ ಅಕ್ರಮ ಸ್ವಾಧೀನ ತೆರವು ಆದೇಶದನ್ವಯ ಇಂದು 4 ಜೆಸಿಬಿಗಳೊಂದಿಗೆ ಕಾರ್ಯಾಚರಣೆ ನಡೆಸಿದ ಎಂಡಿಎ ಅಧಿಕಾರಿಗಳು, ಮನೆಯಲ್ಲಿದ್ದವರನ್ನು ಪೊಲೀಸ್ ಭದ್ರತೆಯಲ್ಲಿ ಹೊರಗೆ ಕರೆತಂದು ಅವುಗಳನ್ನು ನೆಲಸಮಗೊಳಿಸಿದರು.

ವಿಜಯನಗರ ಠಾಣೆ ಇನ್‌ಸ್ಪೆಕ್ಟರ್ ಸುರೇಶ್‌ಕುಮಾರ್ ನೇತೃತ್ವದಲ್ಲಿ ಮಹಿಳಾ ಪೊಲೀಸರೂ ಸೇರಿ 50ಕ್ಕೂ ಹೆಚ್ಚು ಸಿಬ್ಬಂದಿ ತೆರವು ಕಾರ್ಯಾಚರಣೆಗೆ ಭದ್ರತೆ ಒದಗಿಸಿದರು. ಎಂಡಿಎ ಸೂಪರಿಂಟೆಂಡಿಂಗ್ ಇಂಜಿನಿಯರ್ ಮುರಳೀಧರ, ಎಕ್ಸಿಕ್ಯೂಟಿವ್ ಇಂಜಿನಿಯರ್‌ಗಳಾದ ಮಹೇಶ, ನಾಗೇಶ, ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್‌ಗಳಾದ ಮೋಹನ್, ಸುನೀತ, ಸಂಪತ್ ಕುಮಾರ್ ಹಾಗೂ ಇತರರು ತೆರವು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಇರಾನ್ ಆಡಳಿತ ಬದಲಾವಣೆ ಸುಳಿವು

ಕಾರ್ಯಾಚರಣೆಯ ಬಳಿಕ ಅಮೆರಿಕದ ಬಿ–2 ಯುದ್ಧ ವಿಮಾನಗಳು ಸುರಕ್ಷಿತವಾಗಿ ಮಿಸ್ಸೋರಿಯಲ್ಲಿ ಬಂದಿಳಿವೆ ಎಂದು ಟ್ರಂಪ್ ಮಾಹಿತಿ ನೀಡಿದ್ದಾರೆ. ಮತ್ತೊಂದು ಪೋಸ್ಟ್‌ನಲ್ಲಿ ಇರಾನ್ ಮೇಲಿನ ದಾಳಿ ಅತ್ಯಂತ ಕಠಿಣ ಹಾಗೂ ನಿಖರವಾಗಿದ್ದವು. ನಮ್ಮ ಸೇನೆಯ ಸಾಮರ್ಥ್ಯವನ್ನು ತೋರಿಸಿದೆ ಎಂದೂ ತಿಳಿಸಿದ್ದಾರೆ. ನಿನ್ನೆಯಷ್ಟೇ ಅಮೆರಿಕಾ ಇರಾನ್ ಇರಾನ್ ರಾಷ್ಟ್ರದ 3 ಅಣುಸ್ಥಾವರಗಳ ಮೇಲೆ ದಾಳಿ ನಡೆಸಿತ್ತು. ಫೋರ್ಡೋ, ನಟಾಂಜ್ ಮತ್ತು ಇಸ್ಫಹಾನ್ ಸೇರಿದಂತೆ ಮೂರು ಪ್ರಮುಖ ಪರಮಾಣು ತಾಣಗಳ ಮೇಲೆ ದಾಳಿ ನಡೆಸಿತ್ತು.

ದಾಳಿ ಕುರಿತು ಹೇಳಿಕೆ ನೀಡಿದ್ದ ಟ್ರಂಪ್ ಅವರು, ಫೋರ್ಡೋ, ನಟಾಂಜ್ ಮತ್ತು ಇಸ್ಫಹಾನ್‌ನಲ್ಲಿರುವ ಇರಾನಿನ ಪರಮಾಣು ನೆಲೆಗಳ ಮೇಲೆ ಅಮೆರಿಕವು ಅತ್ಯಂತ ಯಶಸ್ವಿಯಾಗಿ ದಾಳಿಗಳನ್ನು ನಡೆಸಿದೆ. ಎಲ್ಲಾ ವಿಮಾನಗಳು ಈಗ ಇರಾನಿನ ವಾಯು ಪ್ರದೇಶದಿಂದ ಹೊರಗಿವೆ ಎಂದು ಹೇಳಿದ್ದರು. ಇರಾನ್‌ನಲ್ಲಿರುವ ಫೋರ್ಡೋ, ನಟಾಂಜ್ ಮತ್ತು ಎಸ್ಫಹಾನ್ ಸೇರಿದಂತೆ ಮೂರು ಪರಮಾಣು ತಾಣಗಳ ಮೇಲೆ ನಾವು ನಮ್ಮ ಅತ್ಯಂತ ಯಶಸ್ವಿ ದಾಳಿಯನ್ನು ಪೂರ್ಣಗೊಳಿಸಿದ್ದೇವೆ. ನಮ್ಮ ಎಲ್ಲಾ ವಿಮಾನಗಳು ಈಗ ಇರಾನ್ ವಾಯುಪ್ರದೇಶದ ಹೊರಗೆ ಸುರಕ್ಷಿತವಾಗಿವೆ ಎಂದು ತಿಳಿಸಿದ್ದರು.

ಅಲ್ಲದೆ, ಈಗಲೂ ಶಾಂತಿ ಸ್ಥಾಪಿಸದಿದ್ದರೆ ಮತ್ತಷ್ಟು ವಿನಾಶವನ್ನು ಎದುರಿಸಬೇಕಾಗುತ್ತದೆ ಎಂದೂ ಇರಾನ್‌ಗೆ ಎಚ್ಚರಿಕೆ ನೀಡಿದ್ದರು.

ಸೇನಾ ನೆಲೆಗಳ ಮೇಲೆ ಕ್ಷಿಪಣಿ ದಾಳಿ

ಕತಾರ್‌ನ ಆಕಾಶದಲ್ಲಿ ಸ್ಫೋಟಗಳು ಕಂಡುಬಂದವು. ಆದರೂ ಸಾವು–ನೋವುಗಳು ಅಥವಾ ಹಾನಿಯ ಅಧಿಕೃತ ದೃಢೀಕರಣ ಬಾಕಿ ಉಳಿದಿದೆ. ಇರಾನ್‌ನಿಂದ ಹೆಚ್ಚುತ್ತಿರುವ ಬೆದರಿಕೆಗಳಿಗೆ ಮುನ್ನೆಚ್ಚರಿಕೆಯಾಗಿ ಕತಾರ್ ವಿದೇಶಾಂಗ ಸಚಿವಾಲಯವು ದಿನದ ಆರಂಭದಲ್ಲಿ ರಾಷ್ಟ್ರೀಯ ವಾಯುಪ್ರದೇಶವನ್ನು ಮುಚ್ಚುವುದಾಗಿ ಘೋಷಿಸಿತು. ಕತಾರ್‌ನಲ್ಲಿರುವ ತಮ್ಮ ನಾಗರಿಕರು ಆ ಸ್ಥಳದಲ್ಲಿಯೇ ಆಶ್ರಯ ಪಡೆಯುವಂತೆ ಒತ್ತಾಯಿಸಿ ಅಮೆರಿಕ ಮತ್ತು ಯುಕೆ ನೀಡಿದ ಸಲಹೆಗಳನ್ನು ಅನುಸರಿಸಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ಪ್ರದೇಶದಲ್ಲಿ ಅಮೆರಿಕ ಪಡೆಗಳಿಗೆ ಕಾರ್ಯತಂತ್ರದ ಕೇಂದ್ರವಾಗಿರುವ ಅಲ್ ಉದೈದ್ ವಾಯುನೆಲೆ ಈಗ ಇರಾನ್, ಯುನೈಟೆಡ್ ಸ್ಟೇಟ್ಸ್ ಮತ್ತು ಇಸ್ರೇಲ್ ನಡುವಿನ ಹೆಚ್ಚುತ್ತಿರುವ ಸಂಘರ್ಷದ ಕೇಂದ್ರಬಿಂದುವಾಗಿದೆ. ಇಸ್ರೇಲ್ ತನ್ನ ಮಿಲಿಟರಿ ಕಾರ್ಯಾಚರಣೆಯನ್ನು ಇರಾನಿನ ಪ್ರದೇಶದೊಳಗೆ ವಿಸ್ತರಿಸುತ್ತಿದ್ದಂತೆ ಈ ಬೆಳವಣಿಗೆಗಳು ಬಂದಿವೆ. ಇಂದು ಇಸ್ರೇಲಿ ಪಡೆಗಳು ಇರಾನಿನ ಪ್ರಸಿದ್ಧ ಎವಿನ್ ಜೈಲು ಮತ್ತು ಇರಾನ್‌ನ ಕ್ರಾಂತಿಕಾರಿ ಗಾರ್ಡ್‌ನ ಪ್ರಧಾನ ಕಚೇರಿ ಸೇರಿದಂತೆ ಹಲವು ಸ್ಥಳಗಳನ್ನು ಗುರಿಯಾಗಿಸಿಕೊಂಡಿವೆ. ಭೂಗತ ಫೋರ್ಡೋ ತಾಣ ಸೇರಿದಂತೆ ಮೂರು ಇರಾನಿನ ಪರಮಾಣು ಸೌಲಭ್ಯಗಳ ಮೇಲೆ ಯುನೈಟೆಡ್ ಸ್ಟೇಟ್ಸ್ ದಾಳಿಗಳನ್ನು ನಡೆಸಿದ ನಂತರ ಉದ್ವಿಗ್ನತೆ ಹೆಚ್ಚಾಯಿತು.

ದೋಹಾದಲ್ಲಿರುವ ಯುಎಸ್ ಸೇನಾನೆಲೆ: ದೋಹಾದ ನೈಋತ್ಯಕ್ಕೆ 24 ಹೆಕ್ಟೇರ್ (60 ಎಕರೆ) ವಿಸ್ತೀರ್ಣದಲ್ಲಿರುವ ಅಲ್ ಉದೈದ್ ವಾಯುನೆಲೆಯು ಯುಎಸ್ ಸೆಂಟ್ರಲ್ ಕಮಾಂಡ್ ನ ಪ್ರಧಾನ ಕಚೇರಿಯಾಗಿ ಕಾರ್ಯನಿರ್ವಹಿಸುತ್ತದೆ. CENTCOM ಪಶ್ಚಿಮದಲ್ಲಿ ಈಜಿಪ್ಟ್‌ನಿಂದ ಪೂರ್ವದಲ್ಲಿ ಕಝಕಿಸ್ತಾನ್‌ವರೆಗಿನ ವಿಶಾಲ ಪ್ರದೇಶದಾದ್ಯಂತ ಅಮೆರಿಕನ್ ಮಿಲಿಟರಿ ಕಾರ್ಯಾಚರಣೆಗಳನ್ನು ನೋಡಿಕೊಳ್ಳುತ್ತದೆ.

ಕಾಂಗ್ರೆಸ್ ಶಾಸಕರದ್ದು 'ತಬರನ' ಸ್ಥಿತಿ

ಪ್ರತಿಪಕ್ಷ ನಾಯಕರು ಹೇಳುತ್ತಿಲ್ಲ. ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರು, ಅದರಲ್ಲಿಯೂ ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ್, ರಾಜು ಕಾಗೆ, ಬೇಳೂರು ಗೋಪಾಲ ಕೃಷ್ಣ ಅಂಥವರೇ ಹೇಳುತ್ತಿದ್ದಾರೆ. ಅವರೇ ಈ ಸರ್ಕಾರಕ್ಕೆ ಸರ್ಟಿಫಿಕೇಟ್ ನೀಡಿದ್ದಾರೆ ಎಂದು ಕಿಡಿ ಕಾರಿದರು.

ರಾಜ್ಯದಲ್ಲಿ ಕಳೆದ ಮೂರು ದಿನಗಳಿಂದ ವಸತಿ ಇಲಾಖೆಯದ್ದೇ ಪುರಾಣ. ಜನತೆ ಕಣ್ಣಿಗೆ ಮಂಕುಬೂದಿ ಎರಚುವ ಕೆಲಸ ಮಾಡಲಾಗುತ್ತಿದೆ. ಸರ್ಕಾರಕ್ಕೆ ಜನರ ಭಯ ಭಕ್ತಿ ಇಲ್ಲದಾಗಿದೆ. ಬಿ.ಆರ್.ಪಾಟೀಲ್ ಅವರು ಶಾಸಕರಷ್ಟೇ ಅಲ್ಲ, ಅವರು ಶಾಸಕರಾದಾಗ ನಾವು ಯಾರೂ ಇನ್ನೂ ರಾಜಕಾರಣಕ್ಕೆ ಬಂದಿರಲಿಲ್ಲ. ಅಂತಹ ಹಿರಿಯ ವ್ಯಕ್ತಿ. ಅವರ ಹಿನ್ನೆಲೆಯನ್ನು ನೋಡಿದ್ದೇವೆ

ದೊಡ್ಡ ಅನುಭವವುಳ್ಳ ನಾಯಕರು. ಅಂತಹವರ ಕ್ಷೇತ್ರದಲ್ಲಿ 950 ಮನೆಗಳನ್ನು ಶಾಸಕರ ಗಮನಕ್ಕೆ ಬಾರದಂತೆ ವಸತಿ ಇಲಾಖೆಯಿಂದ ನೀಡಿದ್ದಾರೆ. ಪಾಟೀಲ್ ಅವರು ಸಚಿವರ ಆಪ್ತ ಕಾರ್ಯದರ್ಶಿಗೆ ಮೊಬೈಲ್ ಕರೆ ಮೂಲಕ ಪ್ರಶ್ನೆ ಮಾಡಿದರೆ, ಅವರು ಏನು ಉತ್ತರ ನೀಡಿದ್ದಾರೆ ಎಂಬುದು ಆಡಿಯೋ ಮೂಲಕ ವೈರಲ್ ಆಗಿದೆ. ನಿಖರವಾದ ಪ್ರಕರಣ ಇದ್ದರೆ ದೂರು ಕೊಡಿ, ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಶಾಸಕರಿಗೆ ಉತ್ತರ ಕೊಡುತ್ತಾರೆ. ಆ ವ್ಯಕ್ತಿಗೆ ಕ್ರಮ ತೆಗೆದುಕೊಳ್ಳುವ ಅಧಿಕಾರ ಕೊಟ್ಟಿದ್ದಾರಾ ಸಚಿವರು? ವಸೂಲಿ ಮಾಡುವ ಪವರ್ ಕೊಟ್ಟಿದ್ದಾರಷ್ಟೇ ಎಂದು ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಇದ್ದಾರಾ: ಕರ್ನಾಟಕ ರಾಜ್ಯದಲ್ಲಿ ಮುಖ್ಯಮಂತ್ರಿ ಎನ್ನುವವರು ಇದ್ದಾರಾ? ಸರ್ಕಾರ ಎನ್ನುವುದು ಇದೆಯಾ? ಡಿಸಿಎಂ ನೋಡಿದರೆ ವಿಷಯ ತಿಳಿದುಕೊಂಡು ಹೇಳುತ್ತೇನೆ ಎಂದು ಕದ್ದು ಓಡುತ್ತಾರೆ. ಶಾಸಕಾಂಗ ಸಭೆಯಲ್ಲಿ ಮುಖ್ಯಮಂತ್ರಿ ಕೊಟ್ಟಿರುವ ಭರವಸೆ ಈಡೇರಿಲ್ಲ. ವಿರೋಧ ಪಕ್ಷಗಳು ಅಸೂಯೆಯಿಂದ ಮಾತಾಡುತ್ತಿಲ್ಲ. ಸಿಎಂ ಅವರೇ, ನಿಮ್ಮ ಪಕ್ಷದ ಶಾಸಕರೇ ಹೇಳುತ್ತಿದ್ದಾರೆ. ನಿಮ್ಮ ಶಾಸಕರಿಗೆ ತಬರನ ಪರಿಸ್ಥಿತಿ ಬಂದಿದೆ. ಶಾಸಕರು ತಮ್ಮ ಕ್ಷೇತ್ರಗಳಿಗೆ ಅನುದಾನ ಕೇಳುತ್ತಿದ್ದಾರೆ. ಆದರೆ, ಕಮಿಷನ್ ಕೊಟ್ಟವರಿಗೆ ಮಾತ್ರವೇ ಅನುದಾನ ಸಿಗುತ್ತಿದೆ ಎಂದು ಅವರು ನೇರವಾಗಿ ಸಿಎಂ ವಿರುದ್ಧ ವಾಗ್ದಾಳಿ ನಡೆಸಿದರು.

ಒಂದು ಇಲಾಖೆಯಲ್ಲಿ ಈ ಮಟ್ಟಕ್ಕೆ ಅವ್ಯವಹಾರ ಆಗಿದೆ ಎಂದರೆ ರಾಜ್ಯದಲ್ಲಿ ಸಿಎಂ ಎನ್ನುವವರು ಇದ್ದಾರೆಯೇ ಎನ್ನುವ ಅನುಮಾನ ಬರುತ್ತಿದೆ. ಡಿಸಿಎಂ ಅವರು ಬಿ.ಆರ್. ಪಾಟೀಲ್ ಹೇಳಿದ್ದು ಸುಳ್ಳು ಎನ್ನುತ್ತಿದ್ದಾರೆ. ನಾವು ಮಾತ್ರ ಹರಿಶ್ಚಂದ್ರರು ಎಂದು ತಮಗೆ ತಾವೇ ಸರ್ಟಿಫಿಕೇಟ್ ಕೊಟ್ಟುಕೊಳ್ಳುತ್ತಿದ್ದಾರೆ. ಕಾಗವಾಡ ಶಾಸಕ ರಾಜು ಕಾಗೆ ಕೂಡ ಇದೇ ಆರೋಪ ಮಾಡಿದ್ದಾರೆ. ವಿಶೇಷ ಅನುದಾನ ನೀಡಿ ಎರಡು ವರ್ಷವಾಯಿತು. ಟೆಂಡರ್ ಮಾಡಲು ಬಿಟ್ಟಿಲ್ಲ, ಹಣವೂ ಬಂದಿಲ್ಲ ಎನ್ನುತ್ತಿದ್ದಾರೆ.

ಶಾಸಕರಿಗೇ ಕಮಿಷನ್ ಕಿರುಕುಳ: ಮುಖ್ಯಮಂತ್ರಿ ಉದ್ದೇಶ ಏನು? ಶಾಸಕಾಂಗ ಪಕ್ಷದಲ್ಲಿ ಅನುದಾನ ಕೊಡುತ್ತೇವೆ, ಅಭಿವೃದ್ಧಿ ಮಾಡುತ್ತೇವೆ ಎಂದವರು ಈಗ ಶಾಸಕರಿಗೆ ಕಮಿಷನ್ ಕಿರುಕುಳ ಕೊಡುತ್ತಿದ್ದಾರೆ. ಶಾಸಕರು ಕ್ಷೇತ್ರಗಳಿಗೆ ಹೋಗದ ರೀತಿಯಲ್ಲಿ ಒತ್ತಡಕ್ಕೆ ಸಿಲುಕಿದ್ದಾರೆ ಎಂದು ಕುಮಾರಸ್ವಾಮಿ ಆರೋಪ ಮಾಡಿದರು.

ಶಾಸಕರಿಂದಲೇ ಸಿಎಂಗೆ ಮಂಗಳಾರತಿ: ಶಾಸಕ ಬೇಳೂರು ಗೋಪಾಲಕೃಷ್ಣ ಅವರು ವಸತಿ ಸಚಿವರು ರಾಜೀನಾಮೆ ನೀಡಲಿ, ಅಕ್ರಮಗಳ ತನಿಖೆ ಆಗಲಿ ಎಂದು ಒತ್ತಾಯಿಸಿದ್ದಾರೆ. ನಿಮ್ಮ ಪಕ್ಷದ ಶಾಸಕರೇ ನಿಮ್ಮ ಮುಖಕ್ಕೆ ಮಂಗಳಾರತಿ ಎತ್ತುತ್ತಿದ್ದಾರೆ. ನಿಮ್ಮ ಶಾಸಕರ ಪರಿಸ್ಥಿತಿಯೇ ಹೀಗಾದರೆ ಜೆಡಿಎಸ್, ಬಿಜೆಪಿ ಶಾಸಕರ ಪರಿಸ್ಥಿತಿ ಏನು? ಅನುದಾನಕ್ಕಾಗಿ ಶಾಸಕರು ಅಲೆಯುತ್ತಿದ್ದಾರೆ. ಯಾರು ಮಧ್ಯದಲ್ಲಿ ನಿಂತಿದ್ದಾರೋ ಅವರು ಕಲೆಕ್ಷನ್ ಮಾಡುತ್ತಿದ್ದಾರೆ. ಶಾಸಕರು ಹಣ ಕೊಟ್ಟು ಕೆಲಸ ಮಾಡಿಸಿಕೊಳ್ಳುತ್ತಿದ್ದಾರೆ ಎಂದು ಕೇಂದ್ರ ಸಚಿವರು ವಾಗ್ದಾಳಿ ನಡೆಸಿದರು.

ಆಗ್ರಹದ ಬಗ್ಗೆಯೂ ಮಾಹಿತಿ ಪಡಿತ್ತೇನೆ


ನೀಡಬೇಕೆಂಬ ಶಾಸಕ ಬೇಳೂರು ಗೋಪಾಲಕೃಷ್ಣ ಹೇಳಿಕೆ ಬಗ್ಗೆ ಮಾಹಿತಿ ಪಡೆಯುತ್ತೇನೆ. ಹಿಂದಿನ ಸರ್ಕಾರಗಳ ಅವಧಿಯಲ್ಲಿ ಅಕ್ರಮ ಗಣಿಗಾರಿಕೆ ಪ್ರಕರಣಗಳು ನಡೆದಿವೆ, ಈ ಬಗ್ಗೆ ತ್ವರಿತ ತನಿಖೆ ನಡೆಸಲು ವಿಶೇಷ ಕೋರ್ಟ್ ರಚಿಸಿ, ಗಣಿಗಾರಿಕೆಯ ಬಾಕಿ ವಸೂಲಾತಿಗೆ ಶೀಘ್ರ ಕ್ರಮ ತೆಗೆದುಕೊಳ್ಳುವಂತೆ ಸಚಿವ ಎಚ್.ಕೆ.ಪಾಟೀಲ್ ಪತ್ರ ಬರೆದು ತಿಳಿಸಿದ್ದಾರೆ. ಅಂದಿನ ಲೋಕಾಯುಕ್ತ ಸಂತೋಷ್ ಹೆಗಡೆ ಅಕ್ರಮ ಗಣಿಗಾರಿಕೆ ಬಗ್ಗೆ ವರದಿ ನೀಡಿದ್ದರು, ವಿಧಾನಸಭೆಯಲ್ಲಿ ತಮ್ಮ ಪ್ರಶ್ನೆಗೆ ಅಂದಿನ ಸರ್ಕಾರದಿಂದ ಸಮರ್ಪಕ ಉತ್ತರ ಬಂದಿರಲಿಲ್ಲ, ಅಕ್ರಮ ಗಣಿಗಾರಿಕೆ ವಿರುದ್ಧ ಬಳ್ಳಾರಿವರೆಗೆ ಪಾದಯಾತ್ರೆ ನಡೆಸಲಾಗಿತ್ತು ಎಂದರು.

ರಾಜ್ಯಕ್ಕೆ ಅನುದಾನ ನೀಡಿಕೆಯಲ್ಲಿ ಸುಮಾರು 80 ಸಾವಿರ ಕೋಟಿ ರೂ. ನಷ್ಟವಾಗಿದ್ದು, ಕರ್ನಾಟಕದ ಯಾವುದೇ ಬಿಜೆಪಿ ಸಂಸದರು ಧ್ವನಿ ಎತ್ತುತ್ತಿಲ್ಲ, ಹಣಕಾಸು ಆಯೋಗ 11,495 ಕೋಟಿ ರೂ. ವಿಶೇಷ ಅನುದಾನ ನೀಡಲು ಸಮ್ಮತಿಸಿದ್ದರೂ, ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಹಣ ಬಿಡುಗಡೆಗೆ ಯಾವುದೇ ಸಹಾಯ ಮಾಡಿಲ್ಲ. ಕರ್ನಾಟಕದ ಬಗ್ಗೆ ಮಾತನಾಡಲು ಅವರಿಗೆ ಯಾವುದೇ ನೈತಿಕತೆ ಇಲ್ಲ ಎಂದರು. ಕರ್ನಾಟಕಕ್ಕೆ ಹೆಚ್ಚಿನ ಅನುದಾನ ನೀಡುವಂತೆ 16ನೇ ಹಣಕಾಸು ಆಯೋಗಕ್ಕೆ ಮನವಿ ಮಾಡಲಾಗಿತ್ತು. ಈ ಕುರಿತು ಚರ್ಚಿಸಲು ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡುವ ಸಾಧ್ಯತೆಯಿದೆ ಎಂದರು.

ಮೈಸೂರಲ್ಲಿ ಸಿಎನ್‌ಜಿ ಘಟಕ ನಿರ್ಮಾಣ

● ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಮಾಹಿತಿ ● ತರಕಾರಿ ಮತ್ತಿತರ ತ್ಯಾಜ್ಯ ಬಳಸಿ ಬಯೋಗ್ಯಾಸ್ ಉತ್ಪಾದನೆ

ಬೆಂಗಳೂರು, ಜೂ.23(ಕೆಎಂಶಿ)– ಬೆಂಗಳೂರಿನ ದಾಸನಪುರ, ಮೈಸೂರು ಮತ್ತು ಕೋಲಾರದಲ್ಲಿ ಬಯೋಗ್ಯಾಸ್ (ಸಿಎನ್‌ಜಿ) ಉತ್ಪಾದನಾ ಘಟಕಗಳ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ.



ತರಕಾರಿ ಮತ್ತಿತರ ತ್ಯಾಜ್ಯ ಬಳಸಿ ಬಯೋಗ್ಯಾಸ್ ಉತ್ಪಾದನೆ ಮಾಡುವುದರಿಂದ ಪರಿಸರಕ್ಕೆ ವಿಷಕಾರಿ ಅನಿಲ ಸೇರ್ಪಡೆ ತಡೆಗಟ್ಟಬಹುದಾಗಿದೆ. ಘನ ತ್ಯಾಜ್ಯ ನಿರ್ವಹಣೆ ಕಾಯ್ದೆಗೆ ಕೇಂದ್ರ ಸರ್ಕಾರ ಅಕ್ಟೋಬರ್‌ನಲ್ಲಿ ತಿದ್ದು ಪಡಿ ತರಲಿದ್ದು, ಈ ನೆರವು ಬಳಕೆ ಮಾಡಿಕೊಂಡು ಎಪಿಎಂಸಿಗಳಲ್ಲಿ ಬಯೋಗ್ಯಾಸ್ ಘಟಕಗಳ ನಿರ್ಮಾಣ ಮಾಡಲಾಗುವುದು.

ಪ್ರತಿದಿನ 50 ಟನ್ ತ್ಯಾಜ್ಯ ಉತ್ಪಾದನೆ ಆಗುವಲ್ಲಿ ಮಾತ್ರ ಯೋಜನೆ ಲಾಭದಾಯಕವಾಗಲಿದ್ದು, ಬಯೋಗ್ಯಾಸ್ ಘಟಕ ನಿರ್ಮಾಣಕ್ಕೆ ಖಾಸಗಿಯವರೂ ಮುಂದೆ ಬರುತ್ತಾರೆ. ರಾಜ್ಯದ ಯಾವ ಭಾಗದಲ್ಲಿ ಬಯೋಗ್ಯಾಸ್ ಘಟಕ ನಿರ್ಮಿಸಿದರೆ ಲಾಭದಾಯಕ ಎಂಬುದನ್ನು ಗುರುತಿಸಿ ಯೋಜನೆ ರೂಪಿಸಲಾಗುವುದು ಎಂದರು. ದೆಹಲಿಯ ಕೌನ್ಸಿಲ್ ಆಫ್ ಸ್ಟೇಟ್ ಅಗ್ರಿಕಲ್ಚರ್ ಮಾರ್ಕೆಟಿಂಗ್ ಡಿಪಾರ್ಟ್‌ಮೆಂಟ್ (ಕೊಸ್ಯಾಂಬೋ) ವ್ಯವಸ್ಥಾಪಕ ನಿರ್ದೇಶಕ ಡಾ.ಜೆ.ಎಸ್. ಯಾದವ್ ಅವರೊಂದಿಗಿನ ಸಮಾಲೋಚನೆ ವೇಳೆ ಈ ಅಭಿಪ್ರಾಯ ವ್ಯಕ್ತವಾಯಿತು.

ಹಣ್ಣುಗಳ ಮೇಲೆ ಸ್ಟಿಕ್ಕರ್ ಸಲ್ಲದು: ಹಣ್ಣುಗಳ ಪ್ಯಾಕಿಂಗ್‌ಗೆ ಹಾನಿಕಾರಕ ರಾಸಾಯನಿಕ ಬಳಕೆ, ಸೇಬು ಸೇರಿದಂತೆ ಇತರ ಹಣ್ಣುಗಳ ಬ್ರಾಂಡ್ ಗುರುತಿಸಲು ಸ್ಟಿಕ್ಕರ್ ಹಚ್ಚುವುದು ಅಪಾಯಕಾರಿಯಾಗಿದ್ದು, ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದೆ, ಈ ಕುರಿತು ವರ್ತಕರಲ್ಲಿ ಜಾಗೃತಿ ಮೂಡಿಸಬೇಕಿದೆ. ಆಹಾರ ಸುರಕ್ಷತೆ ಕಾಯ್ದೆಯಲ್ಲಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಅಂಶಗಳ ಉಲ್ಲೇಖವಿದೆ. ನಿಯಮಗಳ ಪಾಲನೆಗೆ ಜಾಗೃತಿ ಮೂಡಿಸುವ ಅವಶ್ಯಕತೆಯಿದೆ.

ಕಲ್ಲಂಗಡಿ, ಬೆಂಡೆಕಾಯಿ, ಕ್ಯಾರೆಟ್ ಸೇರಿದಂತೆ ಕೆಲವು ಹಣ್ಣು, ತರಕಾರಿಗಳಿಗೆ ಕೃತಕ ಬಣ್ಣ ಬಳಕೆ ಮಾಡಲಾಗುತ್ತಿದೆ, ಗರಿಷ್ಠ ಪ್ರಮಾಣದಲ್ಲಿ ಕೀಟನಾಶಕ ಬಳಕೆಯೂ ಅಪಾಯಕಾರಿ. ಕೃತಕ ಬಣ್ಣ ಮತ್ತು ಸಾಧ್ಯವಾದಷ್ಟು ಕಡಿಮೆ ಪ್ರಮಾಣದಲ್ಲಿ ಕೀಟನಾಶಕ ಬಳಕೆ ಬಗ್ಗೆ ಜಾಗೃತಿ ಮೂಡಿಸಬೇಕಿದೆ.

ತೋಟಗಾರಿಕೆ, ಪುಷ್ಪೋದ್ಯಮ ಮತ್ತು ಹೈನುಗಾರಿಕೆ ಉದ್ಯಮದಲ್ಲಿ ಕರ್ನಾಟಕ ರಾಜ್ಯ ಮುಂಚೂಣಿಯಲ್ಲಿದೆ ಎಂದರು.

ಐಶ್ವರ್ಯಗೌಡ ವಂಚನೆ ಪ್ರಕರಣ

ಮಾಜಿ ಸಂಸದ ಡಿ.ಕೆ. ಸುರೇಶ್‌ಗೆ ಇಡಿ ಡ್ರಿಲ್: ಜು.8ಕ್ಕೆ ಮತ್ತೆ ಬುಲಾವ್

ಅಕ್ರಮ ಹಣ ವರ್ಗಾವಣೆಯಲ್ಲಿ ಇಡೀ ದಿನ ವಿಚಾರಣೆ

ಬೆಂಗಳೂರು: ಐಶ್ವರ್ಯ ಗೌಡ ವಂಚನೆ ಪ್ರಕರಣ ಸಂಬಂಧ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಇಡೀ ದಿನ ಮಾಜಿ ಸಂಸದ ಡಿಕೆ ಸುರೇಶ್ ವಿಚಾರಣೆ ನಡೆಸಿದ್ದಾರೆ.




ಅಕ್ರಮ ಹಣ ವರ್ಗಾವಣೆಯಲ್ಲಿ ಅರೆಸ್ಟ್ ಆಗಿದ್ದ ಐಶ್ವರ್ಯಗೌಡ ವಿಚಾರಣೆಯಲ್ಲಿ ಡಿ.ಕೆ. ಸುರೇಶ್ ಜೊತೆಗಿನ ವ್ಯವಹಾರದ ಬಗ್ಗೆ ಬಾಯ್ಬಿಟ್ಟಿದ್ದರು. ಇದೇ ಪ್ರಕರಣದಲ್ಲಿ ಇಂದು ಡಿಕೆ ಸುರೇಶ್ ಇ.ಡಿ ವಿಚಾರಣೆಗೆ ಹಾಜರಾಗಿದ್ದರು. ಸುಮಾರು 6:30 ಗಂಟೆ ಇ.ಡಿ ವಿಚಾರಣೆ ಬಳಿಕ ಮಾತನಾಡಿದ ಡಿಕೆ ಸುರೇಶ್, ಇ.ಡಿಯವರು ಕೇಳಿದ ಎಲ್ಲಾ ಪ್ರಶ್ನೆಗಳಿಗೆ ಉತ್ತರಿಸಿದ್ದೇನೆ. ಮತ್ತೆ ಜೂನ್ 8ರಂದು ಹಾಜರಾಗಲು ಹೇಳಿದ್ದಾರೆ. ತನಿಖೆಗೆ ಸಂಪೂರ್ಣ ಸಹಕಾರ ಕೊಟ್ಟಿದ್ದೇನೆ ಎಂದರು.

ನನ್ನ ಹೆಸರು ದುರ್ಬಳಕೆ ಮಾಡಿಕೊಂಡಿದ್ದಾರೆ. ನನ್ನ ಜೊತೆ ಐಶ್ವರ್ಯ ಪರಿಚಯ ಇದೆ ಅಂತ ಹೇಳಿ ಕೆಲವರು ಹಣ ಕಳೆದುಕೊಂಡಿದ್ದಾರೆ. ಹಣ ಕಳೆದುಕೊಂಡವರು ಕೂಡ ವಿಚಾರಣೆ ವೇಳೆ ನನ್ನ ಹೆಸರು ಹೇಳಿ ಹಣ ಪಡೆದ ಬಗ್ಗೆ ದಾಖಲೆ ಕೊಟ್ಟಿದ್ದರು. ಈ ಬಗ್ಗೆ ಎಲ್ಲಾ ಪ್ರಶ್ನೆಗಳು ಕೇಳಿದರು. ಅದಕ್ಕೆ ತಡ ಆಗಿದೆ. ಆಕೆಗೂ ನನಗೂ ಪರಿಚಯ ಇರಲಿಲ್ಲ. ಕನ್ನಡ ರಾಜ್ಯೋತ್ಸವ ಸೇರಿದಂತೆ ಕಾರ್ಯಕ್ರಮಕ್ಕೆ ಕರೆದಿದ್ದರು, ಹೋಗಿದ್ದೆ. ಯಾವುದೇ ವ್ಯವಹಾರ ಬಗ್ಗೆ ನನಗೆ ಗೊತ್ತಿಲ್ಲ ಎಂದು ತಿಳಿಸಿದರು.

ಶಕ್ತಿ ಯೋಜನೆ ಬಳಿಕ ಪುರುಷರ ಪರಿಸ್ಥಿತಿ ತುಂಬಾ ಕೆಟ್ಟದಾಗಿದೆ

ಕೊಪ್ಪಳ ಜಿಲ್ಲೆ: ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆ ಶಕ್ತಿ ಬಳಸಿಕೊಂಡು ಮಹಿಳೆಯರು ರಾಜ್ಯದ ಎಲ್ಲ ಭಾಗದಲ್ಲಿಯೂ ಓಡಾಡುತ್ತಿದ್ದಾರೆ. ಗಂಡುಮಕ್ಕಳಿಗೆ ಬಸ್‌ನಲ್ಲಿ ಹತ್ತಲು ಸಾಧ್ಯವಾಗುತ್ತಿಲ್ಲ. ಪುರುಷರ ಪರಿಸ್ಥಿತಿ ಕೆಟ್ಟದಾಗಿದೆ ಎಂದು ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರೂ ಆದ ಶಾಸಕ ಆರ್.ವಿ.ದೇಶಪಾಂಡೆ ಹೇಳಿದರು.




ತಾಲೂಕಿನ ಶಿರೂರು ಗ್ರಾಮದಲ್ಲಿ ನಡೆದ ಕೆ.ಎಚ್. ಪಾಟೀಲ ಅವರ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಗ್ಯಾರಂಟಿ ಯೋಜನೆಗಳಿಗೆ 58 ಸಾವಿರ ಕೋಟಿ ಖರ್ಚಾಗುತ್ತಿದೆ. ನಾನು ಎಂಟು ಜನ ಮುಖ್ಯಮಂತ್ರಿಗಳ ಜೊತೆ ಕೆಲಸ ಮಾಡಿದ್ದೇನೆ. ಅವರವರ ಆಡಳಿತದಲ್ಲಿ ಎಲ್ಲರೂ ಒಳ್ಳೆಯ ಕೆಲಸಗಳನ್ನೇ ಮಾಡಿದ್ದಾರೆ ಎಂದರು. ನಮ್ಮ ಸರ್ಕಾರ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಇದರಿಂದ ಕಾರ್ಮಿಕರು, ಬಡವರು ಸೇರಿ ಎಲ್ಲ ವರ್ಗದವರಿಗೂ ಅನುಕೂಲ ದೊರೆತಿದೆ. ಅದರಲ್ಲೂ ಶಕ್ತಿ ಯೋಜನೆಯಿಂದ ರಾಜ್ಯದ ಮಹಿಳೆಯರು ದೇವಸ್ಥಾನಗಳಿಗೆ ಪ್ರವಾಸ ಬೆಳೆಸುತ್ತಿದ್ದಾರೆ. ಇದರಿಂದ ಮಹಿಳೆಯರಿಗೆ ಹೆಚ್ಚು ಅನುಕೂಲವಾಗಿದೆ. ಬಸ್‌ಗಳಲ್ಲಿ ಹತ್ತುವ ವೇಳೆ ಮಹಿಳೆಯರಿಂದ ಪುರುಷರು ಏಟು ತಿಂದಿರುವ ಪರಿಸ್ಥಿತಿಗಳೂ ಇವೆ ಎಂದರು. ಆಡಳಿತದಲ್ಲಿ ಸಾಕಷ್ಟು ಬದಲಾವಣೆಗಳು ಆಗಬೇಕಿದೆ. ನಿರ್ಧಾರಗಳು ಬೇಗನೆ ಮಾಡಬೇಕು. ಎಷ್ಟು ಬೇಗ ನಿರ್ಧಾರಗಳು ಆಗುತ್ತವೆಯೊ ಅಷ್ಟು ಬೇಗ ಜನರ ಕಷ್ಟಗಳು ಪರಿಹಾರವಾಗುತ್ತವೆ ಎಂದು ಹೇಳಿದರು.

ಮಾರಾಟವಾಗದೇ ಉಳಿದಿರುವ ಮದ್ಯ, ಬಿಯರ್ ನಾಶ

ಮೈಸೂರು, ಜೂ.23– ಮೈಸೂರು ನಗರ ಜಿಲ್ಲೆಯ ಅಬಕಾರಿ ಉಪ ಆಯುಕ್ತರ ಆದೇಶದ ಮೇರೆಗೆ ಮೈಸೂರು ಉಪ ವಿಭಾಗದ ಅಬಕಾರಿ ಉಪ ಅಧೀಕ್ಷಕ ಹೆಚ್.ಕೆ.ರಮೇಶ್ ನೇತೃತ್ವದಲ್ಲಿ, ಕೆ.ಎಸ್.ಬಿ.ಸಿ.ಎಲ್. ಮೈಸೂರು–1 ಲಿಕ್ಕರ್ ಡಿಪೋ ಕೂರ್ಗಳ್ಳಿಯ ಅಬಕಾರಿ ಉಪ ಅಧೀಕ್ಷಕ ವಿಕ್ರಮ್.ಎಲ್.ಬಿ., ಮತ್ತು ಅಬಕಾರಿ ನಿರೀಕ್ಷಕರು ಹಾಗೂ ಡಿಪೋನ ವ್ಯವಸ್ಥಾಪಕರು, ಮತ್ತು ಇಲಾಖಾ ಸಿಬ್ಬಂದಿಗಳೊಂದಿಗೆ ಮಾರಾಟವಾಗದೇ ಉಳಿದಿದ್ದ ಒಟ್ಟು 7.200 ಲೀಟರ್ ಮದ್ಯ ಹಾಗೂ ಕೆಎಸ್.ಬಿ.ಸಿ.ಎಲ್. ಮೈಸೂರು–2 ಡಿಪೋ ಅಬಕಾರಿ ನಿರೀಕ್ಷಕರು ಹಾಗೂ ಡಿಪೋನ ವ್ಯವಸ್ಥಾಪಕರು, ಮತ್ತು ಇಲಾಖಾ ಸಿಬ್ಬಂದಿಗಳೊಂದಿಗೆ ಮಾರಾಟವಾಗದೇ ಉಳಿದಿದ್ದ ಒಟ್ಟು 14.310 ಲೀಟರ್ ಮದ್ಯವನ್ನು ಒಟ್ಟು 21.510 ಲೀಟರ್ ಮದ್ಯವನ್ನು ನಾಶಪಡಿಸಲಾಗಿದೆ.

ಎಂಡಿಎ, ನಗರಪಾಲಿಕೆ ನಡುವೆ ಸಮನ್ವಯ ಕೊರತೆಯಿಂದ ಸಮಸ್ಯೆ

ಅರವಿಂದನಗರದ ಮನೆಗಳಿಗೆ ನುಗ್ಗುತ್ತಿರುವ ಚರಂಡಿ ನೀರು; ನಿವಾಸಿಗಳಿಗೆ ನರಕಯಾತನೆ



ಮೈಸೂರಿನ ಅರವಿಂದನಗರದ ಎರಡನೇ ಕ್ರಾಸ್, 9ನೇ ಮೇನ್‌ನಲ್ಲಿ ಮನೆಗೆ ಚರಂಡಿ ನೀರು ನುಗ್ಗಿರುವುದು.

ಮೈಸೂರು,ಜೂ.23(ಎಂಟಿವೈ)– ಮೈಸೂರು ಮಹಾನಗರಪಾಲಿಕೆ ಹಾಗೂ ಮೈಸೂರು ಅಭಿವೃದ್ಧಿ ಪ್ರಾಧಿಕಾರದ ನಡುವಿನ ಸಮನ್ವಯತೆ ಕೊರತೆಯಿಂದ ಅರವಿಂದನಗರದ ನಿವಾಸಿಗಳು ನರಕ ಯಾತನೆ ಅನುಭವಿಸುವಂತಾಗಿದೆ.

ಅರವಿಂದನಗರದ 9ನೇ ಮೇನ್‌ನಲ್ಲಿರುವ ಹತ್ತಾರು ಮನೆಗಳಿಗೆ ಸಣ್ಣ ಪ್ರಮಾಣದ ಮಳೆ ಬಂದರೂ ಒಳಚರಂಡಿ ನೀರು ಮನೆಗೆ ನುಗ್ಗಿ ನಿದ್ದೆಗೆಡಿಸುತ್ತಿದ್ದು, ಕಳೆದ ಮೂರು ವರ್ಷಗಳಿಂದ ಸಮಸ್ಯೆ ಸರಿಪಡಿಸುವಂತೆ ಮಹಾನಗರ ಪಾಲಿಕೆ ಮತ್ತು ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಮೊರೆ ಹೋದರೂ, ಪರಿಹಾರ ಮಾತ್ರ ಶೂನ್ಯ. 1987ರಲ್ಲಿ ನಿರ್ಮಾಣವಾದ ಅರವಿಂದನಗರದ ಬಡಾವಣೆಯಲ್ಲಿ 1995ರ ನಂತರ ಮನೆ ನಿರ್ಮಾಣವಾಗಿದ್ದು, ಒಳಚರಂಡಿ ನೀರು ಸರಾಗವಾಗಿ ಹರಿದು ಹೋಗದೆ ವಾಪಸ್ ಮನೆಗಳಿಗೆ ನುಗ್ಗುತ್ತಿರುವುದು ನಿವಾಸಿಗಳನ್ನು ನರಕಕ್ಕೀಡು ಮಾಡಿದೆ.

ಬಡಾವಣೆ ಮನೆಗಳಿಂದ ನೀರು ಸರಾಗವಾಗಿ ಹರಿದು ಹೋಗುವುದಕ್ಕೆ ಸೂಕ್ತ ವ್ಯವಸ್ಥೆ ಕಲ್ಪಿಸದೇ ಇರುವುದರಿಂದ 9ನೇ ಮೇನ್‌ನಲ್ಲಿರುವ ಹತ್ತಾರು ಮನೆಗಳಿಗೆ ಒಳಚರಂಡಿ ನೀರು ನುಗ್ಗುತ್ತಿದ್ದು, ಸಮಸ್ಯೆ ಬಗೆಹರಿಸುವಂತೆ ನಿವಾಸಿಗಳು ಪಾಲಿಕೆ ಅಧಿಕಾರಿಗಳ ಮೊರೆ ಹೋಗಿದ್ದಾರೆ.

ಅರವಿಂದನಗರದ ಮನೆಗಳಿಂದ ಚರಂಡಿ ನೀರು ಬಡಾವಣೆಯ ಪಕ್ಕದಲ್ಲಿಯೇ ಇರುವ ಖಾಸಗಿ ಭೂಮಿ ಮೂಲಕ ಹರಿದು ದಳವಾಯಿ ಕೆರೆಗೆ ಹೋಗುವ ದೊಡ್ಡ ಮೋರಿಗೆ ಸೇರುತ್ತಿತ್ತು. ಆದರೆ, ಕೆಲ ವರ್ಷಗಳಿಂದ ಭೂ ಮಾಲೀಕರು ಮರಳು ಹಾಗೂ ಮಣ್ಣಿನ ಮೂಟೆ ಅಡ್ಡಲಾಗಿ ಇಟ್ಟು, ತಮ್ಮ ಭೂಮಿಯನ್ನು ರಕ್ಷಿಸಲು ತಡೆಗೋಡೆ ನಿರ್ಮಿಸಿಕೊಂಡಿದ್ದಾರೆ. ಇದರಿಂದ ಚರಂಡಿ ನೀರು ಹರಿದು ಹೋಗಲಾರದೆ ಚರಂಡಿಯಲ್ಲಿಯೆ ವಾಪಸ್ ಮನೆಗಳಿಗೆ ನುಗ್ಗುತ್ತಿದೆ.

ಮುಖ್ಯಮಂತ್ರಿಗಳ ಗಮನಕ್ಕೆ ತರಲು ನಿರ್ಧಾರ

“ಎಂಡಿಎ ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳು ತಮ್ಮ ಮನವಿಗೆ ಮತ್ತು ದೂರಿಗೆ ಸರಿಯಾಗಿ ಸ್ಪಂದಿಸದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬಡಾವಣೆಯ ಜನ ಎದುರಿಸುತ್ತಿರುವ ಸಮಸ್ಯೆಯನ್ನು ಛಾಯಾಚಿತ್ರದೊಂದಿಗೆ ಮನವರಿಕೆ ಮಾಡಿಕೊಡುವ ಬಗ್ಗೆ ಕ್ಷೇತ್ರದ ಶಾಸಕ ಟಿ.ಎಸ್. ಶ್ರೀವತ್ಸ ಭರವಸೆ ನೀಡಿದ್ದಾರೆ. ಆದರೆ, ಅಧಿಕಾರಿಗಳಲ್ಲಿ ಇಚ್ಛಾಶಕ್ತಿಯ ಕೊರತೆ, ಸಮನ್ವಯ ಕೊರತೆ ಎದ್ದುಕಾಣುತ್ತಿದೆ. ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲಿಯೇ ಚರಂಡಿ ನೀರಿನ ಸಮಸ್ಯೆ ಬಗೆಹರಿಸಲು ಸಾಧ್ಯವಾಗದ ಅಧಿಕಾರಿಗಳ ಅಸಹಾಯಕತೆ ಬಗ್ಗೆ ಸಿಎಂಗೆ ದೂರು ನೀಡಲು ನಿರ್ಧರಿಸಿದ್ದೇವೆ. –ಅರವಿಂದನಗರದ ನಿವಾಸಿಗಳು

ಖಾಸಗಿ ವ್ಯಕ್ತಿಗೆ ಸೇರಿದ ಭೂಮಿಯಲ್ಲಿ ಚರಂಡಿ ನೀರು ಹರಿದು ಹೋಗುವುದಕ್ಕೆ ಎಂಡಿಎ ಅಥವಾ ಪಾಲಿಕೆ ಅಧಿಕಾರಿಗಳು ಖಾಸಗಿ ಭೂ ಮಾಲೀಕರೊಂದಿಗೆ ಮಾತುಕತೆ ನಡೆಸಿದರೆ ಸಮಸ್ಯೆ ನಿವಾರಣೆಯಾಗುತ್ತದೆ. ಆದರೆ ಅಧಿಕಾರಿಗಳು ದಿವ್ಯ ಮೌನ ತಾಳಿರುವುದರಿಂದ ಸಮಸ್ಯೆ ಕಾರಣ ಉಲ್ಭಣವಾಗಲು ಎನ್ನಲಾಗಿದೆ.

ಪರಿಹಾರ ನೀಡಿದರೆ: ಎಂಡಿಎ ಅಥವಾ ಪಾಲಿಕೆ ಚರಂಡಿ ನೀರು ಹರಿದು ಹೋಗುವ ಜಾಗಕ್ಕೆ ಸೂಕ್ತ ಪರಿಹಾರ ನೀಡಿದರೆ ಭೂ ಮಾಲೀಕರು ಸುಮ್ಮನಾಗುತ್ತಾರೆ. ಆದರೆ, ಇದಕ್ಕೆ ಕ್ರಮ ಕೈಗೊಳ್ಳದ ಕಾರಣ ಭೂ ಮಾಲೀಕರು ಕಾಂಪೌಂಡ್ ನಿರ್ಮಿಸಿ, ಚರಂಡಿ ನೀರು ಬರದಂತೆ ಮಣ್ಣು–ಮರಳಿನ ಮೂಟೆ ಇಟ್ಟು, ನೀರು ಹರಿದು ಬರದಂತೆ ನೋಡಿಕೊಂಡಿದ್ದಾರೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ನಮ್ಮದ್ದಲ್ಲ, ಅವರದ್ದು: ಸಮಸ್ಯೆ ಬಗೆಹರಿಸುವಂತೆ ಎಂಡಿಎ ಸ್ಥಳೀಯ ನಿವಾಸಿಗಳು ಸಾಕಷ್ಟು ಬಾರಿ ಮನವಿ ಸಲ್ಲಿಸಿದ್ದಾರೆ. ಆದರೆ, ಎಂಡಿಎ ಅಧಿಕಾರಿಗಳು ಪಾಲಿಕೆಯತ್ತ ಕೈ ತೋರಿಸುತ್ತಿದ್ದಾರೆ. ಮಹಾನಗರ ಪಾಲಿಕೆಗೂ ಮನವಿ ಮಾಡಿದರೆ ಅವರು ಎಂಡಿಎಯತ್ತ ಬೊಟ್ಟು ಮಾಡುತ್ತಿರುವುದರಿಂದ ಸಮಸ್ಯೆ ಬಗೆಹರಿಯದೆ ಸಮಸ್ಯೆಯಾಗಿಯೇ ಉಳಿದಿದೆ.

ಬಂದು ಹೋಗುವ ಅಧಿಕಾರಿಗಳು: ಅರವಿಂದನಗರ ಬಡಾವಣೆ ಪ್ರತಿನಿಧಿಸಿರುವ ಪಾಲಿಕೆ ಸದಸ್ಯರು ಈ ಚರಂಡಿ ಸಮಸ್ಯೆ ಬಗೆಹರಿಸುವಲ್ಲಿ ಇಚ್ಛಾಶಕ್ತಿ ತೋರುತ್ತಿಲ್ಲ. ನಗರಪಾಲಿಕೆ ಅಧಿಕಾರಿಗಳು ಸ್ಥಳಕ್ಕೆ ಬಂದು ನೋಡಿಕೊಂಡು ಸುಮ್ಮನೆ ವಾಪಸ್ಸಾಗುತ್ತಾರೆ. ಕೇವಲ ಭೇಟಿಗಷ್ಟೆ ಅಧಿಕಾರಿಗಳು ಸೀಮಿತವಾಗಿದ್ದಾರೆ ಎಂದು ನಿವಾಸಿಗಳು ಆಪಾದಿಸಿದ್ದಾರೆ.



ಮೈಸೂರಲ್ಲಿ ಎಲ್ಲಾ ಅಕ್ರಮಗಳಿಗೆ ಅಧಿಕಾರಿಗಳೇ ಕಾರಣ!

ಕಾನೂನು ಧಿಕ್ಕರಿಸಿ ಕಟ್ಟಡ ನಿರ್ಮಾಣ; ಪಿಜಿಗಳ ನಿರ್ವಹಣೆ; ಪಾರ್ಕಿಂಗ್‌ನಲ್ಲಿ ವಾಣಿಜ್ಯ ವಹಿವಾಟು; ಪಾಲಿಕೆ ಬೊಕ್ಕಸ ಖಾಲಿ: ಆರ್‌ಟಿಐ ಮಾಹಿತಿದಾರರ ಆರೋಪ

ಮೈಸೂರು, ಜೂ.23(ಎಸ್‌ಪಿಎನ್)– ಮೈಸೂರಿನಲ್ಲಿ ಅಕ್ರಮ ಕಟ್ಟಡಗಳ ನಿರ್ಮಾಣಕ್ಕೆ ಕಡಿವಾಣ ಹಾಕದಿದ್ದರೆ, ಮುಂದಿನ ದಿನಗಳಲ್ಲಿ ಕಾನೂನು ಪಾಲನೆ ಮಾಡಿ ಕಟ್ಟಡ ನಿರ್ಮಾಣ ಮಾಡುವವರೇ ಇಲ್ಲದಂತಾಗಿ ಸ್ಥಳೀಯ ಸಂಸ್ಥೆಗಳ ಆದಾಯ ಖೋತಾ ಆಗಲಿದೆ ಎಂದು ಆರ್‌ಟಿಐ ಮಾಹಿತಿದಾರರು ಎಚ್ಚರಿಸಿದ್ದಾರೆ.



ಆರ್‌ಟಿಐ ಮಾಹಿತಿದಾರರಾದ ಕೆ.ವಿ.ಭಾನುಪ್ರಶಾಂತ್, ಭಾನುಮೋಹನ ಹಾಗೂ ಸ್ನೇಹಮಯಿ ಕೃಷ್ಣ ಜಂಟಿಯಾಗಿ ಮೈಸೂರು ಪಾಲಿಕೆ ಮತ್ತು ಮೈಸೂರು ಅಭಿವೃದ್ಧಿ ಪ್ರಾಧಿಕಾರ(ಎಂಡಿಎ)ದ ಆಯುಕ್ತರಿಗೆ ಪತ್ರ ಬರೆದು ಎಚ್ಚರಿಸಿದ್ದಾರೆ.

ಅಲ್ಲದೆ, ವಲಯವಾರು ಅಕ್ರಮಗಳ ಕಟ್ಟಡಗಳ ಮಾಹಿತಿ, ಇಲ್ಲಿವರೆಗೆ ಕಟ್ಟಡ ನಿರ್ಮಾಣಕ್ಕೆ ರಹದಾರಿ ನೀಡಿರುವ ಸಂಖ್ಯೆ, ಇದರಲ್ಲಿ ಅಕ್ರಮ ಕಟ್ಟಡವೆಷ್ಟು–ಸಕ್ರಮವೆಷ್ಟು ಎಂಬ ಮಾಹಿತಿ ನೀಡುವಂತೆ ಪತ್ರ ಬರೆದು ಹಲವು ತಿಂಗಳೇ ಕಳೆದಿದ್ದರೂ ಮಾಹಿತಿ ನೀಡದೇ ಎಂಡಿಎ ಮತ್ತು ಪಾಲಿಕೆ ಅಧಿಕಾರಿಗಳು ಕಳ್ಳಾಟ ಆಡುತ್ತಿದ್ದಾರೆ.

ಮೈಸೂರಿನಲ್ಲಿ ತೆರಿಗೆ ವಂಚಿಸಿ, ಪಾಲಿಕೆ ಮತ್ತು ಎಂಡಿಎ ಗಮನಕ್ಕೆ ತಾರದೇ ಎಷ್ಟು ಮಾಲೀಕರು ಎಲ್ಲಾ ನಿಯಮಗಳನ್ನು ಉಲ್ಲಂಘಿಸಿ ಕಟ್ಟಡ ನಿರ್ಮಿಸುತ್ತಿದ್ದಾರೆ. ಕಟ್ಟಡ ನಿರ್ಮಾಣ ಅಕ್ರಮವೆಂದು ತಿಳಿದಿದ್ದರೂ ಅಧಿಕಾರಿಗಳು ಜಾಣ ಮೌನವಹಿಸಿದ್ದಾರೆ. ಸಾರ್ವಜನಿಕರು ಇದರ ಬಗ್ಗೆ ಪ್ರಶ್ನೆ ಮಾಡಿದರೆ, ನೀವು ಸುಮ್ಮನಿದ್ದು ಬಿಡಿ, ನಾವು ಎಲ್ಲಾ ಸರಿ ಮಾಡುತ್ತೇವೆ ಎಂದು ನೆಪ ಮಾತ್ರ ಒಂದು ನೋಟೀಸ್ ಕೊಟ್ಟು ಜಾರಿಕೊಳ್ಳುತ್ತಿದ್ದಾರೆ ಎಂದು ಆರ್‌ಟಿಐ ಮಾಹಿತಿದಾರ ಕೆ.ವಿ.ಭಾನುಮೋಹನ್ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ಮೈಸೂರಿನ ಬಡಾವಣೆಗಳನ್ನು ಅಚ್ಚುಕಟ್ಟಾಗಿ ನಿರ್ಮಿಸಿ, ನಿರ್ವಹಿಸುವುದು ನಗರಪಾಲಿಕೆ ಮತ್ತು ಅದರ ಅಂಗಸಂಸ್ಥೆಗಳಲ್ಲಿ ಕೆಲಸ ಮಾಡುವ ಅಧಿಕಾರಿಗಳ ಕರ್ತವ್ಯ.

“ಉಪಲೋಕಾಯುಕ್ತ, ರಾಜ್ಯ ಮಾಹಿತಿ ಆಯೋಗದ ನೋಟಿಸ್ ಕೊಟ್ಟ ಮೇಲೆ ಪಾಲಿಕೆ ಅಧಿಕಾರಿಗಳು, ನಮ್ಮ ಅರ್ಜಿಗೆ ಸ್ಪಂದಿಸಿ, ಪಾಲಿಕೆ ಕೇಂದ್ರ ಕಚೇರಿಯಿಂದ ವಲಯ ಕಚೇರಿಗಳಿಗೆ ಅರ್ಜಿದಾರರಿಗೆ ಮಾಹಿತಿ ನೀಡುವಂತೆ ಸುತ್ತೋಲೆ ಕಳುಹಿಸಿದ್ದಾರೆ. –ಸ್ನೇಹಮಯಿ ಕೃಷ್ಣ

ಅಕ್ರಮ ಕಟ್ಟಡಗಳ ನಿರ್ಮಾಣ, ರಹದಾರಿ ಪಡೆದ ಮಾಹಿತಿಗಾಗಿ ಕಳೆದೊಂದು ವರ್ಷದಿಂದ ಹೋರಾಟ ಮಾಡಿದ ಫಲವಾಗಿ ವಲಯ ಕಚೇರಿಯಿಂದ ಮಾಹಿತಿ ನೀಡುವಂತೆ ನಗರ ಪಾಲಿಕೆ ಹಿರಿಯ ಅಧಿಕಾರಿಗಳು ಸೂಚಿಸಿದ್ದಾರೆ.

ಆದರೆ, ಪಾಲಿಕೆ ಅಧಿಕಾರಿಗಳು ತಮ್ಮ ಪಾಲಿನ ಕೆಲಸ ಮಾಡದಿರುವುದೇ ಸ್ಥಳೀಯ ಸಂಸ್ಥೆಗಳ ಆದಾಯಕ್ಕೆ ಕಲ್ಲು ಬಿದ್ದಿದೆ. ಇದೀಗ ನಗರದ ಅಭಿವೃದ್ಧಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಅನುದಾನಕ್ಕೆ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಸುಪ್ರೀಂಕೋರ್ಟ್ ಆದೇಶವನ್ನು ಉಲ್ಲಂಘಿಸಿ, ವಾಣಿಜ್ಯ ಕಟ್ಟಡಗಳಲ್ಲಿ ವಾಹನ ನಿಲುಗಡೆಗೆ ಮೀಸಲಿಟ್ಟ ಸ್ಥಳಗಳನ್ನು ವಾಣಿಜ್ಯ ವಹಿವಾಟು ಸ್ಥಳವನ್ನಾಗಿ ಮಾಲೀಕರು ಪರಿವರ್ತಿಸಿದ್ದಾರೆ. ಇದರ ವಿರುದ್ಧ ಪಾಲಿಕೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ.

ನೋಟಿಸ್ ಕೊಟ್ಟ ಮೇಲೆ ಎಚ್ಚೆತ್ತ ಅಧಿಕಾರಿಗಳು: ಮೈಸೂರು ನಗರಪಾಲಿಕೆ, ಎಂಡಿಎ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ಕಾನೂನು ಅನುಷ್ಠಾನದಲ್ಲಿ ಮೌನವಹಿಸಿ, ನಗರದಲ್ಲಿ ನಡೆಯುತ್ತಿರುವ ನಾನಾ ಅಕ್ರಮಕ್ಕೆ ಪರೋಕ್ಷ ಸಾಥ್ ನೀಡುತ್ತಿದ್ದಾರೆ. ಇಂತಹ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಉಪ ಲೋಕಾಯುಕ್ತರಿಗೆ, ರಾಜ್ಯ ಮಾಹಿತಿ ಆಯೋಗಕ್ಕೆ ದೂರು ನೀಡಿದ್ದ ಹಿನ್ನೆಲೆಯಲ್ಲಿ ಇದೀಗ ನಗರಪಾಲಿಕೆ ಅಧಿಕಾರಿಗಳು, ಸಂಬಂಧಪಟ್ಟ 1ರಿಂದ 6ರ ವಲಯ ಕಚೇರಿಗಳಿಗೆ ಅಕ್ರಮ ಕಟ್ಟಡಗಳ ಮಾಹಿತಿ, ರಹದಾರಿ ಪಡೆದಿರುವ ಮಾಹಿತಿಗಳನ್ನು ನಿಮ್ಮ ಹಂತದಲ್ಲಿ ಅರ್ಜಿದಾರರಿಗೆ ನೀಡುವಂತೆ ಆಯುಕ್ತರು ಆದೇಶಿಸಿದ್ದಾರೆ.

ಆದಾಯ ಖೋತಾ

ವಸತಿ ಗೃಹಗಳನ್ನು ವಾಣಿಜ್ಯ ಬಳಕೆಗೆ ಅನುಮತಿಯನ್ನೇ ಪಡೆಯದೇ ಬಳಕೆ ಮಾಡುತ್ತಿದ್ದಾರೆ. ಇದರಿಂದ ಪ್ರತಿ ವರ್ಷ ಸ್ಥಳೀಯ ಸಂಸ್ಥೆಗಳ ಲಕ್ಷಾಂತರ ಆದಾಯ ಖೋತಾ ಆಗುತ್ತಿದೆ. ರಕ್ಷಣೆ ಕುರಿತು ಪೊಲೀಸ್ ಇಲಾಖೆಗೆ ಕೇಳಿದರೆ, ನಮಗೂ ಇದಕ್ಕೂ ಸಂಬಂಧ ಇಲ್ಲ ಎನ್ನುತ್ತಾರೆ. ಹಾಗಾದರೆ ನಮ್ಮ ರಾಜ್ಯದಲ್ಲಿ ಕಾನೂನು ಸುಮ್ಮನೆ ಮಾಡಿದ್ದಾರೆಯೋ ಎಂಬ ಅನುಮಾನ ಮೂಡುತ್ತಿದೆ.

ಪಿಜಿಗಳ ಸಂಖ್ಯೆ ಮಾಹಿತಿ ಪಾಲಿಕೆ ಬಳಿಯಿಲ್ಲ: ಪ್ರತಿಷ್ಠಿತ ಕುಟುಂಬಗಳೇ ವಾಸಿಸುವ ಬಡಾವಣೆಗಳಲ್ಲಿ ಪಾಲಿಕೆ, ಎಂಡಿಎ ಇಲ್ಲವೇ ಪೊಲೀಸ್ ಇಲಾಖೆಯಿಂದ ಯಾವುದೇ ಅನುಮತಿ ಪಡೆಯದೇ ಪಿಜಿಗಳ ನಿರ್ಮಾಣ ಹೆಚ್ಚಾಗುತ್ತಿವೆ. ಮೈಸೂರು ನಗರ ವ್ಯಾಪ್ತಿಯಲ್ಲಿ ಎಷ್ಟು ಪಿಜಿಗಳಿವೆ. ಇದರ ನಿರ್ವಹಣೆ ಮಾನದಂಡಗಳೇನು? ಎಂದು ಪಾಲಿಕೆ ಮತ್ತು ಎಂಡಿಎ ಬಳಿ ಮಾಹಿತಿ ಕೇಳಿದರೆ, ನಮ್ಮ ಬಳಿ ಯಾವುದೇ ಮಾಹಿತಿ ಇಲ್ಲ. ಪಿಜಿಗಳಿಗೆ ಅನುಮತಿ ಪಡೆದಿಲ್ಲ ಎಂದು ಮೌಖಿಕವಾಗಿ ಅಧಿಕಾರಿಗಳು ಹೇಳುತ್ತಿದ್ದಾರೆ. ಅದನ್ನೇ ಬರವಣಿಗೆಯಲ್ಲಿ ಕೊಡಿ ಎಂದರೆ, ಕೊಡುತ್ತಿಲ್ಲ.

ಮುಜುಗರವಾಗುತ್ತಿದೆ: ವ್ಯಾಸಂಗ, ಕೆಲಸಕ್ಕಾಗಿ ಗ್ರಾಮೀಣ ಪ್ರದೇಶಗಳಿಂದ ಬರುವ ಕೆಲ ಯುವತಿಯರು ಪಿಜಿಗಳಲ್ಲಿ ವಾಸಿಸುತ್ತಿದ್ದಾರೆ. ಇಲ್ಲಿನ ಯುವತಿಯರು ಮಧ್ಯಾಹ್ನ ರಾತ್ರಿವರೆಗೆ ಅಪರಿಚಿತ ಯುವಕರೊಂದಿಗೆ ಓಡಾಡುತ್ತಿದ್ದಾರೆ. ಅವರ ವರ್ತನೆ ಅಸಹ್ಯವಾಗಿದೆ. ಇದರಿಂದ ಹಿರಿಯ ನಾಗರಿಕರಿಗೆ ಮುಜುಗರದ ಪರಿಸ್ಥಿತಿ ನಿರ್ಮಾಣವಾಗಿದೆ. ಉದಾಹರಣೆಗೆ ಸರಸ್ವತಿಪುರಂ ಬಡಾವಣೆಯಲ್ಲಿ ಅಕ್ರಮ ಪಿಜಿ ನಿರ್ಮಾಣ ಹೆಚ್ಚಾಗುತ್ತಿವೆ ಇವುಗಳ ಬಗ್ಗೆ ಯಾರ ಬಳಿಯೂ ಮಾಹಿತಿಯಿಲ್ಲ. ಇದರ ಬಗ್ಗೆಯೂ ಉಪ ಲೋಕಾಯುಕ್ತದಲ್ಲಿ ದೂರು ದಾಖಲಾಗಿದೆ.

ಮೈಸೂರು ನಗರದಲ್ಲಿ ನೂರಾರು ಖಾಸಗಿ ಮತ್ತು ಸರ್ಕಾರಿ ಶಾಲೆಗಳಿವೆ. ಕೆಲವು ಶಾಲೆಗಳಿಗೆ ಆಟದ ಮೈದಾನಗಳೇ ಇಲ್ಲ. ಇದು ಮಕ್ಕಳ ಶೈಕ್ಷಣಿಕ ಬೆಳವಣಿಗೆ ಕುಂಠಿತವಾದಂತೆ. ಇದರ ಬಗ್ಗೆ ಶಿಕ್ಷಣ ಇಲಾಖೆ ಅಧಿಕಾರಿಗಳ ಬಳಿ ಪ್ರಶ್ನಿಸಿದರೆ, ಮೌನ ವಹಿಸುತ್ತಿದ್ದಾರೆ. ಕಾನೂನು ಉಲ್ಲಂಘನೆ ಮಾಡುವವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದಿದ್ದರೆ, ಮುಂದೆ ನಮ್ಮ ಕಾನೂನುಗಳಿಗೆ ಯಾರು ಬೆಲೆ ಕೊಡುತ್ತಾರೆ ಎಂದು ಪ್ರಶ್ನಿಸಿದ್ದಾರೆ.



ಮೈಸೂರಿನಲ್ಲಿ ಅಕ್ರಮ ಕಟ್ಟಡಗಳ ನಿರ್ಮಾಣಕ್ಕೆ ಕಡಿವಾಣ ಹಾಕಿಸುವಂತೆ ಆರ್‌ಟಿಐ ಮಾಹಿತಿದಾರರು ಒತ್ತಾಯಿಸಿದ್ದಾರೆ.

ಕೆ.ಆರ್.ಕ್ಷೇತ್ರದ ಯುಜಿಡಿ ಪೈಪ್‌ಲೈನ್ ಕಾಮಗಾರಿಗೆ ಗುದ್ದಲಿ ಪೂಜೆ...



ಮೈಸೂರಿನ ವಾರ್ಡ್ ನಂ.53ರ ಕುರುಬಾರಹಳ್ಳಿ 1ನೇ ಕ್ರಾಸ್‌ನಲ್ಲಿ ಸುಮಾರು 45 ಲಕ್ಷ ರೂಗಳ ವೆಚ್ಚದಲ್ಲಿ ಪ್ರತ್ಯೇಕ ಪೈಪ್‌ಲೈನ್ ಅಳವಡಿಸಲು ಶಾಸಕ ಟಿ.ಎಸ್.ಶ್ರೀವತ್ಸ ಗುದ್ದಲಿಪೂಜೆ ನೆರವೇರಿಸಿದರು. ಹಾಗೆಯೇ ವಾರ್ಡ್ ನಂ.52ರ ಗಾಲ್ಫ್‌ಕ್ಲಬ್‌ನಿಂದ ಸತ್ಯ ಹರಿಶ್ಚಂದ್ರ ದೇವಸ್ಥಾನದವರೆಗೆ ಸುಮಾರು 35 ಲಕ್ಷ ರೂ.ಗಳ ಯುಜಿಡಿ ಕಾಮಗಾರಿ, ವಾರ್ಡ್ ನಂ.49ರ ಅದಂಖಾನ್ ಮಸೀದಿ ಹಾಗೂ ಹುಲ್ಲಿನಬೀದಿ ಅಕ್ಕಪಕ್ಕ ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿಗೂ ಚಾಲನೆ ನೀಡಿದರು ಈ ವೇಳೆ ಪಾಲಿಕೆ ಮಾಜಿ ಸದಸ್ಯ ಕೆ.ಜಿ.ರಮೇಶ್, ವಾರ್ಡ್ ಅಧ್ಯಕ್ಷ ಬಾಬು, ವಿನಯ್ ಪಾಂಚಜನ್ಯ, ಕ್ಯಾಂಟೀನ್ ನಾಗಣ್ಣ, ಪ್ರದೀಪ್‌ಕುಮಾರ್, ಪುನೀತ್, ಕಿಶೋರ್, ಸಂತೋಷ್, ಪಾಲಿಕೆ ಇಇ ಶಿಲ್ಪಾ, ಎಇಇ ಧನುಷ್, ಸಂತೋಷ್, ಪ್ರಸನ್ನ ಇನ್ನಿತರರು ಉಪಸ್ಥಿತರಿದ್ದರು.

ಐಎಎಸ್, ಕೆಎಎಸ್, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ

ಮೈಸೂರು,ಜೂ.23–ಐಎಎಸ್, ಕೆಎಎಸ್ ಲಿಖಿತ ಪರೀಕ್ಷೆ ಮೂಲಕ ನೇಮಕಾತಿ ಮಾಡಿಕೊಳ್ಳಲಿರುವ ವಿವಿಧ ಹುದ್ದೆಗಳ ಆಯ್ಕೆಗೆ ನಡೆಸಲಿರುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಜ್ಞಾನಬುತ್ತಿ ಸಂಸ್ಥೆ ವತಿಯಿಂದ ಉಚಿತ ತರಬೇತಿ ನೀಡಲು ನಿರ್ಧರಿಸಲಾಗಿದೆ. ಆಸಕ್ತರು ಜೂ.26ರೊಳಗಾಗಿ ಸಂಜೆ 5.30 ರಿಂದ 7.30ರ ವರೆಗೆ ಮೈಸೂರಿನ ಲಕ್ಷ್ಮಿಪುರಂ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜಿನ ಆವರಣದಲ್ಲಿರುವ ಜ್ಞಾನಬುತ್ತಿ ಸಂಸ್ಥೆಯಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಮಾಹಿತಿಗೆ ಜ್ಞಾನಬುತ್ತಿ ಸಂಸ್ಥೆ ಕಾರ್ಯದರ್ಶಿ ಹೆಚ್.ಬಾಲಕೃಷ್ಣ ಮೊ:9448117455, ಸಂಯೋಜಕರಾದ ಸಿ.ಕೆ.ಕಿರಣ್ ಕೌಶಿಕ್ ಮೊ: 9972830857, ಕೆ.ವೈ.ನಾಗೇಂದ್ರ ಮೊ: 8296788251 ಅನ್ನು ಸಂಪರ್ಕಿಸಬಹುದು.

ಎಸ್‌ಎಸ್‌ಎಲ್‌ಸಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ...



ಪಿಸಿಎನ್ ಸಂಸ್ಥೆ ವತಿಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಅಶೋಕಪುರಂನ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಶ್ರೀಮತಿ ನೀಲಮ್ಮ ಪುಟ್ಟಯ್ಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆ ಸಂಚಾಲಕರಾದ ಮಹೇಶ್ ವಿಕ್ರಾಂತ, ಮಹಾಲಿಂಗಂ, ಎಂ.ರಾಜಣ್ಣ, ಸಿದ್ದಾರ್ಥ, ಸಂತೋಷ, ರಜನಿಕಾಂತ್, ಮಾಯಿಗಂಯ್ಯ, ರಾಜೇಂದ್ರ ಹಾಗೂ ಪೋಷಕರು, ಅಶೋಕಪುರಂನ ನಿವಾಸಿಗಳು ಉಪಸ್ಥಿತರಿದ್ದರು.

ದೇಶ - ವಿದೇಶ

ಇರಾನ್–ಇಸ್ರೇಲ್ ಯುದ್ಧದ ಎಫೆಕ್ಟ್, ಬಂದರಲ್ಲಿ ಲಕ್ಷ ಟನ್ ಬಾಸ್ಮತಿ ಅಕ್ಕಿ!

ನವದೆಹಲಿ: ಇಸ್ರೇಲ್–ಇರಾನ್ ಸಂಘರ್ಷದಿಂದ ಆಗುವ ಸಮಸ್ಯೆಗಳು ಒಂದೆರಡಲ್ಲ. ಅನೇಕ ರೀತಿಯಾಗಿ ವಿವಿಧ ದೇಶಗಳಿಗೆ ಇದು ಹೊಡೆತ ಕೊಡುತ್ತದೆ. ಸದ್ಯ ಭಾರತದಿಂದ ಹೊರಟಿದ್ದ 1 ಲಕ್ಷ ಟನ್ ಬಾಸ್ಮತಿ ಅಕ್ಕಿ ಭಾರತದ ಬಂದರುಗಳಲ್ಲಿ ಸಿಲುಕಿದೆ ಎಂದು ಅಖಿಲ ಭಾರತ ಅಕ್ಕಿ ರಫ್ತುದಾರರ ಸಂಘ ಮಾಹಿತಿ ನೀಡಿದೆ. ಭಾರತದಿಂದ ಇರಾನ್‌ಗೆ ಹೋಗಬೇಕಿದ್ದ ಈ ಅಕ್ಕಿ ಸದ್ಯ ಭಾರತೀಯ ಬಂದರುಗಳಲ್ಲಿ ಸಿಲುಕಿದೆ. ಭಾರತದ ಒಟ್ಟು ಬಾಸ್ಮತಿ ಅಕ್ಕಿ ರಫ್ತಿನಲ್ಲಿ ಇರಾನ್ ಶೇ. 18–20ರಷ್ಟು ಭಾಗದಷ್ಟು ರಫ್ತು ಮಾಡಿಕೊಳ್ಳುತ್ತದೆ. ಇರಾನ್ ಹಾಗೂ ಇಸ್ರೇಲ್ ಸಂಘರ್ಷದಿಂದ ಇರಾನ್‌ಗೆ ಹೋಗುವ ಯಾವುದೇ ಹಡಗುಗಳು ಹೋಗುತ್ತಿಲ್ಲ. ಈ ಹಡಗುಗಳಿಗೆ ಯಾವುದೇ ವಿಮೆ ಇಲ್ಲದ ಕಾರಣದಿಂದ, ಬಂದರುಗಳಲ್ಲಿ ತಡೆಹಿಡಿಯಲಾಗಿದೆ. ಸಾಮಾನ್ಯವಾಗಿ ಈ ರೀತಿ ಅಂತರಾಷ್ಟ್ರೀಯ ಸಂಘರ್ಷಗಳಲ್ಲಿ ಹಾನಿಯಾದರೆ ಅದಕ್ಕೆ ವಿಮೆ ಬರುವುದಿಲ್ಲ. ಇದರಿಂದ ರಫ್ತು ಮಾಡುವವರು ಈ ಸಮಯದಲ್ಲಿ ಸಾಮಗ್ರಿಗಳನ್ನು ಕಳುಹಿಸುವುದಿಲ್ಲ ಎಂದು ಹೇಳಲಾಗುತ್ತಿದೆ.



ಅತ್ಯಾಚಾರ ಪ್ರಕರಣ: ಅಸಾರಾಂ ಬಾಪುಗೆ ಮಧ್ಯಂತರ ಜಾಮೀನು


ಜೋಧ್‌ಪುರ: ಅತ್ಯಾಚಾರ ಪ್ರಕರಣದಲ್ಲಿ ಜೈಲಿನಲ್ಲಿ ಶಿಕ್ಷೆ ಅನುಭವಿಸುತ್ತಿರುವ ಸ್ವಯಂ ಘೋಷಿತ ದೇವಮಾನವ ಅಸಾರಾಂ ಬಾಪುಗೆ ಜೋಧ್ಪುರ ನ್ಯಾಯಾಲಯ ಸೋಮವಾರ ಮಧ್ಯಂತರ ಜಾಮೀನು ಮಂಜೂರು ಮಾಡಿದೆ. 2013ರಲ್ಲಿ ಜೋಧ್‌ಪುರ ಆಶ್ರಮದಲ್ಲಿ ಬಾಲಕಿ ಮೇಲೆ ಅತ್ಯಾಚಾರ ಪ್ರಕರಣದಲ್ಲಿ ಬಾಪು ಜೈಲಿನಲ್ಲಿ ಶಿಕ್ಷೆ ಅನುಭವಿಸುತ್ತಿದ್ದಾರೆ. ಅಸಾರಾಂ ಹೃದಯ ಸಂಬಂಧಿ ಕಾಯಿಲೆಯ ಜೊತೆಗೆ ವಯೋಸಹಜ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದಾರೆ ಎಂದು ನ್ಯಾಯಪೀಠ ಜಾಮೀನು ನೀಡುವ ವೇಳೆ ಹೇಳಿದೆ. ಮಧ್ಯಂತರ ಜಾಮೀನಿನಿಂದ ಜೈಲಿನಿಂದ ಬಿಡುಗಡೆಯಾದ ನಂತರ ಯಾವುದೇ ಕಾರಣಕ್ಕೂ ಅನುಯಾಯಿಗಳನ್ನು ಭೇಟಿ ಮಾಡದಂತೆ ಅವರಿಗೆ ನಿರ್ದೇಶನ ನೀಡಿದೆ. 2013ರಲ್ಲಿ ಜೋಧಪುರದ ಆಶ್ರಮದಲ್ಲಿ 16 ವರ್ಷದ ಬಾಲಕಿ ಮೇಲೆ ಅತ್ಯಾಚಾರ ಎಸಗಿದ ಪ್ರಕರಣದಲ್ಲಿ ಅಸಾರಾಂ ಬಾಪು ಅಪರಾಧ ಸಾಬೀತಾಗಿತ್ತು. 86 ವರ್ಷದ ಬಾಪುಗೆ ಜೋಧಪುರ ವಿಚಾರಣಾ ನ್ಯಾಯಾಲಯವು ಐಪಿಸಿ ಸೆಕ್ಷನ್ 376, ಪೋಕ್ಸೋ ಕಾಯ್ದೆ ಮತ್ತು ಬಾಲಾರೋಪ ನ್ಯಾಯ ಕಾಯ್ದೆ ಅಡಿ ಶಿಕ್ಷೆ ವಿಧಿಸಿತ್ತು



ಡಮಾಸ್ಕಸ್‌ನ ಚರ್ಚ್‌ನಲ್ಲಿ ಆತ್ಮಾಹುತಿ ಬಾಂಬ್ ದಾಳಿ: ಕನಿಷ್ಠ 20 ಸಾವು

ಬೈರೂತ್: ಸಿರಿಯಾದ ರಾಜಧಾನಿ ಡಮಾಸ್ಕಸ್‌ನ ಚರ್ಚ್‌ನಲ್ಲಿ ನಡೆದ ಆತ್ಮಾಹುತಿ ಬಾಂಬ್ ದಾಳಿಯಲ್ಲಿ ಕನಿಷ್ಠ 20 ಜನ ಮೃತಪಟ್ಟು, 50ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ. ಡಮಾಸ್ಕಸ್‌ನ ದ್ವೀಲಾದಲ್ಲಿರುವ ಮಾರ್ ಎಲಿಯಾಸ್ ಚರ್ಚ್‌ಗೆ ನುಗ್ಗಿದ ದಾಳಿಕೋರ ಮೊದಲು ಜನರ ಮೇಲೆ ಮನಬಂದಂತೆ ಗುಂಡು ಹಾರಿಸಿದ್ದಾನೆ. ಬಳಿಕ ತನ್ನನ್ನು ತಾನು ಸ್ಫೋಟಿಸಿಕೊಂಡಿದ್ದಾನೆ. ಚರ್ಚ್‌ನಲ್ಲಿ ಪ್ರಾರ್ಥನೆ ಸಲ್ಲಿಸುತ್ತಿದ್ದಾಗ ಈ ಘಟನೆ ನಡೆದಿದೆ. ದಾಳಿಯ ಹಿಂದೆ ಇಸ್ಲಾಮಿಕ್ ಸ್ಟೇಟ್ ಗುಂಪಿನ ಕೈವಾಡವಿದೆ ಎಂದು ಸಿರಿಯಾ ಹೇಳಿದೆ.

ಡಿಸೆಂಬರ್(2024)ನಲ್ಲಿ ಇಸ್ಲಾಮಿಸ್ಟ್ ನೇತೃತ್ವದ ಪಡೆಗಳು ದೀರ್ಘಕಾಲದ ಆಡಳಿತಗಾರ ಬಶರ್ ಅಲ್–ಅಸ್ಸಾದ್ ನನ್ನು ಪದಚ್ಯುತಗೊಳಿಸಿದ ಬಳಿಕ ನಡೆದ ಮೊದಲ ಆತ್ಮಾಹುತಿ ಬಾಂಬ್ ದಾಳಿ ಇದಾಗಿದೆ. ಚರ್ಚ್‌ನಲ್ಲಿ ನಡೆದ ಭಯಾನಕ ಘಟನೆಯನ್ನು ಪ್ರತ್ಯಕ್ಷದರ್ಶಿಗಳು ವಿವರಿಸಿದ್ದಾರೆ. ನಾವು ಚರ್ಚ್‌ಗೆ ಹೋದಾಗ, ದ್ವಾರವು ನಾಗರಿಕರು, ಯುವಕರು ಮತ್ತು ವೃದ್ಧರ ದೇಹದ ಭಾಗಗಳಿಂದ ತುಂಬಿತ್ತು ಎಂದು 35 ವರ್ಷದ ಮೆಲೇಷಿಯಸ್ ಶತಾಹಾ ಎಂಬುವವರು ಹೇಳಿದ್ದಾರೆ.



ವಂದೇ ಭಾರತ್ ರೈಲಿನಲ್ಲಿ ಶಾಸಕನಿಗೆ ಸೀಟು ಬಿಡದ ಪ್ರಯಾಣಿಕನಿಗೆ ಥಳಿತ

ನವದೆಹಲಿ: ದೆಹಲಿ– ಭೂಪಾಲ್ ಮಾರ್ಗದ ವಂದೇ ಭಾರತ್ ರೈಲಿನಲ್ಲಿ ಬಿಜೆಪಿ ಶಾಸಕರೊಬ್ಬರಿಗೆ ಸೀಟು ಬಿಡಲು ನಿರಾಕರಿಸಿದ ಪ್ರಯಾಣಿಕರೊಬ್ಬರಿಗೆ ಹಿಗ್ಗಾಮುಗ್ಗಾ ಥಳಿಸಿರುವ ಘಟನೆ ನಡೆದಿದೆ. ಉತ್ತರ ಪ್ರದೇಶದ ಜಾನ್ಸಿಯ ಶಾಸಕ ರಾಜೀವ್ ಸಿಂಗ್ ತನ್ನ ಕುಟುಂಬದೊಂದಿಗೆ ರೈಲಿನಲ್ಲಿ ಪ್ರಯಾಣಿಸುತ್ತಿದ್ದಾಗ ಈ ಘಟನೆ ನಡೆದಿದೆ. ಸಿಂಗ್ ಅವರು ರೈಲಿನ ಹಿಂಭಾಗದ ಬೋಗಿಯಲ್ಲಿ ಸೀಟು ಪಡೆದಿದ್ದರೆ, ಅವರ ಕುಟುಂಬ ಸದಸ್ಯರು ಮುಂಭಾಗದಲ್ಲಿ ಕುಳಿತಿದ್ದರು. ಹೀಗಾಗಿ ಅವರ ಪಕ್ಕದಲ್ಲಿ ಕುಳಿತಿದ್ದ ಪ್ರಯಾಣಿಕನಿಗೆ ಸೀಟು ಬಿಡಲು ಕೇಳಿದಾಗ ಆತ ನಿರಾಕರಿಸಿದ್ದಾರೆ. ನಂತರ ಶಾಸಕರ ಬೆಂಬಲಿಗರು ಭೂಪಾಲ್‌ಗೆ ತೆರಳುತ್ತಿದ್ದ ವ್ಯಕ್ತಿಗೆ ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಪ್ರಯಾಣಿಕನ ಮೂಗಿನಿಂದ ರಕ್ತ ಸುರಿಯುತ್ತಿದ್ದು, ಆತನ ಬಟ್ಟೆ ರಕ್ತದಲ್ಲಿ ಒದ್ದೆಯಾಗಿರುವುದು ವಿಡಿಯೋದಲ್ಲಿದೆ. ಸಿಸಿಟಿವಿ ದೃಶ್ಯಾವಳಿ ಆಧಾರದ ಮೇಲೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಾನ್ಸಿ ರೈಲ್ವೆ ಪೊಲೀಸ್ ವರಿಷ್ಠಾಧಿಕಾರಿ ವಿಪುಲ್‌ಕುಮಾರ್ ಶ್ರೀವಾಸ್ತವ ಸ್ಪಷ್ಟಪಡಿಸಿದ್ದಾರೆ.



ಸಿಂಧೂ ನದಿ ನೀರು ಕೊಡಲು ನಿರಾಕರಿಸಿದರೆ ಪಾಕ್ ಮತ್ತೆ ಯುದ್ಧ

ಇಸ್ಲಾಮಾಬಾದ್: ಸಿಂಧೂ ನದಿ ನೀರಿನ ಒಪ್ಪಂದದ ಅನ್ವಯ ನ್ಯಾಯಯುತವಾಗಿ ನಮಗೆ ಸೇರಬೇಕಿರುವ ನೀರಿನ ಪಾಲನ್ನು ಕೊಡಲು ಒಪ್ಪದಿದ್ದರೆ ಭಾರತದ ವಿರುದ್ಧ ಪಾಕಿಸ್ತಾನ ಯುದ್ಧ ಸಾರಲಿದೆ ಎಂದು ಪಾಕಿಸ್ತಾನದ ಮಾಜಿ ವಿದೇಶಾಂಗ ಸಚಿವ ಬಿಲಾವಲ್ ಭುಟ್ಟೊ ಜರ್ದಾರಿ ಹೇಳಿದ್ದಾರೆ. ಏಪ್ರಿಲ್ 22ರ ಪಹಲ್ಗಾಮ್ ಭಯೋತ್ಪಾದಕ ದಾಳಿ ಬಳಿಕ ಭಾರತವು 1960ರ ಸಿಂಧೂ ನದಿ ನೀರಿನ ಒಪ್ಪಂದ ರದ್ದು ಮಾಡಿತ್ತು. ಈ ಒಪ್ಪಂದವನ್ನು ಮರು ಸ್ಥಾಪಿಸುವುದಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಘೋಷಿಸಿದ್ದರು. ಸಂಸತ್ತಿನಲ್ಲಿ ಮಾಡಿದ ಭಾಷಣದಲ್ಲಿ ಬಿಲಾವಲ್, ಒಪ್ಪಂದವನ್ನು ಸ್ಥಗಿತಗೊಳಿಸುವ ಭಾರತದ ನಿರ್ಧಾರವನ್ನು ವಿರೋಧಿಸಿದ್ದು, ಪಾಕಿಸ್ತಾನವು ನೀರಿನ ಪಾಲನ್ನು ಪಡೆದೇ ತೀರುವುದಾಗಿ ಹೇಳಿದ್ದಾರೆ. ಸಿಂಧೂ ಒಪ್ಪಂದ ಕೊನೆಗೊಂಡಿದೆ ಅಥವಾ ಸ್ಥಗಿತಗೊಂಡಿದೆ ಎಂಬ ಭಾರತದ ಹೇಳಿಕೆ ಕಾನೂನುಬಾಹಿರವಾಗಿದೆ. ಏಕೆಂದರೆ, ಒಪ್ಪಂದ ಸ್ಥಗಿತಗೊಂಡಿಲ್ಲ. ಇದು ಪಾಕಿಸ್ತಾನ ಮತ್ತು ಭಾರತ ಎರಡೂ ದೇಶಗಳ ಬದ್ಧತೆಯಾಗಿದೆ. ಆದರೆ, ನೀರನ್ನು ನಿಲ್ಲಿಸುವ ಬೆದರಿಕೆ ವಿಶ್ವಸಂಸ್ಥೆಯ ನಿಯಮಗಳ ಪ್ರಕಾರ ಕಾನೂನುಬಾಹಿರವಾಗಿದೆ ಎಂದು ಅವರು ಹೇಳಿದ್ದಾರೆ.



ಮೈಸೂರು ಮಿತ್ರ ಮಂಗಳವಾರ 24 ಜೂನ್ 2025

ಬೆಟ್ಟತ್ತೂರು ಗ್ರಾಮದಲ್ಲಿ ಕಾಡಾನೆಗಳ ಹಾವಳಿ: ಗ್ರಾಮಸ್ಥರು ಹೈರಾಣ

ನಾಪೋಕ್ಲು: ಸಮೀಪದ ಬೆಟ್ಟತ್ತೂರು ಗ್ರಾಮ ದಲ್ಲಿ ಕಾಡಾನೆಗಳ ಹಾವಳಿಯಿಂದ ರೈತರು ಸಮಸ್ಯೆಯನ್ನು ಎದುರಿಸುವುದ ರೊಂದಿಗೆ ಹೈರಾಣಾಗಿದ್ದಾರೆ.

ಗ್ರಾಮದಲ್ಲಿ ಕಾಡಾನೆಗಳ ಹಿಂಡು ನಿರಂತರ ದಾಂದಲೆ ನಡೆಸುತ್ತಿದ್ದು ಕಾಫಿ, ತೆಂಗು, ಬಾಳೆ ಗಿಡಗಳನ್ನು ನಾಶಪಡಿಸಿವೆ. ಕಾಡಾನೆಗಳ ಹಾವಳಿಯಿಂದ ರೈತರು ಚಿಂತಾಕ್ರಾಂತರಾಗಿದ್ದಾರೆ. ಗ್ರಾಮದ ನಿವಾಸಿ ಮರದಾಳು ರಾಮಚಂದ್ರ ಅವರ ಮನೆಯ ಸುತ್ತಮುತ್ತ ದಾಳಿ ನಡೆಸಿರುವ ಕಾಡಾನೆಗಳ ಹಿಂಡು ತೆಂಗು, ಬಾಳೆ ಗಿಡಗಳನ್ನು ಸಂಪೂರ್ಣ ಧ್ವಂಸಗೊಳಿಸಿವೆ. ಅಲ್ಲದೆ ಕೃಷಿ ಪಸಲುಗಳಿಗೆ ಹಾನಿ ಉಂಟು ಮಾಡಿದೆ.

ಇತ್ತೀಚೆಗೆ ನೆಟ್ಟ ಹಣ್ಣಿನ ಗಿಡಗಳೂ ಧ್ವಂಸವಾಗಿವೆ. ಕಾಡಾನೆಗಳ ಉಪಟಳವನ್ನು ತಡೆಗಟ್ಟಲು ಇಲಾಖೆ ಮುಂದಾಗಿ ಸೂಕ್ತ ಪರಿಹಾರ ನೀಡಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.



ಬೆಟ್ಟತ್ತೂರು ಗ್ರಾಮದ ನಿವಾಸಿ ಮರದಾಳು ರಾಮಚಂದ್ರ ಅವರ ಮನೆಯ ಸುತ್ತಮುತ್ತ ಕಾಡಾನೆಗಳ ಹಿಂಡು ದಾಳಿ ನಡೆಸಿ ಬಾಳೆ ಗಿಡಗಳನ್ನು ಸಂಪೂರ್ಣ ಧ್ವಂಸಗೊಳಿಸಿವೆ.

ಕಾಣೆಯಾಗಿದ್ದ ವ್ಯಕ್ತಿಯ ದೇಹ ಹೊಳೆಯಲ್ಲಿ ಶವವಾಗಿ ಪತ್ತೆ

ಸುಂಟಿಕೊಪ್ಪ, ಜೂ.23– ಕಾಣೆಯಾಗಿದ್ದ ವ್ಯಕ್ತಿಯೊಬ್ಬರ ಮೃತದೇಹ ಹರದೂರು ಹೊಳೆಯಲ್ಲಿ ಪತ್ತೆಯಾಗಿದೆ. ಮಾದಾಪುರ ಜಂಬೂರು ಬಾಣೆ ನಿವಾಸಿ ಜನಾರ್ಧನ(56) ಎಂದು ಮೃತರನ್ನು ಗುರುತಿಸಲಾಗಿದೆ.

ಜೂ.19ರಂದು ರಾತ್ರಿ 9 ಗಂಟೆಗೆ ಮನೆಯಿಂದ ಹೋದ ಇವರು ಮನೆಗೆ ಹಿಂತಿರುಗಿರಲಿಲ್ಲ. ಮನೆಯವರು ಎಲ್ಲಿ ಹುಡುಕಿದರೂ ಜನಾರ್ಧನ ಪತ್ತೆಯಾಗಿರಲಿಲ್ಲ. ಜೂ.23ರಂದು ಬೆಳಿಗ್ಗೆ ಹರದೂರು ಹೊಳೆಯಲ್ಲಿ ಜನಾರ್ಧನ ಅವರ ಮೃತದೇಹ ಪತ್ತೆಯಾಗಿದೆ. ಸುಂಟಿಕೊಪ್ಪ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಮಹಜರು ನಡೆಸಿ ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ಗಾರೆ ಕೆಲಸಕ್ಕೆ ಬಂದಿದ್ದ ತಮಿಳುನಾಡಿನ ವ್ಯಕ್ತಿ ನಾಪತ್ತೆ



ಮಡಿಕೇರಿ,ಜೂ.23– ಗಾರೆ ಕೆಲಸಕ್ಕೆಂದು ಶ್ರೀಮಂಗಲಕ್ಕೆ ಬಂದಿದ್ದ ತಮಿಳುನಾಡು ರಾಜ್ಯದ ದಿಂಡಿಕ್ಕಲ್ ಜಿಲ್ಲೆಯ ನಾಗೂರು ಮೂಲದ ಕುಮಾರ.ಕೆ(40) ನಾಪತ್ತೆಯಾಗಿರುವ ಕುರಿತು ಕೊಡಗು ಜಿಲ್ಲೆಯ ಶ್ರೀಮಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕುಮಾರ ಅವರ ಪತ್ನಿ ಪೇಚಿಯಮ್ಮ ಎಂಬುವರು ದೂರು ನೀಡಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಜೂ.1ರಂದು ಪತಿ ಕುಮಾರ ಅವರು ಊರಿನಿಂದ ಸ್ನೇಹಿತರೊಂದಿಗೆ ಗಾರೆ ಕೆಲಸಕ್ಕೆಂದು ಹೋದವರು ಶ್ರೀಮಂಗಲದಲ್ಲಿ ತಂಗಿದ್ದರು. ಜೂ.15ರಂದು ನನಗೆ ಕರೆ ಮಾಡಿ ನಾನು ಅನಾರೋಗ್ಯಕ್ಕೆ ಒಳಗಾಗಿದ್ದು, ಊರಿಗೆ ಮರಳುತ್ತೇನೆ ಎಂದು ಹಾಗೂ ಜೂ.16ರಂದು ನಾನು ಊರಿಗೆ ಬರುತ್ತಿದ್ದು, ಬಸ್‌ನಲ್ಲಿದ್ದೇನೆ ಎಂದು ತಿಳಿಸಿದ್ದರು.

ಆದರೆ ಕುಮಾರ ಅವರು ಇಲ್ಲಿಯವರೆಗೆ ಮನೆಗೆ ಬಂದಿಲ್ಲ. ಅವರ ಮೊಬೈಲ್ ಫೋನ್ ಸ್ವಿಚ್ ಆಫ್ ಆಗಿದೆ ಎಂದು ಪೇಚಿಯಮ್ಮ ದೂರಿನಲ್ಲಿ ತಿಳಿಸಿದ್ದಾರೆ. ಕುಮಾರ ಅವರು ಪತ್ತೆಯಾದರೆ ಶ್ರೀಮಂಗಲ ಪೊಲೀಸ್ ಠಾಣೆಗೆ 08274–246246 ಮಾಹಿತಿ ನೀಡುವಂತೆ ಪೊಲೀಸ್ ಅಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಕೊಡವ ಲ್ಯಾಂಡ್ ರಕ್ಷಣೆ ಕೊಡವ ಸಮುದಾಯದ ಹೊಣೆ

ಪೊನ್ನಂಪೇಟೆಯಲ್ಲಿ ಸಿಎನ್‌ಸಿ ಜನಜಾಗೃತಿ ಮಾನವ ಸರಪಳಿ

ಮಡಿಕೇರಿ,ಜೂ.23– ಕೊಡವ ಲ್ಯಾಂಡ್‌ನ ರಕ್ಷಣೆ ಕೊಡವ ಸಮುದಾಯದ ಹೊಣೆಯಾಗಿದೆ ಎಂದು ಕೊಡವ ನ್ಯಾಷನಲ್ ಕೌನ್ಸಿಲ್ ಅಧ್ಯಕ್ಷ ಎನ್.ಯು.ನಾಚಪ್ಪ ಪ್ರತಿಪಾದಿಸಿದ್ದಾರೆ.

ಸಿಎನ್‌ಸಿ ವತಿಯಿಂದ ಪೊನ್ನಂಪೇಟೆಯಲ್ಲಿ ನಡೆದ 6ನೇ ಜನಜಾಗೃತಿ ಮಾನವ ಸರಪಳಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರಾಷ್ಟ್ರೀಯ ಜನಗಣತಿಯೊಂದಿಗೆ ಜಾತಿವಾರು ಸಮೀಕ್ಷೆಯ ಸಂದರ್ಭ ಆದಿಮಸಂಜಾತ ಏಕ–ಜನಾಂಗೀಯ ಕೊಡವರಿಗೆ ಪ್ರತ್ಯೇಕ ಕೋಡ್ ಮತ್ತು ಕಲಮ್‌ಅನ್ನು ಅಳವಡಿಸಬೇಕು. ಹೀಗೆ ಮಾಡುವುದರಿಂದ ಮಾತ್ರ ಕೊಡವರ ಹಾಗೂ ಕೊಡವ ಲ್ಯಾಂಡ್‌ನ ರಕ್ಷಣೆ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕೊಡವಲ್ಯಾಂಡ್ ಅನ್ನು ಸಂರಕ್ಷಿಸಲು ಸಮಸ್ತ ಕೊಡವರು ಜಾಗೃತರಾಗಬೇಕು ಮತ್ತು ಸಂವಿಧಾನದತ್ತವಾದ ಹಕ್ಕುಗಳ ಪರ ಸಂಘಟಿತರಾಗಬೇಕು. ಕೊಡವರಿಗೆ ಪ್ರತ್ಯೇಕ ಕೋಡ್ ಮತ್ತು ಕಲಮ್‌ಅನ್ನು ಅಳವಡಿಸುವುದು 2026ರ ಲೋಕಸಭಾ ಮತ್ತು ವಿಧಾನಸಭಾ ಕ್ಷೇತ್ರ ಪುನರ್ ವಿಂಗಡಣೆಗೆ ಮಾನದಂಡವಾಗಲಿದೆ. ಇದನ್ನು ಕೊಡವರು ಸೂಕ್ಷ್ಮವಾಗಿ ಅವಲೋಕಿಸಬೇಕು ಮತ್ತು ಈ ಬೇಡಿಕೆಗೆ ಒತ್ತು ನೀಡಬೇಕೆಂದು ಕರೆ ನೀಡಿದರು.

ಪ್ರತಿ ಗ್ರಾಮಗಳಲ್ಲಿ ಇಂದು ಹತ್ತು–ಹದಿನೈದು ರೆಸಾರ್ಟ್‌ಗಳು ಎಗ್ಗಿಲ್ಲದೆ ತಲೆ ಎತ್ತಿವೆ. ಜಿಲ್ಲಾಡಳಿತ ನಿರಂತರವಾಗಿ ಈ ಪ್ರದೇಶವನ್ನು ನಗರೀಕರಣ ಮಾಡಲು ಎಲ್ಲಾ ರೀತಿಯ ವಾತಾವರಣ ಸೃಷ್ಟಿಸಿ ಹೊರಗಿನ ಹೂಡಿಕೆದಾರರನ್ನು ಆಕರ್ಷಿಸುವ ಕೆಲಸ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದವರು ಸೂರ್ಯ–ಚಂದ್ರ, ಗುರು–ಕಾರೋಣ, ಪವಿತ್ರ ಸಂವಿಧಾನ, ಜಲದೇವಿ ಕಾವೇರಿ, ಭೂ ದೇವಿ ಮತ್ತು ಪ್ರಕೃತಿ ದೇವಿಯ ಹೆಸರಿನಲ್ಲಿ ಸಿಎನ್‌ಸಿಯ ನ್ಯಾಯಯೋಚಿತ ಹೋರಾಟವನ್ನು ಬೆಂಬಲಿಸುವ ಕುರಿತು ಪ್ರತಿಜ್ಞೆಯನ್ನು ಸ್ವೀಕರಿಸಿದರು.

ಇಲ್ಲಿಯವರೆಗೆ ಬಿರುನಾಣಿ, ಕಡಂಗ, ಕಕ್ಕಬ್ಬೆ, ಟಿ.ಶೆಟ್ಟಿಗೇರಿ, ಬಾಳೆಲೆಯಲ್ಲಿ, ಪೊನ್ನಂಪೇಟೆ ಜನ ಜಾಗೃತಿ ಮಾನವ ಸರಪಳಿ ಕಾರ್ಯಕ್ರಮ ನಡೆಸಲಾಗಿದೆ. ಮುಂದಿನ ಮಾನವ ಸರಪಳಿ ಜನಜಾಗೃತಿ ಕಾರ್ಯಕ್ರಮ ಜುಲೈ 7ರಂದು ನಾಪೋಕ್ಲುವಿನಲ್ಲಿ ನಡೆಯಲಿದೆ ಎಂದು ಎನ್.ಯು.ನಾಚಪ್ಪ ಇದೇ ಸಂದರ್ಭ ತಿಳಿಸಿದರು.



ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ನೇತೃತ್ವದಲ್ಲಿ ನಡೆದ ಜನಜಾಗೃತಿ ಮಾನವ ಸರಪಳಿ.

ಸರ್ಕಾರಿ ಶಾಲೆಯ ಮೇಲೆ ಪುಂಡರ ದಾಳಿ

ಕಿಟಕಿ ಗಾಜು ಒಡೆದು, ನಲ್ಲಿಗೆ ಹಾನಿ



ಪುಂಡ ಪೋಕರಿಗಳು ದಾಳಿ ನಡೆಸಿ ಶಾಲೆಯ ಕಿಟಕಿ ಜಖಂಗೊಳಿಸಿರುವುದು.

ಸುಂಟಿಕೊಪ್ಪ: ರಾತ್ರಿ ವೇಳೆ ದುಷ್ಕರ್ಮಿಗಳು ಕಾಜೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಿಟಕಿ ಗಾಜುಗಳನ್ನು ಒಡೆದು ಹಾಕಿ, ಕುಡಿಯುವ ನೀರಿನ ನಲ್ಲಿ ಧ್ವಂಸಗೊಳಿಸಿರುವ ಘಟನೆ ನಡೆದಿದೆ. 70ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಾಜೂರು ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಕಳೆದ ವರ್ಷದಿಂದ ಎಲ್.ಕೆ.ಜಿ, ಯು.ಕೆ.ಜಿ, ಆಂಗ್ಲ ಮಾಧ್ಯಮ ಪ್ರಾರಂಭಿಸಲಾಗಿದೆ.

ರಾತ್ರಿ ವೇಳೆ ಪುಂಡ ಪೋಕರಿಗಳು ಮದ್ಯ ಸೇವಿಸಿ ಖಾಲಿ ಲೋಟ, ಬಾಟಲಿ ಹಾಗೂ ಬೀಡಿ, ಸಿಗರೇಟಿನ ತುಂಡನ್ನು ಶಾಲಾ ಆವರಣದಲ್ಲೇ ಎಸೆದು ಪುಂಡಾಟ ಮೆರೆಯುತ್ತಿದ್ದಾರೆ. ಶಾಲೆಯ ಕೊಠಡಿಗಳ ಕಿಟಕಿ ಗಾಜುಗಳನ್ನು, ಕುಡಿಯುವ ನೀರಿನ ನಲ್ಲಿಯನ್ನು ಒಡೆದು ವಿಕೃತ ಮನಸ್ಥಿತಿಯನ್ನು ತೋರಿದ್ದಾರೆ.

ಈ ಕುರಿತು ಪೊಲೀಸರಿಗೆ ಶಾಲಾ ಮುಖ್ಯೋಪಾಧ್ಯಾಯರು ದೂರು ನೀಡಿದ್ದಾರೆ. ಈ ಹಿಂದೆಯೂ ಇಂತಹ ಘಟನೆ ನಡೆದ ಸಂದರ್ಭ ಐಗೂರು ಗ್ರಾಮ ಪಂಚಾಯಿತಿ ವತಿಯಿಂದ 3 ಬಾರಿ ಕುಡಿಯುವ ನೀರಿನ ನಲ್ಲಿಯನ್ನು ದುರಸ್ತಿಪಡಿಸಲಾಗಿತ್ತು. ಪದೇ ಪದೇ ಪುಂಡಾಟ ಮೆರೆಯುವ ದುಷ್ಕರ್ಮಿಗಳು ಹಾಗೂ ಪುಂಡ ಪೋಕರಿಗಳ ಅಟ್ಟಹಾಸಕ್ಕೆ ಪೊಲೀಸರು ಕಡಿವಾಣ ಹಾಕಬೇಕೆಂದು ಗ್ರಾಮಸ್ಥರು ಹಾಗೂ ಮಕ್ಕಳ ಪೋಷಕರು ಒತ್ತಾಯಿಸಿದ್ದಾರೆ.


ಕೊಡಗು ಜಿಲ್ಲೆಯಾದ್ಯಂತ ಮುಂದುವರೆದ ಮಳೆಯ ಅಬ್ಬರ

'ಆರೆಂಜ್ ಅಲರ್ಟ್' ಘೋಷಣೆ, ಮನೆಗಳ ಗೋಡೆ ಕುಸಿತ

ಮಡಿಕೇರಿ,ಜೂ.23– ಕೊಡಗು ಜಿಲ್ಲೆಯಲ್ಲಿ ಆರಿದ್ರಾ ಮಳೆಯ ಅಬ್ಬರ ಆರಂಭವಾಗಿದ್ದು, ಮಳೆ ಮುಂದುವರೆಯುವ ಎಲ್ಲಾ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಭಾರತೀಯ ಹವಾಮಾನ ಇಲಾಖೆ 'ಆರೆಂಜ್ ಅಲರ್ಟ್' ಘೋಷಿಸಿದೆ. ಈ ನಡುವೆಯೇ ಮಳೆ ಗಾಳಿಯಿಂದ ಕೆಲವು ಭಾಗಗಳಲ್ಲಿ ವಾಸದ ಮನೆಗಳ ಗೋಡೆ ಬಿದ್ದು ಹಾನಿಯಾದ ಬಗ್ಗೆ ವರದಿಯಾಗಿದ್ದು, ಯಾವುದೇ ದೊಡ್ಡ ಅನಾಹುತ ಸಂಭವಿಸಿಲ್ಲ. ಜೂ.22ರಿಂದ ಆರಿದ್ರಾ ಮಳೆ ಆರಂಭ ಕಂಡಿದ್ದು, ಎಲ್ಲೆಡೆ ಉತ್ತಮ ಮಳೆಯಾಗುತ್ತಿದೆ.

ಕುಶಾಲನಗರ ತಾಲೂಕು ಸುಂಟಿಕೊಪ್ಪ ಹೋಬಳಿಯ ಕಾನ್ ಬೈಲು ಬೈಚನಹಳ್ಳಿ ಗ್ರಾಮದ ನಿವಾಸಿ ಪಿ.ಬಿ.ಗುರುವ ಎಂಬವರ ಮನೆಯ ಹಿಂದಿನ ಗೋಡೆ ಕುಸಿತವಾಗಿದ್ದು ಶೇ.30ರಷ್ಟು ಹಾನಿ ಸಂಭವಿಸಿದೆ. ಮಡಿಕೇರಿ ತಾಲೂಕು ಸಂಪಾಜೆ ಹೋಬಳಿ ಕಾಟಕೇರಿ ಗ್ರಾಮದ ಅಶ್ವಥ್ ಭಟ್ ಎಂಬುವರ ವಾಸದ ಮನೆಯ ಗೋಡೆ ಕುಸಿದಿದ್ದು ಗೃಹೋಪಯೋಗಿ ವಸ್ತುಗಳಿಗೆ ಹಾನಿಯಾಗಿದೆ. ಇನ್ನು ಮಡಿಕೇರಿ ವಿರಾಜಪೇಟೆ ಮುಖ್ಯ ರಸ್ತೆಯ ಕಗ್ಗೋಡ್ಲು ಬಳಿ ರಸ್ತೆಗೆ ಅಡಡ್ಡಾಗಿ ಬೃಹತ್ ಮರ ಮುರಿದು ಬಿದ್ದು ಕೆಲ ಕಾಲ ರಸ್ತೆ ಸಂಚಾರದಲ್ಲಿ ವ್ಯತ್ಯಯ ಉಂಟಾಗಿತ್ತು. ಸ್ಥಳೀಯ ಪಂಚಾಯಿತಿ ಮತ್ತು ಅರಣ್ಯ ಇಲಾಖೆ ಸಿಬ್ಬಂದಿಗಳು ಮರ ತೆರವು ಮಾಡಿ ವಾಹನ ಸಂಚಾರಕ್ಕೆ ಅನುವು ಮಾಡಿದ್ದಾರೆ.

ಜಿಲ್ಲೆಯ ಮಳೆ ಮಾಹಿತಿ: ಕಳೆದ 24 ಗಂಟೆ ಅವಧಿಯಲ್ಲಿ ಭಾಗಮಂಡಲ ವ್ಯಾಪ್ತಿಯಲ್ಲಿ 141 ಮಿ.ಮೀ ಮಳೆಯಾಗಿದ್ದರೆ, ನಾಪೋಕ್ಲು ಭಾಗದಲ್ಲಿ 98.8, ಸಂಪಾಜೆ 94, ಕೊಡ್ಲಿಪೇಟೆ 106, ಶ್ರೀಮಂಗಲ 98, ಅಮ್ಮತ್ತಿ 65 ಹಾಗೂ ಸುಂಟಿಕೊಪ್ಪ ವ್ಯಾಪ್ತಿಯಲ್ಲಿ 60 ಮಿ.ಮೀ ಮಳೆಯಾಗಿದೆ.



ಮಳೆಯಿಂದ ತಾಲೂಕಿನಲ್ಲಿ ಮನೆಯ ಗೋಡೆಯೊಂದು ಕುಸಿದು ಬಿದ್ದಿರುವುದು.

ಕೊಡೀರ ನಾಣಯ್ಯ ನಿಧನ



ಮೈಸೂರು : ಮೈಸೂರಿನ ನಾಯ್ಡುನಗರದ ನಿವಾಸಿ ಮತ್ತು ಎನ್‌ಆರ್ ಮೊಹಲ್ಲಾದ ಶ್ರೀ ಕಾವೇರಿ ಕೊಡವ ಒಕ್ಕೂಟದ ಅಧ್ಯಕ್ಷರೂ ಆದ ಮಾಜಿ ಸೈನಿಕ ಕೊಡೀರ ನಾಣಯ್ಯ(ಪ್ರಕಾಶ್) ಸೋಮವಾರ ಮಧ್ಯಾಹ್ನ ನಗರದ ಖಾಸಗಿ ಆಸ್ಪತ್ರೆಯಲ್ಲಿ ಹೃದಯಾಘಾತದಿಂದ ನಿಧನರಾದರು. ಅವರಿಗೆ 72 ವರ್ಷ ವಯಸ್ಸಾಗಿತ್ತು.

ದಿವಂಗತರು ಪತ್ನಿ ಪುಷ್ಪಾ ನಾಣಯ್ಯ, ಪುತ್ರ ದರ್ಶನ್, ಸೊಸೆ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಮಂಗಳವಾರ (ಜೂ.24) ಮಧ್ಯಾಹ್ನ 2 ಗಂಟೆಗೆ ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ಮೃತರ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮಾಹಿತಿಗಾಗಿ ಮೊ.ನಂ.9880014341, 9945177757 ನ್ನು ಸಂಪರ್ಕಿಸಬಹುದು.

ಶತಾಯುಷಿ ನಂಜಮ್ಮ



ಕುಶಾಲನಗರ : ಸಮೀಪದ ಹೆಬ್ಬಾಲೆ ಗ್ರಾಮದ ದಿ.ಮರಿಯಪ್ಪ ಅವರ ಪತ್ನಿ ಶತಾಯುಷಿ ನಂಜಮ್ಮ (100 ವರ್ಷ) ಭಾನುವಾರ ನಿಧನರಾದರು. ಮೃತರು ಆರು ಪುತ್ರಿ ಹಾಗೂ ಐವರು ಪುತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ ಹೆಬ್ಬಾಲೆ ಗ್ರಾಮದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕೊಡಗು ಜಿಲ್ಲಾ ವೀರಶೈವ ಮಹಾಸಭಾ ಅಧ್ಯಕ್ಷ ಹೆಚ್.ವಿ.ಶಿವಪ್ಪ ಹಾಗೂ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕೆ.ಎಸ್.ಮೂರ್ತಿ ಮೃತರ ನಿಧನಕ್ಕೆ ಸಂತಾಪ ಕೋರಿದ್ದಾರೆ.

ಜೂ.27, ಚಾ.ನಗರದಲ್ಲಿ ಕೆಂಪೇಗೌಡ ಜಯಂತಿ

ಸಕಲ ಸಿದ್ದತೆಗೆ ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಸೂಚನೆ

ಚಾಮರಾಜನಗರ, ಜೂ.23– ನವಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮವನ್ನು ಜೂ.27ರಂದು ನಗರದಲ್ಲಿ ಅದ್ದೂರಿಯಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾ ಕೇಂದ್ರದಲ್ಲಿ ಶ್ರೀ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಆಚರಿಸುವ ಸಂಬಂಧ ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಅವರ ಅಧ್ಯಕ್ಷತೆಯಲ್ಲಿ ಸಮುದಾಯದ ಮುಖಂಡರು, ಪದಾಧಿಕಾರಿಗಳು ಹಾಗೂ ವಿವಿಧ ಸಂಘಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಯಿತು.

ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡರು ಮಾತನಾಡಿ, ನಾಡಿನ ಅಭಿವೃದ್ಧಿಗಾಗಿ ಜನಪರ ಯೋಜನೆಗಳನ್ನು ಜಾರಿಗೊಳಿಸಿದ ಕೆಂಪೇಗೌಡರ ಪರಿಶ್ರಮದಿಂದ ಬೆಂಗಳೂರು ಇಂದು ವಿಶ್ವಮಟ್ಟದಲ್ಲಿ ಹೆಸರು ಗಳಿಸಿದೆ. ಸರ್ಕಾರದ ನಿರ್ದೇಶನದಂತೆ ಕೆಂಪೇಗೌಡ ಅವರ ಜೀವನ–ಸಾಧನೆಗಳನ್ನು ಸ್ಮರಿಸುವಸಲುವಾಗಿ ಇದೇ ತಿಂಗಳ 27ರಂದು ನಗರದಲ್ಲಿ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಕಾರ್ಯಕ್ರಮವನ್ನು ಜೂ.27ರಂದು ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ. ಕಾರ್ಯಕ್ರಮ ಆಯೋಜನೆಯಲ್ಲಿ ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ಅಚ್ಚುಕಟ್ಟಾಗಿ ಆಚರಿಸಲು ಅಗತ್ಯವಿರುವ ಎಲ್ಲಾ ಸಿದ್ದತೆಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಹೆಚ್ಚುವರಿ ಜಿಲ್ಲಾಧಿಕಾರಿ ಸೂಚಿಸಿದರು.

ಬಳಿಕ ಹೆಚ್ಚುವರಿ ಜಿಲ್ಲಾಧಿಕಾರಿಯವರು ಕೆಂಪೇಗೌಡ ಜಯಂತಿ ಅಚರಣೆಗೆ ಸಂಬಂಧಿಸಿದಂತೆ ಅನಿಸಿಕೆ, ಅಭಿಪ್ರಾಯ ಹಾಗೂ ಸಲಹೆ ನೀಡುವಂತೆ ಸಭೆಯಲ್ಲಿ ಹಾಜರಿದ್ದ ಸಮಾಜದ ಮುಖಂಡರು ಹಾಗೂ ವಿವಿಧ ಸಂಘಸಂಸ್ಥೆಗಳ ಪದಾಧಿಕಾರಿಗಳಿಗೆ ಕೋರಿದರು. ಸಮಾಜದ ಮುಖಂಡರು ಮಾತನಾಡಿ ಈ ಬಾರಿಯ ಕೆಂಪೇಗೌಡ ಜಯಂತಿಯ ಮೆರವಣಿಗೆಯನ್ನು ರದ್ದುಪಡಿಸಿ ವೇದಿಕೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ವೇದಿಕೆ ಕಾರ್ಯಕ್ರಮದ ಬ್ಯಾಕ್‌ಡ್ರಾಪ್ ಉತ್ತಮವಾಗಿರಬೇಕು. ಆಹ್ವಾನ ಪತ್ರಿಕೆಯನ್ನು ಶಿಷ್ಟಾಚಾರ ಪ್ರಕಾರವೇ ಮುದ್ರಿಸಿ ಎಲ್ಲಾ ಗಣ್ಯರಿಗೂ ವಿತರಿಸಿ ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಜನಪ್ರತಿನಿಧಿಗಳು, ಜಿಲ್ಲಾಮಟ್ಟದ ಅಧಿಕಾರಿ, ಸಿಬ್ಬಂದಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು. ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಲು ಕೆಂಪೇಗೌಡರ ಬಗ್ಗೆ ಹೆಚ್ಚಾಗಿ ಅಧ್ಯಯನ ಮಾಡಿರುವ ನುರಿತ ಪರಿಣಿತರನ್ನು ಆಯ್ಕೆ ಮಾಡಬೇಕು ಎಂದರು.

ಜಯಂತಿ ಆಚರಣೆ ದಿನದಂದು ನಗರದ ಪ್ರಮುಖ ವೃತ್ತಗಳಲ್ಲಿ ಮತ್ತು ಜಿಲ್ಲಾ ರಂಗಮಂದಿರದ ಎರಡು ಕಡೆ ಕೆಂಪೇಗೌಡರ ಜನಪರ ಸಾಧನೆ ಬಿಂಬಿಸುವ ಫ್ಲೆಕ್ಸ್, ಬ್ಯಾನರ್‌ಗಳನ್ನು ಅಳವಡಿಸಬೇಕು. ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಕೆಂಪೇಗೌಡರ ಕುರಿತ ಹಾಡುಗಾರಿಕೆ ಏರ್ಪಡಿಸಬೇಕು. ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಕೆಂಪೇಗೌಡರ ಭಾವಚಿತ್ರ ಅಳವಡಿಕೆಯಾಗಬೇಕು. ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಸಮುದಾಯದ ಮಕ್ಕಳಿಗೆ ಬಹುಮಾನ ವಿತರಿಸಬೇಕು. ಶಾಲಾ ಕಾಲೇಜು ಮಕ್ಕಳಿಗೆ ಕೆಂಪೇಗೌಡರ ಬಗ್ಗೆ ಚಿತ್ರಕಲೆ, ಪ್ರಬಂಧ, ಇತರೆ ಸ್ಪರ್ಧೆ ಏರ್ಪಡಿಸಿ ವಿಜೇತರನ್ನು ಕಾರ್ಯಕ್ರಮದಲ್ಲಿ ಗೌರವಿಸಬೇಕು ಎಂಬುದು ಸೇರಿದಂತೆ ಇನ್ನಿತರೆ ಸಲಹೆಗಳನ್ನು ಸಮುದಾಯದ ಮುಖಂಡರು ನೀಡಿದರು.

ಮುಖಂಡರ ಸಲಹೆಗಳಿಗೆ ಸಹಮತ ವ್ಯಕ್ತಪಡಿಸಿದ ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಅವರು ಕಾರ್ಯಕ್ರಮ ಆಚರಣೆ ಸಂಬಂಧ ಎಲ್ಲಾ ಸಿದ್ದತಾ ಕೆಲಸಗಳನ್ನು ಅದಷ್ಟು ಶೀಘ್ರವಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ನಂಜುಂಡಯ್ಯ, ಸಮುದಾಯದ ಮುಖಂಡರುಗಳಾದ ಸುದರ್ಶನ್ ಗೌಡ, ಸೋಮಣ್ಣ, ಚಿನ್ನಮೂರ್ತಿ, ಮಹೇಶ್, ನಾಗೇಂದ್ರ, ಚಾ.ರಂ. ಶ್ರೀನಿವಾಸ್‌ಗೌಡ ಸಂಘಸಂಸ್ಥೆ ಮುಖಂಡರಾದ ಜಿ. ಬಂಗಾರು. ಜನಪದ ಗಾಯಕರಾದ ಸಿ.ಎಂ. ನರಸಿಂಹಮೂರ್ತಿ, ಆಲೂರು ನಾಗೇಂದ್ರ, ನಾರಾಯಣ್ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



ಕೆಂಪೇಗೌಡರ ಜಯಂತಿ ಪ್ರಯುಕ್ತ ಪೂರ್ವಭಾವಿ ಸಭೆಯು ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ದೇಶದ ಏಕತೆಗಾಗಿ ಪ್ರಾಣ ತ್ಯಾಗ ಮಾಡಿದ ಶ್ಯಾಮ್ ಪ್ರಸಾದ್ ಮುಖರ್ಜಿ



ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಶ್ಯಾಮ್ ಪ್ರಸಾದ್ ಮುಖರ್ಜಿ ಬಲಿದಾನ ದಿವಸ್ ಆಚರಿಸಲಾಯಿತು.

ಚಾಮರಾಜನಗರ: ಭಾರತೀಯ ಜನಸಂಘದ ಸಂಸ್ಥಾಪಕ ಶ್ಯಾಮ್ ಪ್ರಸಾದ್ ಮುಖರ್ಜಿ ಅವರು ಭಾರತದ ಏಕತೆಗಾಗಿ ತಮ್ಮ ಪ್ರಾಣ ತ್ಯಾಗ ಮಾಡಿದರು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನ್ ಕುಮಾರ್ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಶ್ಯಾಮ್ ಪ್ರಸಾದ್ ಮುಖರ್ಜಿ ಬಲಿದಾನ ದಿವಸ್ ಕಾರ್ಯಕ್ರಮ ದಲ್ಲಿ ಪುಷ್ಪಾರ್ಚನೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶ್ಯಾಮ ಪ್ರಸಾದ್ ಮುಖರ್ಜಿ ಜೂ.23, 1953 ರಂದು ನಿಧನರಾದರು. ಅವರು ಭಾರತದ ಪ್ರಮುಖ ರಾಜಕಾರಣಿ, ವಕೀಲ ಮತ್ತು ಶಿಕ್ಷಣ ತಜ್ಞರಾಗಿದ್ದರು. ಅವರು 1951 ರಲ್ಲಿ ಭಾರತೀಯ ಜನಸಂಘವನ್ನು ಸ್ಥಾಪಿಸಿದರು ಮತ್ತು 1952ರ ಚುನಾವಣೆಯಲ್ಲಿ ಸಂಸತ್ತಿಗೆ ಆಯ್ಕೆಯಾದರು. ಅವರು ಕಾಶ್ಮೀರಕ್ಕೆ ಪ್ರತ್ಯೇಕ ಪ್ರವೇಶವನ್ನು ವಿರೋಧಿಸಿದರು ಮತ್ತು ಜಮ್ಮು ಮತ್ತು ಕಾಶ್ಮೀರಕ್ಕೆ ಪ್ರವೇಶಿಸಲು ಪ್ರಯತ್ನಿಸಿದಾಗ ಬಂಧಿಸಲ್ಪಟ್ಟರು ಎಂದರು.

ಶ್ಯಾಮ್ ಪ್ರಸಾದ್ ಮುಖರ್ಜಿ ಅವರ ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಂಡು ಪಕ್ಷವನ್ನು ತಳಮಟ್ಟದಿಂದ ಬಲವರ್ಧನೆ ಮಾಡೋಣ ಎಂದರು.

ರಾಜ್ಯ ಸರ್ಕಾರ ಹೋಪ್ಲಸ್ ಸರ್ಕಾರ : ದೇಶದಲ್ಲಿ ನರೇಂದ್ರಮೋದಿ ನೇತೃತ್ವದ ಸರ್ಕಾರ ಕಳೆದ 11 ವರ್ಷದಿಂದ ಉತ್ತಮ ಆಡಳಿತ ನೀಡಿದ್ದು, ರಾಜ್ಯದಲ್ಲೂ ಬಿಜೆಪಿ ಸರ್ಕಾರ ಒಳ್ಳೆಯ ಆಡಳಿತ ಕೊಡುವ ಪ್ರಯತ್ನ ಮಾಡಿತು. ಆದರೆ ಈಗಿನ ರಾಜ್ಯ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದ್ದು ಭಿಕ್ಷಕರು ಯೋಜನೆಯಲ್ಲಿ ಹಣಕಿತ್ತುಕೊಳ್ಳುವ ಮಟ್ಟಕ್ಕೆ ಹೋಗಿದ್ದು ಒಂದು ಹೋಪ್ಲಸ್ ಸರ್ಕಾರವಾಗಿದೆ ಎಂದು ಆರೋಪಿಸಿದರು.

ಕಾರ್ಯಕ್ರಮದಲ್ಲಿ ನಗರಸಭಾ ಅಧ್ಯಕ್ಷ ಸುರೇಶ್, ಓಬಿಸಿ ಮೋರ್ಚಾದ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ನೂರೊಂದು ಶೆಟ್ಟಿ ಮಾಜಿ ಅಧ್ಯಕ್ಷಆರ್.ಸುಂದರ್, ಚೂಡಾ ಮಾಜಿ ಅಧ್ಯಕ್ಷರಾದ ಶಾಂತಮೂರ್ತಿ ಕುಲಗಾಣ, ಬಾಲಸುಬ್ರಹ್ಮಣ್ಯಂ, ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ನಗರ ಮಂಡಲ ಅಧ್ಯಕ್ಷ ಶಿವರಾಜ್, ಡಾ. ಎ.ಆರ್ ಬಾಬು, ಜಿಲ್ಲಾ ವಕ್ತಾರ ಕಾಡಳ್ಳಿ ಕುಮಾರ್, ಟಗರಪುರ ರೇವಣ್ಣ, ಕೂಸಣ್ಣ, ಮಹೇಶ್, ಬೂದಿತಿಟ್ಟು ಶಿವಕುಮಾರ್ ಸರೋಜಮ್ಮ ಸರಸ್ವತಮ್ಮ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ಮಲೆಯೂರು ಕಮಲಮ್ಮ, ಎಸ್‌ಟಿ ಮೋರ್ಚಾ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್, ಉಪಾಧ್ಯಕ್ಷ ಬುಲೆಟ್ ಚಂದ್ರು, ಆರ್. ಪುಟ್ಟಮಲ್ಲಪ್ಪ ಹುಲ್ಲಿನ ಶಿವಣ್ಣ, ಎಂ.ಎಸ್.ಚಂದ್ರಶೇಖರ್, ಎಸ್ಸಿ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮಾಂಬಳ್ಳಿ ರಾಮಣ್ಣ, ಮುತ್ತಿಗೆ ಮೂರ್ತಿ, ಮಂಡಲ ಮಾಜಿ ಅಧ್ಯಕ್ಷರಾದ ನಾಗರಾಜು, ರಾಮಸಮುದ್ರ ಶಿವಣ್ಣ, ವೀರೇಂದ್ರ, ಬಂಗಾರ ನಾಯಕ, ನಮೋ ಮಂಜು ಕೇಬಲ್ ರಂಗಸ್ವಾಮಿ, ಪ್ರಜ್ವಲ್, ಸತೀಶ್, ಕಿರಣ್ ಇತರರು ಹಾಜರಿದ್ದರು.

ತಾಳೆ ಬೆಳೆಯಲು ರೈತರಿಗೆ ಸಲಹೆ

ಯಳಂದೂರು: ರೈತರಿಗೆ ಹೆಚ್ಚಿನ ಆದಾಯವನ್ನು ನೀಡುವ ತಾಳೆ ಬೆಳೆ ಬೆಳೆಯಲು ರೈತರು ಮುಂದಾಗಬೇಕು ಎಂದು ತೋಟಗಾರಿಕೆ ಇಲಾಖೆ ಹಿರಿಯ ನಿರ್ದೇಶಕ ಜೆ.ಎಸ್. ರಾಜು ಸಲಹೆ ನೀಡಿದರು.

ತಾಳೆ ಬೆಳೆ ಅಭಿವೃದ್ಧಿ ಯೋಜನೆಯಡಿ ತಾಲೂಕಿನ ಹೊನ್ನೂರು ಗ್ರಾಮದ ರೈತರಾದ ಪ್ರತಾಪ್ ವಿ.ಅರಸ್ ಜಮೀನಿನಲ್ಲಿ ತೋಟಗಾರಿಕೆ ಇಲಾಖೆ, ಜಿಪಂ ಹಾಗೂ ಪತಂಜಲಿ ಫುಡ್ಸ್ ಲಿಮಿಟೆಡ್ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಮೆಗಾ ತಾಳೆ ಕೃಷಿ ಪ್ರೋತ್ಸಾಹ ಅಭಿಯಾನಕ್ಕೆ ಗಿಡ ನೆಡುವುದರ ಮೂಲಕ ಚಾಲನೆ ನೀಡಿ ಮಾತನಾಡಿದರು.

ಭಾರತದಲ್ಲಿ ಖಾದ್ಯ ತೈಲದ ವಾರ್ಷಿಕ ಬೇಡಿಕೆಯನ್ನು ಸ್ಥಳೀಯ ಉತ್ಪಾದನೆಯಿಂದ ಪೂರೈಸಲು ಸಾಧ್ಯವಾಗದ ಕಾರಣ, ಸುಮಾರು 1 ಲಕ್ಷ ಕೋಟಿ ಮೌಲ್ಯದ ಖಾದ್ಯ ತೈಲವನ್ನು ಹೊರ ದೇಶಗಳಿಂದ ಆಮದು ಮಾಡಿಕೊಳ್ಳಲಾಗುತ್ತಿದೆ. ಖಾದ್ಯ ತೈಲದ ಆಮದು ವೆಚ್ಚವನ್ನು ಕಡಿಮೆ ಮಾಡುವ ದೃಷ್ಟಿಯಲ್ಲಿ ತೈಲ ಬೆಳೆಗಳ ಉತ್ಪಾದನೆಗೆ ಹೆಚ್ಚು ಆದ್ಯತೆ ನೀಡಲು ಕೇಂದ್ರ ಸರ್ಕಾರ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಪ್ರಾರಂಭಿಸಿದೆ ಎಂದು ತಿಳಿಸಿದರು.

ರೈತ ಪ್ರತಾಪ್ ವಿ.ಅರಸ್ ಮಾತನಾಡಿ, ಎರಡು ತೆಂಗು ಬೆಳೆಗೆ ಒಂದು ತಾಳೆ ಬೆಳೆ ಸಮನಾಗಿದೆ. ತಾಳೆ ಬೆಳೆ ಹೆಚ್ಚು ಲಾಭಾಂಶವನ್ನು ನೀಡುತ್ತಿದ್ದು, ರೈತರು ತಾಳೆ ಬೆಳೆಯಲು ಮುಂದಾಗಬೇಕು ಎಂದು ಸಲಹೆ ನೀಡಿದರು. ತೋಟಗಾರಿಕೆ ಇಲಾಖೆ ಅಧಿಕಾರಿ ಶಿವರಂಜನಿ, ಪತಂಜಲಿ ಫುಡ್ಸ್ ಲಿಮಿಟೆಡ್‌ನ ಪಿ.ಸಿ. ಮೂರ್ತಿ, ನಾಗರಾಜು ಇತರರು ಇದ್ದರು.

ಸೋನಾಕ್ಷಿ ಕೊಲೆ ಆರೋಪಿ ಮಾದೇಶನ ಮನೆ ಜಖಂಗೊಳಿಸಿದ ಉದ್ರಿಕ್ತರು

ಸ್ಥಳಕ್ಕೆ ಎಸ್ಪಿ ಭೇಟಿ, ಮಾದೇಶ್ ಸಂಬಂಧಿಕರಿಂದ ದೂರು ನೀಡಲು ನಕಾರ, ಸ್ವಯಂಪ್ರೇರಿತ ಪ್ರಕರಣ ದಾಖಲು



ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸುತ್ತಿರುವ ಎಸ್‌ಪಿ ಕವಿತಾ ಮತ್ತು ಅಧಿಕಾರಿಗಳು.

ಕೊಳ್ಳೇಗಾಲ, ಜೂ.23– ಸೋನಾಕ್ಷಿಯನ್ನು ಕೊಲೆ ಮಾಡಿ ಹೂತಿಟ್ಟಿದ್ದ ಪ್ರಕರಣ ಬಯಲಾಗುತ್ತಿದ್ದಂತೆ ಪೊಲೀಸರು ಆರೋಪಿ ಮಾದೇಶನನ್ನು ಬಂಧಿಸಿದ ಬೆನ್ನಲೆ ಸೋಮವಾರ ಆರೋಪಿ ಮನೆಯ ಮೇಲೆ ಉದ್ರಿಕ್ತರು ಕಲ್ಲು ತೂರಾಟ ನಡೆಸಿ ಜಖಂಗೊಳಿಸಿರುವ ಘಟನೆ ನಡೆದಿದೆ.

ಕೊಳ್ಳೇಗಾಲ ಮೋಳೆಯ ಮಾದೇಶ್ ಹಾಗೂ ಕೊಲೆಯಾದ ಮಹಿಳೆ ಸೋನಾಕ್ಷಿ ನಡುವೆ ಅಕ್ರಮ ಸಂಬಂಧವಿತ್ತು. ಸೋನಾಕ್ಷಿ ಮಾದೇಶನಲ್ಲದೆ ಬಾಬು ಎಂಬಾತನ ಜೊತೆಯೂ ಸಂಬಂಧ ಹೊಂದಿದ್ದ ವಿಚಾರ ಮಾದೇಶನಿಗೆ ತಿಳಿದು ಇಬ್ಬರಿಗೂ ಮಾತಿಗೆ ಮಾತು ಬೆಳೆದು ವಿಕೋಪಕ್ಕೆ ತಿರುಗಿದ ಪರಿಣಾಮ ಸೋನಾಕ್ಷಿಯನ್ನು ಮಾದೇಶ ಬಸ್ತಿಪುರ ಮನೆಯೊಂದರಲ್ಲಿ ಕೊಲೆ ಮಾಡಿ ಗೋಣಿ ಚೀಲದಲ್ಲಿ ಶವ ಹಾಕಿ ಹಂಪಾಪುರ ನದಿ ತೀರದಲ್ಲಿ 2 ಅಡಿ ಆಳ ತೆಗೆದು ಹೂತು ಬಂದಿದ್ದ. ಈ ವಿಚಾರ ಬೆಳಕಿಗೆ ಬರುತ್ತಿದ್ದಂತೆ ಕೊಳ್ಳೇಗಾಲ ಪೊಲೀಸರು ಆರೋಪಿಯನ್ನು 24 ಗಂಟೆಯೊಳಗೆ ಬಂಧಿಸಿ ಕ್ರಮಕೈಗೊಂಡಿದ್ದರು. ಈಗ ಆರೋಪಿ ಮಾದೇಶನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ತನ್ಮಧ್ಯೆ ಸೋನಾಕ್ಷಿಯನ್ನು ಕೊಲೆ ಮಾಡಿದ ಆರೋಪಿ ಮಾದೇಶನ ಮನೆಯನ್ನು ಕೆಲ ಉದ್ರಿಕ್ತರು ಹಾಗೂ ಸೋನಾಕ್ಷಿ ಸಂಬಂಧಿಗಳ ಕಲ್ಲು ತೂರಾಟ ನಡೆಸಿ ಜಖಂಗೊಳಿಸಿದ್ದಾರೆ ಎನ್ನಲಾಗಿದೆ.

ವಿಚಾರ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಎಸ್ಪಿ ಕವಿತಾ, ಡಿವೈಎಸ್ಪಿ ಧರ್ಮೇಂದ್ರ, ಪಿಎಸೈ ವರ್ಷ ಮತ್ತು ಸಿಬ್ಬಂದಿಗಳು ಭೇಟಿ ನೀಡಿ ಮನೆ ಜಖಂ ಸಂಬಂಧ ದೂರು ನೀಡುವಂತೆ ಮಾದೇಶನ ಸಂಬಂಧಿಕರಿಗೆ ಕೇಳಿದರೂ ದೂರು ನೀಡಿಲ್ಲ ಎನ್ನಲಾಗಿದೆ. ಈ ಹಿನ್ನೆಲೆ ಪೊಲೀಸರೆ ಸ್ವಯಂ ಕೃತ ಸುಮೋಟೊ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ

ಈ ಪ್ರಕರಣದ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕವಿತಾ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಸೋನಾಕ್ಷಿ ಕೊಲೆಯನ್ನು ನಾನೇ ಮಾಡಿದ್ದು ಎಂದು ಮಾದೇಶ್ ಒಪ್ಪಿಕೊಂಡಿದ್ದಾನೆ. ಏತನ್ಮಧ್ಯೆ ಕೆಲವರು ಮಾದೇಶ್ ಮನೆ ಜಖಂಗೊಳಿಸಿದ್ದು ವಿಚಾರ ತಿಳಿದು ಸ್ಥಳಕ್ಕೆ ಬೇಟಿ ನೀಡಲಾಗಿದೆ.

ಈಸಂಬಂಧ ದೂರು ನೀಡುವಂತೆ ಮಾದೇಶ ಕುಟುಂಬಸ್ಥರಿಗೆ ತಿಳಿಸಿದರೂ ಸಹಾ ಅವರಾರು ದೂರು ನೀಡಲು ಮುಂದೆ ಬರಲಿಲ್ಲ, ಹಾಗಾಗಿ ಇಲಾಖೆಯ ಸ್ವಯಂಪ್ರೇರಿತ (ಸುಮೋಟೊ) ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದರು.

ಕೊಲೆಯನ್ನು ಏಕಾಂಗಿಯಾಗಿ ಮಾದೇಶನೆ ಮಾಡಿದ್ದು ಈ ಸುಬಂಧ ಆತನೊಬ್ಬನೆ ಆರೋಪಿ, ಮತ್ತೊಬ್ಬ ಬಾಬು ಎಂಬಾತನ ಜೊತೆ ಸೋನಾಕ್ಷಿಗೆ ಸಂಬಂಧವಿದ್ದದ್ದೆ ಕೊಲೆಗೆ ಪ್ರಮುಖ ಕಾರಣವಾಗಿದೆ. ಬಾಬು ಹೇಳಿಕೆ ಪಡೆದು ಆತ ನಿರಾಪರಾಧಿ ಎಂದು ತಿಳಿದ ಬಳಿಕ ಕಳುಹಿಸಲಾಗಿದೆ ಎಂದು ಅವರು ಹೇಳಿದರು.

ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟ ಮಾಡುವವರ ಪಡಿತರ ಚೀಟಿ ರದ್ದು

ಚಾಮರಾಜನಗರ, ಜೂ.23– ಪಡಿತರ ಚೀಟಿದಾರರು ತಮಗೆ ವಿತರಣೆಯಾಗುವ ಅಕ್ಕಿಯನ್ನು ಹೆಚ್ಚಿನ ಬೆಲೆಗೆ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಬಂದಿದ್ದು ಅಂತಹವರ ಪಡಿತರ ಚೀಟಿಯನ್ನು ರದ್ದುಪಡಿಸಲಾಗುವುದೆಂದು ಆಹಾರ ಇಲಾಖೆ ತಿಳಿಸಿದೆ.

ಜಿಲ್ಲಾ ವ್ಯಾಪ್ತಿಯಲ್ಲಿ ಪ್ರತಿ ಮಾಹೆ ಬಿಪಿಎಲ್, ಅಂತ್ಯೋದಯ ಪಡಿತರ ಚೀಟಿಯ ಫಲಾನುಭವಿಗಳಿಗೆ ಪ್ರತಿ ಸದಸ್ಯರಿಗೆ 10 ಕೆ.ಜಿ ಯಂತೆ ಸರ್ಕಾರ ನಿಗದಿಪಡಿಸಿರುವ ಪ್ರಮಾಣದಂತೆ ಅಕ್ಕಿ ವಿತರಣೆ ಮಾಡುತ್ತಿದ್ದು, ಕಾಳಸಂತೆಯಲ್ಲಿ ಪಡಿತರ ಅಕ್ಕಿಯನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ದಾಖಲಾಗುತ್ತಿರುವ ಹಿನ್ನೆಲೆಯಲ್ಲಿ ಅಂತಹ ಪಡಿತರ ಚೀಟಿಯನ್ನು ರದ್ದುಪಡಿಸಲಾಗುವುದೆಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿವಿಧ ಸಂಘಟನೆಗಳಿಂದ ಮರಗಳಿಗೆ ಮುಕ್ತಿ


ಮರಗಳಿಗೆ ಅಳವಡಿಸಿರುವ ಟ್ರೀ ಗಾರ್ಡನ್ನು ತೆರವುಗೊಳಿಸುತ್ತಿರುವುದು

ಮೈಸೂರು, ಜೂ.23(ಎಂಕೆ)– ಮೈಸೂರು ಗ್ರಾಹಕ ಪರಿಷತ್, ಕ್ಲೀನ್ ಮೈಸೂರ್ ಫೌಂಡೇಷನ್ ಸೇರಿದಂತೆ ವಿವಿಧ ಸಂಘಟನೆಗಳಿಂದ ಹಮ್ಮಿಕೊಂಡಿರುವ ವೃಕ್ಷ ಅಭಿಯಾನದ ನಾಲ್ಕನೆ ದಿನ ಸರಸ್ವತಿಪುರಂನಲ್ಲಿರುವ ಹ್ಯಾಪಿಮ್ಯಾನ್ ಪಾರ್ಕ್ ಎದುರು ಹತ್ತಾರು ಮರಗಳಿಗೆ ಅಳವಡಿಸಿದ್ದ ಟ್ರೀ ಗಾರ್ಡನ್ನು ತೆರವುಗೊಳಿಸಿ ಬಂಧಮುಕ್ತ ಮಾಡಲಾಯಿತು.

ಒಂಟಿಕೊಪ್ಪಲು ಟೆಂಪಲ್ ರಸ್ತೆ, ಗೋಕುಲಂ ನಂತರ ಸರಸ್ವತಿಪುರಂ ಹ್ಯಾಪಿಮ್ಯಾನ್ ಪಾರ್ಕ್ ಎದುರಿನ ಫುಟ್‌ಪಾತ್‌ನಲ್ಲಿರುವ ಮರಗಳಿಗೆ ಅಳವಡಿಸಿದ್ದ ಟ್ರೀ ಗಾರ್ಡನ್ನು ತೆರವುಗೊಳಿಸಲಾಯಿತು.

ಈ ವೇಳೆ ಫುಟ್‌ಪಾತ್‌ನಲ್ಲಿ ಅಂಗಡಿಗಳನ್ನಿಡಲು ಪಾಲಿಕೆ ಅಧಿಕಾರಿಗಳು ಬಿಡಬಾರದು. ಈಗಾಗಲೇ ಇರುವ ಅಂಗಡಿಗಳನ್ನು ಕೂಡಲೇ ತೆರವುಗೊಳಿಸಬೇಕು. ಮಳೆ ನೀರಿನ ಚರಂಡಿಗಳನ್ನು ಕ್ಲೀನ್ ಮಾಡಿಸುವ ಮೂಲಕ ಸ್ವಚ್ಛತೆಗೆ ಗಮನಹರಿಸಬೇಕು. ಹಾಗೆಯೇ ಯಾವುದೇ ತರಹದ ಬ್ಯಾನರ್‌ಗಳನ್ನು ಕಟ್ಟಲು ಅವಕಾಶ ನೀಡಬಾರದು. ಮರಗಳಿಗೆ ಬಣ್ಣ ಬಳಿಯುವುದು, ಜಾಹೀರಾತು ಪೋಸ್ಟರ್, ಬ್ಯಾನರ್‌ಗಳನ್ನು ಕಟ್ಟುವುದಕ್ಕೆ ಮೊಳೆ ಹೊಡೆಯುವವರಿಗೆ ದಂಡ ವಿಧಿಸಬೇಕು ಎಂದು ಪರಿಸರ ಪ್ರೇಮಿಗಳು ಆಗ್ರಹಿಸಿದರು.

ಮೈಸೂರು ಗ್ರಾಹಕ ಪರಿಷತ್ ಭಾನು ಪ್ರಶಾಂತ್, ವಿಶ್ವನಾಥ್, ಅರುಣ್, ವೆಂಕಟೇಶ್ ಖರೀದಿ, ಕ್ಲೀನ್ ಮೈಸೂರು ಫೌಂಡೇಶನ್ ಲೀಲಾ ವೆಂಕಟೇಶ್, ಪ್ರಾಂಶುಪಾಲ ಸೂರಜ್, ಪರಿಸರ ಬಳಗದ ಸುಶೀಲಾ ಮತ್ತಿತರರಿದ್ದರು.

ಮಳೆ ಬಂದರೆ ಸಾಕು ಮೈಸೂರು ಶೇಷಾದ್ರಿ ಅಯ್ಯರ್ ರಸ್ತೆಯಲ್ಲಿ ಮಿನಿ ಕೆರೆ ಮಾದರಿ ನೀರು ನಿಲುಗಡೆ

ಇಲ್ಲಿ ಸಾಗುವುದು ಸವಾರರ ಸುರಕ್ಷತೆಗೆ ಸವಾಲು



ಮೈಸೂರಿನ ಶೇಷಾದ್ರಿ ಅಯ್ಯರ್ ರಸ್ತೆಯಲ್ಲಿ ನಿಂತಿರುವ ಭಾರೀ ಪ್ರಮಾಣದ ಮಳೆ ನೀರಿನ ನಡುವೆ ಲಾರಿ, ಆಟೋರಿಕ್ಷಾ ಸೇರಿದಂತೆ ಇನ್ನಿತರ ವಾಹನಗಳು ಸಾಗುತ್ತಿರುವುದನ್ನು ಚಿತ್ರಗಳಲ್ಲಿ ಕಾಣಬಹುದು.

ಮೈಸೂರು,ಜೂ.23(ಪಿಎಂ)– ಅದು ನಗರದ ಪ್ರಮುಖ ರಸ್ತೆ. ಆದರೆ ಒಂದು ಸಣ್ಣ ಮಳೆಯಾದರೂ ಅಲ್ಲಿ ಮಂಡಿಯುದ್ದ ನೀರು ನಿಲ್ಲುವ ಮೂಲಕ ಅದೇನು ರಸ್ತೆಯೋ, ನೆರೆಪೀಡಿತ ಪ್ರದೇಶವೋ ಇಲ್ಲ ಕೆರೆಯೋ ಎಂಬ ಗೊಂದಲವು ಕ್ಷಣಕಾಲ ಯಾರಿಗೇ ಆದರೂ ಮೂಡದೇ ಇರದು.

ಮೈಸೂರಿನ ಶೇಷಾದ್ರಿ ಅಯ್ಯರ್ ರಸ್ತೆಯಲ್ಲಿ ಇಂತಹ ದುಸ್ಥಿತಿ ಮಳೆಗಾಲದಲ್ಲಿ ಸಾಮಾನ್ಯವೇ ಆಗಿ ಹೋಗಿದೆ. ಖಾಸಗಿ ಬಸ್ ನಿಲ್ದಾಣದ ಹಿಂಭಾಗದಲ್ಲಿ ಈ ರಸ್ತೆಯ ಭಾಗಶಃ ಭಾಗವು (ರಸ್ತೆಯ ಅಗಲ) ಮಳೆ ನೀರಿನಿಂದ ಆವೃತಗೊಳ್ಳುವುದು ವಾಹನ ಸವಾರರ ಸುರಕ್ಷತೆಗೆ ಸವಾಲಾಗಿ ಪರಿಣಮಿಸಿದೆ.

ಸೋಮವಾರ ಮಧ್ಯಾಹ್ನ ಕೆಲಕಾಲ ಸುರಿದ ಮಳೆಯಿಂದ ಇಲ್ಲಿ ಮಂಡಿಯುದ್ದ ನೀರು ನಿಲ್ಲುವ ಮೂಲಕ ವಾಹನ ಸವಾರರು ಮುಂದೆ ಸಾಗಲು ಪರದಾಡುವ ಸನ್ನಿವೇಶ ನಿರ್ಮಾಣವಾಗಿತ್ತು ಇದು ಈ ಒಂದು ದಿನದ ಸಮಸ್ಯೆಯಲ್ಲ. ಪ್ರತಿ ಮಳೆಗೂ ಇದೇ ದುಸ್ಥಿತಿ ಇಲ್ಲಿ ಸೃಷ್ಟಿಯಾಗುತ್ತಿದ್ದರೂ ಮೈಸೂರು ಮಹಾನಗರ ಪಾಲಿಕೆ ಮಾತ್ರ ಪರಿಹಾರ ಕಂಡುಕೊಳ್ಳಲು ಮುಂದಾಗುತ್ತಿಲ್ಲ.

ಲಾರಿ, ಬಸ್ ಸೇರಿದಂತೆ ಭಾರಿ ವಾಹನಗಳು ಇಲ್ಲಿ ಸಾಗುತ್ತಿದ್ದರೆ, ನಿಂತಿರುವ ನೀರು ರಭಸದಿಂದ ದ್ವಿಚಕ್ರ ವಾಹನ ಸವಾರರ ಮೈ ಮೇಲೆ ಬೀಳುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ವಿವಿಧ ತ್ಯಾಜ್ಯಗಳೊಂದಿಗೆ ಹರಿದು ಬಂದು ನಿಂತಿರುವ ನೀರು ಮೈ ಮೇಲೆ ಹಾರುವುದನ್ನು ತಪ್ಪಿಸಿಕೊಳ್ಳಲು ಹೋದರೆ ದ್ವಿಚಕ್ರ ವಾಹನ ಸವಾರರು ಬಿದ್ದು ಮೈ ಕಾಲು ಮುರಿದುಕೊಳ್ಳುವುದು ಗ್ಯಾರಂಟಿ ಎಂಬ ದುಸ್ಥಿತಿ ಇಲ್ಲಿ ತಲೆದೋರಿದೆ.

ತರಾವರಿ ತ್ಯಾಜ್ಯಗಳೊಂದಿಗೆ ಹರಿದು ಬಂದು ಇಲ್ಲಿ ನಿಲ್ಲುವ ನೀರು ರಸ್ತೆಯ ನೆಲವೇ ಕಾಣಿಸದಷ್ಟು ಆವರಿಸುತ್ತಿದ್ದು, ಇಲ್ಲಿ ಸವಾರರು ಧಾವಂತದಲ್ಲಿ ಸಾಗಲು ಮುಂದಾದರೆ ಅನಾಹುತ ತಪ್ಪಿದ್ದಲ್ಲ. ಇದು ನಿನ್ನೆ ಮೊನ್ನೆಯ ಸಮಸ್ಯೆಯಲ್ಲ. ಹಲವು ವರ್ಷಗಳಿಂದ ಇಲ್ಲಿ ಇದೇ ದುಸ್ಥಿತಿ ಇದ್ದರೂ ಪಾಲಿಕೆ ಕಣ್ಮುಚ್ಚಿ ಕುಳಿತಿದೆ. ಇಲ್ಲಿ ಪಕ್ಕದಲ್ಲೇ ಮಳೆ ನೀರು ಚರಂಡಿ ಇದ್ದರೂ ಪ್ರಯೋಜನ ಇಲ್ಲದಾಗಿದೆ. ಈ ಚರಂಡಿಯಿಂದ ನೀರು ಸರಾಗವಾಗಿ ಮುಂದೆ ಹೋಗುವ ವ್ಯವಸ್ಥೆ ಇಲ್ಲ ಎಂಬುದನ್ನು ಇಲ್ಲಿ ನಿಲ್ಲುವ ಭಾರಿ ಪ್ರಮಾಣದ ನೀರು ನೋಡಿದರೆ ಯಾರು ಬೇಕಾದರೂ ಹೇಳಬಹುದು.

ಇನ್ನೂ ಪಾದಚಾರಿಗಳಂತೂ ಇಲ್ಲಿ ಹೆಜ್ಜೆ ಹಾಕಲು ಅವಕಾಶವೇ ಇಲ್ಲ. ಸಯ್ಯಾಜಿರಾವ್ ರಸ್ತೆಯಿಂದ ಸುಭಾಷ್ ಚಂದ್ರ ಬೋಸ್ ವೃತ್ತದ ಮೂಲಕ ಶೇಷಾದ್ರಿ ಅಯ್ಯರ್ ರಸ್ತೆಯಲ್ಲಿ ಸಾಗಲು ಹೊರಟರೆ ಎಡಭಾಗದಲ್ಲಿ ಭಾರಿ ಪ್ರಮಾಣದಲ್ಲಿ ಮಳೆ ನೀರು ನಿಂತಿರುವುದು ಕಂಡು ಬರುತ್ತದೆ ನೀರಿನ ಮೇಲೆ ವಾಹನ ಹೋಗುವುದನ್ನು ತಪ್ಪಿಸಲು ಅನೇಕರು ಬಲಭಾಗಕ್ಕೆ ತಿರುವು ಪಡೆಯುವುದು ಈ ಸಂದರ್ಭದಲ್ಲಿ ಸಾಮಾನ್ಯವಾಗಿದೆ ಹೀಗಾಗಿ ಈ ವಾಹನಗಳ ಎದುರು ಗಡೆಯಿಂದ ಬರುವ ವಾಹನ ಸವಾರರಿಗೆ ಅಡಚಣೆ ತಪ್ಪಿದ್ದಲ್ಲ. ಒಮ್ಮೊಮ್ಮೆ ಎಚ್ಚರ ತಪ್ಪಿದರೆ ಅನಾಹುತಕ್ಕೀಡಾಗುವ ಸಂಭವ ಇದ್ದೇ ಇದೆ.

ಮಳೆ ಬಂದು ಎಷ್ಟೋ ದಿನ ಕಳೆದರೂ ಇಲ್ಲಿನ ಚರಂಡಿಯಲ್ಲಿ ನೀರು ಬತ್ತದೇ ನಿಲ್ಲುವಂತಹ ಸ್ಥಿತಿ ಇದ್ದು, ಇದರ ಪರಿಣಾಮ ಸೊಳ್ಳೆಗಳ ಉತ್ಪತ್ತಿಯೂ ಹೆಚ್ಚಾಗಿ ಇಲ್ಲಿನ ಮಳಿಗೆದಾರರು ಕಿರಿಕಿರಿ ಅನುಭವಿಸುವಂತಾಗಿದೆ. ಈ ರಸ್ತೆಯಲ್ಲಿರುವ ಪೆಟ್ರೋಲ್ ಬಂಕ್‌ವೊಂದರ ಬಳಿಯಿಂದ ಖಾಸಗಿ ಬಸ್ ನಿಲ್ದಾಣದ ಹಿಂಭಾಗದ ದ್ವಾರದ ಸಮೀಪದವರೆಗೆ ಹೀಗೆ ಹೆಚ್ಚಿನ ಪ್ರಮಾಣದ ನೀರು ಪ್ರತಿ ಮಳೆಗೂ ನಿಲ್ಲುವಂತಾಗಿದೆ. ಅಪಘಾತ ತಪ್ಪಿಸಲು, ಅನೈರ್ಮಲ್ಯ ನಿವಾರಿಸಲು ಕೂಡಲೇ ಮಹಾನಗರ ಪಾಲಿಕೆ ಇಲ್ಲಿ ನೀರು ನಿಲ್ಲದಂತೆ ಕ್ರಮ ವಹಿಸುವುದು ತುರ್ತು ಅಗತ್ಯವಾಗಿದೆ. ಇನ್ನಾದರೂ ಪಾಲಿಕೆ ಎಚ್ಚೆತ್ತು ಪರಿಹಾರ ಕಂಡುಹಿಡಿಯಬೇಕಿದೆ.

ಅನಧಿಕೃತ ಕಟ್ಟಡ ನಿರ್ಮಾಣ; ಎಚ್ಚೆತ್ತ ಪಾಲಿಕೆ ನೋಟಿಸ್

ಮೈಸೂರು, ಜೂ.23– ಮೈಸೂರಿನಲ್ಲಿ ನಿಯಮ ಉಲ್ಲಂಘಿಸಿ ಅನಧಿಕೃತವಾಗಿ ಕಟ್ಟಡಗಳ ನಿರ್ಮಾಣ ಹೆಚ್ಚಾಗುತ್ತಿದ್ದು, ಚಾಮುಂಡಿಪುರಂನಲ್ಲೊಂದು ಪ್ರಕರಣ ಬೆಳಕಿಗೆ ಬಂದಿದೆ.

ಇಲ್ಲಿನ ಮನೆ ನಂ 2877/14 ಕೆ–13ರಲ್ಲಿ ಪಾಲಿಕೆಯಿಂದ ಅನುಮತಿ ಪಡೆದು ಕಟ್ಟಡ ನಿರ್ಮಿಸಲಾಗಿದ್ದು, ನಿಯಮಾನುಸಾರ ಸೆಟ್‌ಬ್ಯಾಕ್ ಬಿಡದೆ ನೆಲಮಹಡಿ ಹಾಗೂ 1 ಮತ್ತು 2ನೇ ಮಹಡಿ ಕಟ್ಟಲಾಗಿದೆ. ಅಲ್ಲದೆ ಅನುಮತಿ ಪಡೆಯದೇ 3ನೇ ಮಹಡಿಯನ್ನೂ ಕಟ್ಟಲಾಗುತ್ತಿದೆ ಎಂಬ ದೂರಿನ ಮೇರೆಗೆ ಮನೆ ಮಾಲೀಕ ಸುನೀಲ್ ಕುಮಾರ್ ಅಗರ್‌ವಾಲ್ ಎಂಬುವರಿಗೆ ನಗರಪಾಲಿಕೆಯಿಂದ ನೋಟಿಸ್ ನೀಡಲಾಗಿದೆ.

ಪಾಲಿಕೆ ಅನುಮತಿ ನೀಡಿರುವ ನಕ್ಷೆಗೆ ವಿರುದ್ಧವಾಗಿ ಕಟ್ಟಡ ನಿರ್ಮಿಸಲಾಗಿದೆ ಎಂಬ ದೂರಿನ ಮೇರೆಗೆ ಪಾಲಿಕೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ನಿಯಮ ಉಲ್ಲಂಘನೆ ಮಾಡಿರುವುದರಿಂದ ಕಟ್ಟಡ ನಿರ್ಮಾಣವನ್ನು ತಡೆದಿದ್ದಾರೆ. ಅಲ್ಲದೆ ಪಾಲಿಕೆಯಿಂದ ಅನುಮತಿ ನೀಡಿರುವಂತೆ ಕಟ್ಟಡವನ್ನು ವಿನ್ಯಾಸಗೊಳಿಸಿ ವರದಿ ನೀಡಬೇಕು. ಹಾಗೆಯೇ ಉಲ್ಲಂಘಿತ ಭಾಗಗಳನ್ನು ತೆರವುಗೊಳಿಸಲು ತಗಲುವ ವೆಚ್ಚವನ್ನು ಭರಿಸಬೇಕು ಹಾಗೂ 1976ರ ಕರ್ನಾಟಕ ಮುನ್ಸಿಪಲ್ ಕಾರ್ಪೊರೇಷನ್ ಕಾಯ್ದೆ ಸೆಕ್ಷನ್–321ರ ಪ್ರಕಾರ ಕಾನೂನು ರೀತಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ.

ಅರಣ್ಯ ಸಚಿವರ ದಿಢೀರ್ ನಿರ್ಧಾರ: ಅರ್ಜುನನ ಸ್ಮಾರಕ ಉದ್ಘಾಟನೆ ಮುಂದೂಡಿಕೆ

ಮೈಸೂರು, ಜೂ.23(ಎಂಟಿವೈ)– ಕಾಡಾನೆ ದಾಳಿಗೆ ತುತ್ತಾಗಿ ವೀರಮರಣವನ್ನಪ್ಪಿದ ದಸರಾ ಆನೆ ಅರ್ಜುನನ ಸ್ಮಾರಕ ಉದ್ಘಾಟನಾ ಕಾರ್ಯಕ್ರಮ ಕೊನೆ ಘಳಿಗೆಯಲ್ಲಿ ಮುಂದೂಡಲ್ಪಟ್ಟಿದ್ದು, ಪ್ರಾಣಿ ಪ್ರಿಯರು ಆಕ್ಷೇಪಿಸಿದ್ದಾರೆ.



ನಾಡಹಬ್ಬ ದಸರಾ ಮಹೋತ್ಸವದಲ್ಲಿ 8 ಬಾರಿ ಚಿನ್ನದ ಅಂಬಾರಿ ಹೊತ್ತಿದ್ದ ಅರ್ಜುನ, 2023ರ ಡಿ.4ರಂದು ಹಾಸನದ ಯಸಳೂರಿನ ದಬ್ಬಳಿಕಟ್ಟೆ ಅರಣ್ಯದಲ್ಲಿ ಕಾಡಾನೆ ದಾಳಿಯಲ್ಲಿ ಮೃತಪಟ್ಟಿದ್ದ. ಅರ್ಜುನನ ಸ್ಮರಣಾರ್ಥ ಹೆಚ್.ಡಿ.ಕೋಟೆ ತಾಲೂಕು ವ್ಯಾಪ್ತಿಯ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಡಿ.ಬಿ.ಕುಪ್ಪೆ ವಲಯದ ಬಳ್ಳೆ ಆನೆ ಶಿಬಿರ ಹಾಗೂ ಅರ್ಜುನ ಮಡಿದ ಸ್ಥಳ ಹಾಸನದ ದಬ್ಬಳಿಕಟ್ಟೆಯಲ್ಲಿ ಮತ್ತೊಂದು ಸ್ಮಾರಕ ನಿರ್ಮಿಸಲಾಗಿದೆ.

ಬಳ್ಳೆ ಆನೆ ಶಿಬಿರದಲ್ಲಿ ನಿರ್ಮಿಸಿದ್ದ ಸ್ಮಾರಕವನ್ನು ಜೂ.23ರಂದು ಮಧ್ಯಾಹ್ನ ಉದ್ಘಾಟಿಸುವುದಾಗಿ ಅರಣ್ಯ ಸಚಿವ ಈಶ್ವರ್ ಖಂಡ್ರೆ ಘೋಷಿಸಿದ್ದರು. ಅದಕ್ಕಾಗಿ ಅರಣ್ಯ ಇಲಾಖೆ ಸಿದ್ಧತೆ ಮಾಡಿಕೊಂಡಿತ್ತು. ಆದರೆ, ಇಂದು ಬೆಳಗ್ಗೆ ಬೆಂಗಳೂರಿನಿಂದ ಮೈಸೂರಿನತ್ತ ಪ್ರಯಾಣ ಬೆಳೆಸಿದ ಸಚಿವ ಈಶ್ವರ ಖಂಡ್ರೆ, ಸ್ಮಾರಕವನ್ನು ವರ್ಚುವಲ್ ಆಗಿ ಉದ್ಘಾಟಿಸುವುದಾಗಿ ಪ್ರಕಟಿಸಿದರು. ಬಳಿಕ ಕೆಲ ಸಮಯದ ನಂತರ ಅನಿವಾರ್ಯ ಕಾರಣಗಳಿಂದ ಸ್ಮಾರಕ ಉದ್ಘಾಟನಾ ಸಮಾರಂಭವನ್ನು ಜೂ.27ಕ್ಕೆ ಮುಂದೂಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿ, ಮಾರ್ಗ ಮಧ್ಯೆಯೇ ವಾಪಾಸ್ಸಾಗಿದ್ದಾರೆ.

ಅಸಹಕಾರ: ಅರ್ಜುನನ ಸ್ಮಾರಕ ಉದ್ಘಾಟನಾ ಕಾರ್ಯಕ್ರಮಕ್ಕೆ ಸ್ಥಳೀಯ ಶಾಸಕರು ಅಸಹಕಾರ ನೀಡಿದ್ದರಿಂದ ಸಚಿವರು ಕಾರ್ಯಕ್ರಮ ಮುಂದೂಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಸ್ಮಾರಕ ಉದ್ಘಾಟನಾ ಕಾರ್ಯಕ್ರಮದಲ್ಲಿ ಅರ್ಜುನ ಹಾಗೂ ಮಾನವ ಮತ್ತು ಪ್ರಾಣಿ ಸಂಘರ್ಷದ ಬಗ್ಗೆ ಸಂವಾದ ಕಾರ್ಯಕ್ರಮ ಏರ್ಪಡಿಸುವಂತೆ ಶಾಸಕರು ಒತ್ತಾಯಿಸಿದ್ದರು ಎನ್ನಲಾಗಿದೆ. ಆದರೆ, ಸ್ಮಾರಕದ ಉದ್ಘಾಟನಾ ದಿನವೇ ಸಂವಾದ ಆಯೋಜಿಸುವುದು ಸರಿಯಲ್ಲ. ಬೇರೊಂದು ದಿನ ಸಂವಾದ ಆಯೋಜಿಸುವ ಸಲಹೆ ನೀಡಿದ್ದರಿಂದ ಶಾಸಕರು ಅಸಹಕಾರ ತೋರಿದ್ದರಿಂದ ಅಂತಿಮವಾಗಿ ಕಾರ್ಯಕ್ರಮ ಮುಂದೂಡಲಾಗಿದೆ ಎಂದು ತಿಳಿದು ಬಂದಿದೆ.

ಅಸಹಕಾರ ಅಲ್ಲಗಳೆದ ಸಚಿವರ ಕಚೇರಿ

ಸ್ಥಳೀಯ ಶಾಸಕರ ಅಸಹಕಾರದಿಂದ ಸ್ಮಾರಕ ಉದ್ಘಾಟನಾ ಕಾರ್ಯಕ್ರಮ ಮುಂದೂಡಲಾಗಿದೆ ಎಂದು ಚರ್ಚೆ ಆಗುತ್ತಿರುವುದಕ್ಕೆ ಅರಣ್ಯ ಸಚಿವರ ಕಚೇರಿ ಸಿಬ್ಬಂದಿ ಸ್ಪಷ್ಟನೆ ನೀಡಿದ್ದು, ತುರ್ತು ಕಾರ್ಯ ನಿಮಿತ್ತ ಸಚಿವರು ಬೆಂಗಳೂರಿಗೆ ಬಂದಿದ್ದಾರೆ. ಆ ಕಾರಣದಿಂದ ಸ್ಮಾರಕ ಉದ್ಘಾಟನಾ ಕಾರ್ಯಕ್ರಮ ಜೂ.27ಕ್ಕೆ ಮುಂದೂಡಲಾಗಿದೆ. ಇದಕ್ಕೆ ಸ್ಥಳೀಯ ಶಾಸಕರ ಅಸಹಕಾರ ಎನ್ನುವುದು ಸರಿಯಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಟೀಕೆಗೆ ಗುರಿ: ವಯೋ ನಿವೃತ್ತಿಯಾಗಿದ್ದ ಅರ್ಜುನನನ್ನು ಕಾಡಾನೆ ಸೆರೆ ಕಾರ್ಯಾಚರಣೆಗೆ ಬಳಸಿಕೊಳ್ಳಲಾಗಿತ್ತು. ಕಾಡಾನೆ ದಾಳಿಯಲ್ಲಿ ಮೃತಪಟ್ಟಿದ್ದಕ್ಕೆ ಅರಣ್ಯ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದ ನೆಟ್ಟಿಗರು, ಇದೀಗ ಸ್ಮಾರಕ ಉದ್ಘಾಟನಾ ಕಾರ್ಯಕ್ರಮ ಮುಂದೂಡಿದ್ದಕ್ಕೂ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಳೆದ ನಾಲ್ಕೈದು ತಿಂಗಳಿಂದ ಸ್ಮಾರಕ ಉದ್ಘಾಟನೆಗಾಗಿ ಕಾಯುತ್ತಿದ್ದರೂ, ಮೀನಾ ಮೇಷ ಎಣಿಸಲಾಗುತ್ತಿದೆ ಅರ್ಜುನ ಎಂದರೆ ಯಾಕೆ ಅಸಡ್ಡೆ ಎಂದು ಪ್ರಶ್ನಿಸಿದ್ದಾರೆ.

ಮಕ್ಕಳ ಶೂ, ಸಾಕ್ಸ್‌ಗಾಗಿ 111.88 ಕೋ. ರೂ. ಬಿಡುಗಡೆ

ಮೈಸೂರು, ಜೂ.23(ಎಸ್‌ಪಿಎನ್)– ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಶಾಲೆಗಳಲ್ಲಿ 1ರಿಂದ 10ನೇ ತರಗತಿಗಳಲ್ಲಿ ಓದುತ್ತಿರುವ ಅಂದಾಜು 40.68 ಲಕ್ಷ ವಿದ್ಯಾರ್ಥಿಗಳಿಗೆ ಒಂದು ಜತೆ ಶೂ ಮತ್ತು ಎರಡು ಜತೆ ಸಾಕ್ಸ್ ವಿತರಿಸಲು ವಿದ್ಯಾ ವಿಕಾಸ ಯೋಜನೆಯಡಿ 111.88 ಕೋ. ರೂ.ಗಳನ್ನು ಬಿಡುಗಡೆ ಮಾಡಲು ರಾಜ್ಯ ಸರಕಾರ ಒಪ್ಪಿದೆ.

2025–25ನೇ ಸಾಲಿನಲ್ಲಿ ವಿದ್ಯಾ ವಿಕಾಸ ಯೋಜನೆ ಅಡಿಯಲ್ಲಿ ವಿದ್ಯಾರ್ಥಿಗಳಿಗಾಗಿ 410 ಕೋಟಿ ರೂ.ಗಳನ್ನು ನಿಗದಿ ಮಾಡಲಾಗಿದೆ. ಇದರಲ್ಲಿ ಮೊದಲ ಹಂತವಾಗಿ 111.88 ಕೋ. ರೂ.ಗಳನ್ನು ಬಿಡುಗಡೆ ಮಾಡಲು ಮತ್ತು ಸ್ಯಾಟ್ಸ್ ತಂತ್ರಾಂಶದಲ್ಲಿ ವಿದ್ಯಾರ್ಥಿಗಳ ದಾಖಲಾತಿಗೆ ಅನುಗುಣವಾಗಿ ಅನುದಾನ ಭರಿಸಲು ಶಾಲಾ ಶಿಕ್ಷಣ ಇಲಾಖೆ ಆಯುಕ್ತರು ನಿರ್ಧರಿಸಿ ಆದೇಶಿಸಿದ್ದಾರೆ.

ಮಹತ್ವಾಕಾಂಕ್ಷಿ ತಾಲೂಕು ಉಪ ಶೀರ್ಷಿಕೆಯಡಿ 13.45 ಕೋ. ರೂ, ಸಾಮಗ್ರಿ ಮತ್ತು ಸರಬರಾಜು 57.74 ಕೋ. ರೂ, ಪರಿಶಿಷ್ಟ ಜಾತಿ ಉಪಯೋಜನೆ 27.51 ಕೋ. ರೂ, ಗಿರಿಜನ ಉಪಯೋಜನೆ 12.56 ಕೋ.ರೂ ಹೀಗೆ ಒಟ್ಟು 111.88 ಕೋ. ರೂ ಬಿಡುಗಡೆಗೆ ನಿಗದಿಪಡಿಸಲಾಗಿದೆ.

ದರ ನಿಗದಿ:1ರಿಂದ 5ನೇ ತರಗತಿಗೆ 265 ರೂ., 6ರಿಂದ 8ನೇ ತರಗತಿಗೆ 295 ರೂ., 9 ಮತ್ತು 10ನೇ ತರಗತಿಗೆ 325 ರೂ. ನಿಗದಿ ಮಾಡಲಾಗಿದೆ. ಸೇವಾ ದೃಷ್ಟಿಯಿಂದ ದಾನಿಗಳು ಹೆಚ್ಚುವರಿ ಹಣ ನೀಡಿದ್ದಲ್ಲಿ ಉತ್ತಮ ಗುಣಮಟ್ಟದ ಶೂ ಮತ್ತು ಸಾಕ್ಸ್ ಅನ್ನು ಖರೀದಿಸಿ ವಿತರಿಸಬಹುದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

ರೈಲ್ವೆ ನಿವೃತ್ತ ಪಿಂಚಣಿದಾರರ ಮಹಾಸಭೆ

ಮೈಸೂರು, ಜೂ. 23– ರೈಲ್ವೆ ಪಿಂಚಣಿದಾರರ ವೆಲ್‌ಫೇರ್ ಅಸೋಸಿಯೇಷನ್‌ನ ವಾರ್ಷಿಕ ಮಹಾಸಭೆಯನ್ನು ಒಂಟಿಕೊಪ್ಪಲಿನಲ್ಲಿರುವ ರೈಲ್ವೆ ಕಲ್ಯಾಣ ಮಂಟಪದಲ್ಲಿ ಜೂ. 29 ರಂದು ಬೆಳಗ್ಗೆ 10.30ಕ್ಕೆ ಕರೆಯಲಾಗಿದೆ.

——— ಇರಾನ್-ಇಸ್ರೇಲ್ ಯುದ್ಧ ———

ಗ್ಯಾಸ್ ಸಂಗ್ರಹಿಸಿಕೊಳ್ಳಲು ಸಲಹೆ

ಮೈಸೂರು, ಜೂ.23– ಇರಾನ್–ಇಸ್ರೇಲ್ ಯುದ್ಧದಿಂದ ಭಾರತಕ್ಕೆ ರಫ್ತಾಗುವ ಗ್ಯಾಸ್ ಮತ್ತು ಕಚ್ಚಾ ತೈಲ(ಪೆಟ್ರೋಲಿಯಂ ಉತ್ಪನ್ನ) ಪೂರೈಕೆಯಲ್ಲಿ ವ್ಯತ್ಯಯವಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಸಾರ್ವಜನಿಕರು, ಉದ್ಯಮಿಗಳು ಅಡುಗೆ ಹಾಗೂ ವಾಣಿಜ್ಯ ಅನಿಲ(ಗ್ಯಾಸ್ ಸಿಲಿಂಡರ್)ವನ್ನು ಮುಂಗಡವಾಗಿ ಕಾಯ್ದಿರಿಸಿಕೊಳ್ಳುವಂತೆ ಗ್ಯಾಸ್ ಏಜೆನ್ಸಿ ಮಾಲೀಕರು ತಿಳಿಸಿದ್ದಾರೆ. ಇರಾನ್–ಇಸ್ರೇಲ್ ನಡುವಿನ ಯುದ್ಧ ಪರಿಸ್ಥಿತಿಯಿಂದಾಗಿ ಪೆಟ್ರೋಲಿಯಂ ಉತ್ಪನ್ನಗಳ ಬೆಲೆ ಹೆಚ್ಚಾಗುವ ಸಾಧ್ಯತೆಯೂ ಇರಲಿದೆ. ಹಾಗೆಯೇ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಬಹುದು. ಆದ್ದರಿಂದ ಸಾರ್ವಜನಿಕರು ಹಾಗೂ ಹೋಟೆಲ್ ಉದ್ಯಮಿಗಳು ಮುಂಗಡವಾಗಿ ಹೆಚ್ಚುವರಿ ಗ್ಯಾಸ್ ಸಿಲಿಂಡರ್‌ಗಳನ್ನು ಖರೀದಿಸಿ ಇಟ್ಟುಕೊಳ್ಳುವಂತೆ ಅಮರ್‌ದೀಪ್ ಗ್ಯಾಸ್ ಏಜೆನ್ಸಿ ಮಾಲೀಕ ಮೇಹುಲ್ ಪಟೇಲ್ ಸಲಹೆ ನೀಡಿದ್ದಾರೆ.

ಐಶ್ವರ್ಯಗೌಡ 'ವಂಚನೆ' ಪ್ರಕರಣ: ಇಡಿಯಿಂದ 4 ಕೋಟಿ ರೂ. ಮೌಲ್ಯದ ಆಸ್ತಿ ಜಪ್ತಿ

ನವದೆಹಲಿ: ಐಶ್ವರ್ಯಗೌಡ ಪ್ರಮುಖ ಆರೋಪಿಯಾಗಿರುವ ವಂಚನೆಗೆ ಸಂಬಂಧಿಸಿದ ಪಿಎಂಎಲ್‌ಎ ಪ್ರಕರಣದ ತನಿಖೆಯ ಭಾಗವಾಗಿ ಸುಮಾರು 4 ಕೋಟಿ ರೂ. ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡಿರುವುದಾಗಿ ಜಾರಿ ನಿರ್ದೇಶನಾಲಯ ಸೋಮವಾರ ತಿಳಿಸಿದೆ.



ಇದೇ ಪ್ರಕರಣ ಸಂಬಂಧ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕಿರಿಯ ಸಹೋದರ, ಕಾಂಗ್ರೆಸ್ ನಾಯಕ ಡಿ.ಕೆ. ಸುರೇಶ್ ಅವರು ಇಂದು ಇಡಿ ಮುಂದೆ ವಿಚಾರಣೆಗೆ ಹಾಜರಾಗಿ ತಮ್ಮ ಹೇಳಿಕೆಯನ್ನು ದಾಖಲಿಸಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಏಪ್ರಿಲ್ 24–25 ರಂದು ಕರ್ನಾಟಕದ 14 ಸ್ಥಳಗಳಲ್ಲಿ ಇಡಿ ಶೋಧ ನಡೆಸಿತ್ತು. ಐಶ್ವರ್ಯಗೌಡ ಅವರ ಬೆಂಗಳೂರು ಹಾಗೂ ಮಂಡ್ಯ ನಿವಾಸ ಮತ್ತು ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅವರ ಮನೆಗಳ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಗುರುವಾರ ದಾಳಿ ನಡೆಸಿದ್ದರು.

ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡ ಆಸ್ತಿಗಳಲ್ಲಿ 2.01 ಕೋಟಿ ರೂ. ಮೌಲ್ಯದ ಫ್ಲಾಟ್‌ಗಳು, ಕಟ್ಟಡ ಮತ್ತು ಭೂಮಿ ಸೇರಿದಂತೆ ನಗದು ಮತ್ತು 1.97 ಕೋಟಿ ರೂ. ವಾಹನ ಜಪ್ತಿ ಮಾಡಲಾಗಿದೆ ಎಂದು ಇಡಿ ಪ್ರಕಟಣೆಯಲ್ಲಿ ತಿಳಿಸಿದೆ. ಜೂನ್ 19 ರಂದು ಈ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ಆದೇಶ ಹೊರಡಿಸಲಾಗಿದೆ ಎಂದು ಇಡಿ ಹೇಳಿದೆ. ಮುಟ್ಟುಗೋಲು ಹಾಕಿಕೊಂಡ ಆಸ್ತಿಗಳ ಒಟ್ಟು ಮೌಲ್ಯ 3.98 ಕೋಟಿ ರೂ. ಎಂದು ಇಡಿ ತಿಳಿಸಿದೆ. ಮುಟ್ಟುಗೋಲು ಹಾಕಿಕೊಂಡ ಆಸ್ತಿಗಳು ಯಾರಿಗೆ ಸೇರಿವೆ ಎಂಬುದನ್ನು ಇಡಿ ಪ್ರಕಟಣೆಯಲ್ಲಿ ತಿಳಿಸಿಲ್ಲ.

ಒಳ ಮೀಸಲಾತಿ ಸಮೀಕ್ಷೆಯ ಅವಧಿ ಜೂ. 30 ರವರೆಗೆ ವಿಸ್ತರಣೆ

ಬೆಂಗಳೂರು: ನಿವೃತ್ತ ನ್ಯಾ. ಎಚ್.ಎನ್.ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗದ ನೇತೃತ್ವದಲ್ಲಿ ನಡೆಯುತ್ತಿರುವ ಒಳ ಮೀಸಲಾತಿಗಾಗಿ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆಯ ಅವಧಿಯನ್ನು ಮತ್ತೆ ವಿಸ್ತರಣೆ ಮಾಡಲಾಗಿದೆ.

ಈಗಾಗಲೇ ಜೂ.22ವರೆಗೆ ರಾಜ್ಯಾದ್ಯಂತ ನಡೆಸಲಾದ ಸಮೀಕ್ಷೆಯಲ್ಲಿ ಶೇ.91ಷ್ಟು ಪ್ರಗತಿಯನ್ನು ಸಾಧಿಸಲಾಗಿದೆ. ಉಳಿದಂತೆ ಸುಮಾರು ಶೇ.9ಷ್ಟು ಪ್ರಗತಿಯನ್ನು ಸಾಧಿಸಬೇಕಾಗಿದೆ. ಆದ್ದರಿಂದ ಸಮೀಕ್ಷೆಯ ಅವಧಿಯನ್ನು ಜೂ.30ವರೆಗೆ ವಿಸ್ತರಣೆ ಮಾಡಲಾಗಿದೆ. ಬಿಬಿಎಂಪಿ ಸೇರಿ ಬೆಂಗಳೂರು ಸುತ್ತಲಿನ ಜಿಲ್ಲೆಗಳಲ್ಲಿರುವ ಪರಿಶಿಷ್ಟ ಸಮುದಾಯದ ಕುಟುಂಬಗಳು ಸಮೀಕ್ಷೆಯಲ್ಲಿ ಒಳಗೊಂಡಿರದ ಹಿನ್ನೆಲೆಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಲು ನ್ಯಾಯಮೂರ್ತಿ ಡಾ। ಎಚ್. ಎನ್.ನಾಗಮೋಹನದಾಸ್ ನೇತೃತ್ವದ ಏಕ ಸದಸ್ಯ ಆಯೋಗ ಸಮೀಕ್ಷೆ ಅವಧಿಯನ್ನು ವಿಸ್ತರಿಸಿದೆ.

ರಾಜ್ಯ ತೋಟಗಾರಿಕಾ ಕ್ಷೇತ್ರದಲ್ಲಿ ಉತ್ತಮ ಪ್ರಗತಿ ಸಾಧಿಸಿದೆ

ಯಾಚೇನಹಳ್ಳಿ ಪಿಎಸಿಎಸ್ ಅಧ್ಯಕ್ಷ ವೈ.ಎನ್.ಶಂಕರೇಗೌಡ ಅಭಿಪ್ರಾಯ

ತಿ.ನರಸೀಪುರ, ಜೂ.23– ದೇಶದ ಇತರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯ ತೋಟಗಾರಿಕಾ ಕ್ಷೇತ್ರದಲ್ಲಿ ಉತ್ತಮ ಪ್ರಗತಿ ಸಾಧಿಸಿದೆ ಎಂದು ಯಾಚೇನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ವೈ.ಎನ್.ಶಂಕರೇಗೌಡ ತಿಳಿಸಿದರು.

ತಾಲೂಕಿನ ಯಾಚೇನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾವರಣದಲ್ಲಿ ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಮೈಸೂರು ತೋಟಗಾರಿಕೆ ಮಹಾವಿದ್ಯಾಲಯ, ಬಿ.ಸೀಹಳ್ಳಿ, ಯಾಚೇನಹಳ್ಳಿ, ಕೆಂಪೇಗೌಡನ ಕೊಪ್ಪಲು ಗ್ರಾಮಗಳ ಸಂಯುಕ್ತಾಶ್ರಯ ದಲ್ಲಿ ನಡೆದ ಅಂತಿಮ ವರ್ಷದ ಬಿಎಸ್ಸಿ (ಹಾನರ್ಸ್) ತೋಟಗಾರಿಕೆ ಪದವಿ ವಿದ್ಯಾರ್ಥಿಗಳ ಗ್ರಾಮೀಣ ತೋಟಗಾರಿಕೆ ಕಾರ್ಯಾನುಭವ ಕಾರ್ಯಕ್ರಮದ ವಸ್ತು ಪ್ರದರ್ಶನ ಉದ್ಘಾಟಿಸಿ, ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೃಷಿ, ರೇಷ್ಮೆ, ತೋಟಗಾರಿಕೆ ಸೇರಿದಂತೆ ಇನ್ನಿತರ ಸರ್ಕಾರಿ ಇಲಾಖೆಗಳು ರೈತರಿಗೆ ಮತ್ತಷ್ಟು ಪ್ರೋತ್ಸಾಹದ ಜೊತೆಗೆ ಕೃಷಿ ಚಟುವಟಿಕೆಗೆ ಸಹಕಾರ ನೀಡಿದರೆ ಭವಿಷ್ಯದಲ್ಲಿ ರಾಜ್ಯದ ಕೃಷಿ ಕ್ಷೇತ್ರ ಮತ್ತಷ್ಟು ಪ್ರವರ್ಧಮಾನಕ್ಕೆ ಬರಲಿದೆ. ಪ್ರಸ್ತುತ ತೋಟಗಾರಿಕೆ ಕ್ಷೇತ್ರದ ಪ್ರಗತಿ ಗಮನಿಸಿದರೆ ಮುಂದಿನ ದಿನಗಳಲ್ಲಿ ಮತ್ತಷ್ಟು ತೋಟ ಗಾರಿಕೆ ಉತ್ಪಾದನೆ ನಿರೀಕ್ಷಿಸಬಹುದು ಎಂದರು.

ರೈತರ ಅಭಿವೃದ್ಧಿಗಾಗಿ ಸರ್ಕಾರ ಕೃಷಿ, ತೋಟಗಾರಿಕಾ ಇಲಾಖೆಗಳ ಮೂಲಕ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಅವುಗಳ ಬಗ್ಗೆ ರೈತರಿಗೆ ಮಾಹಿತಿ ಕೊರತೆ ಇದೆ. ಇಂತಹ ಶಿಬಿರಗಳ ಮೂಲಕ ವಿದ್ಯಾರ್ಥಿಗಳು ಗ್ರಾಮೀಣ ಜನತೆಗೆ ಅರಿವು ಮೂಡಿಸುವ ಕೆಲಸ ಮಾಡಿ, ಹೆಚ್ಚಿನ ರೈತರನ್ನು ಸೇರಿಸಿ ಸರ್ಕಾರದ ಯೋಜನೆಗಳನ್ನು ಪಡೆದುಕೊಳ್ಳುವ ಕುರಿತು ಸಲಹೆ ನೀಡಬೇಕು ಎಂದರು.

ಗ್ರಾಮೀಣ ಕಾರ್ಯಾನುಭವ ಶಿಬಿರಗಳಲ್ಲಿ ತೋಟಗಾರಿಕೆ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು ರೈತರಿಗೆ ಕೃಷಿಯಲ್ಲಿ ತಂತ್ರಜ್ಞಾನದ ಬಳಕೆ ಕುರಿತು ತಿಳಿಸಿಕೊಡಬೇಕು. ಕೃಷಿ ಜೊತೆಗೆ ಉಪಕಸುಬುಗಳ ಬಗ್ಗೆಯೂ ಮಾರ್ಗದರ್ಶನ ನೀಡಬೇಕೆಂದು ಸಲಹೆ ನೀಡಿದರು.

ತೋಟಗಾರಿಕೆ ಬೆಳೆ ವಿಶ್ವದ ಗಮನ ಸೆಳೆಯಬೇಕು: ಈ ಹಿಂದೆ ನಾವೆಲ್ಲಾ ಗ್ರಾಮದಲ್ಲಿ ಮಾಡುತ್ತಿದ್ದ ವ್ಯವಸಾಯ ನೋಡಿಕೊಂಡು ಬೆಳೆದಿದ್ದೇವೆ. ಆಗ ಭತ್ತ, ರಾಗಿ, ಕಡಲೆಕಾಯಿ ಮಾತ್ರ ಬೆಳೆಯಲಾಗುತ್ತಿತ್ತು. ನಂತರದಲ್ಲಿ ತೋಟಗಾರಿಕೆ ತನ್ನ ಕಾರ್ಯಕ್ಷೇತ್ರ ವ್ಯಾಪಿಸಿಕೊಂಡಿದ್ದು, ಇದೀಗ ಶೇ.80ರಷ್ಟು ರೈತರು ತೋಟಗಾರಿಕೆ ಬೆಳೆ ಅವಲಂಬಿಸಿದ್ದಾರೆ. ಆದರೆ ಅವರು ಬೆಳೆಯುತ್ತಿರುವ ಬೆಳೆ ವೈಜ್ಞಾನಿಕವಾಗಿದೆಯೇ ಎಂಬ ಬಗ್ಗೆ ಅರಿವಿನ ಅವಶ್ಯಕತೆ ಇದೆ. ತೋಟಗಾರಿಕೆ ಬೆಳೆ ವಿಶ್ವದಲ್ಲೇ ಎಲ್ಲರ ಗಮನ ಸೆಳೆಯುವಂತಾಗಬೇಕು ಎಂದರು.



ಕಾರ್ಯಕ್ರಮವನ್ನು ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ ಉದ್ಘಾಟಿಸಿದರು.

> ವಿದ್ಯಾರ್ಥಿಗಳು ಪದವಿ ಪಡೆದ ತಕ್ಷಣ ಕೆಲಸ ಸಿಗುತ್ತದೆ ಎಂಬ ಗ್ಯಾರಂಟಿ ಇವತ್ತಿನ ಪರಿಸ್ಥಿತಿಯಲ್ಲಿಲ್ಲ. ಇಂಜಿನಿಯರಿಂಗ್, ಆರ್ಟಿಕಲ್ಚರ್, ಅಗ್ರಿಕಲ್ಚರ್ ಪದವಿ ವಿದ್ಯಾರ್ಥಿಗಳು ಹೆಚ್ಚಾಗಿರುವ ಪ್ರಸಕ್ತ ಸನ್ನಿವೇಶದಲ್ಲಿ ಎಲ್ಲರಿಗೂ ಸರ್ಕಾರಿ ಕೆಲಸ ಸಿಗುತ್ತದೆ ಎಂಬ ನಿರೀಕ್ಷೆ ಇಟ್ಟುಕೊಳ್ಳದೇ ವಿದ್ಯಾರ್ಥಿಗಳು ವೈಯಕ್ತಿಕ ಬುದ್ಧಿವಂತಿಕೆಯಿಂದ ಸ್ವಯಂ ಉದ್ಯೋಗ ಮಾಡುವತ್ತ ಗಮನ ಹರಿಸಬೇಕು. ಸರ್ಕಾರಿ ಕೆಲಸ ಸಿಗಲಿಲ್ಲ ಎಂದು ನೊಂದುಕೊಳ್ಳಬಾರದು. ಕಳೆದ ಮೂರು ತಿಂಗಳಿಂದ ಗ್ರಾಮೀಣ ಮಟ್ಟದಲ್ಲಿ ವಿದ್ಯಾರ್ಥಿಗಳು ರೈತರ ಜೊತೆಗೆ ಕಾರ್ಯಾನುಭವ ಕಾರ್ಯಕ್ರಮದಲ್ಲಿ ತೊಡಗಿದ್ದೀರಿ. ನಿಮ್ಮ ತಂದೆ ತಾಯಿ ನಿಮ್ಮನ್ನು ನಂಬಿ ಕಳುಹಿಸಿಕೊಟ್ಟಿರುತ್ತಾರೆ. ಅವರ ನಂಬಿಕೆ ಹುಸಿಗೊಳಿಸದೇ ನಿಮ್ಮ ಕಾರ್ಯ ಸಾಧನೆಯತ್ತ ಗಮನಹರಿಸಿ ಅದನ್ನು ಪೂರ್ಣಗೊಳಿಸಿ.
>
> – ಜೆ.ಸುನೀತಾ ವೀರಪ್ಪಗೌಡ, ಮಾಜಿ ಶಾಸಕಿ.

ಈ ವೇಳೆ ಗ್ರಾಮದ ಜಮೀನಿನ ಮಣ್ಣು ಪರೀಕ್ಷೆ ವರದಿಯನ್ನು ರೈತರಿಗೆ ವಿತರಿಸಲಾಯಿತು. ಸಾವಯವ ಕೃಷಿಯಲ್ಲಿ ಸಾಧನೆಗೈದ ರೈತರಿಗೆ ಸನ್ಮಾನ, ಕ್ರೀಡೆಯಲ್ಲಿ ವಿಜೇತರಾದ ರೈತರಿಗೆ ಬಹುಮಾನ ವಿತರಿಸಲಾಯಿತು. ಶಾಲಾವರಣದಲ್ಲಿ ತೋಟಗಾರಿಕೆಗೆ ಸಂಬಂಧಿಸಿದಂತೆ ಏರ್ಪಡಿಸಲಾಗಿದ್ದ ವಸ್ತು ಪ್ರದರ್ಶನ ಗಮನ ಸೆಳೆಯಿತು.

ಮೈಸೂರು ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ಜಿ.ಜನಾರ್ಧನ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಯಾಚೇನಹಳ್ಳಿ ಶ್ರೀರಾಮಕೃಷ್ಣ ಸೇವಾ ಕೇಂದ್ರದ ಶ್ರೀನಾದನಂದನಾಥ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಮಂಡ್ಯ ವಿಸಿ ಫಾರಂ ಕೃಷಿ ಮಹಾವಿದ್ಯಾಲಯದ ನಿವೃತ್ತ ಡೀನ್ ಡಾ.ಟಿ.ಶಿವಶಂಕರ್, ನಿವೃತ್ತ ತೋಟಗಾರಿಕೆ ಪ್ರಾಧ್ಯಾಪಕ ಡಾ.ಹೆಚ್.ಟಿ.ನಾಗರಾಜು, ಯಾಚೇನಹಳ್ಳಿ ನಾಡ ಯಜಮಾನರಾದ ವೈ.ಎಚ್.ಹನುಮಂತೇಗೌಡ, ತಾಪಂ ಮಾಜಿ ಅಧ್ಯಕ್ಷ ಸುಧೀರ್, ಗ್ರಾಪಂ ಅಧ್ಯಕ್ಷ ವೈ.ಸಿ.ಶಿವಕುಮಾರ್, ಅಂಕನಹಳ್ಳಿ ಗ್ರಾಪಂ ಅಧ್ಯಕ್ಷೆ ರೇಣುಕಾ, ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ವೈ.ಕೆ.ಉಮೇಶ್, ಯಾಚನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಾರ್ಯ ನಿರ್ವಾಧಿಕಾರಿ ಕ್ಯಾತೇಗೌಡ, ಎಸ್‌ಡಿಎಂಸಿ ಅಧ್ಯಕ್ಷ ವೈ.ಎಂ.ನಾಗರಾಜು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕಿ ಎಂ.ಶಾಂತ, ಸಹಾಯಕ ಕೃಷಿ ನಿರ್ದೇಶಕಿ ಕೆ.ಎಸ್.ಸುಹಾಸಿನಿ, ಕೃಷಿ ಅಧಿಕಾರಿ ಎಲ್.ವಿಶಾಲು, ಬಿ.ಪಿ.ರಾಘವೇಂದ್ರ, ಡಾ.ವಿಷಕಂಠಪ್ಪ, ವೈ.ಎನ್.ಕೆಂಪೇಗೌಡ, ಕೃಷ್ಣೇಗೌಡ, ಸಹ ಸಂಯೋಜಕ ಜಿ.ಕೆ.ರಾಮೇಗೌಡ, ಸಂಯೋಜಕಿ ಡಾ.ಮಮತಲಕ್ಷ್ಮಿ ಇದ್ದರು.

ಇಂದು ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ

ನಂಜನಗೂಡು, ಜೂ.23– ನಗರದ ಚೆಸ್ಕಾಂ ಕಚೇರಿ ಆವರಣದಲ್ಲಿ ಜೂ.24 ರಂದು ಬೆಳಗ್ಗೆ 11 ಗಂಟೆಗೆ ಮೊದಲ ತ್ರೈಮಾಸಿಕ ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ ಆಯೋಜಿಸಲಾಗಿದ್ದು, ವಿದ್ಯುತ್ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆ ಬಗೆಹರಿಸಿಕೊಳ್ಳಬೇಕು ಎಂದು ಚೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ದೇವರಾಜಯ್ಯ ಪ್ರಕಟಣೆಯಲ್ಲಿ ಕೋರಿದ್ದಾರೆ.

ಬೆಳಗ್ಗೆ 11 ಗಂಟೆಗೆ ನಂಜನಗೂಡು, ತಾಂಡವಪುರ, ಕೆ.ಎಸ್.ಹುಂಡಿ, ಹುಳಿಮಾವು, ಹದಿನಾರು, ಹೊಸಕೋಟೆ, ಬಿಳಿಗೆರೆ, ತುನೇರಳೆ, ಮರಳೂರು, ಸುತ್ತೂರು, ನಗರ್ಲೆ, ಹೊರಳವಾಡಿ, ಕೂಡ್ಲಾಪುರ, ದೇವರಸನಹಳ್ಳಿ, ಕಳಲೆ, ಸಿಂಧುವಳ್ಳಿ, ಕಸುವಿನಹಳ್ಳಿ, ದೇವಿರಮ್ಮನಹಳ್ಳಿ, ನವಿಲೂರು ದೇಬೂರು ಗ್ರಾಪಂ ವ್ಯಾಪ್ತಿಯ ಎಲ್ಲಾ ಗ್ರಾಹಕರು ತಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳಬಹುದಾಗಿದೆ. ಮಧ್ಯಾಹ್ನ 1 ಗಂಟೆಗೆ ಬದನವಾಳು, ದೇವನೂರು, ದೊಡ್ಡಕವಲಂದೆ, ಹೆಡತಲೆ, ಹೆಮ್ಮರಗಾಲ, ಕೋಣನೂರು, ನೇರಳೆ, ಹೆಗ್ಗಡಹಳ್ಳಿ, ಶಿರಮಳ್ಳಿ, ಹಗಿನವಾಳು, ಹುಲ್ಲಹಳ್ಳಿ, ರಾಂಪುರ, ಕುರಿಹುಂಡಿ, ನಲ್ಲಿತಾಳಪುರ, ಹರದನಹಳ್ಳಿ, ದುಗ್ಗಳ್ಳಿ, ಹುರ, ಹಲ್ಲರೆ, ಹಾಡ್ಯ, ಹೆಡಿಯಾಲ, ದೇವರಾಯಶೆಟ್ಟಿಪುರ, ದಾಸನೂರು, ಕಾರ್ಯ, ಮಲ್ಲೂಪುರ, ತಗಡೂರು, ತಾಯೂರು, ಗ್ರಾಪಂ ವ್ಯಾಪ್ತಿಯ ಗ್ರಾಮಗಳ ವಿದ್ಯುತ್ ಗ್ರಾಹಕರು ಸಮಸ್ಯೆಗಳನ್ನು ಹೇಳಿಕೊಂಡು ಸ್ಥಳದಲ್ಲಿ ಪರಿಹರಿಸಿಕೊಳ್ಳಬಹುದಾಗಿದೆ.

ಚಿತ್ತಧಾಮದಲ್ಲಿ ಮಾನಸಿಕ ಆರೋಗ್ಯ ಅರಿವು ಕಾರ್ಯಕ್ರಮ

ಹೆಚ್.ಡಿ.ಕೋಟೆ, ಜೂ.23– ಮನುಷ್ಯ ಇಂದಿನ ಜೀವನದ ಒತ್ತಡದ ಜಂಜಾಟದಲ್ಲಿ ಮಾನಸಿಕ ಆರೋಗ್ಯ ಕಳೆದುಕೊಳ್ಳುವ ಸಂಭವ ಇದೆ ಎಂದು ಖ್ಯಾತ ಮನೋವೈದ್ಯ ಡಾ.ರಾಮಕೃಷ್ಣ ತಿಳಿಸಿದರು.

ತಾಲೂಕಿನ ಬೋಚಿಕಟ್ಟೆ ಗ್ರಾಮದಲ್ಲಿರುವ ಮಾನಸಿಕ ಅಸ್ವಸ್ಥರ ಚಿಕಿತ್ಸಾ ಕೇಂದ್ರ ಚಿತ್ತಧಾಮದಲ್ಲಿ ಸಾರ್ವಜನಿಕರ ಮಾನಸಿಕ ಆರೋಗ್ಯ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದಿನನಿತ್ಯದ ಜಂಜಾಟದಲ್ಲಿ ಒತ್ತಡ ಉಂಟಾದರೆ, ನಿದ್ರಾಹೀನತೆ ಉಂಟಾಗಿ ದೈನಂದಿನ ಚಟುವಟಿಕೆಗಳಲ್ಲಿ ಆಸಕ್ತಿ ಕಡಿಮೆ ಆಗಿ ಮಾನಸಿಕ ರೋಗ ಉಂಟಾಗಬಹುದು. ನಂತರದಲ್ಲಿ ಖಿನ್ನತೆ ಉಂಟಾಗಬಹುದು. ಇದರಿಂದ ಕೆಲವು ಮಂದಿಗೆ ಗಾಬರಿಯಾಗಿ ಹೃದಯಾಘಾತ ಕೂಡ ಆಗಬಹುದು. ಇನ್ನೂ ಕೆಲವರಿಗೆ ಉನ್ಮಾದ ಉಂಟಾಗಬಹುದು. ಈ ಎಲ್ಲದಕ್ಕೂ ಚಿಕಿತ್ಸೆ ಇದೆ. ಕೆಲವರಿಗೆ ಮಾತುಕತೆ ಮೂಲಕ, ಇನ್ನೂ ಕೆಲವರಿಗೆ ಔಷಧಿ ಕೊಟ್ಟು, ಇನ್ನೂ ಕೆಲವರಿಗೆ ವ್ಯಾಯಾಮ, ಯೋಗ ಅಥವಾ ಇನ್ನಿತರ ದೈನಂದಿನ ಚಟುವಟಿಕೆಗಳ ಮೂಲಕವೂ ಈ ರೋಗ ಓಡಿಸಬಹುದು. ಇದಕ್ಕೆ ಕುಟುಂಬದವರು ಮತ್ತು ಸಮುದಾಯದ ಬೆಂಬಲ ಅತೀ ಮುಖ್ಯ ಎಂದರು.

ಚಿತ್ತಧಾಮದ ವ್ಯವಸ್ಥಾಪಕ ಎಂ.ಮಹದೇವಸ್ವಾಮಿ ಮಾತನಾಡಿ, ಮೈಸೂರು ಮಾನಸ ಗಂಗೋತ್ರಿಯ ಎಂಎಸ್‌ಡಬ್ಲ್ಯೂ ಮತ್ತು ಹುಣಸೂರು ದೇವರಾಜು ಅರಸು ಪ್ರಥಮ ದರ್ಜೆ ಕಾಲೇಜಿನ ಬಿಎ ವಿಭಾಗದ ಮನೋಶಾಸ್ತ್ರದ ವಿದ್ಯಾರ್ಥಿಗಳು ಇಂದಿನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ಇಲ್ಲಿ ಅವರಿಗೆ ಮಾನಸಿಕ ರೋಗಿಗಳ ಸೇವೆ ಮಾಡುವ ಬಗ್ಗೆಯೂ ತಿಳಿಸಲಾಗುತ್ತದೆ. ಆ ಮೂಲಕ ಸಮಾಜ ಸೇವೆ ಮಾಡುವುದನ್ನು ಅವರಿಗೆ ತಿಳಿಸಲಾಗುತ್ತದೆ. ಕಳೆದ ಸಾಲಿನಲ್ಲಿ ಇದೇ ರೀತಿಯ ಕಾರ್ಯಕ್ರಮ ನಡೆದ ನಂತರ, ಮೈಸೂರು ಮಾನಸ ಗಂಗೋತ್ರಿಯ ಎಂಎಸ್‌ಡಬ್ಲ್ಯೂ ವಿದ್ಯಾರ್ಥಿಗಳು ಮೈಸೂರು ನಗರದಲ್ಲಿ ಮಾನಸಿಕ ಖಿನ್ನತೆಯಿಂದ ಅಡ್ಡಾಡುತ್ತಿದ್ದ ಮೂವರನ್ನು ಗುರುತಿಸಿ, ಇಲ್ಲಿಗೆ ಕರೆತಂದು ಬಿಟ್ಟಿದ್ದರು. ಇಂದು ಅವರಲ್ಲಿ ಇಬ್ಬರು ಗುಣಮುಖರಾಗಿ ಅವರ ಮನೆ ಸೇರಿದ್ದಾರೆ. ಮತ್ತೊಬ್ಬರು ಇನ್ನೂ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದರು.

ಚಿತ್ತಪ್ರಕಾಶ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಡಾ.ರವಿಶಂಕರ್, ಮುರುಳೀಧರ್, ಡಾ.ಸಂಜೀವ್ ಜೈನ್, ಎಸ್‌ಐ ಚಿಕ್ಕನಾಯಕ, ಕಸಾಪ ಅಧ್ಯಕ್ಷ ಕನ್ನಡ ಪ್ರಮೊದ, ಪುರಸಭೆ ಸದಸ್ಯ ಲೋಕೇಶ್, ಮಹಿಳಾ ಸ್ವಸಹಾಯ ಸಂಘದ ಅಧ್ಯಕ್ಷೆ ರತ್ನಮ್ಮ ಹಾಜರಿದ್ದರು.



ಕಾರ್ಯಕ್ರಮವನ್ನು ಡಾ.ರವಿಶಂಕರ್ ಮತ್ತು ಇತರರು ಉದ್ಘಾಟಿಸಿದರು.

ಗ್ರಾಪಂ ಕೆಡಿಪಿ ಸಭೆಯಲ್ಲಿ ಸಮಸ್ಯೆಗಳ ಅನಾವರಣ

ಹುಣಸೂರು, ಜೂ.23– ತಾಲೂಕಿನ ಕರಿಮುದ್ದನಹಳ್ಳಿ ಗ್ರಾಪಂ ಅಧ್ಯಕ್ಷ ಜಿ.ಮಹದೇವ್ ಅಧ್ಯಕ್ಷತೆಯಲ್ಲಿ ಗ್ರಾಪಂ ಕೆಡಿಪಿ ಸಭೆ ನಡೆಯಿತು.

ಗ್ರಾಪಂ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಅನೇಕ ಸಮಸ್ಯೆಗಳು ಅನಾವರಣಗೊಂಡವು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯವರು ಗೃಹಲಕ್ಷ್ಮಿ, ಬಾಲ್ಯವಿವಾಹ ಹಾಗೂ ಭಾಗ್ಯಲಕ್ಷ್ಮಿ ಯೋಜನೆಗಳ ಬಗ್ಗೆ ಮಾಹಿತಿ ಕೇಳಿದರೂ ಸರಿಯಾದ ಮಾಹಿತಿ ನೀಡುವಲ್ಲಿ ವಿಫಲವಾಗಿದ್ದಾರೆ ಎಂದು ಎಂದು ಗ್ರಾಪಂ ಅಧ್ಯಕ್ಷ ಜಿ.ಮಹದೇವ್ ಆರೋಪಿಸಿದರು.

ಶಿಕ್ಷಣ, ಪಶು, ನರೇಗಾ, ಸಾರಿಗೆ, ಅಬಕಾರಿ, ಚೆಸ್ಕಾಂ ಸೇರಿದಂತೆ ಅನೇಕ ಇಲಾಖೆಗಳಿಂದ ಆಗುತ್ತಿರುವ ಸಮಸ್ಯೆಗಳನ್ನು ಸದಸ್ಯರು ಸಭೆಯಲ್ಲಿ ಬಿಚ್ಚಿಟ್ಟರು. ಕೃಷಿ ಸಂಬಂಧಿತ ಮಾಹಿತಿ ಪಡೆಯಲು ಬರುವ ರೈತರಿಗೆ ರೈತ ಸಂಪರ್ಕ ಕೇಂದ್ರದವರು ಸರಿಯಾದ ಮಾಹಿತಿ ನೀಡದೇ ಬೇಜವಾಬ್ದಾರಿಯಿಂದ ವರ್ತಿಸುತ್ತಿದ್ದಾರೆ. ನಮ್ಮಲ್ಲಿ ಜೋಳಕ್ಕೆ ಬೂಜು ರೋಗ ತಗಲಿದ್ದು, ಅದಕ್ಕಾಗಿ ಜೋಳ ಬೆಳೆದ ರೈತರಿಗೆ ಹೆಚ್ಚಿನ ಪರಿಹಾರ ನೀಡಬೇಕು. ಕೆಲವು ಅಧಿಕಾರಿಗಳ ನಡವಳಿಕೆ ಸರಿಪಡಿಸಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳು ಸೂಚಿಸಬೇಕೆಂದು ಅಧ್ಯಕ್ಷರು ಸೂಚಿಸಿದರು.

ಗೈರಾದವರಿಗೆ ನೋಟೀಸ್: ಕೆಡಿಪಿ ಸಭೆಗೆ ಅರಣ್ಯ ಇಲಾಖೆ, ಚೆಸ್ಕಾಂ, ಕೆಎಸ್‌ಆರ್‌ಟಿಸಿ, ಅಬಕಾರಿ, ಆಹಾರ ನಾಗರಿಕರ ಸರಬರಾಜು ಇಲಾಖೆ ಸೇರಿದಂತೆ ಅನೇಕ ಇಲಾಖೆಗಳ ಅಧಿಕಾರಿಗಳು ಗೈರಾಗುವ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡುವಲ್ಲಿ ವಿಫಲವಾಗುವುದರ ಜೊತೆಗೆ ಬೇಜವಾಬ್ದಾರಿಯಿಂದ ನಡೆದುಕೊಳ್ಳುತ್ತಿದ್ದಾರೆ. ಇದರಿಂದ ಬೇಸರಗೊಂಡ ಸದಸ್ಯರು ಗೈರಾದ ಇಲಾಖೆ ಮುಖ್ಯಸ್ಥರಿಗೆ ನೋಟೀಸ್ ನೀಡುವಂತೆ ನಿರ್ಣಯ ಕೈಗೊಂಡರು.

ನರೇಗಾ ಇಂಜಿನಿಯರ್ ಪವಿತ್ರ ನರೇಗಾ ಯೋಜನೆಯಡಿ ವಿವಿಧ ಇಲಾಖೆಯಿಂದ ನಡೆಸಬೇಕಿರುವ ಕಾಮಗಾರಿಗಳ ಬಗ್ಗೆ ಮಾಹಿತಿ ನೀಡಿದರು. ಸಭೆಯಲ್ಲಿ ಉಪಾಧ್ಯಕ್ಷೆ ಸಾವಿತ್ರಿ, ಸದಸ್ಯರಾದ ಶೃತಿ, ಪ್ರಕಾಶ್, ರವಿಕುಮಾರ್, ವಿಜಿಯಮ್ಮ, ಪುಟ್ಟಲಕ್ಷ್ಮಮ್ಮ, ಪಿಡಿಓ ಎಂ.ಸಿ.ರಾಘವೇಂದ್ರ, ಕಾರ್ಯದರ್ಶಿ ಗೀತಾ ಹಾಗೂ ವಿವಿಧ ಇಲಾಖೆ ಸಿಬ್ಬಂದಿ ಹಾಜರಿದ್ದರು.



ಕರಿಮುದ್ದನಹಳ್ಳಿ ಗ್ರಾಪಂನಲ್ಲಿ ಕೆಡಿಪಿ ಸಭೆ ನಡೆಯಿತು.

ರಸ್ತೆಗೆ ಉರುಳಿ ಬಿದ್ದ ಬೃಹತ್ ಮರ



ರಸ್ತೆಗೆ ಬೃಹತ್ ಮರ ಉರುಳಿ ಬಿದ್ದಿರುವುದು.

ಹುಣಸೂರು,ಜೂ.23– ತಾಲೂಕಿನ ಗಾವಡಗೆರೆ ಹೋಬಳಿ ಕೇಂದ್ರದಲ್ಲಿ ಸೋಮವಾರ ಬೃಹತ್ ಮರ ರಸ್ತೆಗೆ ಉರುಳಿ ಬಿದ್ದಿದೆ. ಆದರೆ, ಅದೃಷ್ಟಾವಶಾತ್ ಯಾವುದೇ ಅನಾಹುತ ಸಂಭವಿಸಿಲ್ಲ.

ಮಧ್ಯಾಹ್ನ 1.30ರ ಸುಮಾರಿಗೆ ಮರ ಧರೆಗೆ ಉರುಳಿದೆ. ಮರದ ಬುಡ ಶಿಥಿಲವಾಗಿತ್ತು, ವಿಷಯವನ್ನು ಸ್ಥಳೀಯ ಆಡಳಿತದ ಗಮನಕ್ಕೆ ತರಲಾಗಿತ್ತು. ಅರಣ್ಯ ಇಲಾಖೆ ಮರ ತೆರವುಗೊಳಿಸುವ ಪ್ರಯತ್ನ ನಡೆಸದೆ ಈ ಅವಘಡ ಸಂಭವಿಸಿದೆ. ಅದೃಷ್ಟವಶಾತ್ ಯಾವುದೇ ಪ್ರಾಣ ಹಾನಿಯಾಗಿಲ್ಲ ಎಂದು ಸ್ಥಳೀಯ ನಿವಾಸಿ ಗಣಪತಿ ಇಂಡೋಳ್ಕರ್ ತಿಳಿಸಿದರು.

ಮರ ಬಿದ್ದ ಸ್ಥಳದ ಬಳಿ ಪಶುವೈದ್ಯಶಾಲೆ, ಹಾಲು ಉತ್ಪನ್ನ ಸಂಗ್ರಹ ಕೇಂದ್ರ ಮತ್ತು ಪ್ರಾಥಮಿಕ ಶಾಲೆ ಇದ್ದು, ನಿತ್ಯ ಈ ಪ್ರದೇಶ ಜನಜಂಗುಳಿಯಿಂದ ಕೂಡಿರುತ್ತಿತ್ತು. ಇಂದು ಯಾರೂ ಇಲ್ಲದ ಸಮಯದಲ್ಲಿ ಮರ ಬಿದ್ದಿದೆ. ಇಲ್ಲದಿದ್ದರೆ ಅನಾಹುತ ಸಂಭವಿಸುತ್ತಿತ್ತು ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

ವಿದ್ಯುತ್ ವ್ಯತ್ಯಯ: ಘಟನೆಯಿಂದ ಗ್ರಾಮದಲ್ಲಿ ವಿದ್ಯುತ್ ಕಡಿತವಾಗಿದ್ದು, ಸ್ಥಳೀಯರು ಮರ ತೆರವುಗೊಳಿಸುವ ಕಾರ್ಯ ನಡೆಸಿದರು. ಕೆ.ಆರ್.ನಗರ–ಹುಣಸೂರು ಮುಖ್ಯರಸ್ತೆಯಲ್ಲಿ ಸಂಚಾರಕ್ಕೆ ತೊಂದರೆಯಾಯಿತು.

ಸರ್ಕಾರಿ ಶಾಲೆಗಳ ಉಳಿಸುವುದು ನಮ್ಮೆಲ್ಲರ ಕರ್ತವ್ಯ

ಕೆ.ಆರ್.ನಗರ, ಜೂ.23– ಸರ್ಕಾರಿ ಶಾಲೆಗಳು ಮುಚ್ಚುವ ಹಂತ ತಲುಪುತ್ತಿದ್ದು, ಅವುಗಳನ್ನು ಉಳಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ. ಹೀಗಾಗಿ ಅವುಗಳ ಉಳಿವಿಗೆ ಎಲ್ಲರೂ ಶ್ರಮಿಸೋಣ ಎಂದು ಮೈಸೂರಿನ ಕನ್ನಡ ಗೆಳೆಯರ ಬಳಗದ ಅಧ್ಯಕ್ಷೆ ಎಂ.ವಿ.ಅನಿತಾ ತಿಳಿಸಿದರು.

ತಾಲೂಕಿನ ಡಿ.ಕೆ.ಕೊಪ್ಪಲು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಮೈಸೂರು ಕನ್ನಡ ಗೆಳೆಯರ ಬಳಗದ ವತಿಯಿಂದ ಸ್ಮಾರ್ಟ್ ಟಿವಿ, ಮಕ್ಕಳಿಗೆ ಬ್ಯಾಗ್, ಲೇಖನ ಸಾಮಗ್ರಿ, ಕಲಿಕೋಪಕರಣಗಳನ್ನು ವಿತರಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಕನ್ನಡದ ಶಾಲೆಗಳ ಏಳಿಗೆಗಾಗಿ ಪೋಷಕರು ಮತ್ತು ಆರ್ಥಿಕವಾಗಿ ಸದೃಡವಾಗಿರುವವರು ಆರ್ಥಿಕ ನೆರವು ನೀಡಿ ಸಹಕರಿಸಿ ಎಂದು ಮನವಿ ಮಾಡಿದರು.

ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲೆಗಳಿಗೆ ಮೂಲ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಸರ್ಕಾರದ ಜೊತೆ ಸಮುದಾಯವು ಕೈ ಜೋಡಿಸಬೇಕು. ಇಲ್ಲವಾದರೆ ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಸೇರಿಸಲು ಮುಂದಾಗುತ್ತಿರುವ ಪರಿಣಾಮ ಕನ್ನಡ ಶಾಲೆಗಳು ಮುಚ್ಚುವಂತ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಬಳಗದ ನಿರ್ದೇಶಕ ಪಿ.ಉಮೇಶ್ ಮಾತನಾಡಿ, ಮೈಸೂರಿನ ವಿಶ್ವೇಶ್ವರ ನಗರದಲ್ಲಿರುವ ಸೇಂಟ್ ಥಾಮಸ್ ಶಾಲೆಯಲ್ಲಿ 1980ರ ಸಾಲಿನಲ್ಲಿ ಓದುತ್ತಿದ್ದ ವಿದ್ಯಾರ್ಥಿಗಳೆಲ್ಲಾ ಸೇರಿ ಸ್ಥಾಪಿಸಿರುವ ಈ ಸಂಘವು ಕನ್ನಡ ಶಾಲೆಗಳು ಉಳಿದರೆ ಮಾತ್ರ ನಾಡಿನ ಸಂಸ್ಕೃತಿ, ಕನ್ನಡ ಭಾಷೆ, ಪರಂಪರೆ ಉಳಿಯಲು ಸಾಧ್ಯ ಎಂಬುದನ್ನು ಮನಗೊಂಡು ಪ್ರತಿ ವರ್ಷ ಕನ್ನಡ ಮಾಧ್ಯಮ ಶಾಲೆಯಲ್ಲಿ ಓದುವ ಮಕ್ಕಳ ಏಳಿಗೆಗೆ ಹಾಗೂ ಶೈಕ್ಷಣಿಕ ಅಭಿವೃದ್ಧಿಗೆ ಬೆಂಬಲಿಸುವ ಉದ್ದೇಶ ಹೊಂದಿದೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಬಳಗದ ಸದಸ್ಯರನ್ನು ಶಾಲಾಭಿವೃದ್ಧಿ ಸಮಿತಿ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು. ಈ ವೇಳೆ ಬಳಗದ ಪದಾಧಿಕಾರಿಗಳಾದ ಎನ್.ಪದ್ಮರೇಖಾ, ಎನ್.ಎಂ.ಕೋಮಲ, ಎಂ.ಕೆ.ಶರವಣ, ಬಿ.ಎಂ.ಸವಿತಾ, ಸವಿತಾ, ಎಸ್.ಕಸ್ತೂರಿ, ವಿದ್ಯಾಸಾಗರ್, ನಂದೀಶ್ ಹಾಗೂ ಸಿದ್ದಾಪುರ ಗ್ರಾಪಂ ಪಿಡಿಓ ಗಿರೀಶ್ ಕುಮಾರ್, ಎಸ್‌ಡಿಎಂಸಿ ಅಧ್ಯಕ್ಷ ಡಿ.ಪಿ.ನಾಗೇಂದ್ರ, ಉಪಾಧ್ಯಕ್ಷೆ ಪ್ರಮೀಳಾ, ಸದಸ್ಯರಾದ ಸೌಮ್ಯ, ಅಶ್ವಿನಿ, ಸುಭಾಷಿಣಿ, ಸ್ವಾಮಿ, ಲೀಲಾವತಿ, ಜ್ಯೋತಿ, ಪ್ರತಿಮಾ, ಸಂತೋಷ್, ನಾಗಣ್ಣ, ಶಿಕ್ಷಕರಾದ ಎಂ.ಕೆ.ಕುಮಾರ್, ಎಸ್.ಟಿ.ರಘುವರ, ಕೆ.ಟಿ.ಚಂದನ್, ಸಿ.ಚೈತ್ರ ಸೇರಿದಂತೆ ಮತ್ತಿತರರಿದ್ದರು.



ವಿದ್ಯಾರ್ಥಿಗಳಿಗೆ ಬ್ಯಾಗ್, ಲೇಖನ ಸಾಮಾಗ್ರಿಗಳನ್ನು ವಿತರಿಸಲಾಯಿತು.

ಸಹಕಾರ ಸಚಿವರಿಗೆ ಅಭಿನಂದನೆ



ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರನ್ನು ಕರ್ನಾಟಕ ಕಾಸ್ಕಾರ್ಡ್ ಬ್ಯಾಂಕ್ ಅಧ್ಯಕ್ಷರೂ ಆದ ತಿಪಟೂರು ಶಾಸಕ ಕೆ.ಷಡಕ್ಷರಿ, ಉಪಾಧ್ಯಕ್ಷ ಉಳುವಪ್ಪ ದಾಸನೂರ್, ರಾಜ್ಯ ನಿರ್ದೇಶಕರಾದ ಕೆಂಪಯ್ಯನಹುಂಡಿ ಮಹದೇವಣ್ಣ, ಕಾರ್ಯದರ್ಶಿ ಲಕ್ಷ್ಮಿನಾರಾಯಣ, ಎಂ.ಡಿ.ಸತೀಶ್, ಶೇಖರಣ್ಣ ಇತರರು ಸನ್ಮಾನಿಸಿದರು.

ಡಾ.ಅಬ್ದುಲ್ ಕಲಾಂ ಸದ್ಭಾವನಾ ಪ್ರಶಸ್ತಿ ಪ್ರದಾನ



ಬೆಂಗಳೂರು ರವೀಂದ್ರ ಕಲಾ ಕ್ಷೇತ್ರದಲ್ಲಿ ಕರುಣಾಮಯಿ ಸಾಂಸ್ಕೃತಿಕ ಕಲಾ ವೇದಿಕೆ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ತಿ.ನರಸೀಪುರದ ಕೆಪಿಸಿಸಿ ಅಲ್ಪಸಂಖ್ಯಾತರ ಕಾರ್ಯದರ್ಶಿ ಬಿ.ಮನ್ಸೂರ್ ಆಲಿ ಅವರಿಗೆ ಡಾ.ಅಬ್ದುಲ್ ಕಲಾಂ ಸದ್ಭಾವನಾ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಳಪೆ ಬಿತ್ತನೆ ಬೀಜ ವಿತರಣೆ: ಪರಿಹಾರಕ್ಕೆ ಆಗ್ರಹ

ತಿ.ನರಸೀಪುರ, ಜೂ.23– ಕಳಪೆ ಬಿತ್ತನೆ ಬೀಜ ವಿತರಿಸುವ ಮೂಲಕ ಕೃಷಿ ಇಲಾಖೆ ರೈತನನ್ನು ವಂಚಿಸಿದ್ದು, ನಷ್ಟ ಅನುಭವಿಸಿರುವ ರೈತನಿಗೆ ಕೃಷಿ ಇಲಾಖೆ ಹಾಗೂ ಬಿತ್ತನೆ ಬೀಜ ಸರಬರಾಜು ಮಾಡಿರುವ ಕಂಪನಿ ಪರಿಹಾರ ನೀಡಬೇಕೆಂದು ರೈತ ಮುಖಂಡರು ಒತ್ತಾಯಿಸಿದ್ದಾರೆ.

ಈ ಬಾರಿ ಮುಂಗಾರು ಚುರುಕುಗೊಂಡ ಹಿನ್ನೆಲೆಯಲ್ಲಿ ರೈತ ಉತ್ತಮ ಫಸಲು ಬೆಳೆಯುವ ಆಸೆಯಿಂದ ತಾಲೂಕಿನಾದ್ಯಂತ ಸಾವಿರಾರು ಎಕರೆಯಲ್ಲಿ ಮುಸುಕಿನ ಜೋಳ ಬಿತ್ತನೆ ಮಾಡಿ ಉತ್ತಮ ಫಸಲಿಗಾಗಿ ಕಾದಿದ್ದಾನೆ. ಆದರೆ ಕೃಷಿ ಇಲಾಖೆ ವಿತರಿಸಿದ ಕಳಪೆ ಗುಣ ಮಟ್ಟದ ಬಿತ್ತನೆ ಬೀಜದಿಂದ ಫಸಲು ಬಿಡುವುದಿರಲಿ, ಬಿತ್ತಿದ್ದ ಬೀಜ ಚಿಗುರು ಸಹ ಒಡೆಯದೇ, ರೈತನಿಗೆ ನಿರಾಸೆ ಮೂಡಿಸಿದೆ.

ಇದರಿಂದ ಬೇಸತ್ತ ರೈತ ಮುಖಂಡರು ಕೃಷಿ ಇಲಾಖೆಯ ನಡೆ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು, ಕೂಡಲೇ ನಷ್ಟ ಹೊಂದಿರುವ ರೈತನಿಗೆ ಬಿತ್ತನೆಗಾಗಿ ಖರ್ಚು ಮಾಡಿದ ನಷ್ಟ ಭರಿಸಿಕೊಡುವಂತೆ ಒತ್ತಾಯಿಸಿದ್ದಾರೆ.

ತಾಲೂಕಿನ ಸೋಸಲೆ ಹೋಬಳಿ ಬೂದಹಳ್ಳಿ, ನಾಗಲಗೆರೆ, ಚಿದರವಳ್ಳಿ ಹಾಗೂ ಕೋಣಗಹಳ್ಳಿ ಗ್ರಾಮದ ಸಾವಿರಾರು ಎಕರೆಯಲ್ಲಿ ಹಾಕಿದ ಮುಸುಕಿನ ಜೋಳದ ಬಿತ್ತನೆ ಸಂಪೂರ್ಣ ವಿಫಲವಾಗಿದ್ದು, ಕೃಷಿ ಇಲಾಖೆ ವಿತರಿಸಿರುವ ಕಳಪೆ ಬಿತ್ತನೆ ಬೀಜದಿಂದ ರೈತ ಲಕ್ಷಾಂತರ ರೂ. ನಷ್ಟ ಅನುಭವಿಸಿದ್ದಾನೆ ಎಂದು ರಾಜ್ಯ ರೈತ ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ ಶಂಕರ್ ಆರೋಪಿಸಿದರು.

ತಾಲೂಕಿನ ಬೂದಹಳ್ಳಿಯಲ್ಲಿ ಮುಸುಕಿನ ಜೋಳ ಬಿತ್ತನೆ ಮಾಡಿದ ಜಮೀನಿನಲ್ಲಿ ಉಂಟಾಗಿರುವ ಅವ್ಯವಸ್ಥೆ ಬಗ್ಗೆ ಪತ್ರಕರ್ತರಿಗೆ ಮಾಹಿತಿ ನೀಡಿ ಮಾತನಾಡಿದ ಅವರು, ಕೃಷಿ ಇಲಾಖೆ ಪ್ರಿಯಾ ಎಂಬ ಕಂಪನಿ ಬಿತ್ತನೆ ಬೀಜವನ್ನು ರೈತರಿಗೆ ವಿತರಿಸಿದೆ. ಆದರೆ ಬಿತ್ತನೆ ಬೀಜ ಸಂಪೂರ್ಣ ಕಳಪೆ ಗುಣಮಟ್ಟದ್ದಾದ್ದರಿಂದ ಬೀಜ ಮೊಳಕೆ ಒಡೆಯದೇ ರೈತನಿಗೆ ತೀವ್ರ ನಷ್ಟ ಉಂಟಾಗಿದೆ. ಈ ಬಾರಿ ಉತ್ತಮ ಮಳೆಯಾಗಿದೆ ಆದ್ದರಿಂದ ರೈತರು ಉತ್ತಮ ಬೆಳೆ ಬೆಳೆಯುವ ಉದ್ದೇಶದಿಂದ ಎಕರೆಯೊಂದಕ್ಕೆ 60 ಸಾವಿರ ಖರ್ಚು ಮಾಡಿ ಮುಸುಕಿನ ಜೋಳ ಬಿತ್ತನೆ ಮಾಡಿದ್ದಾರೆ. ಆದರೆ ಬಿತ್ತನೆ ಬೀಜ ಕಳಪೆಯಾಗಿ ಬಿತ್ತಿರುವ ಬೀಜದಿಂದ ಮೊಳಕೆ ಒಡೆಯದ್ದರಿಂದ ರೈತ ಸಂಕಷ್ಟಕ್ಕೆ ಸಿಲುಕಿದ್ದಾನೆ. ಕೃಷಿ ಇಲಾಖೆ ಅಧಿಕಾರಿಗಳು ಕಂಪನಿಯೊಂದಿಗೆ ಸೇರಿ ರೈತರನ್ನು ವಂಚಿಸಿದ್ದಾರೆ. ಕೂಡಲೇ ರೈತರ ಸಭೆ ಕರೆದು ಅವರಿಗಾಗಿರುವ ನಷ್ಟದ ಬಗ್ಗೆ ಮಾಹಿತಿ ಪಡೆದು ನಷ್ಟ ಭರಿಸಿಕೊಡಬೇಕು ಎಂದು ಒತ್ತಾಯಿಸಿದರು.

ಕೃಷಿ ಇಲಾಖೆ ವಿತರಿಸುವ ಬಿತ್ತನೆ ಬೀಜದ ಪ್ಯಾಕೇಟೊಂದರಲ್ಲಿ 4 ಕೆಜಿ ಬಿತ್ತನೆ ಬೀಜ ಇದ್ದು, 600 ರೂ. ಪಡೆಯುತ್ತಾರೆ. ಒಂದು ಕ್ವಿಂಟಾಲ್ ಬಿತ್ತನೆ ಬೀಜಕ್ಕೆ 15 ಸಾವಿರ ಪಡೆಯುವ ಕೃಷಿ ಇಲಾಖೆಯವರು ರೈತರಿಂದ ಒಂದು ಕ್ವಿಂಟಾಲ್ ಮುಸುಕಿನ ಜೋಳವನ್ನು ಕೇವಲ 2 ರಿಂದ 2500 ರೂ.ಗಳನ್ನು ಮಾತ್ರವೇ ನೀಡಿ ಖರೀದಿಸುತ್ತಾರೆ. ಹಾಗಾಗಿ ರೈತರು ಪ್ರಜ್ಞಾವಂತರಾಗಬೇಕಿದೆ. ಈ ಹಿಂದೆ ಬೆಳೆದ ಬೆಳೆಯನ್ನು ಸಂಗ್ರಹಣೆ ಮಾಡಿ ಎಷ್ಟು ಬೇಕೋ ಅಷ್ಟು ಮಾರಾಟ ಮಾಡಿ ಉಳಿದದ್ದನ್ನು ಬಿತ್ತನೆ ಮಾಡಲು ಉಪಯೋಗಿಸುತ್ತಿದ್ದರು. ಈಗ ಅದೇ ರೀತಿಯ ಪದ್ಧತಿ ಅನುಸರಿಸಿದರೆ ಮಾತ್ರವೇ ರೈತ ಸಂಕಷ್ಟದಿಂದ ಪಾರಾಗಲು ಸಾಧ್ಯವಾಗಲಿದ್ದು, ಕೂಡಲೇ ಕೃಷಿ ಇಲಾಖೆ ರೈತನಿಗಾಗಿರುವ ನಷ್ಟವನ್ನು ಸರ್ವೆ ಮಾಡಿ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು.

ತಾಲೂಕು ಅಧ್ಯಕ್ಷ ಕರೋಹಟ್ಟಿ ಕುಮಾರಸ್ವಾಮಿ ಮಾತನಾಡಿದರು. ಈ ವೇಳೆ ಸೋಸಲೆ ಹೋಬಳಿ ಅಧ್ಯಕ್ಷ ರಮೇಶ್, ಗ್ರಾಪಂ ಮಾಜಿ ಸದಸ್ಯ ನಾಗಣ್ಣ, ರೈತ ಮುಖಂಡರಾದ ದಿನೇಶ್, ಸೋಮಣ್ಣ ಮತ್ತಿತರರಿದ್ದರು.



ಕಾರ್ಯಾಗಾರದಲ್ಲಿ ನವೀನ ತಂತ್ರಜ್ಞಾನ ಪರಿಚಯಿಸುವಲ್ಲಿ ಯಶಸ್ವಿ

ಐಐಟಿ ಮದ್ರಾಸ್ ಕಾಲೇಜಿನ ಪ್ರೊ.ಡಾ.ಪ್ರಸಾದ್ ಪಟ್ನಾಯಕ್ ಮೆಚ್ಚುಗೆ

ನಂಜನಗೂಡು, ಜೂ.23– ಮೆಕ್ಯಾನಿಕಲ್ ವಿಭಾಗದ ವಿದ್ಯಾರ್ಥಿಗಳಿಗೆ ಆಟೋಮೋಟಿವ್ ಇಂಜಿನಿಯರಿಂಗ್‌ಗಾಗಿ ಅತ್ಯಾಧುನಿಕ ಕಟಿಂಗ್ ಟೂಲ್ ತಂತ್ರಜ್ಞಾನ ಕುರಿತು ಎಂಐಟಿ ಕಾಲೇಜಿನಲ್ಲಿ 6 ದಿನಗಳ ಕಾಲ ನಡೆದ ತರಬೇತಿ ಕಾರ್ಯಾಗಾರ ನವೀನ ತಂತ್ರಜ್ಞಾನದ ಪರಿಚಯ ಮಾಡುವಲ್ಲಿ ಯಶಸ್ವಿಯಾಗಿದೆ ಎಂದು ಐಐಟಿ ಮದ್ರಾಸ್ ಕಾಲೇಜಿನ ಪ್ರೊ.ಡಾ.ಪ್ರಸಾದ್ ಪಟ್ನಾಯಕ್ ಮೆಚ್ಚುಗೆ ವ್ಯಕ್ತಪಡಿಸಿದರು.

ತಾಲೂಕಿನ ತಾಂಡವಪುರ ಎಂಐಟಿ ಕಾಲೇಜಿನಲ್ಲಿ ಸೋಮವಾರ ಮೆಕ್ಯಾನಿಕಲ್ ವಿಭಾಗದ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ಕಟಿಂಗ್ ಟೂಲ್ ತಂತ್ರಜ್ಞಾನ ಕಾರ್ಯಾಗಾರದಲ್ಲಿ ಮಾತನಾಡಿದರು.

ಆಟೋಮೋಟಿವ್ ವಲಯದಲ್ಲಿ ಸೀಮಿತ ಅಂಶ ವಿಧಾನಗಳ ಸುಧಾರಿತ ಜ್ಞಾನದೊಂದಿಗೆ ಶಿಕ್ಷಕರು ಹಾಗೂ ಸಂಶೋಧಕರನ್ನು ಸಜ್ಜುಗೊಳಿಸುವ ಗುರಿ ಹೊಂದಲಾಗಿದ್ದು, ಕಟಿಂಗ್ ಟೂಲ್ ತಂತ್ರಜ್ಞಾನ ಆಧುನಿಕ ಸಿಮ್ಯುಲೇಶನ್ ತಂತ್ರಗಳು, ಅವುಗಳ ರಚನಾತ್ಮಕ ವಿಶ್ಲೇಷಣೆ, ವಾಹನ ವಿನ್ಯಾಸ ಮತ್ತು ಉತ್ಪಾದನೆಯಲ್ಲಿ ಬಳಸಬಹುದಾಗಿದೆ. ಈ ತಂತ್ರಜ್ಞಾನದಿಂದಾಗಿ ಕಾರುಗಳ ಕ್ಷಮತೆ ಪರೀಕ್ಷಿಸಲು ವಾಹನಗಳನ್ನು ಪರಸ್ಪರ ಡಿಕ್ಕಿ ಹೊಡೆಸಿ ಪರೀಕ್ಷಿಸುವ ಬದಲು ತಂತ್ರಜ್ಞಾನ ಬಳಸಿ ಕಾರುಗಳ ಕ್ಷಮತೆ ಪರೀಕ್ಷೆ ನಡೆಸಬಹುದಾಗಿದೆ. ಈ ತಂತ್ರಜ್ಞಾನದ ಬಳಕೆಯಿಂದಾಗಿ ಆಟೋಮೋಟಿವ್ ಇಂಜಿನಿಯರಿಂಗ್‌ನಲ್ಲಿ ನಾವೀನ್ಯತೆ ಮತ್ತು ದಕ್ಷತೆ ಬೆಳೆಸಬಹುದಾಗಿದೆ ಎಂದರು.

ಕಾಲೇಜಿನ ಪ್ರಾಂಶುಪಾಲ ಡಾ.ವೈ.ಟಿ.ಕೃಷ್ಣೇಗೌಡ ಮಾತನಾಡಿ, ದೇಶದ ಪ್ರಮುಖ 10 ಇಂಜಿನಿಯರಿಂಗ್ ಕಾಲೇಜುಗಳಲ್ಲಿ ನಮ್ಮ ಕಾಲೇಜು ಒಂದಾಗಿದೆ. ವಿದ್ಯಾರ್ಥಿಗಳಿಗೆ ದೇಶದ ಪ್ರತಿಷ್ಠಿತ ಕಾಲೇಜುಗಳ ಪ್ರೊಫೆಸರ್‌ಗಳು ತಂತ್ರಜ್ಞಾನದಲ್ಲಿ ಉಂಟಾಗುತ್ತಿರುವ ಬದಲಾವಣೆ, ಹೊಸ ಕೌಶಲ್ಯ ಮತ್ತು ಆವಿಷ್ಕಾರಗಳ ಬಗ್ಗೆ ತರಬೇತಿ ನೀಡುವಲ್ಲಿ ನೆರವಾಗುತ್ತಿದ್ದಾರೆ. ಎಐಸಿಟಿಇ ಹಾಗೂ ಎಟಿಎಎಲ್ ಲರ್ನಿಂಗ್ ಅಕಾಡೆಮಿಗಳು ಸಂಸ್ಥೆಯ ಜೊತೆಗೆ ನಿಂತು ಪ್ರಾಯೋಜಕತ್ವ ನೀಡಿ ತಂತ್ರಜ್ಞಾನವನ್ನು ನಮ್ಮ ವಿದ್ಯಾರ್ಥಿಗಳಿಗೆ ಭೋದಿಸುವಲ್ಲಿ ನೆರವು ನೀಡುತ್ತಿವೆ ಎಂದರು.

ಕಾರ್ಯಕ್ರಮದಲ್ಲಿ ಎಂಐಟಿ ಸಂಸ್ಥೆ ಉಪಾಧ್ಯಕ್ಷ ಡಾ.ಜಿ.ಹೇಮಂತ್ ಕುಮಾರ್, ಬೆಂಗಳೂರಿನ ಇಂಡಿಯನ್ ಇನ್ಸಿಟ್ಯೂಟ್ ಆಫ್ ಸೈನ್ಸ್ ಪ್ರಿನ್ಸಿಪಾಲ್ ಡಾ.ಎಸ್.ಬಿ.ಕಂದಗಾಲ್, ಪ್ರೊ.ಮಲ್ಲಿಕಾರ್ಜುನ್, ಪ್ರೊ.ಕೃಷ್ಣಮೂರ್ತಿ, ಪ್ರೊ.ಕೀರ್ತಿ ಪ್ರಸಾದ್, ಡಾ.ಪುನೀತ್ ಉಪಸ್ಥಿತರಿದ್ದರು.



ಕಾರ್ಯಾಗಾರವನ್ನು ಐಐಟಿ ಮದ್ರಾಸ್ ಕಾಲೇಜಿನ ಪ್ರೊ. ಡಾ.ಪ್ರಸಾದ್ ಪಟ್ನಾಯಕ್ ಉದ್ಘಾಟಿಸಿದರು.

ವಿಶ್ವ ಸಂಗೀತ-ಯೋಗ ದಿನಾಚರಣೆ

ಆಧ್ಯಾತ್ಮಿಕತೆ, ಸಂಗೀತವನ್ನೂ ಒಳಗೊಂಡಂತೆ ಯೋಗ ಒಂದು ವಿಜ್ಞಾನ

ಶ್ರೀ ಪತಂಜಲಿ ಯೋಗ ಶಿಕ್ಷಣ ಸಂಸ್ಥೆ ನಗರ ಸಮಿತಿ ಅಧ್ಯಕ್ಷ ಕೆ.ಎಸ್.ಗೋಪಾಲಕೃಷ್ಣ

ಮೈಸೂರು,ಜೂ.23(ಪಿಎಂ)– ಯೋಗ ಒಂದು ವಿಜ್ಞಾನ. ಜೊತೆಗೆ ಅದು ಆಧ್ಯಾತ್ಮಿಕತೆ ಹಾಗೂ ಸಂಗೀತವನ್ನೂ ಒಳಗೊಂಡಿದೆ ಎಂದು ಶ್ರೀ ಪತಂಜಲಿ ಯೋಗ ಶಿಕ್ಷಣ ಸಂಸ್ಥೆ ನಗರ ಸಮಿತಿ ಅಧ್ಯಕ್ಷ ಕೆ.ಎಸ್.ಗೋಪಾಲಕೃಷ್ಣ ಹೇಳಿದರು.

ಮೈಸೂರಿನ ವಿಜಯನಗರದ ಬಸವ ಸಮಿತಿ ಸಭಾಂಗಣದಲ್ಲಿ ಮಹಾರತ್ನ ಟ್ರಸ್ಟ್ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ವಿಶ್ವ ಸಂಗೀತ ಮತ್ತು ಯೋಗ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಸಂಗೀತಕ್ಕೂ ಯೋಗಕ್ಕೂ ಸಂಬಂಧವಿದೆ. ಇದು ನಮ್ಮಲ್ಲೇ ಇರುವ ಸುಪ್ತವಾದ ದೈವಿಗುಣಗಳನ್ನು ಪ್ರಕಾಶಿಸುತ್ತದೆ. ಯೋಗವೆಂದರೆ ಸಾಮಾನ್ಯವಾಗಿ ಕೆಲವೊಂದು ಆಸನಗಳನ್ನು ಮಾಡುವುದಷ್ಟೇ ಎಂದು ಸಾಮಾನ್ಯವಾಗಿ ಭಾವಿಸಲಾಗುತ್ತದೆ. ಆದರೆ ಯೋಗ ವಿಸ್ತಾರವಾದ ವಿಷಯ. ಭಾರತ ಭೂಮಿಯಲ್ಲಿ ಋಷಿಗಳು ತಪಸ್ಸನ್ನು ಮಾಡಿ ಯೋಗವೆಂಬ ಸತ್ಯವನ್ನು ಕಂಡುಕೊಂಡು ಸಮಾಜಕ್ಕೆ ನೀಡಿದ್ದಾರೆ ಎಂದರು.

ಈ ಜೀವ, ಜಗತ್ತು ಹಾಗೂ ಈಶ್ವರನ ಸಂಬಂಧ ಏನು, ಏಕಾಗಿ ಒಬ್ಬ ಮನುಷ್ಯ ಹುಟ್ಟುತ್ತಾನೆ. ಏಕಾಗಿ ಕಷ್ಟಪಡುತ್ತಾನೆ. ಈ ಸತ್ಯದ ಹುಡುಕಾಟದಲ್ಲಿ ನಮ್ಮ ಋಷಿ ಮುನಿಗಳು ಯೋಗದ ಅನ್ವೇಷಣೆ ಮಾಡಿದ್ದಾರೆ. ಪ್ರಸ್ತುತದ ನಮ್ಮ ಜೀವನ ಶೈಲಿಯಲ್ಲಿ ದೈಹಿಕ ಚಟುವಟಿಕೆ ಪ್ರಾಮುಖ್ಯತೆ ಕಳೆದುಕೊಳ್ಳುತ್ತಿದೆ. ಮಾತಿನಲ್ಲಿ ಹೇಳಿದರೆ ಫ್ಯಾನ್ ಆನ್ ಆಗುವ ತಂತ್ರಜ್ಞಾನ ಚಾಲ್ತಿಯಲ್ಲಿದೆ. ಈಗ ಮಕ್ಕಳೂ ನೆಲದ ಮೇಲೆ ಕೂರುವುದು ಕಷ್ಟವಾಗಿದೆ. ನಾವು ಅತ್ಯಂತ ಸ್ವಾಭಾವಿಕ ಅಭ್ಯಾಸಗಳನ್ನೇ ಮರೆಯುತ್ತಿದ್ದೇವೆ. ಇದರ ಪರಿಣಾಮ ಸ್ಥೂಲಕಾಯ ಹಾಗೂ ಜೀವನ ಶೈಲಿಗೆ ಸಂಬಂಧಿಸಿದ ಅನಾರೋಗ್ಯ ಇಡೀ ಜಗತ್ತಿನಲ್ಲಿ ಮಾನವ ಸಮುದಾಯಕ್ಕೆ ದೊಡ್ಡ ಸವಾಲಾಗಿದೆ ಎಂದು ತಿಳಿಸಿದರು.

ಇಂತಹ ಸನ್ನಿವೇಶದಲ್ಲಿ ನಮಗೆ ಯೋಗ ಪರಿಹಾರವಾಗಿದೆ. ಯಾರು ನಿತ್ಯ ಯೋಗಾಭ್ಯಾಸ ಮಾಡುತ್ತಾರೋ ಅವರಲ್ಲಿ ಉನ್ನತ ಬದಲಾವಣೆ ಸಾಧ್ಯವಾಗಲಿದೆ. ನಮ್ಮ ಋಷಿ ಪರಂಪರೆಯಿಂದ ಬಂದಂತಹ ಜ್ಞಾನ ಯೋಗವನ್ನು ಭಾರತೀಯ ತತ್ವ ಶಾಸ್ತ್ರದ ದರ್ಶನಶಾಸ್ತ್ರಗಳಲ್ಲಿ ಒಂದೆಂದು ಗುರುತಿಸಲಾಗಿದೆ. ಇದರಲ್ಲಿ ಸಂಗೀತವೂ ಇದೆ. ಯೋಗದ ಪ್ರಾರಂಭಕ್ಕೂ ಮುನ್ನ ಓಂಕಾರ ಹೇಳುತ್ತೇವೆ. ಜೊತೆಗೆ ಲಯ ಯೋಗ ಎಂದೂ ಇದೆ ಎಂದರು.

ಮನುಷ್ಯ ಏಕೆ ಅಶಾಂತಗೊಳ್ಳುತ್ತಾನೆ. ಅವನಿಗೆ ಏಕೆ ರೋಗ ರುಜಿನಗಳು ಕಾಡುತ್ತವೆ ಎಂಬುದರ ಮೂಲ ಹುಡುಕುತ್ತಾ ಸಾಗಿದ ನಮ್ಮ ಋಷಿಗಳು ಅಂತಿಮವಾಗಿ ಯೋಗವೆಂಬ ಜ್ಞಾನ ಅನ್ವೇಷಿಸಿದ್ದಾರೆ. ಪತಂಜಲಿ ಮಹರ್ಷಿಗಳು ಸೂಕ್ಷ್ಮವಾಗಿ ಮನಸ್ಸನ್ನು ಅಧ್ಯಯನ ಮಾಡಿದ್ದಾರೆ. ಮಾನವ ತನ್ನ ಬದುಕಿನ ವಿವಿಧ ಹಂತಗಳಲ್ಲಿ ಹೇಗೆ ವರ್ತಿಸಬೇಕೆಂಬ ಜ್ಞಾನವನ್ನು ಕೊಡುಗೆಯಾಗಿ ನೀಡಿದ್ದಾರೆ. ಯೋಗ ಮಾರ್ಗದಿಂದ ನಮ್ಮಲ್ಲಿ ಸ್ಥಿರತೆ ಬರಲಿದೆ ಎಂದು ತಿಳಿಸಿದರು.

ಭಾರತವು ಕಳೆದೊಂದು ದಶಕದಿಂದ ಎಲ್ಲಾ ಕ್ಷೇತ್ರಗಳಲ್ಲಿ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ. ಗತಕಾಲದ ವೈಭವಕ್ಕೆ ಭಾರತ ಮರುಕಳಿಸುತ್ತಿದೆ ಎಂದು ಇತ್ತೀಚೆಗೆ ವಿದ್ವಾಂಸರೊಬ್ಬರು ಹೇಳಿದ್ದಾರೆ. ಆ ಮೂಲಕ ಭಾರತ ಈಗ ತನ್ನ ಬೇರಿನ ಕಡೆಗೆ ಪ್ರಯಾಣ ಮಾಡುತ್ತಿದೆ ಎಂಬುದನ್ನು ಅವರು ಉಲ್ಲೇಖಿಸಿದ್ದಾರೆ ಎಂದರು.

ಸಹಕಾರ ರತ್ನ ರಾಜ್ಯ ಪ್ರಶಸ್ತಿ ಪುರಸ್ಕೃತ ಹಾಗೂ ಮಹಾರತ್ನ ಟ್ರಸ್ಟ್ ಗೌರವಾಧ್ಯಕ್ಷ ಸಿ.ವಿ.ಪಾರ್ಥಸಾರಥಿ, ಸುಗಮ ಸಂಗೀತ ಗಾಯಕ ಹಾಗೂ ಮಹಾರತ್ನ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಮೈಸೂರು ಮಹಾಲಿಂಗ, ಟ್ರಸ್ಟಿನ ಕಾರ್ಯದರ್ಶಿ ರೂಪ, ಖಜಾಂಚಿ ಎಂ.ನಾಗರತ್ನ, ಮುಖಂಡ ಚನ್ನಬಸಪ್ಪ ಮತ್ತಿತರರು ಹಾಜರಿದ್ದರು.


ಮೈಸೂರಿನ ವಿಜಯನಗರದ ಬಸವ ಸಮಿತಿ ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವಿಶ್ವ ಸಂಗೀತ ಮತ್ತು ಯೋಗ ದಿನಾಚರಣೆಯನ್ನು ಹಾರ್ಮೋನಿಯಂ ನುಡಿಸುವ ಮೂಲಕ ಉದ್ಘಾಟಿಸಲಾಯಿತು.

ಸೇಠ್ ಮೋಹನ್ ದಾಸ್ ತುಳಸಿದಾಸ್ ಆಸ್ಪತ್ರೆಗೆ ಮಹಿಳಾ ಆಯೋಗದ ಅಧ್ಯಕ್ಷರ ಭೇಟಿ

ಪರಿಶೀಲನೆ; ಸಾರ್ವಜನಿಕರ ಅಹವಾಲು ಸ್ವೀಕಾರ

ಮೈಸೂರು, ಜೂ.23(ಎಂಕೆ)– ಮೈಸೂರಿನ ಜೆ.ಎಲ್.ಬಿ ರಸ್ತೆಯಲ್ಲಿರುವ ಸೇಠ್ ಮೋಹನ್ ದಾಸ್ ತುಳಸಿದಾಸ್ ಆಸ್ಪತ್ರೆಗೆ ಭೇಟಿ ನೀಡಿದ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌಧರಿ, ಪರಿಶೀಲನೆ ನಡೆಸಿದರು.

ಆಸ್ಪತ್ರೆ ಪ್ರತೀ ವಾರ್ಡ್‌ಗೂ ಭೇಟಿ ನೀಡಿ ಪರಿಶೀಲಿಸಿದ ಅವರು, ಆಸ್ಪತ್ರೆಗೆ ಬಂದಿದ್ದ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿದರು. ಈ ವೇಳೆ ಆಸ್ಪತ್ರೆಯಲ್ಲಿರುವ ಸಮಸ್ಯೆಗಳ ಬಗ್ಗೆ ಹಲವು ದೂರುಗಳು ಕೇಳಿಬಂದವು. ಕೂಡಲೇ ಆಸ್ಪತ್ರೆ ವೈದ್ಯರು ಹಾಗೂ ಸಿಬ್ಬಂದಿಗೆ ಸಮಸ್ಯೆ ಬಗೆಹರಿಸುವಂತೆ ಸೂಚಿಸಿದರು.

ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಇನ್ನೂ ಬಾಲ್ಯ ವಿವಾಹಗಳು ನಿಂತಿಲ್ಲ ಒಂದು ವರ್ಷದ ಅವಧಿಯಲ್ಲಿ ಸುಮಾರು 29 ಸಾವಿರ ಬಾಲ್ಯವಿವಾಹವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಬಾಲ್ಯವಿವಾಹಕ್ಕೆ ಮುಖ್ಯ ಕಾರಣ ಬಡತನ ಮತ್ತು ಅರಿವಿನ ಕೊರತೆ. ಪೋಷಕರು ತಮ್ಮ ಮಕ್ಕಳ ಮೇಲಿನ ಜವಾಬ್ದಾರಿ ಕಳೆದುಕೊಳ್ಳುವ ಆತುರದಲ್ಲಿ ಮದುವೆ ಮಾಡುವುದು, ಚಿಕ್ಕ ವಯಸ್ಸಿನಲ್ಲೇ ಹೆಣ್ಣು ಮಕ್ಕಳು ಪ್ರೀತಿ–ಪ್ರೇಮದ ಬಲೆಗೆ ಬೀಳುವುದು ಕಾರಣವಾಗಿದೆ. ಜನ ಎಲ್ಲಿಯವರೆಗೆ ಅರಿವು ಪಡೆಯುವುದಿಲ್ಲವೋ ಅಲ್ಲಿಯವರೆಗೂ ಇಂತಹ ಸಾಮಾಜಿಕ ಅನಿಷ್ಟ ಪದ್ಧತಿಗಳು ಮುಂದುವರಿಯುತ್ತಲೇ ಇರುತ್ತವೆ ಎಂದು ಹೇಳಿದರು.

ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಮುಂದುವರೆಯಬಾರದು: ಕುಮಾರ್ ಬಂಗಾರಪ್ಪ

ಬೆಂಗಳೂರು: ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿವೈ ವಿಜಯೇಂದ್ರ ಮುಂದುವರೆಯಬಾರದು ಎನ್ನುವ ನಿಲುವಿನಲ್ಲಿ ಈಗಲೂ ನಾವಿದ್ದೇವೆ ಎಂದು ಬಿಜೆಪಿ ರೆಬಲ್ ನಾಯಕ ಕುಮಾರ್ ಬಂಗಾರಪ್ಪ ಎಂದು ಹೇಳಿದರು.



ಸಿದ್ದೇಶ್ವರ್ ಮನೆಯಲ್ಲಿ ಕೇಂದ್ರ ಸಚಿವ ಸೋಮಣ್ಣ ಜೊತೆ ಸಭೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಸೋಮಣ್ಣ ಅವರು ನಮಗೆ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಸಹಕಾರ ಕೊಡಿ ಅಂತ ಕೇಳಿಲ್ಲ. ದಾವಣಗೆರೆ ವಿಚಾರಕ್ಕೆ ಸಿದ್ದೇಶ್ವರ್, ಹರೀಶ್ ಅವರನ್ನು ಸೋಮಣ್ಣ ಅವರು ಭೇಟಿಯಾಗಿದ್ದಾರೆ ಅಷ್ಟೇ ಎಂದು ತಿಳಿಸಿದರು.

ವಿಜಯೇಂದ್ರ ಮುಂದುವರೆಯಬಾರದು ಎನ್ನುವುದು ನಮ್ಮ ನಿಲುವು. ಬಿಜೆಪಿ ಸ್ವತಂತ್ರವಾಗಿ ಅಧಿಕಾರಕ್ಕೆ ಬರಬೇಕಾದರೆ ವಿಜಯೇಂದ್ರ ಬದಲಾವಣೆಯಾಗಬೇಕು. ನಮ್ಮ ಅಭಿಪ್ರಾಯ ಹೇಳಿದ್ದೇವೆ. ಹೈಕಮಾಂಡ್ ಏನು ತೀರ್ಮಾನ ಮಾಡುತ್ತದೆ ನೋಡೋಣ. ನಮ್ಮ ಅಭಿಪ್ರಾಯ, ನಮ್ಮ ನಿಲುವನ್ನು ನಾವು ಹೇಳಿದ್ದೇವೆ. ಕರ್ನಾಟಕದ ಕಾರ್ಯಕರ್ತರಿಗೂ ಈ ವ್ಯವಸ್ಥೆಯಲ್ಲಿ ಬದಲಾವಣೆ ಆಗಬೇಕು ಎನ್ನುವ ಭಾವನೆಯಿದೆ. ನಮ್ಮ ಬೇಡಿಕೆಯಿಂದ ನಾವು ಹಿಂದೆ ಸರಿಯುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಈ ಸರ್ಕಾರದ ಅಕ್ರಮಗಳು ಜಾಸ್ತಿಯಾಗಿವೆ. ಇದರ ವಿರುದ್ಧ ಧ್ವನಿ ಎತ್ತುವ ಕೆಲಸ ವಿಜಯೇಂದ್ರ ಮಾಡಿಲ್ಲ. ವಾಲ್ಮೀಕಿ ಹಗರಣವನ್ನು ಹಾಗೆಯೇ ಕೈ ಬಿಟ್ಟರು. ಹನಿಟ್ರ್ಯಾಪ್ ವಿಷಯವನ್ನು ಬಿಟ್ಟರು. ಹೊಂದಾಣಿಕೆ ಮಾಡಿಕೊಂಡು ಕೈ ಚೆಲ್ಲಿ ಕೂತರೆ ಹೇಗೆ? ಇವರೆಲ್ಲ ನೇರ ನಡೆಯಿಂದ ರಾಜಕೀಯ ಮಾಡುತ್ತಿಲ್ಲ. ಒಳಒಪ್ಪಂದ ಮಾಡಿ ರಾಜಕೀಯ ಮಾಡುತ್ತಿದ್ದಾರೆ. ಈಗಿನ ಅಧ್ಯಕ್ಷರು ಇದನ್ನೆಲ್ಲ ಮಾಡ್ತಿದ್ದಾರೆ. ಈ ಕುರಿತು ಹೈಕಮಾಂಡ್‌ಗೆ ಮನವರಿಕೆ ಮಾಡಿಕೊಟ್ಟಿದ್ದೇವೆ ಎಂದು ಹೆಸರು ಹೇಳದೇ ವಿಜಯೇಂದ್ರ ಒಳಒಪ್ಪಂದ ಮಾಡ್ತಿದ್ದಾರೆ ಎಂದು ಆರೋಪಿಸಿದರು.

ವಕ್ಫ್ ವಿಚಾರದಲ್ಲಿ ನಾವು ಹೋರಾಟ ಮಾಡಿದಾಗ ನಮ್ಮ ವಿರುದ್ಧ ಕೇಸ್ ಹಾಕಿಸಿದ್ದರು. ಬಿಜೆಪಿ ನಮ್ಮ ಜೊತೆ ವಕ್ಫ್ ಕೇಸ್‌ಲ್ಲಿ ಇರಬೇಕಿತ್ತು ಆದರೆ ಆ ಕೆಲಸ ಈಗಿನ ಬಿಜೆಪಿ ಮಾಡಿಲ್ಲ. ಇದನ್ನೆಲ್ಲ ನೋಡಿದರೆ ಒಳಒಪ್ಪಂದ ಎಂದು ಗೊತ್ತಾಗುತ್ತದೆ. ಒಳಒಪ್ಪಂದ ಬಿಟ್ಟು ನೇರ ನಡೆಯಲ್ಲಿ ಹೋರಾಟ ಆಗಬೇಕು. ಜನರ ಭಾವನೆ ಪರವಾಗಿ ಹೋರಾಟ ಮಾಡಬೇಕು. ಆದರೆ ಆ ಕೆಲಸ ಈಗಿನ ಬಿಜೆಪಿ ವ್ಯವಸ್ಥೆಯಲ್ಲಿ ಆಗುತ್ತಿಲ್ಲ ಎಂದು ಕಿಡಿಕಾರಿದರು.

ಯಡಿಯೂರಪ್ಪ ಬಿಜೆಪಿ ಕಚೇರಿಗೆ ಬರುತ್ತಿರೋ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಯಡಿಯೂರಪ್ಪ ಕಚೇರಿಗೆ ಬರುತ್ತಿರುವುದು ಒಳ್ಳೆಯ ನಿರ್ಧಾರ. ಈಗ ಇರುವ ವ್ಯವಸ್ಥೆ ಸರಿಯಿಲ್ಲ ಎಂದು ಅವರಿಗೆ ಗೊತ್ತಾಗಿದೆ. ಹೀಗಾಗಿ ಅವರೇ ಕಚೇರಿಗೆ ಬರುತ್ತಿದ್ದಾರೆ. ವಿಜಯೇಂದ್ರಗೆ ಅನುಭವದ ಕೊರತೆ ಇದೆ. ಬಿಎಸ್‌ವೈ ಸರಿ ಮಾಡ್ತೀನಿ ಎಂದು ಹೇಳಿರುವುದು ಬಿಜೆಪಿಗೆ ಒಳ್ಳೆಯದು. ನಾವು ಇದನ್ನೇ ಹೇಳುತ್ತಿದ್ದೇವೆ ನಮ್ಮ ಅನಿಸಿಕೆ ಹೇಳಿದ್ದೇವೆ. ಹೈಕಮಾಂಡ್ ಏನು ಮಾಡುತ್ತದೆ ನೋಡೋಣ. ನಾವು ಹೊಸ ಪಕ್ಷ ಕಟ್ಟಲ್ಲ ಪಕ್ಷ ಬಿಡುವುದಿಲ್ಲ. ನಮ್ಮ ಗುರಿ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರಬೇಕು. ವಿಜಯೇಂದ್ರರಿಂದ ಪಕ್ಷ ಸಂಘಟನೆ ವೀಕ್ ಆಗಿದೆ ಎಂದು ಆಕ್ರೋಶಿಸಿದರು.

ಮಹಿಳೆ ಮೇಲೆ ನಿತ್ಯವೂ ಒಂದಲ್ಲ ಒಂದು ರೀತಿ ದೌರ್ಜನ್ಯ ನಡೆಯುತ್ತಲೇ ಇದೆ

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ವಿಷಾದ

ಮೈಸೂರು, ಜೂ.23(ಎಂಕೆ)– ಹೆಣ್ಣೆಂದರೆ ಇಡೀ ಮನೆ. ಆಕೆ ಬರೀ ಗಂಡನನ್ನು ಮಾತ್ರವಲ್ಲ, ಇಡೀ ಮನೆಯನ್ನೇ ಮದುವೆಯಾಗಬೇಕು. ಮನೆಯ ಎಲ್ಲರ ಮನಗೆದ್ದು ತನ್ನ ಅಸ್ತಿತ್ವವನ್ನು ಸ್ಥಾಪಿಸಬೇಕು. ಸಮಾಜದಲ್ಲಿ ಹೆಚ್ಚು ದೌರ್ಜನ್ಯ ಅನುಭವಿಸುತ್ತಿರುವ ಹೆಣ್ಣಿನ, ಹೆಣ್ತನದ ಹೋರಾಟಕ್ಕಾಗಿ ಆಯೋಗ ರಚನೆಯಾಗಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌಧರಿ ಹೇಳಿದರು.

ಮೈಸೂರು ಕಲಾಮಂದಿರದ ಕಿರುರಂಗ ಮಂದಿರದಲ್ಲಿ ವೃಕ್ಷ ಸಂಸ್ಥೆ ವತಿಯಿಂದ ಹಿರಿಯ ರಂಗಕರ್ಮಿ ದಿವಂಗತ ನ.ರತ್ನ ಸ್ಮರಣಾರ್ಥ ಪಿನಾಕ ಪ್ರಾಯೋಜಿತ ರಾಜಸ್ಥಾನಿ ಜಾನಪದ ಕಥೆ ಆಧಾರಿತ 'ಸೂತ್ರದ ಗೊಂಬೆ' ನಾಟಕ ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹೆಣ್ಣು ಎಂದರೆ ತಾಯಿ. ಹುಟ್ಟಿದ ಪ್ರತೀ ಹೆಣ್ಣು ಮಗುವಿನಲ್ಲೂ ತಾಯಿತನ ಅಡಗಿರಲಿದೆ. ಅಂತಹ ಹೆಣ್ಣಿನ ಮೇಲೆ ಪ್ರತಿನಿತ್ಯ ನೂರಕ್ಕಿಂತ ಹೆಚ್ಚು ಅತ್ಯಾಚಾರ ಪ್ರಕರಣಗಳು ನಡೆಯುತ್ತಲೇ ಇವೆ ಎಂದು ವಿಷಾದಿಸಿದರು.

ಶೇ.68 ರಷ್ಟು ಗಂಡಸರು, ತನ್ನ ಹೆಂಡತಿಯನ್ನು ಹೊಡೆದು–ಬಡಿದು ಹದ್ದುಬಸ್ತಿನಲ್ಲಿ ಇಟ್ಟುಕೊಂಡರಷ್ಟೇ ಸಂಸಾರ ಸರಿಯಾಗಿ ನಡೆಯಲಿದೆ ಎಂಬ ಮನಸ್ಥಿತಿಯುಳ್ಳವರಿದ್ದಾರೆ ಎಂದು ಸಂಶೋಧನೆಗಳು ಹೇಳುತ್ತಿವೆ. ಶೇ.28 ರಷ್ಟು ಗಂಡಸರು ಪ್ರತಿ ನಿತ್ಯ ತಮ್ಮ ಹೆಂಡತಿಯರನ್ನು ಹೊಡೆಯುತ್ತಾರೆ. ದಿನವೊಂದಕ್ಕೆ ನೂರಕ್ಕೂ ಹೆಚ್ಚು ಅತ್ಯಾಚಾರ ಪ್ರಕರಣಗಳು ನಡೆಯುತ್ತಿವೆ. ಸೈಬರ್ ಪ್ರಕರಣಗಳಂತೂ ಲೆಕ್ಕವೇ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಹೆಣ್ಣು ಇಡೀ ಕುಟುಂಬವನ್ನು ಮೆಚ್ಚಿಸುವ ಕೆಲಸ ಇಂದಿಗೂ ಮಾಡುತ್ತಿದ್ದಾಳೆ. ಒಬ್ಬರಿಗೆ ಬೇಸರ ತರಿಸಿದರೂ ತನ್ನ ಸ್ಥಾನವನ್ನೇ ಕಳೆದುಕೊಳ್ಳುವ ಪರಿಸ್ಥಿತಿಯಲ್ಲಿದ್ದಾಳೆ. ಬುದ್ಧಿಮಾಂದ್ಯ ಹೆಣ್ಣುಮಕ್ಕಳ ಸಮಸ್ಯೆ ಮತ್ತಷ್ಟು ತೀವ್ರವಾಗಿದ್ದು, ಸಮಾಜ ಹೆಚ್ಚು ಸೌಜನ್ಯಯುತವಾಗಬೇಕು. ಸೂತ್ರದ ಗೊಂಬೆ ನಾಟಕ ಈ ಕಥಾವಸ್ತುವಿನ ಮೂಲಕ ಹೊಸ ಸಂವೇದನೆಗೆ ನಮ್ಮನ್ನು ತೆರೆಯುತ್ತದೆ ಎಂದರು. ಕಾರ್ಯಕ್ರಮದಲ್ಲಿ ಗಾಯಕ ಹರ್ಷ, ರಂಗ ನಿರ್ದೇಶಕ ವಿನೋದ್ ರಂಗ, ವೃಕ್ಷ ಸಂಸ್ಥೆ ಸಂಸ್ಥಾಪಕ ಕಾರ್ಯದರ್ಶಿ ಶಾಂತಕುಮಾರ್ ಉಪಸ್ಥಿತರಿದ್ದರು.


ರಾಜಸ್ಥಾನಿ ಜಾನಪದ ಕಥೆ ಆಧಾರಿತ 'ಸೂತ್ರದ ಗೊಂಬೆ' ನಾಟಕ ಪ್ರದರ್ಶನ ಕಾರ್ಯಕ್ರಮವನ್ನು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌಧರಿ ಉದ್ಘಾಟಿಸಿದರು.

83 ಸಾವಿರ ಪುರುಷರಿಗೆ ಅನ್ಯಾಯ...!

ಮಹಿಳಾ ಆಯೋಗದಂತೆ ಪುರುಷರ ಆಯೋಗವನ್ನು ರಚನೆ ಮಾಡಬಹುದು. ಇತ್ತೀಚೆಗೆ ಪತ್ರಿಕೆಯೊಂದರಲ್ಲಿ 83 ಸಾವಿರ ಪುರುಷರಿಗೆ ಅನ್ಯಾಯವಾಗಿದೆ ಎಂಬ ಲೇಖನವೊಂದನ್ನ ಓದಿದ್ದೆ
- ಡಾ.ನಾಗಲಕ್ಷ್ಮಿ ಚೌಧರಿ, ಅಧ್ಯಕ್ಷರು, ರಾಜ್ಯ ಮಹಿಳಾ ಆಯೋಗ

ಎಸ್‌ಎಸ್‌ಎಲ್‌ಸಿಯಲ್ಲಿ ಶೇ.60 ಕ್ಕಿಂತ ಕಡಿಮೆ ಫಲಿತಾಂಶ ಪಡೆದ ಶಾಲೆಗಳಿಗೆ ನೋಟಿಸ್

ಶಿಕ್ಷಕ, ಪದವೀಧರ ಕ್ಷೇತ್ರದ ಪ್ರತಿನಿಧಿಗಳ ಸಭೆ ಕರೆದು ಚರ್ಚಿಸಲು ಶಿಕ್ಷಣ ಸಚಿವರಿಗೆ ಎಂಎಲ್‌ಸಿ ವಿವೇಕಾನಂದ ಪತ್ರ

ಮೈಸೂರು, ಜೂ.23(ಬಿಎಲ್‌ಯು)– ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.60ಕ್ಕಿಂತ ಕಡಿಮೆ ಫಲಿತಾಂಶ ಪಡೆದಿರುವ ಶಾಲೆಗಳಿಗೆ ನೋಟಿಸ್ ನೀಡುವುದಕ್ಕಿಂತ ಮೊದಲು ಶಿಕ್ಷಕರ ಮತ್ತು ಪದವೀಧರ ಕ್ಷೇತ್ರದ ಪ್ರತಿನಿಧಿಗಳು ಹಾಗೂ ಪ್ರೌಢಶಾಲೆಯ ಮುಖ್ಯ ಶಿಕ್ಷಕರು, ಸಹ ಶಿಕ್ಷಕರ ಸಂಘದ ಪದಾಧಿಕಾರಿಗಳನ್ನು ಕರೆದು ಚರ್ಚಿಸಿ ಸಾಧಕ–ಬಾಧಕಗಳ ಚರ್ಚಿಸಬೇಕಿತ್ತು ಎಂದು ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಅವರು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಪತ್ರ ಬರೆದಿದ್ದಾರೆ.

ನೋಟಿಸ್ ನೀಡುವ ಮುನ್ನ ಶಿಕ್ಷಕರ ಕಾರ್ಯ ವ್ಯಾಪ್ತಿಯನ್ನು ಸಚಿವರು ಅರ್ಥೈಸಿಕೊಳ್ಳಬೇಕಿತ್ತು. ಶಿಕ್ಷಕರಿಗೆ ಪಾಠ ಪ್ರವಚನ ಮಾಡುವ ಜವಾಬ್ದಾರಿ ಮಾತ್ರ ವಹಿಸಲಾಗಿದೆಯೇ ಎಂದು ತಿಳಿಯಬೇಕಿತ್ತು. ಮೊಟ್ಟೆ ವಿತರಣೆ, ಬಿಸಿಯೂಟ ತಯಾರಿಕೆಗೆ ಸಹಕರಿಸುವಿಕೆ, ಕಾಲ ಕಾಲಕ್ಕೆ ಇಲಾಖೆಯ ಪುನರಾವರ್ತಿತವಾಗಿ ಕೇಳುವ ಮಾಹಿತಿಗಳನ್ನು ಶಿಕ್ಷಕರು ನೀಡಬೇಕಿದೆ. ವಿವಿಧ ಇಲಾಖೆಯ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿದಾಗ ಒಬ್ಬೊಬ್ಬ ಅಧಿಕಾರಿ ಬೇರೆ ಬೇರೆ ರೀತಿ ಮಾರ್ಗದರ್ಶನ ನೀಡುತ್ತಿದ್ದು, ಅದನ್ನು ಪಾಲಿಸಬೇಕಿದೆ. ಬೇರೆ ಇಲಾಖೆಯ ಕೆಲಸವನ್ನು ಶಿಕ್ಷಕರು ನಿರ್ವಹಿಸಿಕೊಂಡು ವಿದ್ಯಾರ್ಥಿಗಳಿಗೆ ಪಾಠ–ಪ್ರವಚನ ಮಾಡುತ್ತಿದ್ದಾರೆ ಎಂದು ಶಿಕ್ಷಕರ ಮೇಲಿರುವ ಒತ್ತಡವನ್ನು ವಿವರಿಸಿದ್ದಾರೆ.



ಶಿಕ್ಷಕರಿಗೆ ಇಷ್ಟೆಲ್ಲಾ ಕಾರ್ಯಭಾರ ವಹಿಸಿ ಒಳ್ಳೆಯ ಫಲಿತಾಂಶ ಅಪೇಕ್ಷೆ ಪಡುವುದು ಸರಿಯೇ ಎಂದು ಪ್ರಶ್ನಿಸಿರುವ ವಿವೇಕಾನಂದ ಅವರು, ಈ ಹಿನ್ನೆಲೆಯಲ್ಲಿ ಶಿಕ್ಷಕರ ಮತ್ತು ಪದವೀಧರ ಶಿಕ್ಷಕರ ಕ್ಷೇತ್ರದ ಪ್ರತಿನಿಧಿಗಳು ಹಾಗೂ ಸಂಬಂಧಿಸಿದ ಶಿಕ್ಷಕರ ಸಂಘದ ಪ್ರತಿನಿಧಿಗಳ ಸಭೆ ಕರೆದು, ಚರ್ಚೆ ಮಾಡಿದ ನಂತರ ಮುಂದಿನ ತೀರ್ಮಾನ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

ವಿದ್ಯಾರ್ಥಿನಿಲಯ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮೈಸೂರು, ಜೂ. 23– ಮೈಸೂರಿನ ಚಾಮುಂಡಿಬೆಟ್ಟದಲ್ಲಿರುವ ಟಿ.ಎಸ್. ಸುಬ್ಬಣ್ಣ ಸಾರ್ವಜನಿಕ ವಿದ್ಯಾನಿಲಯವು 2025–26ನೇ ಸಾಲಿನ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯದ ಉಚಿತ ಪ್ರವೇಶಕ್ಕಾಗಿ 5ನೇ ತರಗತಿಯಿಂದ 10ನೇ ತರಗತಿವರೆಗಿನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂ. 25 ಕೊನೆ ದಿನ. ಹೆಚ್ಚಿನ ಮಾಹಿತಿಗೆ ಮೊ. 9483730741 ಸಂಪರ್ಕಿಸಬಹುದು.

ಹುಚ್ಚು ನಾಯಿ ಕಡಿದ ಬಸವನ ರಕ್ಷಣೆಗೆ ಯುವಕರ ಪಡೆ ಅವಿರತ ಪ್ರಯತ್ನ!


ಹುಚ್ಚು ನಾಯಿ ಕಡಿತಕ್ಕೆ ಒಳಗಾಗಿರುವ ಬಸವ

ಮೈಸೂರು,ಜೂ.23(ಎಂಟಿವೈ)– ಹುಚ್ಚು ನಾಯಿ ಕಡಿದಿರುವ ಮಹಾಲಿಂಗೇಶ್ವರ ದೇವಾಲಯದ ಬಸವನಿಗೆ ಚಿಕಿತ್ಸೆ ನೀಡುವ ಮೂಲಕ ಮೈಸೂರಿನ ಮೇಟಗಳ್ಳಿ ಗರಡಿ ಯುವಕರು ಮಾನವೀಯತೆ ಮೆರೆದಿದ್ದಾರೆ.

ಒಂದೂವರೆ ತಿಂಗಳ ಹಿಂದೆ 8 ವರ್ಷದ ಬಸವನಿಗೆ ಹುಚ್ಚು ನಾಯಿ ಕಚ್ಚಿತ್ತು. ಬಿಎಂಶ್ರೀ ನಗರ ಸೇರಿದಂತೆ ಜನರ ಮೇಲೂ ದಾಳಿ ಮಾಡಿ, ಅನೇಕರಿಗೆ ಕಚ್ಚಿತ್ತು. ಮೇಟಗಳ್ಳಿಯ ಮಹಾಲಿಂಗೇಶ್ವರ ದೇವಾಲಯದಲ್ಲಿ ಆಚರಿಸುತ್ತಿದ್ದ ಜಾತ್ರೆ, ಹಬ್ಬಗಳಲ್ಲಿ ಈ ಬಸವ ದೈವಿ ಸ್ವರೂಪಿ ಎಂಬಂತೆ ಜನ ಪರಿಗಣಿಸುತ್ತಿದ್ದರು. ಕಪ್ಪು ಬಣ್ಣದ ಈ ಬಸವ ಈಗ ರೇಬಿಸ್ ಸೋಂಕಿಗೆ ತುತ್ತಾಗಿರುವ ಶಂಕೆ ವ್ಯಕ್ತವಾಗಿದೆ. ಪಶುವೈದ್ಯರು ಈಗಾಗಲೇ ಈ ಬಸವನ ಮೇಲೆ ನಿಗಾ ಇಡುವಂತೆ ಸಲಹೆ ನೀಡಿದ್ದಾರೆ.

ಮೇಟಗಳ್ಳಿಯ ಗರಡಿ ಮನೆಯ ಯುವಕರ ತಂಡ ಮಹಾಲಿಂಗೇಶ್ವರ ದೇವಾಲಯದ ಬಸವನನ್ನು ಸೋಂಕಿನಿಂದ ರಕ್ಷಿಸಲು ಪಣತೊಟ್ಟು, ಶುಶ್ರೂಷೆ ಮಾಡುತ್ತಿದ್ದಾರೆ. ಈ ಹುಚ್ಚು ನಾಯಿ ಕೆಲ ಹಸುಗಳಿಗೂ ಕಚ್ಚಿರುವ ವಿಷಯ ತಡವಾಗಿ ಯುವಕರಿಗೆ ಗೊತ್ತಾಗಿದೆ. ಘಟನೆ ನಡೆದು 48 ಗಂಟೆ ನಂತರ ದೇವಾಲಯದ ಬಸವನಿಗೆ ಆ್ಯಂಟಿ ರೇಬಿಸ್ ಚುಚ್ಚುಮದ್ದು ಕೊಡಿಸಿದ್ದಾರೆ. ಆದರೆ, ಸಮಯ ಮೀರಿದ್ದರಿಂದ ಅದು ಪರಿಣಾಮ ಬೀರಿಲ್ಲ. ಈ ಹಿನ್ನೆಲೆಯಲ್ಲಿ ಕೆಲ ದಿನಗಳಿಂದ ಬಸವನ ವರ್ತನೆಯಲ್ಲಿ ಗಮನಾರ್ಹ ಬದಲಾವಣೆ ಆಗಿದ್ದರೂ, ಅದು ಯಾರಿಗೂ ತೊಂದರೆ ನೀಡಿಲ್ಲ.

ಇದನ್ನು ಗಮನಿಸಿದ ಗರಡಿ ಮನೆ ಯುವಕರ ತಂಡ, ಬಸವನನ್ನು ಖಾಲಿ ಜಾಗವೊಂದಕ್ಕೆ ಕರೆ ತಂದು ಗೇಟ್ ಹಾಕಿ, ಸುರಕ್ಷಿತವಾಗಿರಿಸಿದ್ದಾರೆ. ಅಲ್ಲದೆ, ಬಸವನಿಗೆ ನಿತ್ಯವೂ ಮೇವು ಹಾಕಿ, ನೀರು ಕುಡಿಸಿ ಆರೈಕೆ ಮಾಡುತ್ತಿದ್ದಾರೆ. ವಿಷಯ ತಿಳಿದು ಸ್ಥಳಕ್ಕೆ ಬಂದ ಪಶುಸಂಗೋಪನಾ ಇಲಾಖೆಯ ಪಶುವೈದ್ಯರು ಬಸವನಿಗೆ ರೇಬಿಸ್ ಸೋಂಕು ತಗುಲಿರುವ ಶಂಕೆ ವ್ಯಕ್ತಪಡಿಸಿದ್ದಾರೆ. ಅಲ್ಲದೆ, ಅದರ ಮೇಲೆ ನಿಗಾ ಇಡುವಂತೆಯೂ ಸಲಹೆ ನೀಡಿದ್ದಾರೆ.

ಆದರೆ, ಸ್ಥಳೀಯ ಯುವಕರು ದೇವಾಲಯದ ಬಸವನ ರಕ್ಷಣೆಗೆ ಪಣತೊಟ್ಟಿದ್ದು, ನಾಟಿ ಔಷಧಿ ನೀಡುತ್ತಿದ್ದಾರೆ. ಈಗ ಬಸವನ ವರ್ತನೆಯಲ್ಲಿ ಸುಧಾರಣೆ ಕಂಡು ಬಂದಿದೆ ಎನ್ನಲಾಗಿದ್ದು, ಮೇಟಗಳ್ಳಿ ಜನ ಬಸವನಿಗಾಗಿ ವಿಶೇಷ ಪೂಜೆ ಸಹ ಸಲ್ಲಿಸುತ್ತಿದ್ದಾರೆ.

ಹಿಂದೂಪರ ಸಂಘಟನೆಗಳು ನೆರವಿಗೆ ಬರಲಿಲ್ಲ

ಈ ಬಸವನ ರಕ್ಷಣೆಗೆ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಮುಂದೆ ಬರಲಿಲ್ಲ. ಗರಡಿ ಮನೆಯ ಯುವಕರ ತಂಡ ಇದರ ರಕ್ಷಣೆಗಾಗಿ ಶ್ರಮಿಸುತ್ತಿದೆ. ಬಸವನ ರಕ್ಷಣಾ ಕಾರ್ಯದಲ್ಲಿ ಅನ್ಯ ಧರ್ಮದ ಯುವಕರು ಸಾಥ್ ನೀಡಿದ್ದಾರೆ. ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳು ಬಸವನ ರಕ್ಷಣೆ ಮಾಡಬೇಕು.
- ವಿಜಯ್(ಕಾಂತ)
ಮೇಟಗಳ್ಳಿ ನಿವಾಸಿ

ರೇಬಿಸ್ ಹಬ್ಬಿದೆ

ಮಹಾಲಿಂಗೇಶ್ವರ ದೇವಾಲಯದ ಬಸವನ ಆರೋಗ್ಯ ಪರಿಶೀಲಿಸಲು ಪಶುವೈದ್ಯರನ್ನು ಕಳುಹಿಸಲಾಗಿತ್ತು. ಹುಚ್ಚು ನಾಯಿ ಕಡಿತದ ನಂತರ ಸ್ಥಳೀಯರು ಆ್ಯಂಟಿ ರೇಬಿಸ್ ಚುಚ್ಚುಮದ್ದು ಕೊಡಿಸಿದ್ದಾರೆ. ಆದರೆ, ರೇಬಿಸ್ ಸೋಂಕು ಬಸವನಿಗೆ ತೀವ್ರ ವ್ಯಾಪಿಸಿದೆ. ಸ್ಥಳೀಯ ಯುವಕರೇ ಬಸವನನ್ನು ಸುರಕ್ಷಿತ ಸ್ಥಳದಲ್ಲಿ ಕಟ್ಟಿಹಾಕಿದ್ದಾರೆ. ಅದನ್ನು ಸೂಕ್ಷ್ಮವಾಗಿ ಗಮನಿಸಲು ಸೂಚಿಸಲಾಗಿದೆ.
- ಡಾ.ಎಂ.ಪಿ.ಪೂರ್ಣಾನಂದ,
ತಾಲೂಕು ಪಶುವೈದ್ಯಾಧಿಕಾರಿ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಡಿಎನ್‌ಎ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮಾದೇವ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಕುಬೇರಾ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಮಾದೇವ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಮಾದೇವ (ಕ)	4 ಪ್ರದರ್ಶನಗಳು
ರಾಜಕಮಲ್	
ಕುಬೇರಾ (ತೆ)	4 ಪ್ರದರ್ಶನಗಳು
ಸಂಗಂ	
ಕುಬೇರನ್(ತ) + ಕುಬೇರಾ (ಕ)	2+2 ಪ್ರದರ್ಶನಗಳು
ಲಿಡೋ	
ಕುಲದಲ್ಲಿ ಕೀಳಾವುದೋ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಬುಲೆಟ್ (ಕ) + ಭಗೀರಥ (ಕ)	3+1 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	28 ಇಯರ್ಸ್ ಲೇಟರ್ (ಇಂ): ಬೆ.10.40ಕ್ಕೆ, ರಾ.7.55ಕ್ಕೆ, ಡಿಎನ್‌ಎ (ತ): ಮ.1.10ಕ್ಕೆ, ಕುಬೇರಾ (ತೆ): ಸಂ.4.05ಕ್ಕೆ, ಸಿತಾರೆ ಜಮೀನ್ ಪರ್ (ಹಿಂ): ರಾ.10.25ಕ್ಕೆ.
ಸ್ಕ್ರೀನ್ 2	ಇಲಿಯೋ (3ಡಿ)(ಇಂ): ಬೆ.11.30ಕ್ಕೆ, ಮ.1.45ಕ್ಕೆ, ಸಿತಾರೆ ಜಮೀನ್ ಪರ್ (ಹಿಂ): ಸಂ.4ಕ್ಕೆ, ರಾ.7.10ಕ್ಕೆ, ಯುನೈಟೆಡ್ ಕಿಂಗ್‌ಡಮ್ ಆಫ್ ಕೇರಳ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಮಾದೇವ (ಕ): ಬೆ.10.30ಕ್ಕೆ, ರಾ.7.10ಕ್ಕೆ, ಮಾತೊಂದ ಹೇಳುವೆ (ಕ): ಮ.1.15ಕ್ಕೆ, 28 ಇಯರ್ಸ್ ಲೇಟರ್ (ಇಂ): ಸಂ.4.30ಕ್ಕೆ, ವ್ಯಾಸನಸಮೇತಂ

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಎಡಗೈಯೇ ಅಪಘಾತಕ್ಕೆ ಕಾರಣ (ಕ): ಮ.1.45ಕ್ಕೆ, ಸಂ.4.25ಕ್ಕೆ, ಸಂ.6.50ಕ್ಕೆ, ಮಾದೇವ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಮಾದೇವ (ಕ): ಮ.1.15ಕ್ಕೆ, ಸಂ.4.30ಕ್ಕೆ, ರಾ.7.30ಕ್ಕೆ.
ಸ್ಕ್ರೀನ್ 3	ಯುದ್ಧಕಾಂಡ 2 (ಕ): ಸಂ.6.50ಕ್ಕೆ.
ಸ್ಕ್ರೀನ್ 4	ಹೌಸ್‌ಫುಲ್ 5ಎ (ಹಿಂ): ಮ.1.15ಕ್ಕೆ, ಸಂ.4.30ಕ್ಕೆ, ರಾ.7.44ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಸ್ಪರ್ಧೆ ನಮ್ಮ ಜೊತೆ, ಸಹಕಾರ ಎಲ್ಲರ ಜೊತೆ ಇರಬೇಕು

ಶ್ರೀ ಸ್ವಾಮಿ ಮಹಾಮೇಧಾನಂದಜೀ ವಿದ್ಯಾರ್ಥಿಗಳಿಗೆ ಕಿವಿಮಾತು



ಮೈಸೂರು, ಜೂ. 23– ಮೈಸೂರು ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳಿಗೆ ಪುನಶ್ಚೇತನ ಮತ್ತು ಅಭಿವಿನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಮೈಸೂರಿನ ಶ್ರೀರಾಮಕೃಷ್ಣ ಆಶ್ರಮದ ಸ್ವಾಮೀಜಿಗಳಾದ ಶ್ರೀ ಸ್ವಾಮಿ ಮಹಾಮೇಧಾನಂದಜೀ ಚಾಲನೆ ನೀಡಿದ ಬಳಿಕ ವಿದ್ಯಾರ್ಥಿಗಳನ್ನು ಕುರಿತು ಮಾತನಾಡಿ, ಒಂದು ಮಗು ಮನುಷ್ಯನಾಗಿ ಬಾಳಬೇಕಾದರೆ ಅದು ವಿದ್ಯೆ ಕಲಿಯಬೇಕು. ಪ್ರತಿ ಮಗುವಿಗೂ ತಾಯಿಯೇ ಮೊದಲ ಗುರು. ನೀವು ಕಾಲೇಜಿಗೆ ಪ್ರವೇಶವನ್ನು ಪಡೆದಿದ್ದೀರಿ. ಕಾಲೇಜಿನಲ್ಲಿ ನಿಮಗೆ ನಿಮ್ಮದೇ ಆದ ಸ್ವಾತಂತ್ರ್ಯವಿರುತ್ತದೆ. ಮನೆ–ತಂದೆ–ತಾಯಿ–ಕುಟುಂಬ ಹೇಗೋ ಹಾಗೇ ನಿಮ್ಮ ಕಾಲೇಜು ಕೂಡ ಒಂದು ಕುಟುಂಬವೇ ಆಗಿರುತ್ತದೆ. ನೀವು ವಿದ್ಯೆ ಮೂಲಕ ಜ್ಞಾನವನ್ನು ಪಡೆಯುವುದರ ಹಿಂದೆ ಒಂದು ಉದ್ದೇಶವಿರುತ್ತದೆ. ಆಗ ಮಾತ್ರ ಸ್ಪಷ್ಟವಾದ ದಾರಿ ತೋಚುತ್ತದೆ. ಹಾಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಗೂ ಉದ್ದೇಶ ಮತ್ತು ಗುರಿ ಎರಡೂ ಬಹಳ ಮುಖ್ಯ. ಇದನ್ನು ಈ ಉದ್ದೇಶ ಗುರಿಗಳನ್ನು ಗಮನದಲ್ಲಿಟ್ಟುಕೊಳ್ಳಬೇಕು. ಸಮಯವನ್ನು ಸರಿಯಾದ ರೀತಿಯಲ್ಲಿ ಉಪಯೋಗಿಸಿಕೊಳ್ಳಬೇಕು.

ದೇಶದ ಬಗ್ಗೆ ನಿಮಗೆ ಅಭಿಮಾನವಿರಬೇಕು. ಒಳ್ಳೆಯ ಕೆಲಸವನ್ನು ಮಾಡುವುದಕ್ಕೆ ಸಮಯವನ್ನು ಮೀಸಲಿಡಬೇಕು. ನೀವು ಸಮಾಜಕ್ಕೆ ಏನನ್ನು ಕೊಡುತ್ತೀರಾ ಎಂಬುದು ಬಹಳ ಮುಖ್ಯ. ನಿಮ್ಮ ಪರಿಶ್ರಮದ ಫಲವೇ ನಿಮ್ಮ ಮುಂದಿನ ಬದುಕು. ನೀವು ಸಮಾಜದಿಂದ ಎಲ್ಲವನ್ನು ತೆಗೆದುಕೊಂಡಿದ್ದೀರಿ. ಅದಕ್ಕಿಂತ ಹೆಚ್ಚು ನೀವು ಸಮಾಜಕ್ಕೆ ಕೊಡುಗೆ ಕೊಡಬೇಕು. ಯಾರು ಇತರರಿಗಾಗಿ ಬದುಕುತ್ತಾರೋ ಅವರು ನಿಜವಾಗಲೂ ಬದುಕುತ್ತಾರೆ. ಯಾರು ತನಗಾಗಿ ಬದುಕುತ್ತಾರೋ ಅವರು ಬದುಕಿದ್ದೂ ಸತ್ತಂತೆ.

ಪ್ರತಿಯೊಂದು ಸಂಬಂಧಗಳಲ್ಲಿ ಕರ್ತವ್ಯಗಳಿವೆ ತಂದೆ–ತಾಯಿ ಬಂಧು–ಬಳಗ ಸಮಾಜದ ಎಲ್ಲರೊಡನೆ ನಮ್ಮ ಕರ್ತವ್ಯಗಳನ್ನು ನಾವು ಪರಿಪಾಲಿಸಬೇಕು ಎಂದು ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲ ಡಾ.ಎಸ್.ಮರೀಗೌಡ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವಿದ್ಯಾವರ್ಧಕ ಸಂಘದ ಗೌರವ ಕಾರ್ಯದರ್ಶಿ ಪಿ.ವಿಶ್ವನಾಥ್, ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ ಉಪಸ್ಥಿತರಿದ್ದರು.

ಕಾಲೇಜಿನ ಪ್ರತಿಭಾವಂತ ವಿದ್ಯಾರ್ಥಿಗಳಾದ ತನುಶ್ರೀ, ಸಹನಾ.ಜಿ, ಹೇಮಂತ್ ಕುಮಾರ್, ಕಾರ್ತಿಕ್ ಆರ್ ಗೌಡ, ಸುಪ್ರೀತ್.ಜೆ, ಕಾರ್ತಿಕ್.ಜಿ, ಕೆ. ಚಿಕ್ಕಯ್ಯ ಅವರನ್ನು ಸನ್ಮಾನಿಸಲಾಯಿತು.

ವಿದ್ಯಾವರ್ಧಕ ಸಂಘದ ಗೌರವ ಕೋಶಾಧ್ಯಕ್ಷ ಶ್ರೀಶೈಲರಾಮಣ್ಣವರ್, ಕಾಲೇಜು ನಿರ್ವಹಣಾ ಮಂಡಳಿಯ ಅಧ್ಯಕ್ಷ ಟಿ.ನಾಗರಾಜು ಇತರರು ಉಪಸ್ಥಿತರಿದ್ದರು.

ಪ್ರತಿಭಾವಂತ ಮಕ್ಕಳ ಗಾಂಜಾ, ಇತರ ಚಟಗಳಿಗೆ ದೂಡುವ

ನಟೋರಿಯಸ್ ಗ್ಯಾಂಗ್ ಮೈಸೂರಲ್ಲಿ ಸಕ್ರಿಯವಾಗಿದೆ

● ಹೋಟೆಲ್ ಮಾಲೀಕರ ಸಂಘದ ಧರ್ಮದತ್ತಿ ಟ್ರಸ್ಟ್‌ನ ಅಧ್ಯಕ್ಷ ರವಿಶಾಸ್ತ್ರಿ ಎಚ್ಚರಿಕೆ ● ಇಂತಹ ಗ್ಯಾಂಗ್‌ಗೆ ಬಲಿಯಾಗದಂತೆ ಬ್ರಾಹ್ಮಣ ಸೇರಿದಂತೆ ಎಲ್ಲಾ ಸಮುದಾಯದ ಮಕ್ಕಳಿಗೆ ಕಿವಿಮಾತು



ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ 83 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

> ಓದಿನ ಜೊತೆಗೆ ನಾವು ಆಚರಿಸುವ ಹಬ್ಬ–ಹರಿದಿನಗಳು, ಭಗವದ್ಗೀತೆ, ಭಾಗವತ ಹಾಗೂ ಇತರೆ ಆಚರಣೆಗಳಲ್ಲಿ ಪಾಲ್ಗೊಂಡು ನಮ್ಮ ಸನಾತನ ಧರ್ಮದ ಶ್ರೇಷ್ಠತೆಯನ್ನು ಹೆಚ್ಚಿಸಬೇಕು.
> -ಎಂ.ಆರ್.ಸಿರಿ, ಪ್ರತಿಭಾ ಪುರಸ್ಕಾರ ಪಡೆದ ವಿದ್ಯಾರ್ಥಿನಿ

> ಹಿಂದೂ ಧರ್ಮದ ಉಳಿವಿಗೆ ಬ್ರಾಹ್ಮಣ ಸಮುದಾಯದ ಎಲ್ಲಾ ಪಂಗಡಗಳು ಒಂದೇ ವೇದಿಕೆಗೆ ಬರಬೇಕು ಹಾಗೂ ತ್ರಿಮತಸ್ಥ ಬ್ರಾಹ್ಮಣರು ಒಂದಾದರೆ, ಹಿಂದೂ ಧರ್ಮ ಅಗ್ರಪಂಕ್ತಿಯಲ್ಲಿರುತ್ತದೆ. ಅಲ್ಲದೆ, ವಿದ್ಯಾರ್ಥಿ ಜೀವನದಲ್ಲೇ ಹಿಂದೂ ಧರ್ಮ ಪರಿಪಾಲನೆಗೆ ಒತ್ತು ನೀಡಬೇಕು.
> -ಅನಘ ರಾವ್, ಪ್ರತಿಭಾ ಪುರಸ್ಕಾರ ಪಡೆದ ವಿದ್ಯಾರ್ಥಿನಿ

ಮೈಸೂರು, ಜೂ.23(ಎಸ್‌ಪಿಎನ್)– ಪಿಯುಸಿಯ ಪ್ರತಿಭಾವಂತ ಮಕ್ಕಳನ್ನು ಗಾಂಜಾ ಸೇವನೆ ಸೇರಿದಂತೆ ಇತರೆ ಚಟಗಳಿಗೆ ದೂಡುವ ನಟೋರಿಯಸ್ ಗ್ಯಾಂಗ್ ಮೈಸೂರಲ್ಲಿ ಸಕ್ರಿಯವಾಗಿದೆ. ಇಂತಹ ಗುಂಪಿನ ಸಂಚಿಗೆ ಬ್ರಾಹ್ಮಣ ಸಮುದಾಯದ ಮಕ್ಕಳು ಬಲಿಯಾಗಬೇಡಿ ಎಂದು ಮೈಸೂರು ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಧರ್ಮದತ್ತಿ ಟ್ರಸ್ಟ್‌ನ ಅಧ್ಯಕ್ಷ ರವಿಶಾಸ್ತ್ರಿ ಸಲಹೆ ನೀಡಿದರು.

ಮೈಸೂರು ತೊಣಚಿಕೊಪ್ಪಲಿನ ಶ್ರೀಕೃಷ್ಣಸಭಾ ಭವನದಲ್ಲಿ ಶ್ರೀ ಕೃಷ್ಣ ಮಿತ್ರ ಮಂಡಳಿ, ಶ್ರೀ ಕೃಷ್ಣಟ್ರಸ್ಟ್ ಸಹಯೋಗದೊಂದಿಗೆ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ 83 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ, ಮಾತನಾಡಿದ ಅವರು, ಇತ್ತೀಚೆಗೆ ಪ್ರತಿಭಾವಂತ ಮಕ್ಕಳನ್ನು ಗಾಂಜಾ ಮತ್ತು ಡ್ರಗ್ಸ್ ಸೇವನೆಗೆ ದೂಡುವ ನಟೋರಿಯಸ್ ಗ್ಯಾಂಗ್ ಇದೆ. ಇದಕ್ಕೆ ಬ್ರಾಹ್ಮಣ ಸಮುದಾಯ ಮಕ್ಕಳು ಸೇರಿದಂತೆ ಯಾವುದೇ ಸಮುದಾಯದ ಮಕ್ಕಳು ಬಲಿಯಾಗಬೇಡಿ ಎಂದು ಸಲಹೆ ನೀಡಿದರು.

ನಿಮ್ಮಿಷ್ಟದಂತೆ ಬದುಕು ರೂಪಿಸಿಕೊಳ್ಳಲು ನಿಮ್ಮ ತಂದೆ–ತಾಯಿಗಳು ಅವರ ಸಂತೋಷವನ್ನು ಬದಿಗಿಟ್ಟಿದ್ದಾರೆ. ಮುಪ್ಪಿನಲ್ಲಿ ಅವರನ್ನು ವೃದ್ಧಾಶ್ರಮಕ್ಕೆ ಕಳುಹಿಸದೇ ತಮ್ಮ ಜೊತೆಯಲ್ಲಿಟ್ಟುಕೊಂಡು ಸಾಕುವಂತೆ ಮನವಿ ಮಾಡಿದರಲ್ಲದೆ, ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ, ವಿದ್ಯಾರ್ಥಿ ಜೀವನದ ಪ್ರಮುಖ ತಿರುವಿನ ಘಟ್ಟ, ಇಲ್ಲಿ ಯಶಸ್ಸು ಸಾಧಿಸಿದರೆ ಮುಂದೆ ಸುಲಭವಾಗಿ ಗುರಿ ಮುಟ್ಟಬಹುದು ಎಂದು ಕಿವಿಮಾತು ಹೇಳಿದರು.

ಎಸ್‌ಎಸ್‌ಎಲ್‌ಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ನಿರ್ಮಲ ವಿ.ರಾವ್, ಮುಕುಂದ ಉಪಮನ್ಯೆ, ವಿ.ಎಸ್.ಶರಾವತಿ, ವಿ.ಪ್ರಭಾಂಜನ್, ಜಿ.ಪಿ.ಸುಮನ ಶ್ರೀ, ಬಿ.ಚಿನ್ಮಯಿ, ಎಸ್.ಮೈತ್ರಿ, ಎಂ.ಎನ್.ಶ್ರೀವಲ್ಲಿ, ಸುಧಾನ್ವಾ ವಾಜಪೇಯಿ, ಎಂ.ಎಸ್.ವೈಷ್ಣವಿ, ಎನ್.ರಾಘವ, ಟಿ.ಎಸ್.ಚಿರಾಗ್, ಜೆ.ಸಾತ್ವಿಕ್, ಎಂ.ದೀಪಕ್, ಎಂ.ಸಮನ್ವಿತ ರಘುನಾಥ್, ಎಂ.ಅರ್ಪಿತಾ, ಪ್ರಮಥ ಭಾರದ್ವಜ್, ಎಚ್.ಎಸ್.ರಘುನಂದನ್, ಎನ್.ಗೌತಮಿ, ವೈಭವ್ ಎಂ.ಭಾರದ್ವಾಜ್, ಎ.ಎಸ್.ಸಾಯಿಪ್ರಸಾದ್, ನಿಧಿ ಡಿ.ಭಾರದ್ವಾಜ್, ಧನುಷ್ ಕೆ.ಭಾರಧ್ವಾಜ್, ಅನಘ ಆರ್.ಭಾರಧ್ವಾಜ್, ಬಿ.ಜಿ.ಆದಿತ್ಯ ಹಾಗೂ ಸಿಬಿಎಸ್‌ಸಿಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ಕೃತಿ ಹೆಗಡೆ, ಕೀರ್ತಿ ಹೆಗಡೆ, ರಮ್ಯ ಎಸ್.ಮಾತಂ, ವೈಷ್ಣವಿ ಜೆ.ರಾವ್, ಮಾನಸ ಉಡುಪ, ಶ್ರೇಯಾ ಜಿ.ಭಟ್, ಸಮನ್ವಿತ ಕೆ.ಭಟ್, ಪ್ರದ್ಯುಮ್ನ ಕೆ.ಭಟ್, ಅನುಷ್ ಶ್ರೀ ಎಚ್.ಹೆಗಡೆ, ಪ್ರದ್ಯುಮ್ನ ಎನ್.ಹರ್ಷಿತ, ಟಿ.ಎಂ.ಅಮೋಘ ಶಾನ್‌ಭೋಗ್, ಅನಿಕೇತ್ ಆರ್.ಜಿ.ಕಾರಂತ್, ಎಸ್.ರಿತಿಷಾ, ಶ್ರೀರಾಮ ಹೆಗಡೆ, ಯಷಿಕಾ ಆರ್.ಜೋಶಿ, ಮಾನ್ಯ ಮದನ್, ಸಮರ್ಥ ಪಿ.ವಿನಯ್, ಎನ್.ಅನನ್ಯ, ಅಂಕಿತ ಆರ್.ಜಿ. ಕಾರಂತ್, ನಿಖಿತಾ ವಿಜೇಂದ್ರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಪಿಯುಸಿಯಲ್ಲಿ ಅನಘ ಎಸ್.ಕಾರ್ಣಿಸ್, ಎಸ್.ಸಂಗೀತ, ಪಿ.ಅನಿರುದ್ಧ, ಪಿ.ಶ್ರೇಯಾ, ಆರ್.ಶ್ರೀಪಾದ, ಎ.ಸಿ.ಅನಘ ರಾವ್, ಎಸ್.ಸ್ಫೂರ್ತಿ, ಪ್ರಿಷಾ ಸುಬ್ರಹ್ಮಣ್ಯ, ಎಂ.ವೆಂಕಟ್ ಶೇಷ್, ಅನಘಾ ಎಸ್.ಪ್ರಸಾದ್, ಎಂ.ಜಿ.ಸಿಂಚನ, ಯು.ವರ್ಷ, ಅತಿಷಯ್ ಐಯ್ಯಂಗಾರ್, ಭಾವನ ಪಿ.ಬೆಳವಾಡಿ, ಎಂ.ಆರ್.ಸಿರಿ, ಕೆ.ಎಸ್.ಅನುಶ್ರೀ, ಎಂ.ಆರ್.ರಾಘವ್, ಪಿ.ಸುಹಾಸ್, ಎಸ್.ನಿಖಿ ಆತ್ರೇಯ, ಕೆ.ಎ.ಅನಘ, ಎಲ್.ರಿಕ್ಷಾ ಭಟ್, ಪಿ.ಎಂ.ನಿಶಾಂತ್, ಎಸ್.ನಂದನ್ ಕೃಷ್ಣ, ವಿ.ದಿತ್ಯ, ಎನ್.ಧೀರಜ್ ರಾವ್, ತಾನ್ಯ ಎಲ್.ಭಟ್, ಆರ್.ಎಸ್.ಸಂಜನ ಕಶ್ಯಪ್, ಅನಂತ ವಿಷ್ಣು ಪಿ.ಭಾರಧ್ವಾಜ್ ಹಾಗೂ ಸಿಬಿಎಸ್‌ಸಿಯಲ್ಲಿ ಪವನ್ ಜಯಪ್ರಕಾಶ್ ಭಟ್, ಕೃಷ್ಣ ಎಸ್.ಮಾತಂ ಅವರಿಗೆ ಪ್ರತಿಭಾ ಪುರಸ್ಕಾರ ನೆರವೇರಿಸಲಾಯಿತು.

ಈ ವೇಳೆ ಚಿನ್ಮಯ ಕಾಲೇಜಿನ ಪ್ರಾಂಶುಪಾಲ ಎಂ.ಎನ್.ಶರತ್‌ಕುಮಾರ್ ಮಾತನಾಡಿದರು. ಶ್ರೀ ಕೃಷ್ಣ ಮಿತ್ರ ಮಂಡಳಿ ಅಧ್ಯಕ್ಷ ಎನ್.ಗೋಪಾಲ ಕೃಷ್ಣನ್, ಗೌರವ ಕಾರ್ಯದರ್ಶಿ ಗುರುಪ್ರಸಾದ್, ಪಿ.ಎಸ್ ಚಂದ್ರಶೇಖರ್, ಕಾರ್ಯದರ್ಶಿ ಕೆ.ವಿ.ಶ್ರೀಧರ್, ಖಜಾಂಜಿ ಎಂ.ರಾಘವೇಂದ್ರ ರಾವ್, ಶ್ರೀವತ್ಸ, ಮಂಗಳ ಹಾಗೂ ಇನ್ನಿತರರಿದ್ದರು.

ಮಂಗಳೂರು ಸುಹಾಸ್ ಶೆಟ್ಟಿ ಕೊಲೆ ಕೇಸ್ ತನಿಖೆ ಚುರುಕು

ಬೆಂಗಳೂರು, ಜೂ. 23: ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ನಗರದ ಬಜ್ಪೆ ಬಳಿ ನಡೆದ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ 8 ಮಂದಿ ಆರೋಪಿಗಳನ್ನು ರಾಷ್ಟ್ರೀಯ ತನಿಖಾ ದಳ ಕಸ್ಟಡಿಗೆ ನೀಡಿದೆ. ಪ್ರಕರಣ ಸಂಬಂಧ ಎನ್‌ಐಎ ಪ್ರತ್ಯೇಕವಾಗಿ ಎಫ್‌ಐಆರ್ ದಾಖಲಿಸಿದೆ. ಹೆಚ್ಚಿನ ತನಿಖೆಗಾಗಿ ಆರೋಪಿಗಳನ್ನು ತಮ್ಮ ವಶಕ್ಕೆ ನೀಡುವಂತೆ ಎನ್‌ಐಎ ಎಸ್‌ಪಿಪಿ ಪ್ರಸನ್ನ ಕುಮಾರ್ ಮನವಿ ಮಾಡಿದರು. ಮನವಿ ಪುರಸ್ಕರಿಸಿದ ಬೆಂಗಳೂರಿನ 50ನೇ ಸಿಸಿಹೆಚ್ ನ್ಯಾಯಾಲಯ ಜುಲೈ 1ರವರೆಗೆ ಆರೋಪಿಗಳನ್ನು ಎನ್‌ಐಎ ವಶಕ್ಕೆ ನೀಡಿ ಆದೇಶ ಹೊರಡಿಸಿದೆ.



ಸುಹಾಸ್

ಪ್ರಕರಣ ಎನ್‌ಐಎಗೆ ವಹಿಸುವಂತೆ ಮನವಿ ಮಾಡಿದ್ದ ಬಿಜೆಪಿ: ಪ್ರಕರಣದ ತನಿಖೆಯನ್ನು ಎನ್‌ಐಎಗೆ ವಹಿಸುವಂತೆ ರಾಜ್ಯ ಬಿಜೆಪಿ ನಿಯೋಗ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಮನವಿ ಸಲ್ಲಿಸಿತ್ತು. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ವಿಧಾನಸಭೆ ವಿಪಕ್ಷ ನಾಯಕ ಅಶೋಕ್, ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮತ್ತು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಬಿಜೆಪಿ ಶಾಸಕರು ರಾಜ್ಯಪಾಲರಿಗೆ ನಾಲ್ಕು ಪುಟಗಳ ಲಿಖಿತ ರೂಪದಲ್ಲಿ ಮನವಿ ಸಲ್ಲಿಸಿದ್ದರು.

3 ತಿಂಗಳ ಹಿಂದೆಯೇ ಸುಹಾಸ್ ಕೊಲೆಗೆ ಸಿದ್ಧವಾಗಿತ್ತು ಸ್ಕೆಚ್: ಸುಹಾಸ್ ಶೆಟ್ಟಿ ಕೊಲೆಗೆ ಮೂರು ತಿಂಗಳ ಹಿಂದೆಯೇ ಸಂಚು ಹೂಡಲಾಗಿತ್ತು. ಜನವರಿಯಲ್ಲೇ ಸಫ್ವಾನ್ ತಂಡಕ್ಕೆ ಫಾಜಿಲ್ (ಪ್ರವೀಣ್ ನೆಟ್ಟಾರು ಕೊಲೆಗೆ ಪ್ರತೀಕಾರವಾಗಿ ಹತ್ಯೆಗೊಳಗಾಗಿದ್ದ ಯುವಕ) ತಮ್ಮ ಆದಿಲ್ 3 ಲಕ್ಷ ರೂಪಾಯಿ ಹಣ ಕೊಟ್ಟಿದ್ದ. ಕೃತ್ಯಕ್ಕಾಗಿ ಒಂದು ಪಿಕ್ ಅಪ್ ವಾಹನ, ಸ್ವಿಫ್ಟ್ ಕಾರ್ ಬಳಕೆ ಮಾಡಿದ್ದ. ಅಕಸ್ಮಾತ್ ಸುಹಾಸ್ ಶೆಟ್ಟಿ ತಪ್ಪಿಸಿಕೊಂಡರೆ ಪ್ಲಾನ್ ಬಿಯನ್ನೂ ರೆಡಿ ಮಾಡಿಕೊಳ್ಳಲಾಗಿತ್ತು ಎಂಬುದು ತಿಳಿದುಬಂದಿದೆ.

ಕದನ ಭೂಮಿಯಿಂದ ಓಡಿಹೋಗಲ್ಲ; ನನ್ನ ಹೇಳಿಕೆಗೆ ಸದಾ ಬದ್ಧನಾಗಿದ್ದೇನೆ

ಹಿರಿಯ ಶಾಸಕ ಬಿ.ಆರ್. ಪಾಟೀಲ್ ಮತ್ತೆ ಸ್ಪಷ್ಟನೆ

ಕಲಬುರಗಿ: ನಾನು ಕದನ ಭೂಮಿಯಿಂದ ಓಡಿ ಹೋಗುವವನಲ್ಲ. ನನ್ನ ಹೇಳಿಕೆಗೆ ನಾನು ಬದ್ಧನಾಗಿದ್ದೇನೆ. ರಾಜೀವ್ ಗಾಂಧಿ ವಸತಿ ನಿಗಮದ ಹಗರಣದ ಆರೋಪದಿಂದ ಹಿಂದೆ ಸರಿಯಲ್ಲ ಎಂದು ಕಲಬುರಗಿಯಲ್ಲಿ ಶಾಸಕ ಬಿಆರ್ ಪಾಟೀಲ್ ಸ್ಪಷ್ಟಪಡಿಸಿದರು.



ಈ ಕುರಿತು ಸೋಮವಾರ ಮಾಧ್ಯಮಗಳ ಜೊತೆಗೆ ಮಾತನಾಡಿ, ನಾನು ಹೇಳಿರುವ ಹೇಳಿಕೆ ಸರಿಯಾಗಿದೆ ಎಂದು ರಾಜುಕಾಗೆ ಸಹ ಹೇಳಿದ್ದಾರೆ. ನನಗೂ ಮೊದಲೇ ಆರು ತಿಂಗಳ ಹಿಂದೆಯೇ ಶಾಸಕಾಂಗ ಸಭೆಯಲ್ಲಿ ಏನು ಹೇಳಬೇಕು ಅದನ್ನು ಆಗಲೇ ಹೇಳಿದ್ದಾರೆ. ಇನ್ನೂ ಹಲವರು ಇದರ ಬಗ್ಗೆ ಮಾತನಾಡುವವರಿದ್ದಾರೆ ಎನ್ನುವ ಮೂಲಕ ಪರೋಕ್ಷವಾಗಿ ಕಾಂಗ್ರೆಸ್‌ನಲ್ಲಿ ಹಲವು ಶಾಸಕರು ಅಸಮಾಧಾನಗೊಂಡಿದ್ದಾರೆ ಎಂದು ಹೇಳಿದರು.

ಎಂವೈ ಪಾಟೀಲ್ ಏನೋ ಉಲ್ಟಾ ಹೊಡೆದ್ದಿದ್ದಾರೆ ಅಂತೇ, ತಮ್ಮ ಕ್ಷೇತ್ರದಲ್ಲಿ ಏನು ಆಗಿಲ್ಲವೆಂದು ಹೇಳಿದ್ದಾರಂತೆ. ಆದರೆ, ಅವರ ಕ್ಷೇತ್ರದ ಜನರು ನನಗೆ ಕರೆ ಮಾಡಿ ದ್ದಾರೆ ಎಂದು ದೂರವಾಣಿ ಕರೆ ಮಾಡಿ ದವರ ಲಿಸ್ಟ್ ಓದಿದರು. ಇದೇ ವೇಳೆ ಬಿ.ಆರ್.ಪಾಟೀಲ್ ಪಕ್ಕದಲ್ಲಿದ್ದ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್ ಸಹ ಅಸಮಾಧಾನ ವ್ಯಕ್ತಪಡಿಸಿ, ನನಗೂ ಮಾಹಿತಿ ಇಲ್ಲದೆ, ನನ್ನ ಕ್ಷೇತ್ರದಲ್ಲೂ ಕೆಆರ್‌ಐಡಿಎಲ್ ಕೈಗೊಳ್ಳುವ ಕಾಮಗಾರಿ ಉದ್ಘಾಟನೆಯಾಗುತ್ತಿವೆ ಎಂದರು.

ಸಿಎಂ ಸಿದ್ದರಾಮಯ್ಯ ನನ್ನ ಆತ್ಮೀಯ ಸ್ನೇಹಿತ. ಹಿಂದೆ ಯಾವ ರೀತಿ ಪ್ರೀತಿಯಿಂದ ಇದ್ದರೋ, ಈಗಲೂ ಅದೇ ರೀತಿಯ ಪ್ರೀತಿಯಿಂದ ಇದ್ದಾರೆ. ನನಗೆ ಕರೆ ಮಾಡಿ, ರಾಯಚೂರಿಗೆ ಬರಲು ಹೇಳಿದರು. ಆದರೆ, ಅಲ್ಲಿ ಆಹ್ವಾನವಿಲ್ಲ ನಾನು ಬರಲ್ಲ ಎಂದು ಹೇಳಿದ್ದೇನೆ. ಅದಕ್ಕೆ, ದೆಹಲಿಗೆ ಹೋಗಿ ಬರುತ್ತೇನೆ ಆಗ ಬಂದು ಭೇಟಿ ಆಗಲು ಹೇಳಿದ್ದಾರೆ. ಜೂನ್ 25ರಂದು ಸಿಎಂ ಸಿದ್ದರಾಮಯ್ಯ ಅವರನ್ನ ಭೇಟಿ ಮಾಡುತ್ತೇನೆ ಎಂದು ತಿಳಿಸಿದರು.

ಅನೇಕ ಕಾಂಗ್ರೆಸ್ ಶಾಸಕರು ಬಿಜೆಪಿ ಸೇರಲು ಸಜ್ಜಾಗಿದ್ದಾರೆ

ಜಗದೀಶ್ ಶೆಟ್ಟರ್ ಸ್ಫೋಟಕ ಮಾಹಿತಿ

ಬೆಳಗಾವಿ: ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ಅಸಮಾಧಾನ ಭುಗಿಲೆಳುತ್ತಿರುವಂತೆಯೇ ರಾಜುಕಾಗೆ ಸೇರಿದಂತೆ ಹಲವು ಶಾಸಕರು ಬಿಜೆಪಿ ಸೇರಲು ಸಿದ್ಧತೆ ನಡೆಸಿದ್ದಾರೆ ಎಂದು ಸಂಸದ ಜಗದೀಶ್ ಶೆಟ್ಟರ್ ಸೋಮವಾರ ಹೇಳಿದರು.



ಬೆಳಗಾವಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ಆಂತರಿಕ ಸಂಘರ್ಷ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಸರ್ಕಾರ ಪತನವಾಗುವ ಕಾಲ ಸನ್ನಿಹಿತವಾಗುತ್ತಿದೆ ಎಂದರು.

ಸಿಎಂ ಬದಲಾವಣೆ ಆಗ್ತಾರೆ ಎಂಬುದು ಗೊತ್ತಿಲ್ಲ. ಆದರೆ ಸರ್ಕಾರ ಮಾತ್ರ ಬಹಳ ದಿನ ಇರಲ್ಲ. ನಾವು ಆಪರೇಷನ್ ಕಮಲ ಮಾಡಲ್ಲ. ಆದರೆ ಹತಾಶ ಕಾಂಗ್ರೆಸ್ ಶಾಸಕರು ತಾವಾಗಿಯೇ ಬಿಜೆಪಿ ಸೇರಲಿದ್ದಾರೆ. ನಾವು ಸೆಳೆಯುವ ಪ್ರಯತ್ನ ಮಾಡುತ್ತಿಲ್ಲ. ಅವರೇ ಬರ್ತಾರೆ ಇದಕ್ಕೆ ಆಪರೇಷನ್ ಕಮಲ ಅಂತಾರೆ ಎಂದು ಹೇಳಿದರು. ಹಿರಿಯ ಶಾಸಕರು ಬಹಿರಂಗವಾಗಿಯೇ ಸಿಡಿದೇಳುವುದರೊಂದಿಗೆ ಕಾಂಗ್ರೆಸ್‌ನಲ್ಲಿ ಆಂತರಿಕ ಕಚ್ಚಾಟ ಹೆಚ್ಚಾಗಿದೆ. ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಸರ್ಕಾರದಲ್ಲಿ ಯಾವುದೇ ಕೆಲಸ ಆಗ್ತಿಲ್ಲ. ಸರ್ಕಾರ ದಿವಾಳಿ ಆಗಿದೆ. ಆರ್ಥಿಕ ಪರಿಸ್ಥಿತಿ ಚಿಂತಾಜನಕವಾಗಿದೆ. ಯಾವ ಕೆಲಸ ಆಗ್ತಿಲ್ಲ ಅಂತಾ ಆಡಳಿತ ಪಕ್ಷದವರು ಹೇಳ್ತಿದ್ದಾರೆ ಎಂದರು.

ಬೆಂಗಳೂರಿನಲ್ಲಿ ಗಾಂಜಾ ಗ್ಯಾಂಗ್ ಅಟ್ಟಹಾಸ

ನಡುರಸ್ತೆಯಲ್ಲೇ ಮಹಿಳೆ ಅಡ್ಡಗಟ್ಟಿ ಕಿರುಕುಳ, ಮನಸೋ ಇಚ್ಛೆ ಹಲ್ಲೆ!

ಬೆಂಗಳೂರು: ಬೆಂಗಳೂರು ನಗರ ಹೊರವಲಯದ ಬನ್ನೇರುಘಟ್ಟ ಬಳಿ ರೇಣುಕಾ ಯಲ್ಲಮ್ಮ ಲೇಔಟ್‌ನಲ್ಲಿ ಗಾಂಜಾ ಸೇವನೆ ಮಾಡಿದ ಯುವಕರ ಗುಂಪಿನಿಂದ ಮಹಿಳೆಯೊಬ್ಬರ ಮೇಲೆ ದೌರ್ಜನ್ಯ, ಅವಾಚ್ಯ ಶಬ್ದಗಳಿಂದ ನಿಂದಿಸಿ ಹಲ್ಲೆ ನಡೆಸಿದ ಘಟನೆ ನಡೆದಿದೆ. ಈ ಘಟನೆಯ ಸಂಪೂರ್ಣ ದೃಶ್ಯಗಳು ಹತ್ತಿರದ ಅಂಗಡಿಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಆಶ್ಚರ್ಯಕರ ಸಂಗತಿಯೆಂದರೆ, ಮಹಿಳೆಗೆ ಸಹಾಯ ಮಾಡಲು ಬಂದ ಆಕೆಯ ಸ್ನೇಹಿತನನ್ನೇ ಪೊಲೀಸರು ಬಂಧಿಸಿದ್ದಾರೆ. ಎರಡೂ ಕಡೆಯಿಂದ ದೂರು, ಪ್ರತಿದೂರು ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸಾಮಾನು ತರಲು ಹೋದ ಮಹಿಳೆಗೆ, ದಾರಿಯಲ್ಲಿ ತಡೆದು ದೌರ್ಜನ್ಯ: ಭಾನುವಾರ ಸಂಜೆ 4 ಗಂಟೆ ಸುಮಾರಿಗೆ ಈ ಘಟನೆ ನಡೆದಿದೆ. ಮಹಿಳೆ ತನ್ನ ಮನೆಯಿಂದ ಅಂಗಡಿಗೆ ಸಾಮಗ್ರಿಗಳನ್ನು ತರಲು ಹೊರಟಿದ್ದಾಗ, ಕೆಲವು ಮದ್ಯ ಮತ್ತು ಗಾಂಜಾದ ನಶೆಯಲ್ಲಿದ್ದ ಯುವಕರು ಆಕೆಯನ್ನು ದಾರಿಯಲ್ಲಿ ಅಡ್ಡಹಾಕಿ ತಡೆದಿದ್ದಾರೆ. ಸಿಸಿಟಿವಿಯಲ್ಲಿ ಒಬ್ಬ ಯುವಕ ಆಕೆಯನ್ನು ಹಿಡಿದು ಅಸಭ್ಯವಾಗಿ ವರ್ತಿಸಲು ಯತ್ನಿಸುತ್ತಿರುವುದು ಹಾಗೂ ಅವರಿಂದ ಮಹಿಳೆ ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಿರುವುದು ಕಂಡುಬಂದಿದೆ. ಮಹಿಳೆ ಪ್ರತಿಭಟಿಸಿದಾಗ ಒಬ್ಬ ಯುವಕ ಆಕೆಯ ಮುಖಕ್ಕೆ ಹೊಡೆದಿದ್ದು, ನಂತರ ಗುಂಪು ಸೇರಿ ಹಲ್ಲೆ ನಡೆಸಿರುವುದು ಕೂಡ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಸಹಾಯಕ್ಕೆ ಬಂದವರ ಮೇಲೂ ಹಲ್ಲೆ, ಆರೋಪಿಗಳು ಪರಾರಿ: ಇನ್ನು ಅಲ್ಲಿದ್ದ ಸ್ಥಳೀಯರು ಮತ್ತು ಮಹಿಳೆಯ ಸ್ನೇಹಿತ ಬಂದು ಆಕೆಯನ್ನು ರಕ್ಷಿಸಿದರು. ಆದರೆ ನಂತರ ಆರೋಪಿಗಳು ಮಹಿಳೆಯ ಮನೆಯಿರುವ ಪ್ರದೇಶಕ್ಕೆ ನುಗ್ಗಿ ಹಲ್ಲೆ ನಡೆಸಿದರು. ಮತ್ತೊಂದು ವಿಡಿಯೋದಲ್ಲಿ ಆರೋಪಿಗಳು ವಸತಿ ಸಮುಚ್ಚಯದ ಗೇಟ್‌ವರೆಗೂ ಬಂದು ಗಲಾಟೆ ಮಾಡಿರುವುದು ಕಂಡುಬಂದಿದೆ. ಈ ಘಟನೆ ಇಡೀ ಬೆಂಗಳೂರು ನಗರವನ್ನೇ ಬೆಚ್ಚಿ ಬೀಳಿಸಿದೆ. ಹಾಡ ಹಗಲೇ ನಶೆಯಲ್ಲಿ ಒಬ್ಬ ಮಹಿಳೆಯೊಂದಿಗೆ ಅಸಭ್ಯವಾಗಿ ನಡೆದುಕೊಂಡು, ಆಕೆಯ ಖಾಸಗಿ ಭಾಗಗಳನ್ನು ಮುಟ್ಟಲು ಮುಂದಾಗಿದ್ದಾರೆ. ಈ ಲೈಂಗಿಕ ದೌರ್ಜನ್ಯ ವಿರೋಧಿಸಿದ್ದಕ್ಕೆ ಹಲ್ಲೆ ಮಾಡಿರುವುದು ಸ್ಥಳೀಯರಲ್ಲಿ ಮಹಿಳಾ ರಕ್ಷಣೆಯ ಕುರಿತು ಭಾರಿ ಅಸಮಾಧಾನ ವ್ಯಕ್ತವಾಗಿದೆ.

ಘಟನೆಯ ಕುರಿತು ಸೋಮವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಮಹಿಳೆ, ನಾನು ಅಂಗಡಿಗೆ ಹೋಗುತ್ತಿದ್ದಾಗ ಕೆಲವರು ರಸ್ತೆಯ ಮಧ್ಯದಲ್ಲಿ ಜಗಳವಾಡುತ್ತಿರುವುದನ್ನು ನೋಡಿದೆ. ಅವರು ನನ್ನನ್ನು ತಡೆದು ಅವಾಚ್ಯ ಶಬ್ದಗಳಿಂದ ನಿಂದಿಸಿ, ದೌರ್ಜನ್ಯ ಎಸಗಿದರು. ಅವರು ಪೇಂಟ್ ತಿನ್ನರ್ ಮತ್ತು ಗಾಂಜಾ ಸೇವಿಸಿದ್ದರು ಎಂದು ತಿಳಿಸಿದ್ದಾರೆ.

ಭಾರತೀಯ ನ್ಯಾಯ ಸಂಹಿತೆಯ ಕಲಂ 74ರ ಅಡಿಯಲ್ಲಿ ಎಫ್‌ಐಆರ್ ದಾಖಲು ಮಾಡಲಾಗಿದೆ. ಆದರೆ, ಇಲ್ಲಿ ಪೊಲೀಸರು ಮಹಿಳೆಯನ್ನು ರಕ್ಷಣೆ ಮಾಡಲು ಸಹಾಯ ಮಾಡಿದ ಸ್ನೇಹಿತನನ್ನೂ ಬಂಧನ ಮಾಡಿದ್ದಾರೆ. ಇನ್ನು ಮಹಿಳೆಯು ಬನ್ನೇರುಘಟ್ಟ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಭಾರತೀಯ ನ್ಯಾಯ ಸಂಹಿತೆಯ ಕಲಂ 74 (ಮಹಿಳೆಯ ಘನತೆಗೆ ಧಕ್ಕೆ ತರುವ ಉದ್ದೇಶದಿಂದ ಹಲ್ಲೆ) ಮತ್ತು ಇತರ ಕಲಂಗಳ ಅಡಿಯಲ್ಲಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಪ್ರಸಿದ್ಧ ಮುರುಡೇಶ್ವರ ದೇವಾಲಯದಲ್ಲಿ

ವಸ್ತ್ರ ಸಂಹಿತೆ ಜಾರಿ

ಭಟ್ಕಳ: ಉತ್ತರ ಕನ್ನಡ ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣಗಳಲ್ಲಿ ಒಂದಾದ ಮುರುಡೇಶ್ವರ ದೇವಾಲಯದಲ್ಲಿ ಅಧಿಕೃತವಾಗಿ ವಸ್ತ್ರ ಸಂಹಿತೆ ಜಾರಿಗೆ ಬಂದಿದೆ. ದೇವಾಲಯಕ್ಕೆ ಆಗಮಿಸುವ ಭಕ್ತರು ಭಾರತೀಯ ಸಾಂಪ್ರದಾಯಿಕ ಉಡುಪು ಧರಿಸುವಂತೆ ಸೂಚಿಸಲಾಗಿದೆ.

ಹೊಸ ವಸ್ತ್ರ ಸಂಹಿತೆ ಪ್ರಕಾರ ಪುರುಷರು ಅಂಗಿ, ಧೋತಿ, ಪ್ಯಾಂಟ್ ಮತ್ತು ಕುರ್ತಾ ಪೈಜಾಮ, ಮಹಿಳೆಯರು ಸೀರೆ, ಸಾಲ್ವರ್–ಚೂಡಿದಾರ ಧರಿಸಿ ದೇವರ ದರ್ಶನ ಪಡೆಯಬಹುದು ಎಂದು ತಿಳಿಸಲಾಗಿದೆ.

ದೇವಾಲಯದೊಳಗೆ ಪಾಶ್ಚಿಮಾತ್ಯ ಶೈಲಿಯ ಅಥವಾ ಕ್ಯಾಶುಯಲ್ ಉಡುಪುಗಳಿಗೆ ಅನುಮತಿ ನಿರಾಕರಿಸಲಾಗಿದೆ ಹೊಸ ನಿಯಮವನ್ನು ಭಕ್ತರಿಗೆ ತಿಳಿಸಲು ದೇವಸ್ಥಾನದ ಪ್ರವೇಶ ದ್ವಾರದಲ್ಲಿ ಸೂಚನಾ ಫಲಕವನ್ನು ಅಳವಡಿಸಲಾಗಿದೆ.

PUBLIC NOTICE

Take notice, the General Public are hereby notified, that my client have entered into an Agreement of Sale, with Sri.Naveen Kumar & Smt. J.Roopa, W/o. M.Naveen Kumar both are R/at Naguvinhalli Village, Srirangapatna Taluk, Mandya District, with respect to the Schedule Property mentioned herein. The General Public are hereby notified that any persons or group of individuals or legal entities, having any such claim or right or share, are hereby notified to submit their claims, at the under signed office, including the documentary proof, failure it shall be deemed that, there are no such claims, against the Schedule Property and my client shall further proceed for the completion of the sale transaction, and get the sale deed registered from my client vendors, Sri.Naveen Kumar & Smt. J.Roopa.

SCHEDULE PROPERTY

Agriculture landed property bearing Sy.No.384/13 measuring 7 ½ gunta out of 15 gunta, (bearing Sketch No-22040425207202001, measuring to an extent of 8200 Sq Feet) Situated at Belavadi Village, Kasaba Hobli, Srirangapatna Taluk, Mandya District,
Bounded on
East by : La.No.380 (Road),
West by: Landed property bearing Sy.No.384/6,
North by: Remaining landed property bearing Sy.No.384/13,
South by: Landed property bearing Sy.No.384/14.

Sd/-
Smt. K.Suchithra Harish, ADVOCATE,
2547/1, 1st Floor, Kantaraja Urs Road, K G Koppallu,Mysore.
Office Timing: Monday to Saturday 5.00 PM to 8.00 PM

PUBLIC NOTICE

NOTICE IS HERE BY GIVEN to the public that my client is intending to purchase schedule property from M/s. MYRADA KAVERI PRADESHIKA SAMSTHE, Registered under Karnataka Societies Registration Act 1960 and Registration No. MYS-S240-2006-07 dated 5th December 2006. Their Registered office at Sargur Road, Handpost, H.D. Kote Taluk, Mysore District and have been negotiating the formalities of sale of the schedule property.

All or any person/s having any claim of any nature whatsoever in the Schedule Property by way of Sale, exchange, lease, license, trust, lien, easement, inheritance, possession, attachment, mortgage, charge, Gifts, or otherwise of any nature whatsoever including any financial institutions, are hereby required to make the same known in writing with copies of all supporting documents to the undersigned within SEVEN DAYS from the date of publication of this Notice, failing which the same shall be deemed to have been waived and my client will proceed and finalize the sale transaction after the expiry of the above period.

SCHEDULE

All that piece and parcel of the Property bearing Site No.110, Khatha No.434, E-Property No. 152200200704920338, formed in Converted Survey No.32/6 measuring to an extent 1 Acre $31^{1}/_{2}$ Guntas, vide conversion order No. ALN (2) CR 331/2008-09, dated 25.02.2009 formed in the layout known as "Royale Claire Phase II" situated at Chikkadanahalli Village, Bilikere Hobli, Hunsur Taluk, Mysore District and layout plan approved by the Division office of Joint Director to Town and Country Planning Authority at Mysore, Vide Order No. 380/2009-10, Dated 25/07/2009 and measuring East to West 40 feet and North to South 60 feet in all area totally measuring 2400 Square Feet and bounded on: East by : Site No. 109 ; West by: Road ; North by: Site No. 103 ; South by: Road.

Sd/- M.D. HARISH KUMAR HEGDE, B.Com., LLB.,
M/s. HEGDE ASSOCIATES
Advocates & Legal Consultants, No. 1064, New CH-16, Hotel Airlines Complex, Jayalakshmivilas Road, Chamarajapuram, Mysore. Phone: 0821-4252194. E-mail: hegdeassociates@gmail.com.
Date: 23-06-2025

ಕಾವೇರಿ ನೀರಾವರಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಉದ್ಯಮ)
ಸಂ:ಕಾಇಂ/ಕಾನೀನಿನಿ/ಹಾನಾವಿ/ಪಿಬಿ/ಟೆ.ಪ್ರ/05/2025–26/474
ದಿನಾಂಕ : 20.06.2025

ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ: 05/2025–26 ದಿ: 20.06.2025

(ಇ–ಪ್ರೊಕ್ಯೂರ್‌ಮೆಂಟ್ 2.0 ಪೋರ್ಟ್‌ಲ್ ಮೂಲಕ ಮಾತ್ರ)

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ಇವರ ಪರವಾಗಿ ಈ ಕೆಳಗೆ ನಮೂದಿಸಿರುವ ಕಾಮಗಾರಿಗಳಿಗೆ ಕರ್ನಾಟಕ ಸರ್ಕಾರದ ಲೋಕೋಪಯೋಗಿ ಇಲಾಖೆಯಲ್ಲಿ/ಕೇಂದ್ರ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿಸಿ ನೋಂದಾವಣಿ ಚಾಲ್ತಿಯಲ್ಲಿರುವ ಅರ್ಹ ಗುತ್ತಿಗೆದಾರರಿಂದ ಐಟಂವಾರು ದರದಲ್ಲಿ 01 ಸಂಖ್ಯೆಯ ಕಾಮಗಾರಿಯ ಅಂದಾಜು ಮೊತ್ತ ರೂ.30.00 ಲಕ್ಷ ಮುಂಗಡ ಠೇವಣಿ (ಇ.ಎಂ.ಡಿ) ಮತ್ತು ಟೆಂಡರ್ ಪ್ರೊಸೆಸಿಂಗ್ ಶುಲ್ಕ ಇ–ಪ್ರೊಕ್ಯೂರ್‌ಮೆಂಟ್ 2.0 ನಲ್ಲಿ ತಿಳಿಸಿರುವಂತೆ. ಟೆಂಡರ್ ಪ್ರಕ್ರಿಯೆಗಳ ದಿನಾಂಕಗಳು ಈ ಕೆಳಕಂಡಂತಿವೆ: **1)** ಖಾಲಿ ಟೆಂಡರ್ ಫಾರಂಗಳನ್ನು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್ ಮೂಲಕ ಡೌನ್ ಲೋಡ್ ಮಾಡಿಕೊಳ್ಳುವ ದಿ: 20.06.2025ರ ನಂತರ. **2)** ಭರ್ತಿ ಮಾಡಿದ ಟೆಂಡರ್‌ನ್ನು ಮತ್ತು ಇ.ಎಂ.ಡಿ ಯನ್ನು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಸಲ್ಲಿಸಲು ಕೊನೆಯ ದಿ: 30.06.2025 ಸಂಜೆ 4.00 ಗಂಟೆಯರವರೆಗೆ). **3)** ಇ–ಪ್ರೊಕ್ಯೂರ್‌ಮೆಂಟ್ 2.0 ಪೋರ್ಟಲ್ ಮೂಲಕ ಸ್ವೀಕೃತವಾಗುವ ಟೆಂಡರ್‌ಗಳ ತಾಂತ್ರಿಕ ಬಿಡ್ಡನ್ನು ತೆರೆಯುವ ದಿ: 01.07.2025 (ಸಂಜೆ 4.30 ಗಂಟೆಯನಂತರ) ಹಾಗೂ ತಾಂತ್ರಿಕ ಬಿಡ್ಡಿಗೆ ಅನುಮೋದನೆ ಪಡೆದ ನಂತರ ಆರ್ಥಿಕ ಬಿಡ್ಡನ್ನು ತೆರೆಯಲಾಗುವುದು. ಕಾಮಗಾರಿಗೆ ಸಂಬಂಧಿಸಿದ ಹೆಚ್ಚಿನ ವಿವರಗಳು, ಸೂಚನೆಗಳು ಮತ್ತು ನಿಬಂಧನೆಗಳನ್ನು ಇ–ಪ್ರೊಕ್ಯೂರ್‌ಮೆಂಟ್ 2.0 ಕೆ.ಪಿ.ಪಿ ಪೋರ್ಟಲ್‌ನಲ್ಲಿ ಪಡೆಯಬಹುದಾಗಿರುತ್ತದೆ.

ಸಹಿ/– ಕಾರ್ಯಪಾಲಕ ಇಂಜಿನಿಯರ್,
ಕಾ.ನೀ.ನಿ.ನಿ., ಹಾರಂಗಿ ನಾಲಾ ವಿಭಾಗ, ಸಾಲಿಗ್ರಾಮ.
DIPR/DDMYS/489/KSMCA/299/2025-26